

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಏಪ್ರಿಲ್ 19 ಮಂಗಳವಾರ 2022

ಸಂಪುಟ: 43 | ಸಂಚಿಕೆ: 04 | ಪುಟಗಳು: 10


ದೂರವಾಣಿ: 2496520, 2496521, 2496526, 2496527, 2496528, ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com

ಜಾಹೀರಾತು: ad@mysurumithra.com


website: www.mysurumithra.com

₹4



ಮಾಸಾಂತ್ಯಕ್ಕೆ ಬೊಮ್ಮಾಯಿ ಸರ್ಕಾರದ
ಭವಿಷ್ಯ ನಿರ್ಧಾರ

● ದೆಹಲಿಯಲ್ಲಿ ವಿಶೇಷ ಸಭೆಯಲ್ಲಿ ತೀರ್ಮಾನ ● ಮುಖ್ಯಮಂತ್ರಿ ಬೊಮ್ಮಾಯಿಗೆ ಮಾಹಿತಿ ನೀಡಿದ ಪಕ್ಷದ ಅಧ್ಯಕ್ಷ ಜೆ.ಪಿ.ನಡ್ಡಾ



ಬೆಂಗಳೂರು,ಏ.18(ಕೆಎಂಶಿ)–ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರದ ಭವಿಷ್ಯವನ್ನು ದೆಹಲಿಯ ವರಿಷ್ಠರು ಈ ತಿಂಗಳ ಅಂತ್ಯದ ವೇಳೆಗೆ ನಿರ್ಧರಿಸಲಿದ್ದಾರೆ.

ಕೇಂದ್ರ ಗೃಹ ಸಚಿವ ಅಮಿತ್ ಷಾ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಜೊತೆಗೂಡಿ, ಸಂಘ ಪರಿವಾರದ ನಾಯಕರಾದ ದತ್ತಾತ್ರೇಯ ಹೊಸಬಾಳೆ, ಮುಕುಂದ್ ಹಾಗೂ ಅರುಣ್ ಅವರ ಜೊತೆ ಮಹತ್ವದ ಸಭೆ ನಡೆಸಲಿದ್ದು ಈ ಸಭೆಯಲ್ಲಿ ಬೊಮ್ಮಾಯಿ ಅವರ ಭವಿಷ್ಯ ನಿರ್ಧಾರ ಮಾಡಲಿದ್ದಾರೆ. ಭಾನುವಾರ ಹೊಸಪೇಟೆಯಲ್ಲಿ ನಡೆದ ಬಿಜೆಪಿಯ ಕೋರ್ ಕಮಿಟಿ ಸಭೆಯಲ್ಲಿ ಪಾಲ್ಗೊಂಡಿದ್ದ ಪಕ್ಷದ ಅಧ್ಯಕ್ಷರಾದ ಜೆ.ಪಿ.ನಡ್ಡಾ ಅವರು ಈ ಕುರಿತಂತೆ ಬೊಮ್ಮಾಯಿ ಅವರಿಗೆ ಸಂದೇಶ ನೀಡಿದ್ದಾರೆ.

ಇದಕ್ಕೂ ಮುನ್ನ ಮುಖ್ಯಮಂತ್ರಿ ಸೇರಿದಂತೆ ಕೋರ್ ಕಮಿಟಿ ಸದಸ್ಯರನ್ನು ತೀವ್ರ ತರಾಟೆಗೆ ತೆಗೆದುಕೊಂಡ ನಡ್ಡಾ, ದೆಹಲಿಯಲ್ಲಿ ನಡೆಯುವ ಸಭೆಯ ನಂತರ ನಮ್ಮ ತೀರ್ಮಾನವನ್ನು ನಿಮಗೆ ತಿಳಿಸುತ್ತೇವೆ ಎಂದರು.

ಸಭೆಯಲ್ಲಿ ಯಾರಿಗೂ ಮಾತನಾಡಲು ಅವಕಾಶ ನೀಡದ ನಡ್ಡಾ, ಸರ್ಕಾರ ಮತ್ತು ಪಕ್ಷದ ವರ್ಚಸ್ಸು ಕುಂದಿದೆ ಎಂದು ನೇರವಾಗಿ ತರಾಟೆಗೆ ತೆಗೆದುಕೊಂಡಿದ್ದಾರೆ. ಭ್ರಷ್ಟಾಚಾರದ ಆರೋಪ ಕೇಳಿ ಬರುತ್ತಿದೆ. ಇದಕ್ಕೆ ಇತಿಶ್ರೀ ಹಾಡಲು ವಿಫಲರಾಗಿದ್ದೀರಿ. ಸರ್ಕಾರಕ್ಕೆ ವರ್ಚಸ್ಸು ಬಂದರೆ ಪಕ್ಷಕ್ಕೂ ಬರುತ್ತದೆ. ಆದರೆ ನೀವು ವರ್ಚಸ್ಸು ಬರುವ ಕಾರ್ಯವನ್ನೇ ಮಾಡುತ್ತಿಲ್ಲ. ಭ್ರಷ್ಟಾಚಾರ ಆರೋಪದ ಮೇಲೆ ಯಡಿಯೂರಪ್ಪನವರನ್ನು ಅಧಿಕಾರದಿಂದ ಕೆಳಗಿಳಿಸಲಾಯಿತು.

ಆದರೆ ನೀವು ಬಂದ ನಂತರ ಅದೇ ಆರೋಪಗಳು ಮುಂದುವರೆದಿದೆ. ಇದನ್ನೇ ಪ್ರತಿಪಕ್ಷದವರು ದೊಡ್ಡದು ಮಾಡುತ್ತಿದ್ದಾರೆ. ಭ್ರಷ್ಟಾಚಾರ ನಿಲ್ಲದಿದ್ದರೆ, ಸರ್ಕಾರ ಮತ್ತು ಪಕ್ಷಕ್ಕೆ ವರ್ಚಸ್ಸು ಬರುವುದಿಲ್ಲ. ಇನ್ನು ಮುಂದೆ ಸರ್ಕಾರ ಮತ್ತು ಪಕ್ಷ ತೆಗೆದುಕೊಳ್ಳಬೇಕಾದ ತೀರ್ಮಾನವನ್ನು ನಾವೇ ತೆಗೆದುಕೊಳ್ಳುತ್ತೇವೆ. ಇದರಲ್ಲಿ ನೀವು ಮೂಗು ತೂರಿಸುವ ಅವಶ್ಯಕತೆ ಇರುವುದಿಲ್ಲ. ನಾವು ಯಾವ ತೀರ್ಮಾನಗಳನ್ನು ಕೈಗೊಳ್ಳುತ್ತೇವೋ ಆ ತೀರ್ಮಾನಗಳನ್ನು ಅನುಷ್ಠಾನಗೊಳಿಸಬೇಕು. ● 8ನೇ ಪುಟಕ್ಕೆ

ಎಲ್ಲವೂ ದೆಹಲಿಯಲ್ಲೇ ನಿರ್ಧಾರ: ಸಿಎಂ ಸ್ಪಷ್ಟನೆ

ಬೆಂಗಳೂರು, ಏ.18 (ಕೆಎಂಶಿ)–ಸಂಪುಟ ವಿಸ್ತರಣೆ ಬಗ್ಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರು ನವದೆಹಲಿಯಲ್ಲಿ ಕರ್ನಾಟಕದ ಬಗ್ಗೆ ವಿಶೇಷ ಸಭೆ ಕರೆಯುವುದಾಗಿ ತಿಳಿಸಿದ್ದಾರೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆ ಸಭೆಯ ನಂತರ ದೆಹಲಿಗೆ ಬರುವಂತೆ ನಡ್ಡಾ ಅವರು ತಮಗೆ ತಿಳಿಸಿದ್ದಾರೆ. ಸಂಪುಟ ವಿಸ್ತರಣೆ ಅಥವಾ ಪುನರ್ ರಚನೆ ಬಗ್ಗೆ ಅಲ್ಲಿಯೇ ತೀರ್ಮಾನವಾಗಲಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಕರ್ನಾಟಕದ ಬಗ್ಗೆ ದೆಹಲಿಯಲ್ಲಿ ಸಭೆ ನಡೆಸುತ್ತೇವೆ. ಸಭೆಯ ನಂತರ ಮಾಹಿತಿ ನೀಡುತ್ತೇನೆ. ಆನಂತರ ದೆಹಲಿಗೆ ಬರುವಂತೆ ನಡ್ಡಾ ಅವರು ತಮಗೆ ಹೇಳಿದ್ದಾರೆ ಎಂದರು. ಹುಬ್ಬಳ್ಳಿ ಘಟನೆಗೆ ಸಂಬಂಧಿಸಿದ ಎಲ್ಲರನ್ನೂ ಬಂಧಿಸಲಾಗಿದೆ. ಅದರ ಹಿಂದಿರುವ ನಾಯಕರ ತನಿಖೆಯಾಗಿ ತಪ್ಪಿತಸ್ಥರ ವಿರುದ್ಧ ಕಾನೂನಿನ ಕ್ರಮ ಜರುಗಿಸಲಾಗುವುದು ಎಂದರು.

● ಹುಬ್ಬಳ್ಳಿ ಗಲಭೆ: ಸಂಬಂಧಿತರ ಬಂಧನ ● ಪಿಎಸ್ಐ ಪರೀಕ್ಷೆ ಅಕ್ರಮ: ಸಿಐಡಿ ವರದಿ ನಂತರ ನಿರ್ಧಾರ

ಪಿ.ಎಸ್.ಐ ಪರೀಕ್ಷೆಯಲ್ಲಿ ಅಕ್ರಮವಾಗಿರುವ ಕುರಿತು ಗೃಹ ಸಚಿವರ ಗಮನಕ್ಕೆ ಬಂದ ಕೂಡಲೇ ನಿಷ್ಪಕ್ಷಪಾತ ತನಿಖೆಯಾಗಲು ಸಿಐಡಿಗೆ ವಹಿಸಲಾಗಿದೆ. ಪರೀಕ್ಷೆಯಾಗಿರುವ ಕೇಂದ್ರದಲ್ಲಿ ಸಮಸ್ಯೆಯಾಗಿದ್ದರೆ, ಅಧೀಕ್ಷಕರ ಮಟ್ಟದಲ್ಲಿ ಸಮಸ್ಯೆ ಅಥವಾ ಮೇಲಾಧಿಕಾರಿಗಳ ಸಮಸ್ಯೆ ಇದ್ದರೆ ಸಮಗ್ರವಾಗಿ ತನಿಖೆ ಮಾಡಲು ಆದೇಶ ನೀಡಲಾಗಿದೆ. ಬೇರೆ ಪಕ್ಷದ ಸರ್ಕಾರವಾಗಿದ್ದರೆ ಮುಚ್ಚಿ ಹಾಕಲು ಪ್ರಯತ್ನ ಮಾಡುತ್ತಿದ್ದರು. ನಾವು ಸಿಐಡಿಗೆ ಮುಕ್ತ ಅವಕಾಶ ನೀಡಿದ್ದು, ತನಿಖೆ ಕೈಗೊಂಡಿದ್ದಾರೆ. ಯಾರೇ ತಪ್ಪಿತಸ್ಥರಿದ್ದರೂ ಕ್ರಮ ಕೈಗೊಳ್ಳಲಾಗುವುದು ಎಂದರು.

ಪರೀಕ್ಷೆಗಳನ್ನು ಪುನಃ ಕೈಗೊಳ್ಳಲು ವಿದ್ಯಾರ್ಥಿಗಳು ಒತ್ತಾಯಿಸುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಸಿಐಡಿ ಸಮಗ್ರ ವರದಿ ನೀಡಿದ ನಂತರ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಮತ್ತೆ ಮುನ್ನೆಲೆಗೆ ಬಂದ ಹ್ಯೂಬ್ಲೆಟ್ ವಾಚ್
ನಿಮ್ಮ ಕೈಯ್ಯಲ್ಲಿ ಮಿರಮಿರ ಮಿಂಚಿದ್ದು ಯಾರೋ ಕದ್ದ ಮಾಲಲ್ಲವೇ?

● ವಿಪಕ್ಷ ನಾಯಕ ಸಿದ್ದರಾಮಯ್ಯರಿಗೆ ಮಾಜಿ ಸಿಎಂ ಕುಮಾರಸ್ವಾಮಿ ಟ್ವೀಟಾಸ್ತ್ರ ಪ್ರಯೋಗ

● ಆ ವಾಚನ್ನು ತಂದು ಕೊಟ್ಟವರು ಯಾರು?





ಬೆಂಗಳೂರು, ಏ.18 (ಕೆಎಂಶಿ)–ಮುಖ್ಯಮಂತ್ರಿ ಆಗಿದ್ದಾಗ ಕೈಗೆ ಕಟ್ಟಿಕೊಂಡು ಮೆರೆದ ಹ್ಯೂಬ್ಲೆಟ್ ವಾಚ್ ಅನ್ನು ತಂದು ಕೊಟ್ಟವರು ಯಾರು? ಅದು ನಿಮ್ಮ ಕೈ ಸೇರಿದ್ದು ಹೇಗೆ? ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರನ್ನು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಪ್ರಶ್ನೆ ಮಾಡಿದ್ದಾರೆ.

ಹಾಸನದಲ್ಲಿ ಸೋಮವಾರ ಮಾಜಿ ಪ್ರಧಾನಿ ದೇವೇಗೌಡರು, ಜೆಡಿಎಸ್ ಪಕ್ಷ ಹಾಗೂ ತಮ್ಮ ಬಗ್ಗೆ ಟೀಕೆ ಮಾಡಿರುವ ಸಿದ್ದರಾಮಯ್ಯ ಅವರಿಗೆ ಟ್ವಿಟರ್ ಮೂಲಕ ಮಾಜಿ ಮುಖ್ಯಮಂತ್ರಿಗಳು ತಿರುಗೇಟು ನೀಡಿದ್ದಾರೆ. ಅಲ್ಲದೆ 2008–09ರಲ್ಲಿ ನಡೆದ ಆಪರೇಷನ್ ಕಮಲ ಡೀಲ್‌ನಲ್ಲಿ ಪಡೆದುಕೊಂಡ ಹಣ ಎಷ್ಟು ಎಂಬುದಾಗಿಯೂ ಕುಮಾರಸ್ವಾಮಿ ಅವರು ಕೇಳಿದ್ದಾರೆ. ಸುಳ್ಳುಶೂರ, ಸಿದ್ಧ ಸೂತ್ರದಾರ, ಸಿದ್ಧಕಲಾ ನಿಪುಣ, ರಾಜಕೀಯ ಊಸರವಳ್ಳಿಗೆ ಚುನಾವಣೆಗೆ ಮುನ್ನವೇ ಜೆಡಿಎಸ್ ಜ್ವರ ಬಂದುಬಿಟ್ಟಿದೆ. ಹಾಸನದಲ್ಲಿ ವೃಥಾ ಹರಿಬಿಟ್ಟ ಸತ್ಯಭಕ್ಷ ನಾಯಕನ ಆಚಾರಹೀನ ಅರಿವುಗೆಟ್ಟ ನಾಲಿಗೆ ಮತ್ತೆ ಹುಚ್ಚುಕುಣಿತ ಮಾಡುತ್ತಿದೆ. ನಾನು ಕೇಳಿದ ಪ್ರಶ್ನೆಗಳಿಗೆ ಉತ್ತರವೇ ಇಲ್ಲ, ಮತ್ತೆಮತ್ತೆ ಕೆಣಕುವ ದುಸ್ಸಾಹಸ ಬೇರೆ.

ಆಪರೇಷನ್ ಕಮಲ ಬಿಜೆಪಿ ಪಾಪದ ಕೂಸು. ಆ ಕೂಸಿಗೆ ಹಾಲೆರೆದವರು ಯಾರಯ್ಯ ಸುಳ್ಳುರಾಮಯ್ಯ, ಇಂಥ ಅನೈತಿಕ ಕೂಸಿಗೆ ಹಾಲೆರೆದು ಬೆಳೆಸಿ, ದೊಡ್ಡದು ಮಾಡಿದ ನೀವು, ಜೆಡಿಎಸ್ ಪಕ್ಷ ಬಿಜೆಪಿ ಬೀ ಟಿಂ ಎಂದು ● 8ನೇ ಪುಟಕ್ಕೆ

ಕಾಂಗ್ರೆಸ್ ಭ್ರಷ್ಟಾಚಾರ ಕಡತ ತೆಗೆಯುತ್ತೇನೆ ಅನ್ನುವ ಬಿಜೆಪಿಯವರು ಇಲ್ಲಿವರೆಗೆ ಕಡ್ಲೆಪುರಿ ತಿನ್ನುತ್ತಿದ್ದಾರಾ?!



ಮೈಸೂರು, ಏ.18(ಎಂಟಿವೈ)– 'ಕಾಂಗ್ರೆಸ್ ಭ್ರಷ್ಟಾಚಾರದ ಕಡತ ತೆಗೆಯುತ್ತೇವೆ' ಎಂದು ಹೇಳಿಕೆ ನೀಡಿರುವ ಬಿಜೆಪಿ ನಾಯಕರಿಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಟಾಂಗ್ ನೀಡಿದ್ದು, ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದ ಇಲ್ಲಿವರೆಗೆ ಕಡ್ಲೆಪುರಿ ತಿನ್ನುತ್ತಿದ್ದಾರಾ? ಎಂದು ಕಿಡಿಕಾರಿದ್ದಾರೆ.

ಮೈಸೂರಿನ ರಾಮಕೃಷ್ಣನಗರದಲ್ಲಿನ ತಮ್ಮ ನಿವಾಸ ಬಳಿ ಸೋಮವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷ ಕಳೆದಿದೆ. ಇದುವರೆಗೆ ಕಡ್ಲೆಪುರಿ ತಿನ್ನುತ್ತಾ ಇದ್ದರಾ, ಇಷ್ಟು ವರ್ಷ ಸಾಕ್ಷಿ ಇಟ್ಟುಕೊಂಡು ಪೂಜೆ ಮಾಡುತ್ತಿದ್ದರಾ, ಬಾಯಿಗೆ ಕಡುಬು ಇಟ್ಟುಕೊಂಡಿದ್ದರಾ ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿ ಅಧಿಕಾರಕ್ಕೆ ಬಂದು ಎಷ್ಟು ವರ್ಷ ಆಯಿತು?, ಹಿಂದೆ 5 ವರ್ಷ ವಿರೋಧ ಪಕ್ಷದಲ್ಲಿ ಇದ್ದಾಗ ಯಾಕೆ ಭ್ರಷ್ಟಾಚಾರದ ಮಾತು ಹೇಳಲಿಲ್ಲ. ಈಗ ನಾವು ಭ್ರಷ್ಟಾಚಾರದ ವಿರುದ್ಧ ಹೋರಾಟ ಮಾಡುತ್ತಿದ್ದೇವೆ. ಅದಕ್ಕೆ ಈ ರೀತಿ ಹೇಳುತ್ತಿದ್ದಾರೆ. ಜನರು ಇವರ ಮಾತನ್ನು ನಂಬುವುದಿಲ್ಲ. ಭ್ರಷ್ಟಾಚಾರ ವಿಚಾರ ಗೊತ್ತಿದ್ದರೂ ಅದನ್ನು ಮುಚ್ಚಿಡುವುದೂ ಕೂಡ ● 8ನೇ ಪುಟಕ್ಕೆ













ಉದ್ವಿಗ್ನತೆ ನಡುವೆ ಸಿಎಂ ಬೊಮ್ಮಾಯಿಗೆ ಮೀಸಲಾತಿ ಬಿಸಿ: ಏ.21 ಅಂತಿಮ ಗಡುವು



ಬೆಂಗಳೂರು, ಏ. 18– ರಾಜ್ಯದಲ್ಲಿ ನಾನಾ ಕಡೆ ಉದ್ವಿಗ್ನತೆ, ಸಚಿವ ಸಂಪುಟ ವಿಸ್ತರಣೆಯ ಗದ್ದಲದ ಜತೆಗೆ ಪಂಚಮಸಾಲಿ ಲಿಂಗಾಯತ ಸಮುದಾಯಕ್ಕೆ 2ಎ ಮೀಸಲಾತಿ ನೀಡುವ ಭರವಸೆ ವಿಚಾರವನ್ನು ನಿಭಾಯಿಸುವ ಸವಾಲು ಸಿಎಂ ಬಸವರಾಜ ಬೊಮ್ಮಾಯಿ ಅವರ ಮುಂದಿದ್ದು, ಏ.21 ಅಂತಿಮ ಗಡುವು ಎಂದು ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ಸೋಮವಾರ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ. ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸ್ವಾಮೀಜಿ, ಆಡಳಿ ತಾರೂಢ ಬಿಜೆಪಿ ಸರ್ಕಾರಕ್ಕೆ ನೀಡಿದ್ದ ಗಡುವು ಮುಗಿದಿದ್ದು, ಏ.21ರೊಳಗೆ ಭರವಸೆ ಈಡೇರಿಸದಿದ್ದರೆ ಅಂದಿನಿಂದ ಮತ್ತೆ ಧರಣಿ ಆರಂಭಿಸುವುದಾಗಿ ಘೋಷಿಸಿದ್ದಾರೆ. 2ಎ ಮೀಸಲಾತಿ ನೀಡಲು ಸರ್ಕಾರಕ್ಕೆ ಏ.21ರ ಅಂತಿಮ ಗಡುವು ನೀಡಲಾಗಿದೆ. ಇದು ಮಾಡು ಇಲ್ಲವೇ ಮಡಿ ಹೋರಾಟ. ಸ್ಪಂದಿಸದಿದ್ದರೆ, ಮುಂದಾಗುವ ಅನಾಹುತಗಳಿಗೆ ರಾಜ್ಯ ಸರ್ಕಾರವೇ ಹೊಣೆ ಎಂದೂ ಎಚ್ಚರಿಸಿದರು.

ಗೋಹತ್ಯೆ ನಿಷೇಧ ಕಾಯಿದೆ ಜಾರಿಗೆ ಹೈಕೋರ್ಟ್ ಗ್ರೀನ್ ಸಿಗ್ನಲ್



ಬೆಂಗಳೂರು,ಏ.18–ರಾಜ್ಯದಲ್ಲಿ ಗೋಹತ್ಯೆಗಳನ್ನು ತಡೆಯುವ ಉದ್ದೇಶದಿಂದ ರೂಪಿಸಲಾದ ಗೋಹತ್ಯೆ ನಿಷೇಧ ಕಾಯಿದೆ ಜಾರಿಗೆ ಹೈಕೋರ್ಟ್ ಸೋಮವಾರ ಹಸಿರು ನಿಶಾನೆ ತೋರಿದೆ.

ನಿಯಮಗಳನ್ನು ರಚಿಸುವವರೆಗೆ ಬಲವಂತದ ಕ್ರಮ ಕೈಗೊಳ್ಳುವುದಿಲ್ಲ ಮತ್ತು ಕಾಯಿದೆ ಜಾರಿಗೊಳಿಸುವುದಿಲ್ಲ ಎಂದು ಸರ್ಕಾರವೇ ನ್ಯಾಯಾಲಯಕ್ಕೆ ಭರವಸೆ ನೀಡಿತ್ತು. ಅದನ್ನು ಆಧರಿಸಿ 2021ರ ಜ.20ರಂದು ಹೈಕೋರ್ಟ್ ಕಾಯಿದೆ ಜಾರಿಗೆ ಮಧ್ಯಂತರ ತಡೆ ನೀಡಿತ್ತು. ಬೆಂಗಳೂರಿನ ಸಾಮಾಜಿಕ ಕಾರ್ಯಕರ್ತ ಆರಿಫ್ ಜಮೀಲ್, ಕಸಾಯಿಖಾನೆ ಮಾಲೀಕರು ಮತ್ತು ಗೋಮಾಂಸ ಮಾರಾಟಗಾರರು ಸಲ್ಲಿಸಿರುವ ಪ್ರತ್ಯೇಕ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳು ಸಿಜೆ ರಿತುರಾಜ್ ಅವಸ್ಥಿ ನೇತೃತ್ವದ ವಿಭಾಗೀಯ ಪೀಠದ ಮುಂದೆ ಸೋಮವಾರ ವಿಚಾರಣೆಗೆ ಬಂದವು.



ಸರ್ಕಾರದ ಮನವಿ ಮಾನ್ಯ: ಸರ್ಕಾರದ ಪರ ವಾದ ಮಂಡಿಸಿದ ಅಡ್ವೊಕೇಟ್ ಜನರಲ್ ಪ್ರಭುಲಿಂಗ ನಾವದಗಿ, 2021ರ ಜ.20ರ ಮಧ್ಯಂತರ ಆದೇಶ ವ'ಾಪರ್ಾಡ'ು ಕೋರಿ ಅರ್ಜಿ ಸಲ್ಲಿಸಲಾಗಿದೆ. ಅದನ್ನು ಮಾನ್ಯ ಮಾಡಬೇಕು. ಹಿಂದೆ ಸರಕಾರಕ್ಕೆ ನಿಯಮಗಳನ್ನು ರೂಪಿಸುವವರೆಗೆ ಕಾಯಿದೆ ಜಾರಿಗೊಳಿಸಬಾರದೆಂದು ನೀಡಿರುವ ಆದೇಶ ಪರಿಷ್ಕರಣೆ ಮಾಡಬೇಕು ಎಂದರು. ಸರ್ಕಾರ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಕಾಯಿದೆ–2020 ಅಡಿ 2021ರ ಫೆ.15ರಂದೇ ನಿಯಮಗಳ ಕುರಿತು ಅಧಿಸೂಚನೆ ಹೊರಡಿಸಿತ್ತು. ಆನಂತರ ಆಕ್ಷೇಪಣೆ ಸ್ವೀಕರಿಸಿ ನಿಯಮ ಅಂತಿಮಗೊಳಿಸಿ 2021ರ ಮೇ 24ರಂದು ರಾಜ್ಯಪತ್ರದಲ್ಲೂ ಪ್ರಕಟಿಸಲಾಗಿದೆ. ಹಾಗಾಗಿ ಕಾಯಿದೆ ಜಾರಿಗೆ ಸರ್ಕಾರಕ್ಕೆ ಅನುಮತಿ ನೀಡಬೇಕು ಎಂದು ಕೋರಿದರು. ಅದಕ್ಕೆ ಅರ್ಜಿದಾರರ ಪರ ವಕೀಲರು ಆಕ್ಷೇಪ ಎತ್ತಿದರು, ಕಾಯಿದೆಯನ್ನು ಪ್ರಶ್ನಿಸಲಾಗಿದೆ. ಈಗ ಜಾರಿಗೆ ಅನುಮತಿ ನೀಡಿದರೆ ತೀರಾ ಕಷ್ಟವಾಗುತ್ತದೆ. ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಬೇಕೆಂದರು.

ಆದರೆ ಸರ್ಕಾರದ ಮಧ್ಯಂತರ ಅರ್ಜಿಯನ್ನು ಮಾನ್ಯ ಮಾಡಿದ ನ್ಯಾಯಾಲಯ, 2021ರ ಜ.20ರಂದು ನೀಡಿದ್ದ ಆದೇಶ ವಾಪಾಸ್ ಮಾಡಿತಲ್ಲದೆ, ನಿಯಮಗಳನ್ನು ಜಾರಿಗೊಳಿಸಲು ಅನುಮತಿ ನೀಡಿತು. ಆದರೆ ಪ್ರಕರಣದ ಅಂತಿಮ ಆದೇಶಕ್ಕೆ ಒಳಪಡುತ್ತದೆ ಎಂದು ನ್ಯಾಯಪೀಠ ಆದೇಶಿಸಿತು.

ಬಲವಂತದ ಕ್ರಮ ಇಲ್ಲ: ಹಿಂದೆ ಅಡ್ವೊಕೇಟ್ ಜನರಲ್ ಅವರೇ, ಕಾಯಿದೆ ಜಾರಿಗೆ ಬಲವಂತದ ಕ್ರಮ ಕೈಗೊಳ್ಳದಂತೆ, ಎಫ್ಐಆರ್ ಹಾಕದಂತೆ ಪೊಲೀಸರಿಗೆ ಸರ್ಕಾರ ಮತ್ತೆ ಅಗತ್ಯ ನಿರ್ದೇಶನವನ್ನು ನೀಡಲಿದೆ ಎಂದು ಹೈಕೋರ್ಟ್‌ಗೆ ತಿಳಿಸಿದರು. ಅಲ್ಲದೆ, ಕಳೆದ ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಕಾಯಿದೆ ಜಾರಿ ಮಾಡುವುದಿಲ್ಲವೆಂದು ● 8ನೇ ಪುಟಕ್ಕೆ

ಹಣಕಾಸು ಸ್ಥಾಯಿ ಸಮಿತಿ ಅಧ್ಯಕ್ಷರಿಂದಲೇ ಮೈಸೂರು ನಗರಪಾಲಿಕೆ ಬಜೆಟ್ ಮಂಡನೆ

● ಪೂರ್ವಭಾವಿ ಸಭೆಯಲ್ಲಿ ನಿರ್ಧಾರ ● ಬಜೆಟ್‌ನ ಸೇರ್ಪಡೆಗೊಳಿಸಬೇಕಾದ ವಿಚಾರದ ಬಗ್ಗೆ ಸದಸ್ಯರಿಂದ ನಾನಾ ಸಲಹೆ, ಸೂಚನೆ



ಮೈಸೂರು, ಏ.18(ಆರ್‌ಕೆ)–ಹಣಕಾಸು ಸ್ಥಾಯಿ ಸಮಿತಿ ಅಧ್ಯಕ್ಷರಿಂದಲೇ ಮೈಸೂರು ಮಹಾನಗರಪಾಲಿಕೆಯ ಪ್ರಸಕ್ತ ಸಾಲಿನ ಬಜೆಟ್ ಮಂಡಿಸಲು ಮೂರೂ ಪಕ್ಷಗಳ ಸದಸ್ಯರು ಸಮ್ಮತಿಸಿದ್ದಾರೆ.

ಮೇಯರ್, ಉಪಮೇಯರ್ ಅವಧಿ ಪೂರ್ಣಗೊಂಡಿರುವುದರಿಂದ ಸ್ಥಾಯಿ ಸಮಿತಿಗಳು ಅಸ್ತಿತ್ವದಲ್ಲಿರದ ಕಾರಣ ಪ್ರಸಕ್ತ ಸಾಲಿನ ಆಯ–ವ್ಯಯ ಮಂಡನೆಯನ್ನು ಹಂಗಾಮಿ ಮೇಯರ್ ಮಂಡಿಸಬೇಕೇ ಎಂಬುದರ ಬಗ್ಗೆ ಗೊಂದಲ ಉಂಟಾಗಿತ್ತು. ಆದರೆ ಸ್ಥಾಯಿ ಸಮಿತಿ ಅಧ್ಯಕ್ಷರ ಅಧಿಕಾರ ಮುಂದುವರಿಯಲಿದೆ ಎಂದು ಪಾಲಿಕೆ ಆಯುಕ್ತರು ಸ್ಪಷ್ಟಪಡಿಸಿದ ಹಿನ್ನೆಲೆಯಲ್ಲಿ ಹಣಕಾಸು ಸ್ಥಾಯಿ ಸಮಿತಿ ಅಧ್ಯಕ್ಷರೇ ಆಯ–ವ್ಯಯ ಮಂಡಿಸುವರು ಎಂದು ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ ಅವರು ಇಂದು ಪಾಲಿಕೆ ಕಚೇರಿ ಹಳೇ ಕೌನ್ಸಿಲ್ ಸಭಾಂಗಣದಲ್ಲಿ ನಡೆದ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಪ್ರಕಟಿಸಿದರು.

ಸಭೆ ಆರಂಭಗೊಳ್ಳುತ್ತಿದ್ದಂತೆಯೇ, ವಿಷಯ ಪ್ರಸ್ತಾಪಿಸಿದ ಜೆಡಿಎಸ್ ಕಾರ್ಪೊರೇಟರ್ ಅಶ್ವಿನಿ ಅನಂತು ಅವರು, ಮೇಯರ್, ಉಪಮೇಯರ್, ಸ್ಥಾಯಿ ಸಮಿತಿಗಳಿಗೆ ಅಧಿಕಾರವಿದೆಯೇ? 4 ತಿಂಗಳಿಂದ ಸಭೆ ನಡೆಸಿಲ್ಲವೇಕೆ? ● 5ನೇ ಪುಟಕ್ಕೆ

ಏ.28ಕ್ಕೆ ಪಾಲಿಕೆ ಬಜೆಟ್

ಮೈಸೂರು: ಏಪ್ರಿಲ್ 28ರಂದು ಮೈಸೂರು ಮಹಾನಗರ ಪಾಲಿಕೆ ಬಜೆಟ್ ಮಂಡನೆಗೆ ತೀರ್ಮಾನಿಸಲಾಗಿದೆ ಎಂದು ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ ತಿಳಿಸಿದ್ದಾರೆ.

ಪಾಲಿಕೆ ಹಣಕಾಸು ಸ್ಥಾಯಿ ಸಮಿತಿ ಅಧ್ಯಕ್ಷೆ ಶೋಭಾ ಅವರೇ ಆಯ–ವ್ಯಯ ಮಂಡಿಸಲಿದ್ದು, ಮೈಸೂರು ನಗರದ ಅಭಿವೃದ್ಧಿ ದೃಷ್ಟಿಯಿಂದ ಪ್ರಸಕ್ತ ಸಾಲಿನ ಬಜೆಟ್ ಮಂಡಿಸಲು ಸೋಮವಾರ ನಡೆದ ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಯಿತು. ಒಂದೆರಡು ದಿನಗಳಲ್ಲಿ ಹಣಕಾಸು ಸ್ಥಾಯಿ ಸಮಿತಿಯಿಂದ ಮಾಹಿತಿ ಪಡೆದು ಅಧಿಕಾರಿಗಳೊಂದಿಗೆ ಚರ್ಚಿಸಿ ಆಯ–ವ್ಯಯ ಸಿದ್ಧಪಡಿಸಲಾಗುವುದು ಎಂದರು. ನಾನೇ ಬಜೆಟ್ ಮಂಡಿಸಬೇಕೆಂಬ ಹಠವೇನಿಲ್ಲ, ಮೈಸೂರಿನ ನಾಗರಿಕರ ಹಿತದೃಷ್ಟಿಯಿಂದ ಹಾಗೂ ಎಲ್ಲಾ ಕಾರ್ಯಗಳೂ ಈ ನಿರ್ಧಾರ ಕೈಗೊಳ್ಳಲಾಗಿದೆ. ಸದಸ್ಯರು ನೀಡಿರುವ ಸಲಹೆಗಳನ್ನೂ ಪರಿಗಣಿಸಿ ಯೋಜನೆಗಳನ್ನು ಆಯ–ವ್ಯಯದಲ್ಲಿ ಜೋಡಿಸಲು ಪ್ರಯತ್ನಿಸುತ್ತಿದ್ದೇವೆ ಎಂದು ಪಾಲನೇತ್ರ ತಿಳಿಸಿದರು.

ಅನುದಾನ ತಾರತಮ್ಯ ಪ್ರಸ್ತಾಪ ಬಿಜೆಪಿ ಕಾರ್ಪೊರೇಟರ್ಸ್ ವಿರುದ್ಧ ಮಾಜಿ ಮೇಯರ್‌ಗಳ ವಾಗ್ದಾಳಿ

ಮೈಸೂರು, ಏ.18(ಆರ್‌ಕೆ)– ಹೆಚ್ಚು ತೆರಿಗೆ ಸಂಗ್ರಹವಾಗುವ ವಾರ್ಡುಗಳ ಅಭಿವೃದ್ಧಿಗೆ ಅಧಿಕ ಪ್ರಮಾಣದ ಅನುದಾನ ನೀಡಿ ಎಂದು ಪ್ರಸ್ತಾಪಿಸಿದ ಬಿಜೆಪಿ ಕಾರ್ಪೊರೇಟರ್‌ಗಳ ವಿರುದ್ಧ ತಿರುಗಿ ಬಿದ್ದ ಇಬ್ಬರು ಮಾಜಿ ಮೇಯರ್‌ಗಳು ತೀವ್ರ ವಾಗ್ದಾಳಿ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಹೆಚ್ಚು ಪ್ರಮಾಣದಲ್ಲಿ ತೆರಿಗೆ ಪಾವತಿಸುವ ವಾರ್ಡ್‌ಗಳ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ಮೇರೆಗೆ ಹೆಚ್ಚಿನ ಅನುದಾನವನ್ನು ಬಜೆಟ್‌ನಲ್ಲಿ ಮೀಸಲಿರಿಸಬೇಕು ಎಂದು ಬಿಜೆಪಿ ಕಾರ್ಪೊರೇಟರ್ ಸುಬ್ಬಯ್ಯ ಪ್ರಸ್ತಾಪಿಸುತ್ತಿದ್ದಂತೆಯೇ ಕೆಂಡಾಮಂಡಲವಾದ ಆರಿಫ್ ಹುಸೇನ್, ಶ್ರೀಮಂತರು ಮಾತ್ರ ಬದುಕಬೇಕೆ? ಬಡವರು ಸಾಯಬೇಕೆ ಎಂದು ಪ್ರಶ್ನಿಸಿದರಲ್ಲದೆ, ನಿಮಗೆ ಚುನಾವಣೆಯಲ್ಲಿ ಗೆಲ್ಲಲು ಬಡವರ ಓಟು ಬೇಕು, ಸೌಲಭ್ಯ ಮಾತ್ರ ಶ್ರೀಮಂತರಿಗಾ? ಎಂದು ಹರಿಹಾಯ್ದರು.

ಒಂದು ಕುಟುಂಬದಲ್ಲಿ ರೋಗಗ್ರಸ್ಥ, ಅಂಗವಿಕಲ ಮಕ್ಕಳಿಗೆ ಹೆಚ್ಚು ಆದ್ಯತೆ ನೀಡಬೇಕು. ಪಾಲಿಕೆ ಎಲ್ಲಾ ವಾರ್ಡ್‌ಗಳಲ್ಲೂ ಕರ ಪಾವತಿಯಾಗುತ್ತದೆಯಾದ್ದರಿಂದ ತಾರತಮ್ಯ ಮಾಡದೇ ಸಮಾನವಾಗಿ ಅನುದಾನ ಹಂಚಿಕೆ ಮಾಡಬೇಕು, ಬಡವರಿಗೇನೂ ನೀವು ಭಿಕ್ಷೆ ನೀಡುತ್ತಿಲ್ಲ, ಸಮಾನತೆ, ಸಾಮಾಜಿಕ ನ್ಯಾಯದಂತೆ ಎಲ್ಲರಿಗೂ ಒಂದೇ ಮಾದರಿ ಅನುದಾನ ಕೊಡಿ ಎಂದು ಅವರು ಒತ್ತಾಯಿಸಿದರು.

ಅದಕ್ಕೆ ಮಾಜಿ ಮೇಯರ್ ಅಯೂಬ್‌ಖಾನ್, ಕಾರ್ಪೊರೇಟರ್‌ಗಳಾದ ಪ್ರೇಮಾ ಶಂಕರೇಗೌಡ, ಶ್ರೀಧರ್ ಸಹ ಧ್ವನಿಗೂಡಿಸಿದರು. ಅದೇ ರೀತಿ ಸುಬ್ಬಯ್ಯರಿಗೆ ಬಿಜೆಪಿಯ ಶಿವಕುಮಾರ್, ರಮೇಶ ಹಾಗೂ ಮ.ವಿ.ರಾಮಪ್ರಸಾದ್ ಬೆಂಬಲ ನೀಡಿದರು. ಕಡೆಗೆ ಪಾಲಿಕೆಯಿಂದ ಎಲ್ಲಾ ವಾರ್ಡ್‌ಗಳಿಗೂ ಸಮಾನವಾಗಿ ಅನುದಾನ ನೀಡಿ ಮೂಲ ಸೌಕರ್ಯ ಕಲ್ಪಿಸುವುದಾಗಿ ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ ತಿಳಿಸಿದರು.

ಪಾರಂಪರಿಕ ಕಟ್ಟಡಗಳಿಗೆ ಅನುದಾನ ಮೀಸಲಿಡಿ: ಶಿಥಿಲಾವಸ್ಥೆಯಲ್ಲಿರುವ ಹಳೆಯ ಲ್ಯಾನ್ಸ್‌ಡೌನ್ ಬಿಲ್ಡಿಂಗ್ ಮತ್ತು ದೇವರಾಜ ಮಾರುಕಟ್ಟೆ ● 5ನೇ ಪುಟಕ್ಕೆ

ಲೆಫ್ಟಿನೆಂಟ್ ಜನರಲ್ ಮನೋಜ್ ಪಾಂಡೆ ಮುಂದಿನ ಸೇನಾ ಮುಖ್ಯಸ್ಥ



ನವದೆಹಲಿ: ಸೇನಾ ಮುಖ್ಯಸ್ಥ ಜನರಲ್ ಎಂಎಂ ನರವಣೆ ಮಾಸಾಂತ್ಯದೊಳಗೆ ಸೇವೆಯಿಂದ ನಿವೃತ್ತರಾಗಲಿದ್ದು, ಅವರ ಸ್ಥಾನಕ್ಕೆ ಲೆಫ್ಟಿನೆಂಟ್ ಜನರಲ್ ಮನೋಜ್ ಪಾಂಡೆ ಅವರನ್ನು ನೇಮಕ ಮಾಡಲಾಗಿದೆ. ಇದರೊಂದಿಗೆ ಸೇನಾ ಮುಖ್ಯಸ್ಥರಾಗಿ ನೇಮಕಗೊಂಡ ಮೊದಲ ಎಂಜಿನಿಯರ್ ಎಂಬ ಖ್ಯಾತಿಗೆ ಅವರು ಪಾತ್ರರಾಗಿದ್ದಾರೆ.

ಜನರಲ್ ಎಂ.ಎಂ.ನರವಣೆ ಅವರು ಮೂರು ಸೇನಾಪಡೆಗಳ ಸಿಬ್ಬಂದಿ ಸಮಿತಿ ಮುಖ್ಯಸ್ಥರಾಗಿ ಡಿಸೆಂಬರ್‌ನಲ್ಲಿ ಹೊಣೆ ವಹಿಸಿಕೊಂಡಿದ್ದರು. ಇದರಿಂದಾಗಿ ಸೇನಾ ಮುಖ್ಯಸ್ಥರಾಗಿ ಮನೋಜ್ ಪಾಂಡೆ ಅವರನ್ನು ನೇಮಕ ಮಾಡಲಾಗಿದೆ. ಕಳೆದ ವರ್ಷ ಡಿಸೆಂಬರ್‌ನಲ್ಲಿ ತಮಿಳುನಾಡಿನಲ್ಲಿ ನಡೆದ ಹೆಲಿಕಾಪ್ಟರ್ ದುರಂತದಲ್ಲಿ ಸಿಡಿಎಸ್ ಬಿಪಿನ್ ರಾವತ್ ನಿಧನ ಹೊಂದಿದ್ದರು. ಅಂದಿನಿಂದ ಆ ಸ್ಥಾನ ಹಾಗೆಯೇ ಉಳಿದಿದ್ದು, ನರವಣೆ ಮುಂದಿನ ರಕ್ಷಣಾ ಸಿಬ್ಬಂದಿ ಮುಖ್ಯಸ್ಥರಾಗುವ ಮಾತುಗಳು ಕೇಳಿಬರುತ್ತಿವೆ.



ನಾಡೋಜ ಪ್ರಶಸ್ತಿ ಪುರಸ್ಕೃತರಾದ ಮೈಸೂರಿನ ಯೋಗಾನರಸಿಂಹಸ್ವಾಮಿ ದೇವಸ್ಥಾನದ ಸಂಸ್ಥಾಪಕರಾದ ಶ್ರೀ ಭಾಷ್ಯಂ ಸ್ವಾಮೀಜಿಯವರನ್ನು 'ಲಾಗೈಡ್' ಕನ್ನಡ ಕಾನೂನು ಪತ್ರಿಕೆ ವತಿಯಿಂದ ಅಭಿನಂದಿಸಲಾಯಿತು. ಈ ವೇಳೆ 'ಲಾಗೈಡ್' ಪತ್ರಿಕೆಯ ಸಂಪಾದಕರೂ ಆದ ಹಿರಿಯ ವಕೀಲ ಹೆಚ್.ಎನ್.ವೆಂಕಟೇಶ್, ವಕೀಲರಾದ ರಾಮಮೂರ್ತಿ, ಗಿರಿಜೇಶ್, ಶ್ರೀನಿವಾಸ್, ಪ್ರೀತಂ ಇನ್ನಿತರರಿದ್ದರು.

ಮೈಸೂರು ಪಾರಂಪರಿಕ ಕಟ್ಟಡಗಳ ಮಾಹಿತಿ ಪಡೆದ ವಿದ್ಯಾರ್ಥಿಗಳು



ಮೈಸೂರು,ಏ.18(ಎಂಟಿವೈ)– ಅಂತರರಾಷ್ಟ್ರೀಯ ಪಾರಂಪರಿಕ ದಿನದ ಹಿನ್ನೆಲೆಯಲ್ಲಿ ಮೈಸೂರಲ್ಲಿ ಆಯೋಜಿಸಿದ್ದ ಪಾರಂಪರಿಕ ನಡಿಗೆಯಲ್ಲಿ ಹಲವು ಮಂದಿ ವಿದ್ಯಾರ್ಥಿಗಳು ಪಾಲ್ಗೊಂಡು ಪಾರಂಪರಿಕ ಕಟ್ಟಡಗಳ ಬಗ್ಗೆ ಮಾಹಿತಿ ಪಡೆದರು.

ಪಾರಂಪರಿಕ ದಿನದ ಅಂಗವಾಗಿ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಆಯೋಜಿಸಿದ್ದ ನಡಿಗೆಯಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಪುರಾತತ್ವ ಅಧ್ಯಯನ ಕೇಂದ್ರದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಮೈಸೂರು ಪಾರಂಪರಿಕ ಪ್ರದೇಶಾಭಿವೃದ್ಧಿ ಮತ್ತು ಸಂರಕ್ಷಣೆ ತಜ್ಞರ ಸಮಿತಿ ಸದಸ್ಯ ಪ್ರೊ.ಎನ್.ಎಸ್.ರಂಗರಾಜು ನೇತೃತ್ವದಲ್ಲಿ ನಡೆದ ಪಾರಂಪರಿಕ ನಡಿಗೆ ಪುರಭವನದ ಮುಂಭಾಗದಿಂದ ಆರಂಭವಾಗಿ ದೊಡ್ಡಗಡಿಯಾರ, 10ನೇ ಚಾಮರಾಜ ಒಡೆಯರ್(ಹಾರ್ಡಿಂಗ್) ವೃತ್ತ, ಅರಮನೆ, ಕೆ.ಆರ್.ವೃತ್ತ, ಲ್ಯಾನ್ಸ್‌ಡೌನ್ ಬಿಲ್ಡಿಂಗ್, ಜಗನ್ಮೋಹನ ಅರಮನೆ, ಹಳೆಯ ಟೆಲಿಕಾಮ್ ಕಚೇರಿ ಕಟ್ಟಡ, ಬನುಮಯ್ಯ ಕಾಲೇಜ್ ಕಟ್ಟಡ, ಪಾಲಿಕೆ ಕಟ್ಟಡ, ಸಂಸ್ಕೃತ ಪಾಠಶಾಲೆ ಕಟ್ಟಡ, ಗನ್‌ಹೌಸ್ ವೀಕ್ಷಿಸಿ ದಸರಾ ವಸ್ತುಪ್ರದರ್ಶನದ ಆವರಣದಲ್ಲಿರುವ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಕಚೇರಿ ಸಭಾಂಗಣ ತಲುಪಿದರು.

ಈ ವೇಳೆ ವಿದ್ಯಾರ್ಥಿಗಳು ಪಾರಂಪರಿಕ ಕಟ್ಟಡಗಳ ಸಂರಕ್ಷಣೆ, ನಿರ್ಮಾಣ ಕುರಿತಂತೆ ಮಾಹಿತಿ ಪಡೆದರು. ನಡಿಗೆಯಲ್ಲಿ ಇಬ್ಬರು ನಾರ್ಥ್‌ಈಸ್ಟ್ ವಿದ್ಯಾರ್ಥಿಗಳು, ಉತ್ತರ ಕರ್ನಾಟಕದ ನಾಲ್ವರು, ಬೆಂಗಳೂರಿನ ಇಬ್ಬರು ವಿದ್ಯಾರ್ಥಿಗಳು ಪಾಲ್ಗೊಂಡು ಪಾರಂಪರಿಕ ಕಟ್ಟಡಗಳ ಬಗ್ಗೆ ತಿಳಿದುಕೊಂಡು ಪ್ರಶ್ನೆ ಕೇಳಿ ಉತ್ತರ ಪಡೆದುಕೊಂಡರು.

ಬಳಿಕ ಪರಂಪರೆ ಇಲಾಖೆ ಸಭಾಂಗಣದಲ್ಲಿ ನಡೆದ ಸಂವಾದ ಕಾರ್ಯಕ್ರಮದಲ್ಲಿ ಪಾರಂಪರಿಕ ತಜ್ಞ ಪ್ರೊ.ಎನ್.ಎಸ್.ರಂಗರಾಜು, ಮುಕ್ತ ವಿವಿಯ ಪಾರಂಪರಿಕ ಅಧ್ಯಯನ ಕೇಂದ್ರದ ಮುಖ್ಯಸ್ಥ ಡಾ.ಸೆಲ್ವಪಿಳ್ಳೆ ಅಯ್ಯಂಗಾರ್ ಅವರು, ಮೈಸೂರು ಸಂಸ್ಥಾನದಲ್ಲಿ 1799 ರಿಂದ 1950ವರೆಗೆ ಮೈಸೂರು ಅರಸರ ಆಡಳಿತ, ಮೈಸೂರಿಗೆ ಅರಸರ ಕೊಡುಗೆ, ರಾಜರ ಆಳ್ವಿಕೆಯಲ್ಲಿ ಶಿಕ್ಷಣ, ಆರೋಗ್ಯ, ನೀರಾವರಿ, ಕೈಗಾರಿಕೆ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ನೀಡಿರುವ ಕೊಡುಗೆ ಬಗ್ಗೆ ಮಾಹಿತಿ ನೀಡಿದರು. ಅದರಲ್ಲೂ ಮುಮ್ಮಡಿ ಕೃಷ್ಣರಾಜ ಒಡೆಯರ್, 10ನೇ ಚಾಮರಾಜ ಒಡೆಯರ್, ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ಜಯಚಾಮರಾಜ ಒಡೆಯರ್ ಆಡಳಿತದ ಬಗ್ಗೆ ಸಂವಾದದಲ್ಲಿ ಬೆಳಕು ಚೆಲ್ಲಲಾಯಿತು. ಈ ವೇಳೆ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಪ್ರಭಾರ ಉಪನಿರ್ದೇಶಕಿ ಸಿ.ಎನ್.ಮಂಜುಳಾ, ಕ್ಯೂರೇಟರ್ ಸುನೀಲ್‌ಕುಮಾರ್, ಸಿಬ್ಬಂದಿ ರಮೇಶ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.



ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾಗಿ ಚುನಾಯಿತರಾದ ಕುಂಬಾರಕೊಪ್ಪಲಿನ ಕೆ.ಬಿ.ಲಿಂಗರಾಜು ಅವರನ್ನು ಸೋಮವಾರ ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ಸಂಜೀವಿನಿ ಕುಮಾರ್, ಕಿರಣ್, ಸಾಗರ್ ಅಭಿನಂದಿಸಿದರು.



ಮೈಸೂರಿನ ವಾರ್ಡ್ ನಂ.6 ಗೋಕುಲಂ ಬೃಂದಾವನ ಬಡಾವಣೆ ಪಾರ್ಕ್‌ನಲ್ಲಿ ಗಜೀಬ್ ನಿರ್ಮಾಣಕ್ಕೆ ಕಾರ್ಪೊರೇಟರ್ ಎಸ್‌ಬಿಎಂ ಮಂಜು ಗುದ್ದಲಿಪೂಜೆ ನೆರವೇರಿಸಿದರು. ಈ ವೇಳೆ ಇಂಜಿನಿಯರ್ ಗುರುಸಿದ್ದಯ್ಯ, ಬಡಾವಣೆಯ ಮಧು, ಶಾಂತಕುಮಾರ್, ಕರುಣಾಕರ್, ಕುಮಾರಣ್ಣ, ರಘು, ಬಾಲರಾಜ್, ಡಾ.ಸುಬ್ರಮಣ್ಯ, ಮೋಹನ್, ಜಯರಾಮಣ್ಣ, ಜಯಲಕ್ಷ್ಮಿ, ಚಂದ್ರಕಲಾ, ಸರೋಜಮ್ಮ ಇನ್ನಿತರರು ಉಪಸ್ಥಿತರಿದ್ದರು.

ನಿಧನ

ಎಸ್.ನಾಗರಾಜ



ಮೈಸೂರು,ಏ.18–ಮೈಸೂರಿನ ಮರಿಮಲ್ಲಪ್ಪ ಪ್ರೌಢಶಾಲೆ ನಿವೃತ್ತ ಮುಖ್ಯೋಪಾಧ್ಯಾಯರು ಮತ್ತು ರಾಮಕೃಷ್ಣನಗರ 'ಕೆ' ಬ್ಲಾಕ್ ನಿವಾಸಿ ಎಸ್.ನಾಗರಾಜ (76) ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಸೋಮವಾರ ನಿಧನರಾದರು. ಮೃತರು ಪತ್ನಿ ಸಿ.ಆರ್.ಪದ್ಮ, ಪುತ್ರ ಮಹೇಶ್ ನಾಗರಾಜ್, ಪುತ್ರಿಯರಾದ ಅರ್ಪಣ ಕುಮಾರ್ ಮತ್ತು ಅಂಬಿಕಾ ನಾಗರಾಜ್, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ವರ್ಗ ಅಗಲಿದ್ದಾರೆ. ಪಾರ್ಥಿವ ಶರೀರವನ್ನು ಸೋಮವಾರ ಸಂಜೆ ಮೈಸೂರಿಗೆ ತರಲಾಯಿತು. ಅಂತ್ಯಕ್ರಿಯೆ ನಾಳೆ (ಏ.19) ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪಿ.ನಾಗರಾಜು



ಮೈಸೂರಿನ ಗಾಂಧಿನಗರದ ನಿವಾಸಿ ಮತ್ತು ಕಾಲೇಜು ಶಿಕ್ಷಣ ಇಲಾಖೆಯ ನಿವೃತ್ತ ಸಹಾಯಕ ನಿರ್ದೇಶಕರಾದ ಪಿ. ನಾಗರಾಜು (77) ಅವರು ಶನಿವಾರ (ಏ.16) ಮೃತರಾದರು.

ಮೃತರು ಪತ್ನಿ ಶ್ರೀಮತಿ ಜಯಲಕ್ಷ್ಮಿ, ಮಕ್ಕಳಾದ ಕಲ್ಯಾಣ್ ಕುಮಾರ್, ಕಿರಣ್ ಕುಮಾರ್, ಕವಿತ, ಕಲ್ಪನ, ಕುಸುಮ, ಕೃಷ್ಣ ಕುಮಾರ್, ಕೀರ್ತಿ ಕುಮಾರ್ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಭಾನುವಾರ ಗಾಂಧಿನಗರದ ಆದಿಜಾಂಬವ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಈಗ ಕನ್ನಡ ಪತ್ರಿಕೆ ಓದುಗರ ಸಂಖ್ಯೆ ಕ್ಷೀಣಿಸುತ್ತಿದೆ: ಶಾಸಕ ರಾಮದಾಸ್ ಬೇಸರ

ಪತ್ರಕರ್ತ ಹರೀಶ್ ಅವರಿಗೆ 'ಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ' ಪ್ರದಾನ

ಮೈಸೂರು, ಏ.18(ಆರ್‌ಕೆಬಿ)– ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಆಶ್ರಯದಲ್ಲಿ ಸೋಮವಾರ ಪತ್ರಕರ್ತ ಬಿ.ಎಸ್.ಹರೀಶ್ ಅವರಿಗೆ ಶ್ರೀ ಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು ಪತ್ರಕರ್ತರ ಭವನದಲ್ಲಿ ಸೋಮವಾರ ನಡೆದ ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಮಹಾ ವಿದ್ಯಾಪೀಠದ ಸಾಮಾನ್ಯ ಆಡಳಿತ ವಿಭಾಗದ ನಿರ್ದೇಶಕ ಶಂಕರಪ್ಪ ಅವರು ಪ್ರಶಸ್ತಿ ಪ್ರದಾನ ಮಾಡಿದರು.

ಮುಖ್ಯ ಅತಿಥಿಯಾಗಿದ್ದ ಶಾಸಕ ಎಸ್.ಎ.ರಾಮದಾಸ್ ಮಾತನಾಡಿ, ಪತ್ರಿಕೋದ್ಯಮ ಮತ್ತು ಮೈಸೂರಿಗೂ ಅವಿನಾಭಾವ ಸಂಬಂಧವಿದೆ. ಮೈಸೂರಿನ ಪತ್ರಕರ್ತರು ದೇಶ, ವಿದೇಶಗಳಲ್ಲಿ ಕೆಲಸ ನಿರ್ವಹಿಸಿದ್ದು, ಸಂತಸ ಪಡುವ ವಿಚಾರ. ಒಂದು ಕಾಲದಲ್ಲಿ ಬೆಳಗಿನ ಕಾಫಿಯೊಂದಿಗೆ ಪತ್ರಿಕೆ ಓದುತ್ತಿದ್ದ ಕಾಲವಿತ್ತು. ಆದರೆ ಇಂದು ಕನ್ನಡ ಪತ್ರಿಕೆ ಓದುಗರ ಸಂಖ್ಯೆ ಕ್ಷೀಣಿಸುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಸ್ವಕಷ್ಟಗಳಿಗೆ ಕರ್ತವ್ಯನಿರತ ಪತ್ರಕರ್ತರು: ಹಿರಿಯ ಸಾಹಿತಿ ಹಿ.ಶಿ.ರಾಮಚಂದ್ರೇಗೌಡ ಮಾತನಾಡಿ, ಎಲ್ಲರೊಡನೆ ಬೆರೆತು ಸುದ್ದಿ ತರುವ ಪತ್ರಕರ್ತರು ಸ್ವಕಷ್ಟಗಳನ್ನು ಅನುಭವಿಸಿದರೂ ತಮ್ಮ ಕರ್ತವ್ಯ ಮರೆಯದೇ ದುಡಿಯುತ್ತಿದ್ದಾರೆ. ಈ ಪೈಕಿ ಮೈಸೂರು ಪತ್ರಕರ್ತರೆಂದರೆ ನನಗೆ ಹೆಮ್ಮೆ. ಅದರ ನಡುವೆ ಬಿ.ಎಸ್.ಹರೀಶ್ ನಾಲ್ಕು ದಶಕದಿಂದ ಶಾಂತತೆ, ಶ್ರದ್ಧೆಯಿಂದ ಪತ್ರಿಕೋದ್ಯಮದಲ್ಲಿ ಕಾಲ ಸವೆಸಿದ್ದಾರೆ. ಹಾಗಾಗಿ ಹರೀಶ್ ಬೆಂಕಿಯಲ್ಲಿ ಅರಳಿದ ಹೂವು ಎಂದು ಹೇಳಿದರು.

ಪ್ರಶಸ್ತಿ ಪ್ರದಾನ ಮಾಡಿದ ಜೆಎಸ್‌ಎಸ್ ಮಹಾ ವಿದ್ಯಾಪೀಠದ ಸಾಮಾನ್ಯ ಆಡಳಿತ ವಿಭಾಗದ ನಿರ್ದೇಶಕ ಶಂಕರಪ್ಪ ಮಾತನಾಡಿ, ಹರೀಶ್ ಬಾಲಕನಾಗಿದ್ದಾಗಲೇ ಪತ್ರಿಕೆಗೆ ಸೇರಿ ಹಲವು ಪತ್ರಿಕೆಗಳನ್ನು ಬೆಳೆಸಿದ್ದಾರೆ. ಪತ್ರಿಕೆಗೆ ಅವರು ನೀಡಿದ ಕೊಡುಗೆಯನ್ನು ಪರಿಗಣಿಸಿ, ಅವರಿಗೆ ಈ ಬಾರಿಯ ಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿಗೆ ಭಾಜನರಾಗಿದ್ದಾರೆ ಎಂದರು.

ಪತ್ರಕರ್ತರಲ್ಲಿ ಮಾಯವಾಗುತ್ತಿರುವ ಬದ್ಧತೆ: ಸನ್ಮಾನ ಸ್ವೀಕರಿಸಿ ಮಾತನಾಡಿದ ಬಿ.ಎಸ್.ಹರೀಶ್, ತಮ್ಮ ನಾಲ್ಕು ದಶಕಗಳ ಪತ್ರಿಕೋದ್ಯಮ ಕ್ಷೇತ್ರದಲ್ಲಿ ತಾವು ಕಂಡಂತೆ, ಮೊದಲ 30 ವರ್ಷ ಪತ್ರಕರ್ತರಲ್ಲಿ ಬದ್ಧತೆ, ಸಮಾಜದ ಬಗ್ಗೆ ಕಳಕಳಿ ಇರುತ್ತಿತ್ತು. ನಂತರದ ಬೆಳವಣಿಗೆಗಳಲ್ಲಿ ವಿದ್ಯುನ್ಮಾನ ಮಾಧ್ಯಮಗಳು ಬೆಳೆಯುತ್ತಿದ್ದಂತೆ ಆ ಬದ್ಧತೆ ಮಾಯವಾಗಿದೆ. ಹಣವೇ ಪ್ರಮುಖ ಉದ್ದೇಶವಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಬಿ.ಎಸ್.ಹರೀಶ್ ಅವರ ಪತ್ನಿ, ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಎಂ.ಸುಬ್ರಹ್ಮಣ್ಯ, ಉಪಾಧ್ಯಕ್ಷ ರಂಗರಾಜು, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಬಿ.ರಾಘವೇಂದ್ರ ಇನ್ನಿತರರು ಉಪಸ್ಥಿತರಿದ್ದರು.



ಜೆಎಸ್‌ಎಸ್ ಮಹಾವಿದ್ಯಾಪೀಠ ಕೊಡಮಾಡುವ ಶ್ರೀ ಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿಯನ್ನು ವಿದ್ಯಾಪೀಠದ ಸಾಮಾನ್ಯ ಆಡಳಿತ ವಿಭಾಗದ ನಿರ್ದೇಶಕ ಶಂಕರಪ್ಪ ಅವರು ಪತ್ರಕರ್ತ ಬಿ.ಎಸ್.ಹರೀಶ್ ಅವರಿಗೆ ಪ್ರದಾನ ಮಾಡಿದರು. ಶಾಸಕ ಎಸ್.ಎ.ರಾಮದಾಸ್, ಸಾಹಿತಿ ಹಿ.ಶಿ.ರಾಮಚಂದ್ರೇಗೌಡ ಇನ್ನಿತರರು ಚಿತ್ರದಲ್ಲಿದ್ದಾರೆ.

ಏ.23, 24ರಂದು ದಕ್ಷಿಣ ಭಾರತ ನೃತ್ಯೋತ್ಸವ

ಮೈಸೂರು,ಏ.18–ಚೆನ್ನಪಟ್ಟಣದ ಕಲ್ಪಶ್ರೀ ಪರ್ಫಾರ್ಮಿಂಗ್ ಆರ್ಟ್ಸ್ ಸೆಂಟರ್ ಟ್ರಸ್ಟ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಏ.23 ಮತ್ತು 24ರಂದು ದಕ್ಷಿಣ ಭಾರತ ನೃತ್ಯೋತ್ಸವ ನಡೆಯಲಿದೆ. ಜಗನ್ಮೋಹನ ಅರಮನೆಯಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಅಧ್ಯಕ್ಷ ಅನಂತಕೃಷ್ಣ ಶರ್ಮ ಉದ್ಘಾಟಿಸಲಿದ್ದಾರೆ.

ರಾಮನಗರ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಂ.ಎಸ್.ಹರೀಶ್, ಚೆನ್ನೈನ ಮೀನಾಕ್ಷಿ ಚಿತ್ತರಂಜನ್, ಬೆಂಗಳೂರಿನ ಮಮತಾ ಕಾರಂತ್, ಮೈಸೂರಿನ ವಿದುಷಿ ಜ್ಯೋತಿ ಹಡಗೆ, ವಿದುಷಿ ಪಂಕಜಾ ರಾಮಕೃಷ್ಣಯ್ಯ, ಬೆಂಗಳೂರಿನ ಫೆಡರಲ್ ಸಾಫ್ಟ್ ಸಿಸ್ಟಂನ ಕಿಶೋರ್ ರೆಡ್ಡಿ, ಮುಂಬೈನ ಸಾಯಿಗೀತಾ ವಾರಿಯರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಈ ನೃತ್ಯೋತ್ಸವದಲ್ಲಿ ಭಾರತದ ಹೆಸರಾಂತ ನೃತ್ಯ ಕಲಾವಿದರು, ಭರತನಾಟ್ಯ, ಕೂಚುಪುಡಿ, ಕಥಕ್, ಮೋಹಿನಿಯಾಟ್ಟಂ ನೃತ್ಯಗಳನ್ನು ಪ್ರದರ್ಶಿಸಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಅರ್ಜಿ ಆಹ್ವಾನ

ಮೈಸೂರು,ಏ.18–ಮೈಸೂರು ವಿಶ್ವವಿದ್ಯಾನಿಲಯದ ದೂರಶಿಕ್ಷಣ ಕಾರ್ಯಕ್ರಮದಡಿಯಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳಿಗೆ ಜನವರಿ 2019, ಜುಲೈ 2019 ಹಾಗೂ ಜನವರಿ 2020ರ ಆವೃತ್ತಿಗಳಲ್ಲಿ ಪ್ರವೇಶಾತಿ ಹೊಂದಿದ್ದು ವಿವಿಧ ವೈಯಕ್ತಿಕ ಕಾರಣಗಳಿಂದಾಗಿ ಶೈಕ್ಷಣಿಕ ಚಟುವಟಿಕೆಗಳಿಂದ ತಟಸ್ಥವಾಗಿ ಉಳಿದಿರುವ ವಿದ್ಯಾರ್ಥಿಗಳು ನಿಯಮದಡಿಯಲ್ಲಿ ಪ್ರವೇಶಾತಿ ಪಡೆದುಕೊಳ್ಳಬಹುದು. ಪ್ರವೇಶಾತಿಯು ಏ.30 ಕೊನೆಯ ದಿನ, ದಂಡ ಶುಲ್ಕದೊಂದಿಗೆ ಪಾವತಿಸಲು ಮೇ 5 ಕೊನೆಯ ದಿನಾಂಕ.



ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಹಾಗೂ ಮೈಸೂರು ಜಿಲ್ಲಾ ಒಕ್ಕಲಿಗರ ಸಂಘದ ಉಪಾಧ್ಯಕ್ಷ ರವಿ ರಾಜಕೀಯ ಅವರಿಗೆ ಹುಟ್ಟುಹಬ್ಬದ ಶುಭಾಶಯ ಕೋರಲಾಯಿತು. ಈ ವೇಳೆ ನಗರ ಪಾಲಿಕೆ ಸದಸ್ಯೆ ಪ್ರೇಮಾ ಶಂಕರೇಗೌಡ, ಚಾಮರಾಜ ಕ್ಷೇತ್ರದ ಬಿಜೆಪಿ ಉಪಾಧ್ಯಕ್ಷ ಕುಮಾರ್‌ಗೌಡ, ಚಿತ್ರನಟ ಜಿಮ್ ರವಿ, ಬಿಜೆಪಿ ಮೈಸೂರು ನಗರ ಮಹಿಳಾ ಅಧ್ಯಕ್ಷೆ ಹೇಮಾ ನಂದೀಶ್, ನಮ್ಮೂರು ನಮ್ಮೋರು ಸಮಾಜ ಸೇವಾ ಟ್ರಸ್ಟ್ ಅಧ್ಯಕ್ಷ ಸತೀಶ್‌ಗೌಡ, ಪತ್ರಿಕಾ ವಿತರಕರ ಸಂಘದ ಕಾರ್ಯದರ್ಶಿ ಎ.ರವಿ, ಬಿಜೆಪಿ ಮುಖಂಡ ರಾಜಕುಮಾರ, ಪಾಲಾಕ್ಷ, ಅರವಿಂದ್ ಇನ್ನಿತರರು ಉಪಸ್ಥಿತರಿದ್ದರು.

ವಸತಿ ಶಾಲೆಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು,ಏ.18–ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ (ಆಂಗ್ಲ ಮಾಧ್ಯಮ) 2022–23ನೇ ಶೈಕ್ಷಣಿಕ ವರ್ಷಕ್ಕೆ 6ನೇ ತರಗತಿಯಿಂದ 10ನೇ ತರಗತಿವರೆಗೆ ಪ್ರವೇಶ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮೊರಾರ್ಜಿ ದೇಸಾಯಿ ವಸತಿ ಶಾಲೆ, ದೊಡ್ಡಕಾನ್ಯ, ಮೈಸೂರು ತಾಲೂಕು ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಲಗನಹಳ್ಳಿ, ಪಿರಿಯಾಪಟ್ಟಣ ತಾಲೂಕು ಹಾಗೂ ಮೌಲಾನಾ ಆಜಾದ್ ಆಂಗ್ಲ ಮಾದರಿ, ಕೆಸರೆ, ನಿಜಾಮಿಯಾ, ಶೋಭಾ ಗಾರ್ಡನ್, ಹುಣಸೂರು ಟೌನ್, ಹಲಗನಹಳ್ಳಿ ಪಿರಿಯಾಪಟ್ಟಣ ಶಾಲೆಗಳಲ್ಲಿ ಪ್ರವೇಶ ಪಡೆಯಲು ಅರ್ಜಿಗಳನ್ನು https://sevasindhuservices.karnataka.gov.in ಏ.22ರೊಳಗೆ ಸಲ್ಲಿಸಬಹುದು. ಮಾಹಿತಿಗೆ ಮೊ.ನಂ: 99452 63510, 89510 87207 ಸಂಪರ್ಕಿಸಿ

ಅಪ್ರೆಂಟಿಸ್‌ಶಿಪ್ ಮೇಳ

ಮೈಸೂರು,ಏ.18–ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ವತಿಯಿಂದ ಏ.21ರಂದು ಎನ್.ಆರ್.ಮೊಹಲ್ಲಾದ ತನ್ನ ಆವರಣದಲ್ಲಿ ಅಪ್ರೆಂಟಿಸ್ ಮೇಳವನ್ನು ಹಮ್ಮಿಕೊಳ್ಳಲಾಗಿದೆ. ಮೇಳದಲ್ಲಿ ಐ.ಟಿ.ಐ ಉತ್ತೀರ್ಣರಾದ ಅಭ್ಯರ್ಥಿಗಳು ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆ ಉಪ ಪ್ರಾಚಾರ್ಯ ಎಂ.ಜಯೇಂದ್ರ ಮೊ.ನಂ: 8792426277 ಅವರನ್ನು ಸಂಪರ್ಕಿಸಿ ಎಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಚಾರ್ಯರು ತಿಳಿಸಿದ್ದಾರೆ.

ಕರಾದಸಂಸ ರಾಜ್ಯ ಸಂಚಾಲಕರಾಗಿ ಲಕ್ಷ್ಮೀನಾರಾಯಣ ನಾಗವಾರ ಪುನರಾಯ್ಕೆ

ಮೈಸೂರು,ಏ.18–ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕರಾಗಿ ಲಕ್ಷ್ಮೀನಾರಾಯಣ ನಾಗವಾರ ಅವರು ಪುನರಾಯ್ಕೆಯಾಗಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ ಇತ್ತೀಚೆಗೆ ನಡೆದ ಸಭೆಯಲ್ಲಿ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದ್ದು, ರಾಜ್ಯ ಸಂಘಟನಾ ಸಂಚಾಲಕರಾಗಿ, ಬೆಂಗಳೂರು ಜಿಲ್ಲೆಯ ಜೀವನಹಳ್ಳಿ ಆರ್.ವೆಂಕಟೇಶ್, ಬಾಗಲಕೋಟೆ ಜಿಲ್ಲೆಯ ಶಾಂರಾವ್ ಘಾಟಗೆ, ಕೊಪ್ಪಳ ಜಿಲ್ಲೆಯ ಶರಣಪ್ಪ ಲೇಬಗಿರಿ, ಮಂಡ್ಯ ಜಿಲ್ಲೆಯ ಕೆಂಪಣ್ಣ ಸಾಗ್ಯ, ಗದಗ ಜಿಲ್ಲೆಯ ಎಫ್.ವೈ. ದೊಡ್ಡಮನಿ, ರಾಜ್ಯ ಖಜಾಂಚಿಯಾಗಿ ರಾಯಚೂರು ಜಿಲ್ಲೆಯ ಶಿವಜ್ಞಾನಿ ಕಪ್ಪಗಲ್, ರಾಜ್ಯ ಸಮಿತಿ ಸದಸ್ಯರಾಗಿ ಚಿಕ್ಕಮಗಳೂರು ಜಿಲ್ಲೆ ತರೀಕೆರೆ ನಾಗರಾಜ್, ಉಡುಪಿ ಜಿಲ್ಲೆಯ ಜಯನ್ ಮಲ್ಪೆ, ರಾಯಚೂರು ಜಿಲ್ಲೆಯ ಪ್ರಭು ಮೇಗಳಮನಿ, ವಿಭಾಗೀಯ ಸಂಚಾಲಕರಾಗಿ ಕಲಬುರಗಿ– ಯಾದಗಿರಿ ಜಿಲ್ಲೆಯ ಚಂದ್ರು ಚಕ್ರವರ್ತಿ, ಮೈಸೂರು ಜಿಲ್ಲೆಯ ರಾಜಶೇಖರ ಕೋಟೆ, ಬೆಂಗಳೂರು–ಶಿವಮೊಗ್ಗ ಜಿಲ್ಲೆಯ ಮಂಜುನಾಥ್ ನವಿಲೆ, ಬೆಳಗಾವಿ ವಿಭಾಗೀಯ ಸಂಘಟನಾ ಸಂಚಾಲಕರಾಗಿ ರಾವುತ್ ಎಸ್. ತಳಕೇರಿ, ಮಹದೇವ ಹಾದಿಮನಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಪ್ರಕಟಣೆ ತಿಳಿಸಿದೆ.

ಉದ್ಯಮಿಯಾಗು ಉದ್ಯೋಗ ನೀಡು ಕಾರ್ಯಕ್ರಮ

ಮೈಸೂರು,ಏ.18–ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ವತಿಯಿಂದ ಉದ್ಯಮಿಯಾಗು ಉದ್ಯೋಗ ನೀಡು ಕಾರ್ಯಕ್ರಮವನ್ನು ಏ.28ರಂದು ಬೆಳಗ್ಗೆ 9.30 ಗಂಟೆಗೆ ಹುಣಸೂರು ರಸ್ತೆಯಲ್ಲಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಏರ್ಪಡಿಸಲಾಗಿದೆ. ಕಾರ್ಯಕ್ರಮದಲ್ಲಿ ಸರ್ಕಾರದ ವತಿಯಿಂದ ಸಿಗುವ ಸೌಲಭ್ಯಗಳು, ಉತ್ಪನ್ನಗಳ ಆಯ್ಕೆ, ಉದ್ಯಮಿಗಳ ಗುಣಲಕ್ಷಣಗಳು ಮುಂತಾದ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಿದ್ದು, ಆಸಕ್ತರು ಹಾಗೂ ಅಂತಿಮ ವರ್ಷದ ಪದವಿ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಕಾರ್ಯಕ್ರಮದಲ್ಲಿ ಭಾಗವಹಿಸುವವರು https://ebiz.karnataka.gov.in/eBiz/Public/Entrepreneur Registration ವೆಬ್‌ಸೈಟ್‌ನಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ.

ಬೆಲೆ ಏರಿಕೆ ನೀತಿಗೆ ವಿರೋಧ ಹಾಗೂ ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಬಂಧನಕ್ಕೆ ಆಗ್ರಹಿಸಿ

ಸಿದ್ದರಾಮಯ್ಯ ನೇತೃತ್ವದಲ್ಲಿ ನಾಳೆ ಮೈಸೂರಲ್ಲಿ ಕಾಂಗ್ರೆಸ್ ಪ್ರತಿಭಟನೆ

ಮೈಸೂರು, ಏ.18(ಆರ್‌ಕೆಬಿ)– ಕೇಂದ್ರ ಮತ್ತು ರಾಜ್ಯ ಸರ್ಕಾರದ ಬೆಲೆ ಏರಿಕೆ ನೀತಿ ವಿರೋಧಿಸಿ, ಸರ್ಕಾರದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ಖಂಡಿಸಿ, ಸಂತೋಷ್ ಪಾಟೀಲ್ ಆತ್ಮಹತ್ಯೆಗೆ ಸಂಬಂಧಿಸಿದಂತೆ ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಅವರನ್ನು ಬಂಧಿಸಲು ಆಗ್ರಹಿಸಿ ಏ.20ರಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಮೈಸೂರಿನಲ್ಲಿ ನಡೆಸಲು ಉದ್ದೇಶಿಸಿರುವ ಬೃಹತ್ ಕಾಂಗ್ರೆಸ್ ಪ್ರತಿಭಟನೆಯನ್ನು ಯಶಸ್ವಿಗೊಳಿಸುವ ಸಂಬಂಧ ಸೋಮವಾರ ಕಾಂಗ್ರೆಸ್ ಭವನದಲ್ಲಿ ಕಾಂಗ್ರೆಸ್ ಮುಖಂಡರ ಸಭೆ ನಡೆಯಿತು.

ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಮಾಜಿ ಶಾಸಕರಾದ ವಾಸು, ಎಂ.ಕೆ.ಸೋಮಶೇಖರ್, ಕಳಲೆ ಕೇಶವಮೂರ್ತಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್. ಮೂರ್ತಿ, ಕೆ.ಹರೀಶ್‌ಗೌಡ ಇನ್ನಿತರರನ್ನು ಒಳಗೊಂಡ ಮುಖಂಡರು ಸಭೆಯಲ್ಲಿ ಭಾಗವಹಿಸಿ, ಪ್ರತಿಭಟನೆ ಯಶಸ್ಸುಗೊಳಿಸಲು ತೀರ್ಮಾನಿಸಿದರು.

ಅಂದು ಬೆಳಗ್ಗೆ 11 ಗಂಟೆಗೆ ಮೈಸೂರಿನ ಗಾಂಧಿ ವೃತ್ತದಲ್ಲಿ ಪ್ರತಿಭಟನಾ ಸಭೆ, ನಂತರ ಪಾದಯಾತ್ರೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ, ಅಲ್ಲಿ ಕೆಲ ಹೊತ್ತು ಧರಣಿ ನಡೆಸಿ, ಬಳಿಕ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಸಭೆಗೆ ತಿಳಿಸಿದರು.



ಜಿಲ್ಲೆಯ ಎಲ್ಲಾ ಶಾಸಕರು, ಮಾಜಿ ಶಾಸಕರು, ಪಕ್ಷದ ಹಿರಿಯ ಮುಖಂಡರು, ಕೆಪಿಸಿಸಿ ಕಾರ್ಯದರ್ಶಿಗಳು, ಪದಾಧಿಕಾರಿಗಳು ಎಲ್ಲರೂ ಒಟ್ಟಾಗಿ ಪ್ರತಿಭಟನೆ ಯಶಸ್ವಿಗೆ ಸಹಕರಿಸಬೇಕು. ಪ್ರತಿ ವಿಧಾನ ಸಭಾ ಕ್ಷೇತ್ರದಿಂದ ಕನಿಷ್ಠ ಒಂದು ಸಾವಿರ ಮಂದಿಯಂತೆ ಪ್ರತಿಭಟನೆಯಲ್ಲಿ ಭಾಗವಹಿಸುವಂತೆ ನೋಡಿಕೊಳ್ಳಬೇಕು ಎಂದು ಸಭೆಯಲ್ಲಿ ನಿರ್ಧರಿಸಲಾಯಿತು.

ಕೆಪಿಸಿಸಿ ವಕ್ತಾರರಾದ ಎಂ.ಲಕ್ಷ್ಮಣ್, ಮಂಜುಳಾ ಮಾನಸ, ಕೆಪಿಸಿಸಿ ಸದಸ್ಯೆ ವೀಣಾ, ನಗರ ಪಾಲಿಕೆ ಸದಸ್ಯರಾದ ಅಯೂಬ್‌ಖಾನ್, ಜೆ.ಗೋಪಿ, ಮಾಜಿ ಮೇಯರ್‌ಗಳಾದ ಪುಷ್ಪಲತಾ ಚಿಕ್ಕಣ್ಣ, ಟಿ.ಬಿ.ಚಿಕ್ಕಣ್ಣ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಲತಾ ಸಿದ್ದಶೆಟ್ಟಿ, ಪಕ್ಷದ ಪದಾಧಿಕಾರಿಗಳಾದ ಶಿವಣ್ಣ, ಶಿವಮಾದು, ಜಿ.ಸೋಮಶೇಖರ್, ಮಾರುತಿ, ಸುಧಾ ಮಹದೇವಯ್ಯ, ಶ್ರೀನಾಥ್‌ಬಾಬು, ಈಶ್ವರ ಚಕ್ಕಡಿ, ಎಂ.ಸುನೀಲ್, ಶಿವಪ್ರಸಾದ್ ಸೇರಿದಂತೆ ಇನ್ನಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

19.04.2022 ಮಂಗಳವಾರ, ಮಳೆ ನಕ್ಷತ್ರ: ಅಶ್ವಿನಿ 14.04.2022 ರಿಂದ 26.04.2022
ಶ್ರೀ ಶುಭಕೃತುನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಕೃಷ್ಣ ಪಕ್ಷ
ತಿಥಿ: ತೃತೀಯ, ನಕ್ಷತ್ರ: ಅನೂರಾಧ, ರಾಹುಕಾಲ: ಮಧ್ಯಾಹ್ನ 3 ರಿಂದ 4.30ರವರೆಗೆ

■ **ವೆಂಕಟಗಿರಿ ಪ್ರಕಾಶನ:** ಡಾ.ಎ.ಪುಷ್ಪ ಅಯ್ಯಂಗಾರ್ ಅವರ 'ಬಾಳು ಬೆಳಗಿತು' ಕೃತಿ ಬಿಡುಗಡೆ, ನಾಡೋಜ ಪ್ರಶಸ್ತಿ ಪುರಸ್ಕೃತರಾದ ಪ್ರೊ. ಭಾಷ್ಯಂ ಸ್ವಾಮೀಜಿ, ಪ್ರೊ.ಟಿ.ವಿ.ವೆಂಕಟಾಚಲಶಾಸ್ತ್ರಿ ಅವರಿಗೆ ಅಭಿನಂದನೆ, ಅಧ್ಯಕ್ಷತೆ: ಮಾಜಿ ಶಾಸಕ ವಾಸು, ಕೃತಿ ಬಿಡುಗಡೆ: ಮಹಾಕವಯತ್ರಿ ಡಾ.ಲತಾ ರಾಜಶೇಖರ್, ಉಪಸ್ಥಿತರು: ಡಾ.ಪುಷ್ಪ ಅಯ್ಯಂಗಾರ್, ದಿಕ್ಸೂಚಿ ಭಾಷಣ: ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಪ್ರೊ.ನೀ.ಗಿರಿಗೌಡ, ಮುಖ್ಯ ಅತಿಥಿಗಳು: ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್, ಸಮಾಜ ಸೇವಕಿ ವೈದೇಹಿ, ಸ್ಥಳ: ಕಲ್ಯಾಣೋತ್ಸವ ಭವನ, ಶ್ರೀ ಯೋಗಾನರಸಿಂಹಸ್ವಾಮಿ ದೇವಸ್ಥಾನದ ಆವರಣ, ಬೆಳಗ್ಗೆ 11.30ಕ್ಕೆ.

■ **ವಿಶ್ವರತ್ನ ಚಾರಿಟಬಲ್ ಟ್ರಸ್ಟ್ :** ಪುಸ್ತಕ ಬಿಡುಗಡೆ ಮತ್ತು ಸನ್ಮಾನ ಸಮಾರಂಭ, ಪುಸ್ತಕ ಬಿಡುಗಡೆ : ಪೊಲೀಸ್ ಅಧೀಕ್ಷಕ ಆರ್. ಚೇತನ್, ಕೃತಿ ಕುರಿತು : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಅಧ್ಯಕ್ಷತೆ : ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ. ಸುರೇಶ್ ಕುಮಾರ್, ಮುಖ್ಯ ಅತಿಥಿಗಳು : ಪ್ರೊ. ಕೆ. ಸದಾಶಿವ, ಪ್ರೊ. ಎನ್. ಸರಸ್ವತಿ, ಸ್ಥಳ: ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣ, ಜೆಎಲ್‌ಬಿ ರಸ್ತೆ, ಸಂಜೆ 5ಕ್ಕೆ

ವಿವಿಧೆಡೆ ಶ್ರೀ ರಾಮನವಮಿ

■ **ಗಾನವಿಶಾರದ ಶ್ರೀಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮ ಮಂದಿರ :** 106ನೇ ವಾರ್ಷಿಕ ಪಾರಂಪರಿಕ ರಾಮನವಮಿ ಸಂಗೀತೋತ್ಸವ, ವಿದುಷಿ ಡಾ.ಎಸ್.ವಿ.ಸಹನಾ ಅವರಿಂದ ವೀಣಾ ವಾದನ, ವಿದ್ವಾನ್ ಮನ್ನಾರ್ಗುಡಿ ಈಶ್ವರನ್ (ಮೃದಂಗ), ಸ್ಥಳ: ಶ್ರೀ ಪ್ರಸನ್ನ ಸೀತಾರಾಮ ಮಂದಿರ ಸಂಜೆ 5.30ಕ್ಕೆ



■ **ಶ್ರೀ ರಾಮ ಸೇವಾ ಮಂಡಲಿ :** ಶ್ರೀ ರಾಮೋತ್ಸವ ಕಾರ್ಯಕ್ರಮ, ಸಂಜೆ 6ಕ್ಕೆ ಶ್ರೀ ಸಚ್ಚಿದಾನಂದ ವಿಠಲ ದಾಸ್ ಮತ್ತು ಸಾಗರಿ ಸುನಾಗ್ ಅವರಿಂದ ಭಕ್ತಿಗೀತೆಗಳು, ಸಂಜೆ 7ರಿಂದ ವಿದ್ವಾನ್ ಯಜ್ಞೇಶ್ ಆಚಾರ್ ಅವರಿಂದ ಹರಿಕಥೆ, ಸ್ಥಳ: ಶ್ರೀ ಅವನಿ ಶಂಕರ ಮಠ, ವಿದ್ಯಾರಣ್ಯಪುರಂ, 4ನೇ ಮೇನ್ 9ನೇ ಕ್ರಾಸ್.

■ **ಶ್ರೀ ರಾಮಾಭ್ಯುದಯ ಸಭಾ ಪಬ್ಲಿಕ್ ಚಾರಿಟಬಲ್ ಟ್ರಸ್ಟ್:** ಶ್ರೀ ರಾಮೋತ್ಸವ, ವಿದ್ವಾನ್ ರಮಣ ಬಾಲಚಂದರ್‌ರಿಂದ ವೀಣಾವಾದನ, ಅನಂತ ಕೃಷ್ಣ–ಮೃದಂಗ, ಗಿರಿಧರ್ ಉಡುಪ–ಘಟಂ, ಸ್ಥಳ: ಆಲಮ್ಮನವರ ಛತ್ರ, ಕುಂಚಿಟಿಗರ ಸಂಘ, ಸಂಜೆ 6.30ರಿಂದ.

ಅಳಗಂಚಿ, ನಂಜನಗೂಡು ತಾಲೂಕು

■ **ಜೆಎಸ್‌ಎಸ್ ಡಿಇಡಿ ಕಾಲೇಜು ಸುತ್ತೂರು:** ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ವಾರ್ಷಿಕ ಶಿಬಿರ ಅಧ್ಯಕ್ಷತೆ: ಸಹಾಯಕ ಸಂಯೋಜನಾಧಿಕಾರಿ ವೀರಭದ್ರಯ್ಯ, ರಾಜಪ್ಪ ಅವರಿಂದ ಜನಪದ ಸಾಹಿತ್ಯದ ಮಹತ್ವ ಕುರಿತು ಉಪನ್ಯಾಸ, ಸ್ಥಳ: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣ ಅಳಗಂಚಿ, ಸಮಯ ಸಂಜೆ 5.30

ಮೈಸೂರು ಆಕಾಶವಾಣಿ



ಬೆಳಗ್ಗೆ: 6.05 ಚಿಂತನ, 6.20 ಗೀತಾರಾಧನ, 6.35 ಮತ್ತು 5.00 ಅಕ್ಷರ ಮೈಸೂರು ಅನ್ನದ ಸೂರು –ಮೈಸೂರಿನ ಪರಂಪರೆಯಲ್ಲಿ ಅನ್ನ ಅಕ್ಷರಗಳ ನೆನಪು, ಪ್ರಸ್ತುತಿ– ಡಾ. ವಿ. ರಂಗನಾಥ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಕಾರ್ಯಕ್ರಮ, ಗಾಯನ– ಡಾ.ಪಿ.ಎಸ್. ಮುರಳೀಧರ್, ವ್ಯಾಖ್ಯಾನ– ಡಾ.ಬೋರೇಗೌಡ ಚಿಕ್ಕಮರಳಿ, 7.15 ಕಾದಂಬರಿ ವಿಹಾರ– ಡಾ.ಎಸ್.ಎಲ್. ಭೈರಪ್ಪನವರ ದೂರಸರಿದರು ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ– ಉಮೇಶ್ ಎಸ್.ಎಸ್., 7.45 ನಿತ್ಯವಿಜ್ಞಾನ, ಪ್ರಾಯೋಜಿತ ಕಾರ್ಯಕ್ರಮ, 10.00 ಪ್ರೊ.ಆರ್. ವಿಶ್ವೇಶ್ವರನ್ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.05ವನಿತಾ ವಿಹಾರ, 12.30 ದೇವರನಾಮ, 12.45 ನಮ್ಮ ಸುತ್ತಲಿನ ದೇವಸ್ಥಾನಗಳು –ಸಿ.ಎನ್. ಶಾನುಭೋಗ್ ಅವರೊಡನೆ ಸಂದರ್ಶನ, ಸಂದರ್ಶಕರು– ದಿವಾಕರ ಹೆಗಡೆ, 1.20 ಭಾವಗೀತೆ–ರವಿ ಮೂರೂರು, 3.00 ತ್ರಿಚಿ ಎನ್.ನಟರಾಜನ್– ಹಾಡುಗಾರಿಕೆ, 4.00 ಕಥಾಕಾಲಕ್ಷೇಪ–ಭಕ್ತ ಸುಧಾಮ, ಪ್ರಸ್ತುತಿ– ವಿದ್ವಾನ್ ಭದ್ರಗಿರಿ ಅಚ್ಯುತದಾಸರು, 6.50 ಕೃಷಿರಂಗ–ಕಿಸಾನ್‌ವಾಣಿ, ಅರಣ್ಯ ಕೃಷಿ ಹಾಗೂ ಹೂವಿನ ಕೃಷಿಯಲ್ಲಿನ ಅನುಭವ ಈರನಾಯಕ ಅವರೊಡನೆ ಸಂದರ್ಶನ, 10.00 ಯಕ್ಷ ಸಂಪದ–ಯಕ್ಷಗಾನ ಬಡಗುತಿಟ್ಟಿನ ಮಟ್ಟುಗಳ ರೇಡಿಯೋ ಪ್ರಾತ್ಯಕ್ಷಿಕೆ, ನಿರ್ಮಾಣ–ದಿವಾಕರ ಹೆಗಡೆ, 10.30 ಸವಿನೆನಪು



ಅಖಿಲ ಕರ್ನಾಟಕ ಮಾಜಿ ಸೈನಿಕ ಸಂಘದ ಮೈಸೂರು ಜಿಲ್ಲಾ ಘಟಕದ ವತಿಯಿಂದ ಮೈಸೂರು ಸೈನಿಕ ಕಲ್ಯಾಣ ಇಲಾಖೆ ಉಪನಿರ್ದೇಶಕರನ್ನು ಭೇಟಿ ಮಾಡಿ, ಮೈಸೂರಲ್ಲಿ (ಕೊಡಗು, ಹಾಸನ, ಮಂಡ್ಯ) ನೆಲೆಸಿರುವ ಮಾಜಿ ಸೈನಿಕರಿಗೆ ಉಚಿತ ನಿವೇಶನ ಹಂಚಿಕೆ ಮಾಡುವಂತೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಕೆ.ಪಿ.ದಿವಾಕರ್, ಪ್ರಧಾನ ಕಾರ್ಯದರ್ಶಿ ಹೆಚ್.ಎಸ್.ನಂಜುಂಡಸ್ವಾಮಿ, ನಿರ್ದೇಶಕ ಮಂಜುನಾಥ, ಸದಸ್ಯರಾದ ಶಂಭುಲಿಂಗ, ಸ್ವಾಮಿ, ಲಕ್ಷ್ಮಣ್, ಧ್ರುವ ರಾಜ್, ಲಕ್ಷ್ಮಪ್ಪ, ತುಳಸಿರಾಮ್ ಇನ್ನಿತರ ಮಾಜಿ ಸೈನಿಕರು ಉಪಸ್ಥಿತರಿದ್ದರು. ಮನವಿ ಪ್ರತಿಯನ್ನು ಡಿಸಿ, ಉಸ್ತುವಾರಿ ಸಚಿವರಿಗೂ ಸಲ್ಲಿಸಲಾಯಿತು.



ಮೈಸೂರಿನ ರಾಜೇಂದ್ರ ಭವನದಲ್ಲಿ ಇತ್ತೀಚೆಗೆ ಮೊಬೈಲ್ ಫೋಟೋ ಪ್ರದರ್ಶನ ಏರ್ಪಡಿಸಿದ್ದ ಅಂಕಣಕಾರರೂ ಆದ ಛಾಯಾಗ್ರಾಹಕ ತ್ರಿಪುರಾಂತಕ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು. ಈ ವೇಳೆ ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್, ಆಂಯರಳ್ಳಿ ವಿರೂಪಾಕ್ಷ, ಖ್ಯಾತ ವನ್ಯಜೀವಿ ಛಾಯಾಗ್ರಾಹಕ ಲೋಕೇಶ್ ಮೊಸಳೆ, ಸಾಹಿತಿ ಪ್ರೊ.ಮಲೆಯೂರು ಗುರುಸ್ವಾಮಿ, ಪ್ರೊ.ಸುಬ್ಬಣ್ಣ ಇನ್ನಿತರರು ಉಪಸ್ಥಿತರಿದ್ದರು.

ಜೆಎಸ್‌ಎಸ್ ಕಾಲೇಜಿಗೆ ಉತ್ತಮ ರ್‍ಯಾಂಕ್

ಮೈಸೂರು,ಏ.18–ಮೈಸೂರಿನ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು ಎಜ್ಯುಕೇಷನ್ ವರ್ಲ್ಡ್ ಸಂಸ್ಥೆಯು 2022–23ನೇ ಸಾಲಿಗೆ ನಡೆಸಿದ ದೇಶದ 871 ಕಾಲೇಜುಗಳ ಮೌಲ್ಯಮಾಪನದಲ್ಲಿ ಕಾಲೇಜು ರಾಜ್ಯಮಟ್ಟದಲ್ಲಿ 13ನೇ ರ್‍ಯಾಂಕ್ ಪಡೆದಿದೆ ಎಂದು ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕ ಪ್ರೊ. ಬಿ.ವಿ.ಸಾಂಬಶಿವಯ್ಯ ತಿಳಿಸಿದ್ದಾರೆ.

ಶಕ್ತಿಧಾಮದಲ್ಲಿ ಬೇಸಿಗೆ ಮೇಳ ಉದ್ಘಾಟನೆ

ಮೈಸೂರು, ಏ.18(ಎಸ್‌ಬಿಡಿ)– ಪ್ರತಿಯೊಬ್ಬರಿಗೂ ಶಿಕ್ಷಣ ಬಹಳ ಮುಖ್ಯ ಎಂದು ಚಲನಚಿತ್ರ ನಟ ಡಾ. ಶಿವರಾಜ್ ಕುಮಾರ್ ಹೇಳಿದರು.

ಮೈಸೂರಿನ 'ಶಕ್ತಿಧಾಮ' ಕೇಂದ್ರದಲ್ಲಿ ಆಯೋಜಿಸಿರುವ ಬೇಸಿಗೆ ಶಿಬಿರವನ್ನು ಸೋಮವಾರ ದೀಪ ಬೆಳಗಿಸಿ ಹಾಗೂ ಜಾನಪದ ವಾದ್ಯಗಳನ್ನು ನುಡಿಸುವ ಮೂಲಕ ಉದ್ಘಾಟಿಸಿ ಮಾತನಾಡಿ, ಶಿಕ್ಷಣ ಬಹಳ ಮುಖ್ಯ, ಇದು ಪ್ರತಿಯೊಬ್ಬರಿಗೂ ಸಿಗಬೇಕು. ಮಕ್ಕಳು ಒಟ್ಟಾಗಿ ಬೆರೆತು ಕಲಿಯಬೇಕು ಜೊತೆಗೆ ಬೆಳೆಯಬೇಕು. ಸುತ್ತಮುತ್ತಲ ಬಡಾವಣೆ ಮಕ್ಕಳು ಶಕ್ತಿಧಾಮದ ಮಕ್ಕಳೊಂದಿಗೆ ಬೆರೆತು, ಖುಷಿಯಿಂದ ಕಲಿಯಲು ಈ ಶಿಬಿರ ವೇದಿಕೆಯಾಗಿದೆ. ಇಲ್ಲಿ ಮನೋರಂಜನೆಯೊಂದಿಗೆ ಸಂತಸದಿಂದ ಕಲಿಯಬಹುದು ಎಂದರು.

ಬಡವ, ಶ್ರೀಮಂತ ಎಂದು ಭೇದ ಮಾಡಬಾರದು. ಎಲ್ಲರೂ ಮನುಷ್ಯರೇ ಎನ್ನುವುದನ್ನು ಮರೆಯಬಾರದು. ಆ ಸಮಯದಲ್ಲಿರುವ ಪರಿಸ್ಥಿತಿ ಬದಲಾಗುತ್ತದೆ. ಎಲ್ಲರಿಗೂ ಒಳ್ಳೆಯದಾಗುತ್ತದೆ. ಎಲ್ಲ ಸೌಲಭ್ಯಗಳೂ ಎಲ್ಲರಿಗೂ ದಕ್ಕಬೇಕು. ನನಗಿಂತ ಹೆಚ್ಚು ಶಿಕ್ಷಣ ಪಡೆದಿರುವ ಪತ್ನಿ ಗೀತಾ, ಶಕ್ತಿಧಾಮದ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ನಾನು ಅವರಿಗೆ ಬೆಂಬಲವಾಗಿದ್ದೇನೆ. ಎಲ್ಲ ಮಕ್ಕಳೂ ನಮ್ಮ ಮಕ್ಕಳಂತೆ. ಮಕ್ಕಳ ಸೇವೆಗೆ ಒಂದು ಅವಕಾಶ ಸಿಕ್ಕಿದೆ. ತಾಯಿ ನಿಧನರಾದ ಬಳಿಕ ಶಕ್ತಿಧಾಮಕ್ಕೆ ಹೆಚ್ಚು ಬರುತ್ತಿದ್ದೇನೆ. ತುಂಬು ಕುಟುಂಬದಲ್ಲಿ ಬೆಳೆದು ಬಂದಿರುವುದರಿಂದ ಮಕ್ಕಳೊಂದಿಗೆ ಮಕ್ಕಳಾಗಿರುತ್ತೇನೆ ಎಂದು ನುಡಿದರು.

ವ್ಯವಸ್ಥಾಪಕ ಧರ್ಮದರ್ಶಿ ಜಿ.ಎಸ್.ಜಯದೇವ ಮಾತನಾಡಿ, 'ಮಾತನಾಡುವುದರ ಜತೆ ಮೌನವಾಗಿರುವುದನ್ನೂ ಕಲಿಯಬೇಕು' ಎಂದು ಮಕ್ಕಳಿಗೆ ಕಿವಿ ಮಾತು ಹೇಳಿದರಲ್ಲದೆ, ಶಕ್ತಿಧಾಮದ ಕೆಲಸದಲ್ಲಿ ಸಹಕಾರ ನೀಡಿದ ಷರೀಫ್, ಗೋಪಾಲಕೃಷ್ಣ, ಆನಂದ್, ಕೃಷ್ಣ, ಮುನಿಗೋಪಾಲರಾಜು, ಸದಾನಂದ, ಚೇತನ್ ಪ್ರಕಾಶ ಮತ್ತಿತರರಿಗೆ ಕೃತಜ್ಞತೆ ತಿಳಿಸಿದರು. ಈ ವೇಳೆ ಇವರೆಲ್ಲರನ್ನೂ ಆತ್ಮೀಯವಾಗಿ ಅಭಿನಂದಿಸಲಾಯಿತು.

ಶಿಬಿರಾರ್ಥಿ ಮಕ್ಕಳು ಕೆಲವೇ ಗಂಟೆಗಳಲ್ಲಿ ಕಲಿತ 'ಇಳಿದು ಬಾರವ್ವಯ್ಯ ಇಳಿದು ಬಾರೆ ಬೆಟ್ಟದ ಚಾಮುಂಡಿ ಇಳಿದು ಬಾರೆ...' ಜಾನಪದ ಶೈಲಿ ಭಕ್ತಿಗೀತೆ ಹಾಡಿ ಮೆಚ್ಚುಗೆ ಪಡೆದರು. ಕಲಾವಿದೆ ಅಪೂರ್ವ ಭರತನಾಟ್ಯದ ಮೂಲಕ ಪುಷ್ಪಾಂಜಲಿ ಪ್ರಸ್ತುತಪಡಿಸಿದರು. ಕಲಾವಿದ ಶಿವಕುಮಾರ್ ಶಿಬಿರದಲ್ಲಿ ಬಿಡಿಸಿದ ನಟ ಪುನೀತ್ ರಾಜ್‌ಕುಮಾರ್ ಚಿತ್ರವನ್ನು ಶಿವರಾಜ್‌ಕುಮಾರ್ ಅವರಿಗೆ ನೀಡಿದರು.

ಶಕ್ತಿಧಾಮದ ಶೈಕ್ಷಣಿಕ ಆಡಳಿತಗಾರರಾದ ಮಂಜುಳಾ, ನಿವೃತ್ತ ಐಪಿಎಸ್ ಅಧಿಕಾರಿಯೂ ಆದ ಶಕ್ತಿಧಾಮದ ಉಪಾಧ್ಯಕ್ಷ ಕೆಂಪಯ್ಯ, ಖಜಾಂಚಿ ಎಂ.ಎನ್.ಸುಮನಾ, ಮುಖ್ಯಕಾರ್ಯ ನಿರ್ವಹಣಾಧಿಕಾರಿ ಸಂತೃಪ್ತಿ, ಶಿಬಿರದ ಸಂಚಾಲಕ ದೀಪಕ್ ಮತ್ತಿತರರು ಉಪಸ್ಥಿತರಿದ್ದರು..

ಮೆರವಣಿಗೆ ಮೂಲಕ ಸ್ವಾಗತ: ನಟ ಶಿವರಾಜ್‌ಕುಮಾರ್ ಸೇರಿದಂತೆ ಎಲ್ಲಾ ಗಣ್ಯರನ್ನೂ ಶಕ್ತಿಧಾಮದ ಗೇಟ್ ಬಳಿಯಿಂದ ನಗಾರಿ, ತಮಟೆ ಇನ್ನಿತರ ಕಲಾತಂಡಗಳೊಂದಿಗೆ ಮೆರವಣಿಗೆ ಮೂಲಕ ಕಾರ್ಯಕ್ರಮದ ಸ್ಥಳಕ್ಕೆ ಬರಮಾಡಿಕೊಳ್ಳಲಾಯಿತು. ದಾರಿಯುದ್ದಕ್ಕೂ ಸ್ಥಂಭಗಳಲ್ಲಿ ದೀಪ ಬೆಳಗುವ ಮೂಲಕ ಅರ್ಥಪೂರ್ಣವಾಗಿ ಸ್ವಾಗತಿಸಿದ್ದು ವಿಶೇಷವಾಗಿತ್ತು. ಈ ವೇಳೆ ಶಿಬಿರಾರ್ಥಿಗಳಿಗೆ ಕುಂಬಾರಿಕೆ ಹಾಗೂ ಬಿದಿರು ಬುಟ್ಟಿ ಹೆಣೆಯುವ ಬಗ್ಗೆ ತಿಳಿಸಿಕೊಡಲು ಆಗಮಿಸಿದ್ದ ಕಲಾವಿದರನ್ನು ಶಿಬಿರದ ಸಂಚಾಲಕ ದೀಪಕ್ ಗಣ್ಯರಿಗೆ ಪರಿಚಯಿಸಿದರು.

ಮಕ್ಕಳೊಂದಿಗೆ ಸಂಭ್ರಮಿಸಿದ ಶಿವರಾಜ್‌ಕುಮಾರ್



ಮೈಸೂರಿನ ಶಕ್ತಿಧಾಮದಲ್ಲಿ ಆಯೋಜಿಸಿರುವ ಹೆಣ್ಣು ಮಕ್ಕಳ ಬೇಸಿಗೆ ಶಿಬಿರಕ್ಕೆ ಚಲನಚಿತ್ರ ನಟ ಶಿವರಾಜ್‌ಕುಮಾರ್ ಚಾಲನೆ ನೀಡಿದರು. ಸಂಸ್ಥೆ ಅಧ್ಯಕ್ಷೆ ಗೀತಾ ಶಿವರಾಜ್ ಕುಮಾರ್, ಉಪಾಧ್ಯಕ್ಷ ಕೆಂಪಯ್ಯ, ವ್ಯವಸ್ಥಾಪಕ ಧರ್ಮದರ್ಶಿ ಜಿ.ಎಸ್.ಜಯದೇವ ಮತ್ತಿತರರು ಉಪಸ್ಥಿತರಿದ್ದರು.

ಜೇಮ್ಸ್‌ಗೆ ಪುನೀತ್ ಧ್ವನಿ ಅಳವಡಿಸುವ ಪ್ರಯತ್ನಕ್ಕೆ ಸಂತಸ

ಮೈಸೂರು: ಪುನೀತ್ ರಾಜ್‌ಕುಮಾರ್ ಕೊನೆಯ ಚಿತ್ರ 'ಜೇಮ್ಸ್'ಗೆ ಅವರದ್ದೇ ಧ್ವನಿ ಅಳವಡಿಸುವ ಪ್ರಯತ್ನದ ಬಗ್ಗೆ ನಟ ಶಿವರಾಜ್‌ಕುಮಾರ್ ಆಶ್ಚರ್ಯದ ಜೊತೆಗೆ ಅತೀವ ಸಂತೋಷ ವ್ಯಕ್ತಪಡಿಸಿದರು.

ಪುನೀತ್ ಅಕಾಲಿಕ ನಿಧನದಿಂದಾಗಿ 'ಜೇಮ್ಸ್' ಚಿತ್ರಕ್ಕೆ ಶಿವರಾಜ್‌ಕುಮಾರ್ ಡಬ್ಬಿಂಗ್ ಮಾಡಿಕೊಟ್ಟಿದ್ದರು. ಪುನೀತ್ ಜನ್ಮದಿನದಂದು ತೆರೆ ಕಂಡ ಸಿನಿಮಾ, ರಾಜ್ಯದಲ್ಲಿ ಹಬ್ಬದ ವಾತಾವರಣ ಸೃಷ್ಟಿಸಿತ್ತು. ಈ ನಡುವೆ ಧ್ವನಿಯ ಮರು ಸೃಷ್ಟಿ ಮಾಡುವ ತಂತ್ರಜ್ಞಾನದ ಮೂಲಕ 'ಜೇಮ್ಸ್'ಗೆ ಪುನೀತ್ ಧ್ವನಿ ಅಳವಡಿಸುವ ಪ್ರಯತ್ನ ನಡೆದಿತ್ತು. ಸದ್ಯ ಈ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ ಎನ್ನಲಾಗಿದ್ದು, ಈ ಬಗ್ಗೆ ಶಿವರಾಜ್‌ಕುಮಾರ್ ಶಕ್ತಿಧಾಮದಲ್ಲಿ ಪ್ರತಿಕ್ರಿಯಿಸಿದರು.

ವೃತ್ತಿ ಹಾಗೂ ಸೇವೆ ಎರಡೂ ತುಂಬಾ ಮುಖ್ಯ ಹಾಗಾಗಿ ಮೈಸೂರು ಭಾಗದಲ್ಲೇ 'ಭೈರಾಗಿ' ಸಿನಿಮಾ ಚಿತ್ರೀಕರಣ ನಡೆಯುತ್ತಿದೆ. ಅಲ್ಲದೆ ಇದೇ ಮೊದಲ ಸಲ ಬೆಂಗಳೂರಿನಿಂದ ಹೊರಗೆ ಮೈಸೂರಿನ ಸ್ಟುಡಿಯೋದಲ್ಲಿ 'ವೇದ' ಸಿನಿಮಾದ ಡಬ್ಬಿಂಗ್ ಮಾಡುತ್ತಿದ್ದೇನೆ. ಇದರಿಂದ ಶಕ್ತಿಧಾಮದ ಕೆಲಸ ಕಾರ್ಯಗಳಿಗೆ ಅನುಕೂಲವಾಗಿದೆ ಎಂದು ತಿಳಿಸಿದರು.




ಸೋಮವಾರ ತಮ್ಮ ಹುಟ್ಟುಹಬ್ಬವನ್ನು ಆಚರಿಸಿಕೊಂಡ ಮೈಸೂರು–ಚಾಮರಾಜನಗರ ಒಕ್ಕಲಿಗ ಸಮಾಜದ ನಿರ್ದೇಶಕ ರವಿಕುಮಾರ್ ರಾಜಕೀಯ ರವಿ ಅವರಿಗೆ ಶುಭ ಕೋರಲಾಯಿತು. ಈ ವೇಳೆ ಪಾಲಿಕೆ ಸದಸ್ಯ ಎಸ್‌ಬಿಎಂ ಮಂಜು, ಬ್ಯಾಂಕಿನ ನಿರ್ದೇಶಕರಾದ ಮಂಚಪ್ಪ, ಎಸ್.ಅರವಿಂದ, ಎಸ್.ಆರ್.ರವಿಕುಮಾರ್, ಕುಮಾರ್‌ಗೌಡ ಉಪಸ್ಥಿತರಿದ್ದರು.

ಹದಿನೈದಿಪ್ಪತ್ತು ವರ್ಷಗಳ ಹಿಂದೆ ಮಂಜೂರಾದ ಭೂಮಿ ಬಳಸದ ಉದ್ಯಮಿಗಳು; ವರದಿಗೆ ಸಿಎಂ ಸೂಚನೆ

11,513 ಕೋಟಿ ರೂ. 10 ಯೋಜನೆಗಳಿಗೆ ಸಿಎಂ ನೇತೃತ್ವದ ಉನ್ನತ ಸಮಿತಿ ಸಮ್ಮತಿ

ಬೆಂಗಳೂರು,ಏ.18–ಕಳೆದ 10–20 ವರ್ಷಗಳ ಹಿಂದೆ ಭೂಮಿ ಮಂಜೂರಾತಿ ಮಾಡಿಸಿಕೊಂಡಿದ್ದರೂ ಯೋಜನೆಗೆ ಬಳಕೆಯಾಗದೆ ಉಳಿದುಕೊಂಡಿರುವ ಕೈಗಾರಿಕೆಗಳಿವೆ. ಇದನ್ನು ಬೇರೆಯವರಿಗೆ ಕೊಡಲೂ ಸಾಧ್ಯವಿಲ್ಲದ ಸ್ಥಿತಿ ಇದೆ. ಈ ಬಗ್ಗೆ ಕೂಡಲೇ ಪರಿಶೀಲಿಸಿ ವರದಿ ಸಲ್ಲಿಸುವಂತೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರಿನಲ್ಲಿ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಯ 58 ನೇ ಸಭೆಯಲ್ಲಿ ಒಟ್ಟು 11,513 ಕೋಟಿ ರೂ.ಗಳ 10 ಯೋಜನೆಗಳಿಗೆ ಒಪ್ಪಿಗೆ ನೀಡಲಾಯಿತು. ಇದರಿಂದ 46,984 ಉದ್ಯೋಗ ಸೃಜನೆಯಾಗುವ ನಿರೀಕ್ಷೆ ಇದೆ. ಸಭೆಯಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಉಪಗುತ್ತಿಗೆ ಮತ್ತು ಗುತ್ತಿಗೆಯ ಅವಧಿಯನ್ನು ಮಿತಿಮೀರಿ ವಿಸ್ತರಿಸಬಾರದು. ಈ ಬಗ್ಗೆ ಸ್ಪಷ್ಟ ನಿಯಮಗಳನ್ನು ರೂಪಿಸುವಂತೆ ಮುಖ್ಯಮಂತ್ರಿಗಳು ಸೂಚನೆ ನೀಡಿದರು.

ಕೈಗಾರಿಕೆಗಳಿಗೆ ನೀಡಲಾಗಿರುವ ಜಮೀನು ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು. ವಿದ್ಯುತ್ ಹಾಗೂ ಸ್ಟೀಲ್ ಯೋಜನೆಗಳಿಗೆ ಸಂಬಂಧಿಸಿದ ಕೈಗಾರಿಕೆಗಳಲ್ಲಿ ನೀರಿನ ಬಳಕೆಯ ಪ್ರಮಾಣ ಹೆಚ್ಚಿರುತ್ತದೆ. ಕೈಗಾರಿಕೆಗಳಲ್ಲಿ ನೀರಿನ ಬಳಕೆಗೆ ವ್ಯವಸ್ಥೆ ಕಲ್ಪಿಸಬೇಕು ಎಂದು ಹೇಳಿದರು.

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಪರಿಶೀಲನೆಗಾಗಿ ಪ್ರತ್ಯೇಕವಾಗಿ ಸಭೆ ಕರೆಯುವುದಾಗಿ ಸಿಎಂ ತಿಳಿಸಿದರು. ಅಲ್ಲದೆ, ನವೆಂಬರ್ 2 ಮತ್ತು 3ರಂದು ನಡೆಯಲಿರುವ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶಕ್ಕೆ ಪೂರ್ವಭಾವಿಯಾಗಿ ಈ ಯೋಜನೆಗಳು ಪೂರಕವಾಗಲಿವೆ. ಭೂಮಿ ನೀರು, ವಿದ್ಯುತ್ ಮೂಲಭೂತ ಸೌಕರ್ಯ, ವಿನಾಯತಿ ನೀಡುವುದು, ಹೊಸ ಕೈಗಾರಿಕಾ ನೀತಿ 2025 ರ ಅಡಿಯಲ್ಲಿ ಯಾವ ರೀತಿ ಸೌಲಭ್ಯಗಳನ್ನು ನೀಡಬಹುದು ಎಂಬ ಬಗ್ಗೆ ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು.

ಕೈಗಾರಿಕಾ ಸಚಿವ ಮುರುಗೇಶ್ ನಿರಾಣಿ, ವಸತಿ ಸಚಿವ ವಿ.ಸೋಮಣ್ಣ, ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್.ಅಶ್ವತ್ಥ್ ನಾರಾಯಣ್, ಮುಖ್ಯ ಕಾರ್ಯದರ್ಶಿ ಪಿ.ರವಿಕುಮಾರ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಐ.ಎಸ್.ಎನ್.ಪ್ರಸಾದ್, ಅಭಿವೃದ್ಧಿ ಆಯುಕ್ತೆ ಹಾಗೂ ಅಪರ ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ, ಐ.ಟಿ. ಬಿ.ಟಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಡಾ.ಇ.ವಿ.ರಮಣರೆಡ್ಡಿ, ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಮಂಜುನಾಥ ಪ್ರಸಾದ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸಾರಿಗೆ ಬಸ್ ಹರಿದು ವೃದ್ಧೆ ಸಾವು

ಬಸ್ ಹರಿದು ಪಾದಚಾರಿ ಬಲಿ

ಮೈಸೂರು,ಏ.18(ಆರ್‌ಕೆ)–ಸಾರಿಗೆ ಬಸ್ಸೊಂದು ಹರಿದ ಪರಿಣಾಮ ವೃದ್ಧೆ ಸಾವನ್ನಪ್ಪಿರುವ ಘಟನೆ ಮೈಸೂರಿನ ಗ್ರಾಮಾಂತರ ಬಸ್ ನಿಲ್ದಾಣದ ಆವರಣದಲ್ಲಿ ಸಂಭವಿಸಿದೆ. ಕೆ.ಆರ್.ನಗರ ತಾಲೂಕು ಸಾಥಿ ಗ್ರಾಮದ ಪುಟ್ಟಶೆಟ್ಟಿ ಅವರ ಪತ್ನಿ ನೀಲಮ್ಮ(65) ಸಾವನ್ನಪ್ಪಿದವರು. ಮೈಸೂರಿನ ಸಬರ್ಬನ್ ಬಸ್ ನಿಲ್ದಾಣದಲ್ಲಿ ಪ್ಲಾಟ್‌ಫಾರಂನಿಂದ ನಡೆದುಕೊಂಡು ಹೋಗುತ್ತಿದ್ದಾಗ ಸಾರಿಗೆ ಬಸ್ (ಕೆಎ 05–ಎಫ್ 5254) ನೀಲಮ್ಮರ ಮೇಲೆ ಹರಿಯಿತು. ಪರಿಣಾಮ ವೃದ್ಧೆ ಸ್ಥಳದಲ್ಲೇ ಮೃತಪಟ್ಟರು. ಪ್ರಯಾಣಿಕರು ಸುತ್ತುವರಿದು ಬಸ್ ಚಾಲಕನ ವಿರುದ್ಧ ಹರಿಹಾಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಪೊಲೀಸರು ಪರಿಸ್ಥಿತಿ ನಿಯಂತ್ರಿಸಿ ಮೃತದೇಹವನ್ನು ಶವಾಗಾರಕ್ಕೆ ಸ್ಥಳಾಂತರಿಸಿದರು. ಪ್ರಕರಣ ದಾಖಲಿಸಿಕೊಂಡಿರುವ ದೇವರಾಜ ಸಂಚಾರ ಠಾಣೆ ಪೊಲೀಸರು, ಬಸ್ ಮತ್ತು ಚಾಲಕನನ್ನು ವಶಕ್ಕೆ ಪಡೆದಿದ್ದಾರೆ. ಅತೀವೇಗ ಮತ್ತು ಅಜಾಗರೂಕ ಚಾಲನೆಯೇ ದುರಂತಕ್ಕೆ ಕಾರಣ ಎಂದು ಪ್ರಯಾಣಿಕರು ಆರೋಪಿಸಿದ್ದಾರೆ.

ಪಾದಚಾರಿ ಸಾವು: ಮೈಸೂರಿಂದ ನಂಜನಗೂಡು ಕಡೆಗೆ ನಡೆದುಕೊಂಡು ಹೋಗುತ್ತಿದ್ದ ಸುಮಾರು 55ರಿಂದ 60 ವರ್ಷ ವಯಸ್ಸಿನ ಅಪರಿಚಿತ ವ್ಯಕ್ತಿಗೆ ಬಸ್ಸು ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಮೃತ ಪಟ್ಟಿರುತ್ತಾರೆ. ಅಪರಿಚಿತ ವ್ಯಕ್ತಿಯ ಹೆಸರಾಗಲಿ, ಊರಾಗಲಿ ತಿಳಿದಿರುವುದಿಲ್ಲ. ಮೃತ ವ್ಯಕ್ತಿಯ ಬಗ್ಗೆ ಮಾಹಿತಿ ದೊರೆತಲ್ಲಿ ದೂ.ಸಂಖ್ಯೆ: 2520040, ಮೈಸೂರು ಜಿಲ್ಲಾ ಕಂಟ್ರೋಲ್ ರೂಂ ದೂ ಸಂ: 2444800, ಸೌತ್ ಪೊಲೀಸ್ ಠಾಣೆ ದೂ.ಸಂ: 0821-2444955 ಸಂಪರ್ಕಿಸಬಹುದು ಎಂದು ದಕ್ಷಿಣ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ ಶಶಿಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಕ್ಕರೆ ಅದೇ ಸ್ವರ್ಗ

ರಂಗ : ಏನೋ ನಿಂಗ...! ನಿನ್ನ ಮನೆಗೆ ಬ್ಯಾಂಕ್‌ನವರು ಸಾಲ ವಸೂಲು ಮಾಡಲು ಬಂದಿದ್ರಂತೆ?

ನಿಂಗ : ಹೌದು ಬಂದಿದ್ರು... ಹಾಗೆಯೇ ಹೊರಟು ಹೋದ್ರು.

ರಂಗ : ಹೌದಾ...? ಎಲ್ಲಾ ಸಾಲ ಕಟ್ಟಿದೆಯಾ?

ನಿಂಗ : ಏಯ್... ಎಲ್ಲಿದೆ? ಪಾವತಿಸೋಕೆ. ಅವರು ಬಂದಾಗ ಜೋರಾಗಿ ಕೆಮ್ಮಿದೆ ಅಷ್ಟೆ. ಓಡಿ ಹೋದ್ರು.

ಮೈಸೂರು ಮಿತ್ರ

ಮಂಗಳವಾರ, 19 ಏಪ್ರಿಲ್ 2022

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ. ಗೋವಿಂದೇಗೌಡ M.A.

ಅಮೃತವಾಹಿನಿ

ಆದರ್ಶ ಗೃಹಸ್ಥನಾಗುವುದು, ಆದರ್ಶ ಸನ್ಯಾಸಿಯಾಗುವುದಕ್ಕಿಂತ ಬಹಳ ಕಷ್ಟ

– ಸ್ವಾಮಿ ವಿವೇಕಾನಂದ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು

ಹೊಳೆಗೆ ಸುರಿದರೂ ಅಳೆದು ಸುರಿಯಬೇಕು

ನಿಮ್ಮ ಪತ್ರಗಳು

ಸಿನಿಮಾ ಟಿಕೆಟ್ ದರ ಎಲ್ಲಾ ದಿನಗಳಲ್ಲಿ ಒಂದೇ ಆಗಿರಲಿ

ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ಸಿಂಗಲ್ ಸ್ಕ್ರೀನ್ ಚಿತ್ರಮಂದಿರಗಳ ಸಂಖ್ಯೆ ಇಳಿಕೆಯಾಗಿ ಮಲ್ಟಿಪ್ಲೆಕ್ಸ್ ಸ್ಕ್ರೀನ್‌ಗಳು ಹೆಚ್ಚಾಗುತ್ತಿದ್ದು, ಇದರಿಂದ ಅನೇಕ ಸಿನಿಪ್ರಿಯರಿಗೆ ತೊಂದರೆಯಾಗುತ್ತಿದೆ. ಪಕ್ಕದ ರಾಜ್ಯಗಳಾದ ತೆಲಂಗಾಣ ಮತ್ತು ಆಂಧ್ರಪ್ರದೇಶದ ಚಿತ್ರಮಂದಿರ ಸಿನಿಮಾ ಟಿಕೆಟ್ ದರವನ್ನು ಅಲ್ಲಿನ ಸರ್ಕಾರ ನಿಗದಿಪಡಿಸಿದೆ. ಏಕೆಂದರೆ ಎಲ್ಲ ವರ್ಗದ ಪ್ರೇಕ್ಷಕರಿಗೂ ಕೈ ಗೆಟಕುವ ದರದಲ್ಲಿ ಟಿಕೆಟ್ ಖರೀದಿಸಿ ಸಿನಿಮಾ ನೋಡಲಿ ಎಂದು. ಆದರೆ ಕರ್ನಾಟಕ ಚಿತ್ರಮಂದಿರಗಳಲ್ಲಿ ದಿನ–ದಿನಕ್ಕೆ ಅಂದರೆ ಗುರುವಾರ, ಶುಕ್ರವಾರ, ಶನಿವಾರ, ಭಾನುವಾರಗಳಲ್ಲಿ 100ರೂ 200ರೂ 250ರೂ ಇದ್ದ ಟಿಕೆಟ್ ದರ ಆ ಸಿನಿಮಾ ಅಷ್ಟು ಕೋಟಿ ಈ ಸಿನಿಮಾದ ಇಷ್ಟು ಕೋಟಿ ಲೆಕ್ಕಾಚಾರ ಹಾಕಿ ಹೆಚ್ಚಿನ ಹಣಗಳಿಸುವ ಉದ್ದೇಶದಿಂದ ಉದಾಹರಣೆಗೆ ಬೆಂಗಳೂರಲ್ಲಿ 1000ರೂ ಹಿಡಿದು 2000ರೂ 2500ರೂ ಮಾಡಿದರೆ ಚಿತ್ರಮಂದಿರಕ್ಕೆ ಬರೀ ಶ್ರೀಮಂತ ವರ್ಗದವರು ಬರುತ್ತಾರೆಯೇ? ಇನ್ನುಳಿದ ಸಿನಿಪ್ರಿಯರಿಗೆ ಮನರಂಜನೆ ಬೇಡವೇ? ಉದಾಹರಣೆಗೆ 2022 ಏಪ್ರಿಲ್ 14 ರಂದು ತೆರೆಕಂಡಿರುವ ಕೆಜಿಎಫ್–2 ಸಿನಿಮಾ ಸುಮಾರು 10,000ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ವಿಶ್ವಾದ್ಯಂತ ತೆರೆಕಂಡಿದ್ದು, ಯಶಸ್ಸಿನ ಹೆಜ್ಜೆ ಮುಂದುವರಿಸಿದೆ. ಆದರೆ ಟಿಕೆಟ್ ದರ ನೋಡಿದರೆ ಪ್ರೇಕ್ಷಕರಿಗೆ ತಲೆ ನೋವಾಗುತ್ತಿದೆ. ಈ ರೀತಿ ಒಂದು ಸಿನಿಮಾದ ನಂತರ ಮತ್ತೊಂದು ಸಿನಿಮಾಕ್ಕೆ ಟಿಕೆಟ್ ದರ ಏರಿಕೆಯಾದರೆ ಮುಂದಿನ ದಿನಗಳಲ್ಲಿ ಚಿತ್ರಮಂದಿರ ಖಾಲಿಯಾದರೂ ಆಶ್ಚರ್ಯವಿಲ್ಲ. ಪ್ರೇಕ್ಷಕರು ಸ್ವಲ್ಪದಿನ ಕಾದರೆ ಮೊಬೈಲ್‌ನಲ್ಲಿ ನೋಡಿದರಾಯಿತು ಎಂದು ಈಗಾಗಲೇ ಮಾತನಾಡಿಕೊಳ್ಳುತ್ತಿದ್ದಾರೆ. ಸಿನಿಮಾ ಟಿಕೆಟ್ ದರವನ್ನು ಕರ್ನಾಟಕ ರಾಜ್ಯದಲ್ಲಿ 2013 ರ ಮುಂದಿನ ಅವಧಿಯಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮನರಂಜನೆ ಎಲ್ಲ ವರ್ಗದವರಿಗೂ ಸಿಗಬೇಕು ಎಂಬುದನ್ನು ಅರಿತುಕೊಂಡಿದ್ದು ಸಿನಿಮಾ ಟಿಕೆಟ್ ದರವನ್ನು ಮಲ್ಟಿಪ್ಲೆಕ್ಸ್, ಸಿಂಗಲ್ ಸ್ಕ್ರೀನ್ ಚಿತ್ರಮಂದಿರಗಳಿಗೆ ನಿಗದಿಮಾಡಿದ್ದನ್ನು ಈ ಸಂದರ್ಭದಲ್ಲಿ ನೆನಪು ಮಾಡಿಕೊಳ್ಳುತ್ತಾ, ಈಗಿನ ಸರ್ಕಾರ ತೀರ್ಮಾನ ಕೈಗೊಳ್ಳುವುದು ಸೂಕ್ತವೆನಿಸುತ್ತದೆ. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಚಿತ್ರಮಂದಿರಗಳು ಖಾಲಿ ಹೊಡೆಯುವ ಪರಿಸ್ಥಿತಿ ಬರಬಹುದು.

–ನಾಗೇಶ್ ಕೆ., ಮಾನಸಗಂಗೋತ್ರಿ, ಮೈಸೂರು

ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕಿ, ಪರಿಸರ ಜಾಗೃತಿ ಮೂಡಿಸಿ

ಮಾನ್ಯರೆ,

ಪ್ಲಾಸ್ಟಿಕ್ ಇಂದು ಮನುಷ್ಯನ ಜೀವನದ ಅವಿಭಾಜ್ಯ ಅಂಗವಾಗಿದೆ ಎಂದರೆ ತಪ್ಪಾಗಲಾರದು. ಕಡಿಮೆ ವೆಚ್ಚದಲ್ಲಿ ತಯಾರಿಕೆ ಹಾಗೂ ಕೈಗೆಟಕುವ ದರದಲ್ಲಿ ಈ ಪ್ಲಾಸ್ಟಿಕ್ ಉತ್ಪನ್ನಗಳು ದೊರೆಯುವುದರಿಂದ ಮಾನವನು ಈ ವಸ್ತುವಿಗೆ ಅವಲಂಭಿತನಾಗಿದ್ದಾನೆ. ಪ್ಲಾಸ್ಟಿಕ್‌ನಿಂದ ಉಂಟಾಗುವ ಮಾಲಿನ್ಯದಲ್ಲಿ ಏಷ್ಯಾ ಅಗ್ರಸ್ಥಾನದಲ್ಲಿದೆ. ಅಭಿವೃದ್ಧಿ ಹೊಂದುತ್ತಿರುವ ನಮ್ಮ ದೇಶಕ್ಕೆ ಈ ಪ್ಲಾಸ್ಟಿಕ್ ತ್ಯಾಜ್ಯ ಬಹುದೊಡ್ಡ ಸವಾಲಾಗಿ ಪರಿಣಮಿಸಿದೆ. ಇಂದು ಪ್ಲಾಸ್ಟಿಕ್ ತ್ಯಾಜ್ಯ ಪರಿಸರ, ಮನುಷ್ಯ, ಪ್ರಾಣಿಗಳು, ಸಸ್ಯಗಳ ಮೇಲೆ ದುಷ್ಪರಿಣಾಮವನ್ನು ಬೀರಿದೆ. ಪ್ಲಾಸ್ಟಿಕ್‌ನಿಂದ ತಯಾರಿಸಿದ ಅನೇಕ ಉತ್ಪನ್ನಗಳು ಮಾನವನ ಆರೋಗ್ಯ ಮತ್ತು ಪರಿಸರಕ್ಕೆ ಅಪಾಯವನ್ನುಂಟು ಮಾಡುತ್ತಿವೆ. ಪ್ಲಾಸ್ಟಿಕ್‌ಗಳಲ್ಲಿ ಬಿಸೆನಾಲ್ ಎ (ಬಿಪಿಎ), ಥಾಲೇಟ್‌ಗಳು, ಆಂಟಿಮಿನಿ ಟ್ರಾಕ್ಸೆಡ್, ಪಾಲಿ–ಫ್ಲೋರಿನೇಟೆಡ್, ಸೀಸದಂತಹ ಅನೇಕ ರಾಸಾಯನಿಕ ಮತ್ತು ಅಪಾಯಕಾರಿ ಪದಾರ್ಥಗಳು ಇವೆ. ಅವು ಮಾನವನ ಆರೋಗ್ಯ, ಪ್ರಾಣಿಗಳ ಆರೋಗ್ಯ ಮತ್ತು ಪರಿಸರಕ್ಕೆ ಅಪಾಯ ಉಂಟು ಮಾಡುವ ಅಂಶಗಳಾಗಿವೆ. ಟಿ.ನರಸೀಪುರ ಪಟ್ಟಣದಲ್ಲಿ ಪ್ಲಾಸ್ಟಿಕ್ ಕವರ್ ಬಳಕೆಯು ಹೆಚ್ಚಾಗಿದ್ದರಿಂದ ಪುರಸಭೆಯು ಪ್ರಾರಂಭದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಂಡು ತಪ್ಪಿತಸ್ಥರಿಗೆ ಶಿಕ್ಷೆಯನ್ನು ವಿಧಿಸುತ್ತಿತ್ತು. ಪ್ರಸ್ತುತ ದಿನದಲ್ಲಿ ತಳ್ಳುವ ಗಾಡಿಯಿಂದ ಹಿಡಿದು ದೊಡ್ಡ ದೊಡ್ಡ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಕವರ್ ರಾಜಾರೋಷವಾಗಿ ಸಿಗುತ್ತಿದೆ. ಆದ್ದರಿಂದ ಪುರಸಭೆಯು ಪರಿಸರ ಮತ್ತು ಮಾನವನ ಕಾಳಜಿ ವಹಿಸಿ, ಪ್ಲಾಸ್ಟಿಕ್‌ನಿಂದ ಆಗುವ ದುಷ್ಪರಿಣಾಮ ಅನಾಹುತದ ಬಗ್ಗೆ ಅಂಗಡಿ ಮಾಲೀಕರಿಗೆ ಹಾಗೂ ಸಾರ್ವಜನಿಕರಿಗೆ, ತಳ್ಳುವ ಗಾಡಿ ವ್ಯಾಪಾರಿಗಳಿಗೆ ತಿಳಿಸಿಕೊಡುವ ಅನಿವಾರ್ಯತೆ ಇದೆ.

ಪಟ್ಟಣದ ಲಿಂಕ್ ರಸ್ತೆ, ಮಾರ್ಕೆಟ್ ರಸ್ತೆ, ಕಾಲೇಜು ರಸ್ತೆ ಹೀಗೆ ಹಲವು ಕಡೆ ಪರಿಸರ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸಿ ಟಿ.ನರಸೀಪುರ ಪಟ್ಟಣವನ್ನು ಪ್ಲಾಸ್ಟಿಕ್ ಮುಕ್ತವನ್ನಾಗಿ ಮಾಡಬೇಕು ಎಂದು ಈ ಮೂಲಕ ಸಂಬಂಧಪಟ್ಟವರಲ್ಲಿ ಮನವಿ.

–ಪ್ರಕಾಶ್ ಆಲಗೂಡು, ತಿ.ನರಸೀಪುರ

ಕೇಂದ್ರೀಯ ವಿದ್ಯಾಲಯದ ಮುಂದೆ ಟ್ರಾಫಿಕ್ ಪೊಲೀಸ್ ನಿಯೋಜಿಸಿ



ಮಾನ್ಯರೆ,

ಮೈಸೂರಿನ ಸಿದ್ಧಾರ್ಥನಗರದಲ್ಲಿ ಕೇಂದ್ರೀಯ ವಿದ್ಯಾಲಯವಿದ್ದು, ಈ ಶಾಲೆಯ ಮುಂದಿನ ರಸ್ತೆ ತುಂಬಾ ಕಿರಿದಾಗಿದೆ. ಈ ರಸ್ತೆಯಲ್ಲಿ ದಿನನಿತ್ಯ ನಗರ ಸಾರಿಗೆ ಬಸ್ ಹಾಗೂ ಇನ್ನಿತರ ವಾಹನ ಸಂಚಾರ ಅಧಿಕವಾಗಿರುತ್ತದೆ. ಈ ಶಾಲೆಯ ಮಕ್ಕಳ ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಬಿಡುವಾಗ ಹಾಗೂ ಶಾಲೆ ಬಿಟ್ಟ ನಂತರ ಕರೆದೊಯ್ಯಲು, ಟ್ರಾಫಿಕ್ ಕಿರಿಕಿರಿಯಿಂದ ತುಂಬಾ ತೊಂದರೆ ಉಂಟಾಗಿದೆ. ಪೋಷಕರು ತಮ್ಮ ಮಕ್ಕಳನ್ನು ಜೀವಭಯದಿಂದಲೇ ಕರೆದುಕೊಂಡು ಹೋಗುವಂತಹ ಪರಿಸ್ಥಿತಿ. ಈ ಕೂಡಲೇ ಕೇಂದ್ರೀಯ ವಿದ್ಯಾಲಯದ ಅಧ್ಯಕ್ಷರಾದ ಜಿಲ್ಲಾಧಿಕಾರಿಯವರು ಹಾಗೂ ನಗರ ಪೊಲೀಸ್ ಆಯುಕ್ತರು ಸದರಿ ರಸ್ತೆಯಲ್ಲಿ ಬೆಳಗ್ಗೆ 7.30 ರಿಂದ 9.30 ಗಂಟೆ ಹಾಗೂ ಮಧ್ಯಾಹ್ನ 2 ರಿಂದ 3 ಗಂಟೆಯವರೆಗೆ ಈ ಅವಧಿಯಲ್ಲಿ ವಾಹನ ದಟ್ಟಣೆ ನಿಯಂತ್ರಿಸಲು ಓರ್ವ ಟ್ರಾಫಿಕ್ ಪೊಲೀಸ್ ಪೇದೆಯನ್ನು ನಿಯೋಜಿಸಿ ಪೋಷಕರು ನಿರಾತಂಕವಾಗಿ ತಮ್ಮ ಮಕ್ಕಳನ್ನು ಶಾಲೆಗೆ ಬಿಡಲು ಹಾಗೂ ಕರೆದೊಯ್ಯಲು ಅನುಕೂಲ ಮಾಡಿಕೊಡಬೇಕಾಗಿ ಮನವಿ.

–ಎಸ್. ರಾಜಗೋಪಾಲ್, ಗಾಂಧಿನಗರ, ಮೈಸೂರು.



ಡಾ. ಗುಬ್ಬಿಗೂಡು ರಮೇಶ್
ಮೊ : 9742934512

ದೀಪ ಸಾಲು

‘ಅರಿವೇ ಗುರು’–ಈ ನೆಲದೊಡಲಿನ ಮಾತು

ಗಲ್ಲಿಗಳಲ್ಲಿ ನಡೆಯುತ್ತಿದ್ದ street fightಗಳು ಇಂದು ಜಾಗತಿಕ ಮಟ್ಟದಲ್ಲಿ ನಡೆಯುತ್ತಿವೆ. ನಮ್ಮ ಗ್ರಾಮ ಭಾರತದಲ್ಲಿ ಬಲಾಢ್ಯನೊಬ್ಬ ಅಸಹಾಯಕನನ್ನು ಥಳಿಸುತ್ತಿದ್ದರೆ, ‘ನೋಡ್ಲಾ ಅವ್ನ, ಧಾಂಡಿಗ ಇದ್ದಂಗವ್ನೆ, ಆಡೋ ಹೈದನ್ ಮ್ಯಾಲೋಗವ್ನೆ, ಆಡಿದ್ರೆ ತನ್ನ ಸರಿಸಮ ಇರೋರ್ ಮೇಲಾಡ್‌ಬೇಕು, ಲೇ ಬುಡ್ಲಾ ಅವ್ನಾ’ ಅಂತ ನಮ್ಮೂರಿನ ಹಿರಿಯರು ಜಗಳ ಬಿಡಿಸುತ್ತಿದ್ದ ಕಾಲ ಒಂದಿತ್ತು. ಎಂಥ ದುರಂತದ ದಿನಗಳಲ್ಲಿ ನಾವಿದ್ದೇವೆ ಎಂದರೆ, ಇಂದು ಜಗತ್ತು ಭಯದ ಬಾಲದ ಕೆಳಗೆ ಮಲಗಿದೆ. ವಿಶ್ವದ ಮಾನವಕುಲ ತನ್ನ ಎದೆಯ ಮೇಲೆ ನಾಗರಿಕ ಸಮಾಜ ಎಂಬ ಬೋರ್ಡು ತಗುಲಿಸಿಕೊಂಡು ಅನಾಗರಿಕ ವಿದ್ಯಮಾನಗಳಿಗೆ ಸಾಕ್ಷಿಯಾಗುತ್ತಿದೆ.

ಉಕ್ರೇನಿನಂಥ ದೇಶ, ತನ್ನ ದೇಶಪ್ರೇಮದ ಹೆಸರಿನಲ್ಲಿ ಅಮಾಯಕ ನಾಗರಿಕರನ್ನು ಬಲಿಕೊಡುತ್ತಿದೆ. ಕಣ್ಣೆದುರೇ ಮನುಷ್ಯನ ಮಾರಣ ಹೋಮ ನಡೆಯುತ್ತಿದ್ದರೂ, ಬಲಿಷ್ಠ ರಾಷ್ಟ್ರಗಳು ನಮಗೇಕೆ ಅದರ ಉಸಾಬರಿ ಎಂದು ಬಿಡಿಸುವ ತಂಟೆಗೇ ಹೋಗುತ್ತಿಲ್ಲ. ಭಗವದ್ಗೀತೆಯಲ್ಲಿ ಅರ್ಜುನನಿಗೆ ಕೃಷ್ಣ ಒಮ್ಮೆ ಯುದ್ಧ ತಂತ್ರದ ನೈಪುಣ್ಯತೆ ಕುರಿತು ಒಂದು ಮಾತು ಹೇಳುತ್ತಾನೆ– ‘ಅರ್ಜುನ ಪರಾಕ್ರಮವೊಂದೇ ಯುದ್ಧ ನೀತಿಯಲ್ಲ, ಶತೃ ನಮಗಿಂತ ಬಲಾಢ್ಯನಾಗಿದ್ದಾನೆ ಎಂದು ಗೊತ್ತಾದಾಗ ಒಂದು ಹೆಜ್ಜೆ ಹಿಂದೆ ಸರಿಯುವುದೂ ಕೂಡ ಯುದ್ಧ ತಂತ್ರದ ಒಂದು ಭಾಗವೇ ಆಗಿರುತ್ತದೆ ತಿಳಿದುಕೋ’ ಎನ್ನುತ್ತಾನೆ. ಹನ್ನೊಂದು ಅಕ್ಷೋಹಿಣಿ ಸೈನ್ಯದ ಬಲ–ಬೆಂಬಲವಿದ್ದಾಗ ಘರ್ಜಿಸುತ್ತಿದ್ದ ಭ್ರಮೆಯಲ್ಲೇ ವೈಶಂಪಾಯನ ಸರೋವರದಲ್ಲಿ ಅಡಗಿ ಕುಳಿತಾಗಲೂ ಅದೇ ಭ್ರಮೆಯಲ್ಲೇ ಮುನ್ನುಗ್ಗಿ ಬರುವ ದುರ್ಯೋಧನ, ತನ್ನ ಬಾಹುಬಲದ ಅಭಿಮಾನದಿಂದ ಊರುಭಂಗಗೊಂಡು ಅಸುನೀಗುತ್ತಾನೆ. ಅಶ್ವತ್ಥಾಮ–ಬಲರಾಮ ಬರುವವರೆಗೆ ಆತನ ಕೋಪ–ತಾಪಗಳು ಕಾಯುವುದೇ ಇಲ್ಲ. ಶತೃಗಳು ಬಲಾಢ್ಯರಾಗಿದ್ದಾರೆಂಬ ಸತ್ಯ ಗೊತ್ತಿದ್ದರೂ ಸರೋವರದ ತಂಪಿನಲ್ಲೂ ಅವನ ಗದೆ ಝೇಂಕರಿಸುತ್ತದೆ, ಸೋಲು ಹೂಂಕರಿಸುತ್ತದೆ. ವರ್ತಮಾನದ ಈ ವಿದ್ಯಮಾನಗಳಿಗೆ ನಮ್ಮ ಮಹಾಕಾವ್ಯಗಳನ್ನೇ ಏಕೆ ತಿರುವಿ ಹಾಕುತ್ತೇವೆ ಎಂದರೆ, ಭಾರತದಲ್ಲಿ ಇಲ್ಲದ್ದು ಮತ್ತೆಲ್ಲೂ ಸಿಗುವುದಿಲ್ಲ. ಕಾರಣ ಮಹಾಭಾರತ ಬರಿಯ ಕಥೆಯಲ್ಲ, ಅಲ್ಲೊಬ್ಬ ಮನುಷ್ಯನಿದ್ದಾನೆ! ಮನುಷ್ಯನಿಗಿರಬಹುದಾದ ಸಕಲ ಪ್ರವೃತ್ತಿಗಳು, ಸಣ್ಣತನಗಳು, ಔದಾರ್ಯಗಳು ಅಲ್ಲಿ ಗರಿಬಿಚ್ಚುತ್ತವೆ. ಹಾಗಾಗಿಯೇ ಮನುಷ್ಯ ಕೇಂದ್ರಿತ ಕ್ರೋಧ, ದ್ವೇಷ, ಸಂಘರ್ಷ, ಭ್ರಮೆ–ಸಂಕೋಲೆಗಳಿಗೆಲ್ಲ ಅಲ್ಲಿ ಜಾಗವಿದೆ. ಹಾಗಾಗಿಯೇ ವರ್ತಮಾನದ ತಲ್ಲಣಗಳಿಗೆ, ಆತಂಕದ ನಾಳೆಗಳ ಕಡೆಗೆ ಯೋಚಿಸುವಾಗೆಲ್ಲ ನಮ್ಮ ಜಾನಪದ, ನಮ್ಮ ಮಹಾಕಾವ್ಯ, ನಮ್ಮ ಗಾದೆ ಮಾತುಗಳು ನಮಗೆ ಬೆಂಬಲವಾಗಿ ಬರುತ್ತವೆ.

ಭಾರತದ ಕತೆ ಸರ್ವಕಾಲಕ್ಕೂ ಸರ್ವವಿಧಿತ. ಮನುಷ್ಯ ಸಮಾಜವಿರುವ ಎಲ್ಲ ದೇಶಕ್ಕೂ ಸಾರ್ವಕಾಲಿಕ. ಎಲ್ಲ ದೇಶಗಳಿಗೂ ಅದರದ್ದೇ ಆದ ವಿಮೋಚನಾ ಚಳವಳಿಗಳ ಪೂರ್ವ ಇತಿಹಾಸವಿರುತ್ತದೆ. ಕಡೇಪಕ್ಷ ರಾಜನಾದವನು ಮೊದಲು ತನ್ನ ಕೋಟೆಯ ಬಾಗಿಲು ಹಾಕಿಕೊಂಡು ತನ್ನ ಅಮಾಯಕ ಪ್ರಜೆಗಳನ್ನಾದರೂ ರಕ್ಷಿಸಿಕೊಳ್ಳುವ ತವಕಗಳನ್ನು ತೋರಿಸಿದ ಚಾರಿತ್ರಿಕ ಸತ್ಯಗಳಿವೆ. ಆದರೆ, ಬಾಂಬು, ಮಿಸೈಲು, ಅತ್ಯಾಚಾರ, ಕ್ರೌರ್ಯಗಳ ಕಪಿಮುಷ್ಠಿಗೆ ಸಿಲುಕಿದ ಅಮಾಯಕ ನಾಗರಿಕರ ರಕ್ಷಣೆಗೆ ತಾನು ನಂಬಿದ ಮಿತ್ರ ರಾಷ್ಟ್ರಗಳು ಬಾರದೇ ಹೋದಾಗಲೂ ಯುದ್ಧ ತಂತ್ರದ ಬಣ್ಣ ಬದಲಿಸುವ ಗೋಜಿಗೆ ಹೋಗದೆ ಭಾವನೆಗಳ ಬಂಧನಕ್ಕೆ ದೇಶವನ್ನೇ ಬಲಿಕೊಟ್ಟವರನ್ನು ನೇತಾರ ಎನ್ನಬೇಕೋ, ಸರದಾರ ಎನ್ನಬೇಕೋ ಗೊತ್ತಾಗುತ್ತಿಲ್ಲ! ಇನ್ನು, ಜಗತ್ತಿನ ನಾಗರಿಕ ಸಮಾಜ ಕೂಡ ಯಾರೊಬ್ಬರಿಗೂ ಬೈದು ಬುದ್ಧಿ ಹೇಳುವ ಸಾಹಸ ಮಾಡುತ್ತಿಲ್ಲ. ‘ವಿಶ್ವಸಂಸ್ಥೆ’ಯ ಮಾತು ಜಗತ್ತಿನ ಜಗಲಿಯ ಮೇಲೆ ಬಾಲ ಬೋಧೆಯಂತೆ ಕೇಳಿಸುತ್ತಿದೆ. ಜೀವಪರ ಕಾಳಜಿಯುಳ್ಳ ಶ್ರೀಸಾಮಾನ್ಯ ಮಾತ್ರ

> ಗಲ್ಲಿಗಳಲ್ಲಿ ನಡೆಯುತ್ತಿದ್ದ street fightಗಳು ಇಂದು ಜಾಗತಿಕ ಮಟ್ಟದಲ್ಲಿ ನಡೆಯುತ್ತಿವೆ. ನಮ್ಮ ಗ್ರಾಮ ಭಾರತದಲ್ಲಿ ಬಲಾಢ್ಯನೊಬ್ಬ ಅಸಹಾಯಕನನ್ನು ಥಳಿಸುತ್ತಿದ್ದರೆ, ‘ನೋಡ್ಲಾ ಅವ್ನ, ಧಾಂಡಿಗ ಇದ್ದಂಗವ್ನೆ, ಆಡೋ ಹೈದನ್ ಮ್ಯಾಲೋಗವ್ನೆ, ಆಡಿದ್ರೆ ತನ್ನ ಸರಿಸಮ ಇರೋರ್ ಮೇಲಾಡ್‌ಬೇಕು, ಲೇ ಬುಡ್ಲಾ ಅವ್ನಾ’ ಅಂತ ನಮ್ಮೂರಿನ ಹಿರಿಯರು ಜಗಳ ಬಿಡಿಸುತ್ತಿದ್ದ ಕಾಲ ಒಂದಿತ್ತು. ಎಂಥ ದುರಂತದ ದಿನಗಳಲ್ಲಿ ನಾವಿದ್ದೇವೆ ಎಂದರೆ, ಇಂದು ಜಗತ್ತು ಭಯದ ಬಾಲದ ಕೆಳಗೆ ಮಲಗಿದೆ. ವಿಶ್ವದ ಮಾನವಕುಲ ತನ್ನ ಎದೆಯ ಮೇಲೆ ನಾಗರಿಕ ಸಮಾಜ ಎಂಬ ಬೋರ್ಡು ತಗುಲಿಸಿಕೊಂಡು ಅನಾಗರಿಕ ವಿದ್ಯಮಾನಗಳಿಗೆ ಸಾಕ್ಷಿಯಾಗುತ್ತಿದೆ.

ಬಲಿಷ್ಠರ ಆಕ್ರಮಣ, ಪ್ರಜಾ ಪಾಲಕನಾಗದ ನಾಯಕನ ಹುಂಬತನ, ಎರಡನ್ನೂ ನೋಡಿ ಎಂಥ ಆತಂಕದ ದಿನಗಳಲ್ಲಿ ನಾವಿದ್ದೇವೆಂದು ವೇದನೆಪಡುವ ಪಡಿಪಾಟಲಿನಲ್ಲಿ ಮುಳುಗಿಹೋಗಿದ್ದಾನೆ. ಯಾವ ದೇಶ ಜಗತ್ತಿಗೆಲ್ಲಾ ಕೊರೊನಾ ಅಂಟಿಸಿತೋ, ಆ ದೇಶ ತನ್ನ ರಾಜಧಾನಿಯಲ್ಲೇ ತನ್ನ ನಾಗರಿಕರಿಗೆ ಅನ್ನ ಹಾಕಲೂ ಆಗುತ್ತಿಲ್ಲ. ನಮ್ಮ ಗ್ರಾಮ ಭಾರತದಲ್ಲಿ ಮತ್ತೊಂದು ಮಾತಿತ್ತು, ‘ಈ ಜೀವನ ರೊಟ್ಟಿ ಮಗುಚಾಕಿದಂಗೆ’–ಅಂತ. ಕೊರೊನಾದ ಆರಂಭದ ಅಲೆಯಲ್ಲಿ ಅಸ್ತಿತ್ವ ಉಳಿಸಿಕೊಂಡು ಬೀಗಿದ ಚೀನಾ, ಈಗ ಅದೇ ಕೊರೊನಾ ಮಾರಿಯ ಕಪಿಮುಷ್ಠಿಗೆ ಸಿಲುಕಿದೆ. ಶ್ರೀಲಂಕಾ ಅರಾಜಕತೆಯ ಆರ್ಥಿಕ ಸಂಕಷ್ಟಕ್ಕೆ ದೂಡಲ್ಪಟ್ಟಿದೆ. ಹೀಗೆ ಒಂದಲ್ಲಾ ಒಂದು ರೀತಿಯಲ್ಲಿ ಆತಂಕದ ನಾಳೆಗಳ ಜಾಗತಿಕ ತಾಪಮಾನ ವಿಶ್ವದ ಭೂಪಟದಲ್ಲಿ ಹೆಚ್ಚಾಗಿದೆ.

ಪ್ರವಾಸೋದ್ಯಮವೇ ಮೂಲ ಬಂಡವಾಳದಂತೆ ಗಳಿಕೆಯಲ್ಲಿ ಸದೃಢವಾಗಿದ್ದ ದ್ವೀಪರಾಷ್ಟ್ರ ಇಂದು ನಿಜಕ್ಕೂ ರಾತ್ರಿವೇಳೆ ದೀಪ ಹಚ್ಚಿಕೊಂಡೇ ರಾತ್ರಿ ಕಳೆಯುವ ಮಟ್ಟಕ್ಕೆ ಬಂದು ನಿಂತಿದೆ. ಜಗತ್ತಿನ ಭೂಪಟದಲ್ಲಿ ಕೆಲವು ದೇಶಗಳಲ್ಲಿ ಆಂತರಿಕ ಸಮಸ್ಯೆಗಳು, ಅಂತರ್ಯುದ್ಧದ ರೀತಿಯಲ್ಲಿ ಮಾರ್ಪಾಡಾಗಿವೆ. ಭಾರತ ಕೂಡ ಇದಕ್ಕೆ ಹೊರತಾಗಿಲ್ಲ. ಇಲ್ಲಿಯೂ ಚಿಂತನೆಗಳಿಗಿಂತ ಭಾವನೆಗಳೇ ಮೇಳೈಸಿವೆ. ಹಾಗೆ ನೋಡಿದರೆ, ದೇಶಪ್ರೇಮ ಮತ್ತು ರಾಷ್ಟ್ರೀಯ ಭಾವೈಕ್ಯತೆಗಳು, ಎಲ್ಲ ದೇಶಗಳ ನಾಗರಿಕ ಸಮಾಜಕ್ಕೆ ಮೊದಲ ಆದ್ಯತೆಯಾಗಿ ಪ್ರತಿಫಲಿಸುತ್ತವೆ. ಇವತ್ತಿಗೂ ಉಕ್ರೇನ್‌ನಂಥ ಸಣ್ಣ ದೇಶದ ಸೈನಿಕರು ಜೀವ ತೆತ್ತರೂ ದೇಶಪ್ರೇಮದ ರಾಷ್ಟ್ರಹಿತವೇ ತಮಗೆ ಮುಖ್ಯ ಎಂಬ ಭಾವನಾತ್ಮಕ ಸೆಲೆಗೆ ಒಳಗಾಗಿ ಭೌತಿಕ ಅಸ್ತಿತ್ವವನ್ನೇ ಕಳೆದುಕೊಳ್ಳುತ್ತಿದ್ದಾರೆ. ಅಂದರೆ, ಜೀವದ ಹಂಗಿಗಿಂತ ನೆಲದ ಋಣವೇ ಮನುಷ್ಯನನ್ನ ಕಟ್ಟಿಹಾಕುತ್ತದೆ ಎಂಬುದು ವರ್ತಮಾನದ ದಿನಗಳಲ್ಲೂ ಸತ್ಯವಾಗುತ್ತಿದೆ ಎಂದರೆ, ನಮ್ಮ ಸ್ವರಾಜ್ಯದ ಹೋರಾಟದ ಚರಿತ್ರೆಯ ಪುಟಗಳಲ್ಲಿ ದಾಖಲಾದ ಚಳವಳಿಯ ತ್ಯಾಗ–ಬಲಿದಾನಗಳು ಸರ್ವಕಾಲಕ್ಕೂ ಸರ್ವ ದೇಶಗಳಿಗೂ ಸಾರ್ವತ್ರಿಕವಾಗಿ ಅನ್ವಯಿಸುವ ಭಾವತೀವ್ರತೆಯ ಆಯಸ್ಸು ಎಂದೇ ಅರ್ಥವಾಗುತ್ತಿದೆಯಲ್ಲ!

ಪ್ರಸಕ್ತ ದಿನಮಾನಗಳಲ್ಲಿ ಚಿಂತಕರ ಚಾವಡಿಗಳು ದೇಶದ ಹಿತಕ್ಕೆ ಸಮಗ್ರತೆಯ ಭಾವೈಕ್ಯತೆಗೆ ಶಕ್ತಿ ತುಂಬುವ ಮಾತಾಡಬೇಕು. ಆದರೆ, ಈಗ ಚಿಂತನೆಯ ದಿಕ್ಕೇ ಬದಲಾಗಿ ಹೋಗಿದೆ. ತಾವು ನಂಬಿದ ಸಿದ್ಧಾಂತದ ಪರ ಮತ್ತು ವಿರೋಧದ ಹೇಳಿಕೆಗಳನ್ನು ಸಮರ್ಥಿಸಿಕೊಳ್ಳುವ ಚರ್ಚಾಪಟುಗಳಿಗೆ ಈಗ ವೇದಿಕೆ ಸೃಷ್ಟಿಯಾಗಿದೆ. ಇಲ್ಲಿ ವಾದ ಮತ್ತು ಪ್ರತಿವಾದಗಳು ನಡೆಯುತ್ತಿವೆ. ಚಿಂತನೆಯ ಹೆಸರಿನಲ್ಲಿ ಇಲ್ಲೊಂದು ಚರ್ಚಾ ಸ್ಪರ್ಧೆ ನಡೆಯುತ್ತಿದೆ. ಇಷ್ಟೆಲ್ಲದರ ನಡುವೆ ಸಂತಸದ ಸಂಗತಿ ಎಂದರೆ, ಭಾರತಕ್ಕೆ ಇದೆಲ್ಲವನ್ನೂ ಜೀರ್ಣಿಸಿಕೊಂಡು ಅಮೆರಿಕದ ನೆಲದಲ್ಲಿ ನಿಂತು ವಿಶ್ವ ಸಮಾಜದ ಎದುರು ಗುಟುರು ಹಾಕಿ ತನ್ನ ನೆಲದ ಅಸ್ಮಿತೆಯನ್ನು ಪ್ರಕಟಿಸಿಕೊಳ್ಳುವ ಸ್ಥಿತಿಯಲ್ಲಿ ಭಾರತವಿದೆ. ಜಾತಿ ಗಲಾಟೆಗಳು, ಧರ್ಮ ದಂಗಲ್‌ಗಳು ಬಹುಶಃ ಹೆಚ್ಚು ದಿನ ಉಳಿಯಲಾರವು. ಅಧಿಕಾರ, ರಾಜಕಾರಣದ ಲೆಕ್ಕಾಚಾರಗಳು, ಭಾವನಾತ್ಮಕ ಪ್ರಚೋದನೆಯ ಪ್ರೇರಣೆಗಳು ಇಂದು ಕರ್ನಾಟಕವನ್ನೂ ಕಂಗಾಲಾಗಿಸಿವೆ. ಕೊಲೆ, ಗಲಭೆ ದೊಂಬಿ, ಸೋಷಿಯಲ್ ಮೀಡಿಯಾಗಳಲ್ಲಿ ವಿನಾಕಾರಣ ಧಾರ್ಮಿಕ ಭಾವನೆಗಳ ಕಿಚ್ಚು ಹತ್ತಿಸಿ ಮೈ ಕಾಯಿಸಿಕೊಳ್ಳುವ ಪ್ರವೃತ್ತಿಗಳು ನಮ್ಮನ್ನು ಕಾಡುತ್ತಿವೆ. ನ್ಯಾಯ ಇರಲಿ, ಇಲ್ಲದೇ ಇರಲಿ ಸುಖಾಸುಮ್ಮನೆ ಕೆಲವರನ್ನು ಬೆಂಬಲಿಸುವ ಭುಜಬಲ ಪರಾಕ್ರಮದ ಮಾತುಗಳು ಮತ್ತೆ ಕೆಲವರನ್ನು ಕೆರಳಿಸಿ ಕೆಂಗಣ್ಣಿಗೆ ಗುರಿಯಾಗುವಂತೆ ಮಾಡುತ್ತಿವೆ.

ಒಟ್ಟಾರೆ ಈ ನೆಲದ ಕಾನೂನಿಗೆ, ಇಲ್ಲಿನ ಜನರ ಬದುಕಿನ ಸಾಮರಸ್ಯಕ್ಕೆ ಧಕ್ಕೆಯಾಗದಂತೆ ಎಲ್ಲರೂ ನಡೆದುಕೊಳ್ಳಬೇಕಿದೆ. ವೈಚಾರಿಕ ಭಿನ್ನಾಭಿಪ್ರಾಯಗಳು, ವಿಚಾರಧಾರೆಯ ಪರ–ವಿರೋಧಗಳು ಅಭಿವೃದ್ಧಿಗೆ ಮುನ್ನುಡಿ ಬರೆಯಬೇಕೇ ಹೊರತು, ಸಂಘರ್ಷಕ್ಕೆ ನಾಂದಿಯಾಗಬಾರದು. ಕುವೆಂಪು ಅವರ ‘ಭಾರತ ಜನನಿಯ ತನುಜಾತೆ–ಜಯಹೇ ಕರ್ನಾಟಕ ಮಾತೆ’ ನಿಜಕ್ಕೂ ಈ ನಾಡಿನಲ್ಲಿ ಅನುಕರಣೀಸಬೇಕು. ಅದಕ್ಕಾಗಿ ಜ್ಞಾನಿಗಳು, ವಿಚಾರವಂತರು, ಪ್ರಜ್ಞಾವಂತರು ಜಾಗತಿಕ ವಿಪ್ಲವಗಳ ಈ ದೃಶ್ಯಗಳನ್ನು ನೋಡಿದ ಮೇಲಾದರೂ ಮನಬಿಚ್ಚಿ ಮಾತಾಡಬೇಕು. ಇಲ್ಲಿನ ಜನಮಾನಸದ ಬದುಕನ್ನು ಹಸನಾಗಿಸುವಂತಹ ಕ್ರಿಯೆ–ಪ್ರತಿಕ್ರಿಯೆಗಳನ್ನು ಎಲ್ಲೆಂದರಲ್ಲಿ ಯಾವ ಮುಲಾಜೂ ಇಲ್ಲದಂತೆ ಪ್ರಕಟಿಸುತ್ತ ಭಾವೈಕ್ಯತೆ ಬಿತ್ತಬೇಕು, ‘ಅರಿವೇ ಗುರು’– ಈ ನೆಲದೊಡಲಿನ ಮಾತಾಗಬೇಕು, ಏನಂತೀರೀ....?

ಅಗತ್ಯ ವಸ್ತುಗಳ ಬೆಲೆ ಏರಿಕೆ ಖಂಡಿಸಿ ಪ್ರತಿಭಟನೆ



ಮೈಸೂರು, ಏ.18(ಎಂಕೆ)– ಪೆಟ್ರೋಲ್, ಡೀಸೆಲ್ ಸೇರಿದಂತೆ ಅಗತ್ಯ ವಸ್ತುಗಳ ನಿರಂತರ ಬೆಲೆ ಏರಿಕೆ ಖಂಡಿಸಿ ಆಮ್ ಆದ್ಮಿ ಪಾರ್ಟಿ ಮೈಸೂರು ಘಟಕ ವತಿಯಿಂದ ಪ್ರತಿಭಟನೆ ನಡೆಸಲಾಯಿತು. ನಗರದ ಗಾಂಧಿ ವೃತ್ತದಲ್ಲಿ ಜಮಾವಣೆಗೊಂಡ ಎಎಪಿ ಕಾರ್ಯಕರ್ತರು ರಸ್ತೆಯಲ್ಲೇ ಸೌದೆ ಒಲೆಯಲ್ಲಿ ಅಡುಗೆ ತಯಾರಿಸಿ, ಗ್ಯಾಸ್ ಸಿಲಿಂಡರ್‌ಗಳನ್ನು ಇಟ್ಟುಕೊಂಡು ಬೀದಿ ನಾಟಕ ಪ್ರದರ್ಶನ ನೀಡುವ ಮೂಲಕ ಬೆಲೆ ಏರಿಕೆ ಖಂಡಿಸಿದರು.

ಎಎಪಿ ಜಿಲ್ಲಾಧ್ಯಕ್ಷೆ ಮಾಲವಿಕ ಗುಬ್ಬಿವಾಣಿ ಮಾತನಾಡಿ, ಸರ್ಕಾರದ ಆರ್ಥಿಕ ನೀತಿಗಳು ದೊಡ್ಡ ದೊಡ್ಡ ಉದ್ಯಮಿಗಳ ಪರವಾಗಿದ್ದು, ಜನಸಾಮಾನ್ಯರಿಗೆ ಮಾರಕವಾಗಿದೆ. ಮಧ್ಯಮ ಮತ್ತು ಬಡವರು ಬಡತನದ ರೇಖೆಗಿಂತ ಕೆಳಗೆ ಜಾರುತ್ತಿದ್ದರೆ, ಉದ್ಯಮಿಗಳ ಐಶ್ವರ್ಯ ದಿನದಿನಕ್ಕೆ ಹೆಚ್ಚಾಗುತ್ತಲೇ ಇದೆ ಎಂದು ಕಿಡಿಕಾರಿದರು.

ಎಎಪಿ ಯುವ ಘಟಕದ ಅಧ್ಯಕ್ಷ ಮೊಹಮ್ಮದ್ ಇಸ್ರೈಲ್ ಮಾತನಾಡಿ, ಸಾಮಾನ್ಯ ಕುಟುಂಬಗಳ ಆದಾಯ ತಿಂಗಳಿಗೆ 8–10 ಸಾವಿರ ಇರಲಿದ್ದು, ಇದರಲ್ಲಿ ದುಬಾರಿ ಅಗತ್ಯ ವಸ್ತುಗಳನ್ನು ಕೊಂಡುಕೊಂಡು ಜೀವನ ನಡೆಸಲು ಸಾಧ್ಯವಾಗುವುದಿಲ್ಲ. ಬೆಲೆ ಹೆಚ್ಚಳಕ್ಕೆ ನೇರ ಹೊಣೆಯಾಗಿರುವ ಸರ್ಕಾರವೇ ಬಡವರ ಬೆನ್ನಿಗೆ ಬರೆ ಎಳೆಯುತ್ತಿದೆ ಎಂದರು.

ಪಕ್ಷದ ನಗರ ಸಂಘಟನಾ ಕಾರ್ಯದರ್ಶಿ ಗಿರೀಶ್ ಮಾಚಳ್ಳಿ, ಇರ್ಫಾನ್ ಬೇಗ್, ಮಸೂದ್, ಉಷಾ ಸಂಪತ್ ಕುಮಾರ್, ಕಿರಣ್ ಕಲ್ಯಾಣಿ, ಸೈಯದ್ ಫರೀದ್, ವರಲಕ್ಷ್ಮಿ, ಅಕ್ರಮ್ ಶರೀಫ್, ಧರ್ಮಶ್ರೀ, ರೇಣುಕಾಪ್ರಸಾದ್, ಜಿ.ಆರ್.ವಿದ್ಯಾರಣ್ಯ ಮತ್ತಿತರರು ಉಪಸ್ಥಿತರಿದ್ದರು.

ಆಸ್ತಿ ತೆರಿಗೆ ಪಾವತಿಗೆ ಪಾಲಿಕೆ ಕಚೇರಿಯಲ್ಲಿ ಅಧಿಕೃತ ಸಾಲು; ಅಧಿಕಾರಿಗಳ ಸಾಲು!

ವಯೋವೃದ್ಧರ ಹಿಡಿಶಾಪ



ಮೈಸೂರು, ಏ. 18– ನಗರಪಾಲಿಕೆಯಲ್ಲಿ ಸ್ವಯಂ ಆಸ್ತಿ ತೆರಿಗೆ ಪಾವತಿಸುವವರಲ್ಲಿ ಪಾಲಿಕೆ ಸಿಬ್ಬಂದಿಯ ತಾರತಮ್ಯದಿಂದಾಗಿ ಕೆಲವರು ಕಾದು ಕಾದು ಬಳಲಿ ಬೆಂಡಾಗುವಂತಾಗಿದೆ. ಹೆಬ್ಬಾಳು ಬಸವನಗುಡಿ ಬಳಿ ಇರುವ ಪಾಲಿಕೆ ವಲಯ ಕಚೇರಿಯಲ್ಲಿ ಪ್ರತಿನಿತ್ಯ ಆಸ್ತಿ ತೆರಿಗೆ ಪಾವತಿಸಲು ಸ್ವಯಂ ಜನ ಮುಂದಾಗುತ್ತಿದ್ದಾರೆ. ಆದರೆ, ಅಲ್ಲಿನ ಸಿಬ್ಬಂದಿ ಉಮೇಶ ಎಂಬುವವರು, ತಮಗೆ ಬೇಕಾದವರನ್ನು ತ್ವರಿತವಾಗಿ ತೆರಿಗೆ ಪಾವತಿಸಲು ಅನುಕೂಲವಾಗುವಂತೆ ಎರಡು ಕ್ಯೂ ಮಾಡುತ್ತಿದ್ದಾರೆ ಎಂದು ತೆರಿಗೆದಾರರೊಬ್ಬರು ದೂರಿದ್ದಾರೆ.

ಒಂದು ಕ್ಯೂನಲ್ಲಿ ನಿಂತವರು ನಿಂತಲ್ಲೇ ಇದ್ದರೆ ಮತ್ತೊಂದು ಕ್ಯೂನಲ್ಲಿದ್ದವರು ತ್ವರಿತವಾಗಿ ತೆರಿಗೆ ಪಾವತಿಸಿ ಮರಳುತ್ತಾರೆ. ಇದ್ಯಾವ ಹಣೇಬರ ಸ್ವಾಮಿ, ಮೊದಲೇ ವಯಸ್ಸಾದವರು ನಾವು. ಹೆಚ್ಚು ಹೊತ್ತು ನಿಲ್ಲಲು ತ್ರಾಣವಿಲ್ಲ. ನಾವೇನು ಮಾಡಬೇಕು ಹೇಳಿ? ಎಂದು ತೆರಿಗೆದಾರರೊಬ್ಬರು ‘ಮೈಸೂರು ಮಿತ್ರ’ನ ಪ್ರಶ್ನಿಸಿದ್ದಾರೆ.

ಅಧಿಕಾರಿಗಳಿಗೆ ವಯಸ್ಸಾದವರು, ಮಹಿಳೆಯರ ಬಗ್ಗೆ ಅಂತಃಕರಣ ಇರಬೇಕಾದ್ದು ಅವಶ್ಯ. ಆದರೆ ಯಾವುದೋ ಆಮಿಷ, ಇಲ್ಲವೇ ದಾಕ್ಷಿಣ್ಯಕ್ಕೆ ಒಳಪಟ್ಟು ತಾರತಮ್ಯ, ಪಕ್ಷಪಾತದಿಂದ ವರ್ತಿಸಿದರೆ, ಅದರಿಂದ ನೊಂದವರು ಹಾಕುವ ಹಿಡಿಶಾಪ ತಟ್ಟದೇ ಇರದು. ದುರದೃಷ್ಟಕರ ಸಂಗತಿ ಎಂದರೆ ಉನ್ನತ ಅಧಿಕಾರಿಗಳಲ್ಲೂ ಕನಿಷ್ಠ ಮಾತ್ರವೂ ಮಾನವೀಯತೆ ಎಂಬುದೇ ಇಲ್ಲ ಎಂದು ನೊಂದು ನುಡಿದಿದ್ದಾರೆ.

ಏಕಾಏಕಿ ಕೊರಳಿಗೆ ಹಾರ ಹಾಕಿದ್ದಕ್ಕೆ ಸಿಟ್ಟು; ವರನಿಗೆ ಕಪಾಳಮೋಕ್ಷ ಮಾಡಿದ ವಧು!

ಹಮೀರ್‌ಪುರ(ಉತ್ತರ ಪ್ರದೇಶ): ಮದುವೆ ಸಮಾರಂಭದ ವೇಳೆ ಏಕಾಏಕಿ ಕೊರಳಿಗೆ ಹಾರ ಹಾಕಿದ್ದಕ್ಕಾಗಿ ಕೋಪಗೊಂಡ ವಧು, ವರನಿಗೆ ಕಪಾಳಮೋಕ್ಷ ಮಾಡಿದ್ದಾಳೆ.

ಉತ್ತರ ಪ್ರದೇಶದ ಹಮೀರ್‌ಪುರದಲ್ಲಿ ನಡೆದ ಈ ಘಟನೆಯ ವಿಡಿಯೋ ವೈರಲ್ ಆಗಿದೆ. ಸ್ವಾಸಾ ಬಡ್ಸ್ ಗ್ರಾಮದಲ್ಲಿ ಮದುವೆ ಸಮಾರಂಭ ಏರ್ಪಟ್ಟಿತ್ತು. ಜೈಮಾಲಾ ಹಾಗೂ ರವಿಕಾಂತ್ ಸಪ್ತಪದಿ ತುಳಿಯಬೇಕಾಗಿತ್ತು. ವೇದಿಕೆ ಮೇಲೆ ವಧು–ವರರು ನಿಂತಿದ್ದರು. ವರ ತಾನು ಕೈಯ್ಯಲ್ಲಿ ಹಿಡಿದುಕೊಂಡಿದ್ದ ಹೂವಿನ ಹಾರವನ್ನು ದಿಢೀರ್ ವಧುವಿನ ಕೊರಳಿಗೆ ಹಾಕೇ ಬಿಟ್ಟ. ಈ ವೇಳೆ ತಾನಿನ್ನೂ ಸಂಪೂರ್ಣವಾಗಿ ಸಿದ್ಧಗೊಂಡಿಲ್ಲ ಎಂದು ಕುಪಿತಗೊಂಡ ವಧು, ಎರಡು ಸಲ ಕಪಾಳಮೋಕ್ಷ ಮಾಡಿದ್ದಾಳೆ. ಬಳಿಕ ವೇದಿಕೆಯಿಂದ ಇಳಿದು ಹೊರಟೇ ಹೋದಳು.

ಘಟನೆಯ ಬೆನ್ನಲ್ಲೇ ಸ್ಥಳದಲ್ಲಿ ಕೆಲ ಹೊತ್ತು ಆತಂಕದ ವಾತಾವರಣ ನಿರ್ಮಾಣಗೊಂಡಿತ್ತು. ಈ ವೇಳೆ ಇಬ್ಬರ ಮನವೊಲಿಕೆ ಮಾಡಲಾಗಿದ್ದು, ಸುಮಾರು ಗಂಟೆಗಳ ಬಳಿಕ ಮದುವೆ ಶಾಸ್ತ್ರ ನಡೆಸಿದ್ದಾರೆ. ಯಾವುದೇ ರೀತಿಯ ಪೊಲೀಸ್ ಪ್ರಕರಣ ದಾಖಲಾಗಿಲ್ಲ.

ಗೋವಾ ಗಡಿ ದಾಟಲು ಕರ್ನಾಟಕ ಪ್ರವಾಸಿಗರಿಗೆ 10 ಸಾವಿರ ರೂ. ದಂಡ

ಪಣಜಿ, ಏ. 18– ಗೋವಾಗೆ ಟ್ಯಾಕ್ಸಿಯಲ್ಲಿ ಹೋಗುತ್ತಿದ್ದ ಕರ್ನಾಟಕದ ಪ್ರವಾಸಿಗರು ಗಡಿ ದಾಟುವುದಕ್ಕೆ ವಿಶೇಷ ಪರವಾನಗಿ ಪಡೆಯಲು ಪ್ರತಿ ವಾಹನಕ್ಕೆ 10,262 ರೂ. ದಂಡ ಪಾವತಿಸಬೇಕಾಗಿದೆ.

ಗೋವಾ ಸರ್ಕಾರದ ಈ ನಡೆ ಕರ್ನಾಟಕದ ಪ್ರವಾಸಿಗರು ಗೋವಾಗೆ ತೆರಳದೆ ರಾಜ್ಯಕ್ಕೆ ವಾಪಸಾಗುತ್ತಿದ್ದಾರೆ. ಗೋವಾದ ಮೊಲ್ಲೆಮ್ ಚೆಕ್‌ಪೋಸ್ಟ್‌ನಲ್ಲಿ ಗುರುವಾರದಿಂದ ಶನಿವಾರ ರಾತ್ರಿಯವರೆಗೆ 40 ಟ್ಯಾಕ್ಸಿಗಳನ್ನು ತಡೆಹಿಡಿಯಲಾಗಿದೆ ಎಂದು ಕರ್ನಾಟಕ ಪ್ರವಾಸೋದ್ಯಮ ವೇದಿಕೆಯ ಉಪಾಧ್ಯಕ್ಷ ಎಂ. ರವಿ ತಿಳಿಸಿದ್ದಾರೆ.

ಸಂಗೀತ ವಿವಿ ತಾತ್ಕಾಲಿಕ ನೌಕರರ ಧರಣಿ ಮುಂದುವರಿಕೆ

ಜನಪ್ರತಿನಿಧಿಗಳ ನಿರ್ಲಕ್ಷ್ಯಕ್ಕೆ ಬೇಸರ



ಮೈಸೂರು, ಏ.18(ಎಂಕೆ)– ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ತಾತ್ಕಾಲಿಕ ನೌಕರರ ಪ್ರತಿಭಟನೆ ಮುಂದುವರೆದಿದ್ದು, ಸೋಮವಾರ ಕುಟುಂಬ ಸಮೇತ ಸರಣಿ ಉಪವಾಸ ಸತ್ಯಾಗ್ರಹ ನಡೆಸಿದರು.

ಪ್ರತಿಭಟನೆಗೆ ಬೆಂಬಲ ನೀಡಿದ ಸಾಹಿತಿ ಪ್ರೊ.ಕೆ.ಎಸ್.ಭಗವಾನ್ ಮಾತನಾಡಿ, ಕಳೆದ 56 ದಿನಗಳಿಂದ ಸಂಗೀತ ವಿವಿಯ ನೌಕರರು ಪ್ರತಿಭಟನೆ ಮಾಡುತ್ತಿದ್ದಾರೆ. ಆದರೆ ಇಲ್ಲಿಯವರೆಗೆ ಕ್ಷೇತ್ರದ ಶಾಸಕರು, ಸಂಸದರು ಬಂದು ಏನೆಂದು ವಿಚಾರಿಸಿಲ್ಲ. ನಮ್ಮ ಪ್ರಜಾ ಪ್ರತಿನಿಧಿಗಳು ಪ್ರಜೆಗಳ ವಿರುದ್ಧವಾಗಿದ್ದಾರೆ ಎಂಬುದಕ್ಕೆ ಇದೊಂದು ಪ್ರತ್ಯಕ್ಷ ಸಾಕ್ಷಿಯಾಗಿದೆ. ಸಂಗೀತ ವಿವಿಯಲ್ಲಿ ಕೆಲಸ ಮಾಡುತ್ತಿದ್ದ 19 ಕುಟುಂಬಗಳು ಬೀದಿಗೆ ಬಿದ್ದಿವೆ. 12 ತಿಂಗಳ ಸಂಬಳವಿಲ್ಲ. ಜೊತೆಗೆ ವಿವಿಯಿಂದ ಹೊರ ಹಾಕಿದ್ದಾರೆ. ಅವರು ಹೇಗೆ ಜೀವನ ಕಟ್ಟಿಕೊಳ್ಳಬೇಕು ಎಂದು ಬೇಸರ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ತಾತ್ಕಾಲಿಕ ನೌಕರರೊಬ್ಬರ ಪತ್ನಿ ಅಪರ್ಣ ಮಾತನಾಡಿ, ಇರುವ ಇಬ್ಬರು ಮಕ್ಕಳನ್ನು ಶಾಲೆಗೆ ಸೇರಿಸಲು ನಮ್ಮ ಬಳಿ ಹಣವಿಲ್ಲ. ಮಕ್ಕಳು ಅನಾರೋಗ್ಯಕ್ಕೀಡಾಗಿದ್ದು, ಚಿಕಿತ್ಸೆ ಕೊಡಿಸಲು ಸಾಧ್ಯವಾಗುತ್ತಿಲ್ಲ. ಇದೇ ರೀತಿಯಾದರೆ ಆತ್ಮಹತ್ಯೆಯೊಂದೆ ನಮಗೆ ಉಳಿದಿರುವ ದಾರಿ ಎಂದು ಅಳಲು ತೋಡಿಕೊಂಡರು.

ಬೆಂಗಳೂರು: ಕಸದ ಲಾರಿಗೆ ಬ್ಯಾಂಕ್ ಉದ್ಯೋಗಿ ಬಲಿ

ಬೆಂಗಳೂರು: ಕಸದ ಲಾರಿ ಹರಿದು ಮಹಿಳೆಯೋರ್ವರು ಸಾವಿಗೀಡಾಗಿರುವ ಘಟನೆ ಬ್ಯಾಟರಾಯನಪುರ ಸಂಚಾರ ಠಾಣಾ ವ್ಯಾಪ್ತಿಯ ನಾಯಂಡಹಳ್ಳಿ ಬಳಿ ನಡೆದಿದೆ.

39 ವರ್ಷದ ಪದ್ಮಿನಿ ಮೃತ ದುರ್ದೈವಿ. ಎಸ್‌ಬಿಐ ಬ್ಯಾಂಕ್ ಉದ್ಯೋಗಿಯಾಗಿದ್ದ ಇವರು, ಸೇಂಟ್ ಮಾರ್ಕ್ಸ್ ರಸ್ತೆಯಿಂದ ಆರ್.ಆರ್ ನಗರಕ್ಕೆ ತಮ್ಮ ದ್ವಿಚಕ್ರ ವಾಹನದಲ್ಲಿ ತೆರಳುತ್ತಿದ್ದರು. ಈ ವೇಳೆ ಕಸದ ಲಾರಿ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಕಳೆದ ಒಂದು ತಿಂಗಳ ಅವಧಿಯಲ್ಲಿ ಕಸದ ಲಾರಿಗೆ ಇದು ಮೂರನೇ ಬಲಿಯಾಗಿದೆ. ಹೆಬ್ಬಾಳ ಹಾಗೂ ಯಲಹಂಕ ಠಾಣಾ ವ್ಯಾಪ್ತಿಯಲ್ಲಿ ಕಸದ ಲಾರಿ ಹರಿದು ಓರ್ವ ಶಾಲಾ ಬಾಲಕಿ ಹಾಗೂ ವ್ಯಕ್ತಿಯೊಬ್ಬರು ಇದೇ ತಿಂಗಳಲ್ಲಿ ಸಾವಿಗೀಡಾಗಿದ್ದರು. ಲಾರಿ ಚಾಲಕನ ನಿರ್ಲಕ್ಷ್ಯದಿಂದ ಮಹಿಳೆ ಮೃತಪಟ್ಟಿದ್ದು, ಅಪಘಾತವಾಗುತ್ತಿದ್ದಂತೆ ಲಾರಿ ಚಾಲಕ ಎಸ್ಕೇಪ್ ಆಗಿದ್ದಾನೆ. ಬ್ಯಾಟರಾಯನಪುರ ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಒಂದನೇ ಪುಟದಿಂದ

ನಗರಪಾಲಿಕೆ ಬಜೆಟ್ ಮಂಡನೆ

ಕಾರ್ಯಕ್ರಮಗಳಿಗೆ ಸಮಿತಿ ಸದಸ್ಯರನ್ನು ಏಕೆ ಆಹ್ವಾನಿಸುತ್ತಿಲ್ಲ ಎಂದು ಪ್ರಶ್ನಿಸಿ ತಾವು ಪತ್ರದ ಮೂಲಕ ಕೇಳಿದರೂ ಉತ್ತರಿಸಿಲ್ಲ, ಮೊದಲು ಉತ್ತರ ನೀಡಿ ನಂತರ ಸಭೆ ನಡೆಸಿ ಎಂದು ಪಟ್ಟು ಹಿಡಿದರು.

ಅದಕ್ಕೆ ದನಿಗೂಡಿಸಿದ ಪ್ರೇಮಾ ಶಂಕರೇಗೌಡ, ಪುಷ್ಪಾ, ಜಗನ್ನಾಥ್ ಹಾಗೂ ಅಯೂಬ್‌ಖಾನ್, ಅಭಿವೃದ್ಧಿ ಕಾರ್ಯಕ್ರಮಗಳಿಗೆ ಕೇವಲ ಮೇಯರ್, ಉಪಮೇಯರ್ ಮತ್ತು ಕೆಲ ಬಿಜೆಪಿ ಕಾರ್ಪೊರೇಟರ್ ಗಳನ್ನು ಮಾತ್ರ ಕರೆದು ಉಳಿದ ಸದಸ್ಯರಿಗೆ ಅಗೌರವ ತೋರಿಸುತ್ತಿ ರುವ ವರ್ತನೆ ಸರಿಯಲ್ಲ ಎಂದು ತರಾಟೆಗೆ ತೆಗೆದುಕೊಂಡರು. ಸಭೆ ಸಮಾರಂಭಗಳಿಗೆ ಕಾರ್ಪೊರೇಟರ್‌ಗಳನ್ನು ಆಹ್ವಾನಿಸಿ ಮಾಹಿತಿ ನೀಡಿ ಶಿಷ್ಟಾಚಾರ ಪಾಲಿಸಬೇಕೆಂದು ಒತ್ತಾಯಿಸಿದಾಗ ಅದಕ್ಕೆ ಪ್ರೋಟೋಕಾಲ್ ನಿರ್ವಹಣೆ ಮಾಡಲು ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ ಅಧಿಕೃತ ಆದೇಶವನ್ನೇ ಹೊರಡಿಸುತ್ತೇವೆ ಎಂದು ಪಾಲಿಕೆ ಆಯುಕ್ತ ಲಕ್ಷ್ಮೀಕಾಂತರೆಡ್ಡಿ ತಿಳಿಸಿದರು.

ಬಜೆಟ್ ಮಂಡಿಸದಿರುವುದರಿಂದ ಯಾವುದೇ ಚೆಕ್‌ಗಳಿಗೆ ಸಹಿ ಮಾಡದ ಕಾರಣ ಅಭಿವೃದ್ಧಿ ಕೆಲಸಗಳು ನಡೆಯುತ್ತಿಲ್ಲ. ಅಧಿಕಾರಿ ಗಳಿಂದ ಈ ಗೊಂದಲ ಉಂಟಾಗಿದೆ. ಏ.28ರೊಳಗೆ ಬಜೆಟ್ ಮಂಡಿಸಿ ಎಂದು ಮಾಜಿ ಮೇಯರ್ ಆರಿಫ್ ಹುಸೇನ್ ಸಲಹೆ ನೀಡಿದರು. ರಸ್ತೆ, ಚರಂಡಿಯಂತಹ ಕಾಮಗಾರಿಗಳಿಗೆ ಟೆಂಡರ್ ಆದರೂ ಕಾರ್ಯಾದೇಶ(**Work Order**)ನೀಡಲು ಇಂಜಿನಿಯರ್ ಗಳು ಹಣಕ್ಕೆ ಬೇಡಿಕೆ ಇಟ್ಟು ವಿಳಂಬ ಮಾಡುತ್ತಿದ್ದಾರೆ. ಅದರ ಜವಾಬ್ದಾರಿಯನ್ನು ಸೂಪರಿಂಟೆಂಡಿಂಗ್ ಇಂಜಿನಿಯರ್‌ಗೆ ಕೊಡಿ ಎಂದು ಮಾಜಿ ಮೇಯರ್ ಅಯೂಬ್‌ಖಾನ್ ಒತ್ತಾಯಿಸಿದರು.

ರೋಡ್ ಕಟಿಂಗ್, ಪ್ಯಾಚ್ ವರ್ಕ್‌ಗೆ ಸಂಬಂಧಪಟ್ಟವರಿಂದ ಹಣ ಕಟ್ಟಿಸಿ ಎಂದು ಅಶ್ವಿನಿ ಅನಂತು ಹೇಳಿದರೆ, ಕೇವಲ ಪ್ರಸಿದ್ಧಿಗಾಗಿ ಅತೀ ದೊಡ್ಡ ಬಜೆಟ್ ಮಂಡಿಸುವ ಬದಲು ಆದಾಯಕ್ಕೆ ತಕ್ಕ ವಾಸ್ತವ ಬಜೆಟ್ ನೀಡಿ ಎಂದು ಬಿ.ವಿ.ಮಂಜುನಾಥ ಸಲಹೆ ನೀಡಿದರು.

ಬಡವರಿಗೆ ಆರೋಗ್ಯ ಭದ್ರತೆ: ಬಡವರ ಆರೋಗ್ಯ ರಕ್ಷಿಸಲು ಹಣ ಮೀಸಲಿಡಿ, ಪಾರ್ಕ್‌ಗಳ ಅಭಿವೃದ್ಧಿ ಮತ್ತು ನಿರ್ವಹಣೆಗೆ ಹೆಚ್ಚು ಅನು ದಾನ ಮೀಸಲಿಡಿ ಎಂದು ಮ.ವಿ.ರಾಮಪ್ರಸಾದ್ ತಿಳಿಸಿದರೆ, ಉದ್ಯಾನ ಮತ್ತು ರಸ್ತೆಗೆ ಆದ್ಯತೆ ಮೇಲೆ ಹಣವಿಡಿ ಎಂದು ಪ್ರೇಮಾ ಶಂಕರೇಗೌಡ ಸಲಹೆ ನೀಡಿದರು. ವಾಣಿಜ್ಯ ಕಟ್ಟಡಗಳಿಗೆ ನಕ್ಷೆ ಅನುಮೋದನೆ ನೀಡುವಾಗ ಸಂಗ್ರಹಿಸುವ ಪ್ರೊರೇಟಾ ಹಣವನ್ನು ಯುಜಿಡಿ, ಪಾರ್ಕ್, ಸ್ಮಶಾನಕ್ಕೆ ಬಳಸಿ, ಪ್ರತ್ಯೇಕ ಬ್ಯಾಂಕ್ ಖಾತೆ ನಿರ್ವಹಿಸಿ ಎಂದು ರಮೇಶ್ ತಿಳಿಸಿದರು. ಯೋಗ ಲಕ್ಷ್ಮಿ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿ ಮುಂದುವರಿಸುವಂತೆ ಪುಷ್ಪಲತಾ ಜಗನ್ನಾಥ್ ಒತ್ತಾಯಿಸಿದರು.

ಪಾರ್ಕ್‌ಗಳಿಗೆ ಅನುದಾನ: ಪಾರ್ಕುಗಳನ್ನು ಸ್ವಚ್ಛಗೊಳಿಸಲು ಜನರೇ ಇಲ್ಲ, ನಿರ್ವಹಣೆ ಕ್ಷೀಣಿಸಿದೆ ಎಂದು ಸದಸ್ಯರು ಆರೋಪಿಸಿದಾಗ ಮೈಸೂರಲ್ಲಿರುವ 539 ಉದ್ಯಾನ ನೋಡಿಕೊಳ್ಳಲು ತೋಟಗಾರಿಕೆ ಇಬ್ಬರು ಇನ್ಸ್‌ಪೆಕ್ಟರ್‌ಗಳು ಮಾತ್ರ ಇದ್ದು, ಪಾಲಿಕೆಯಿಂದ 89 ಸಿಬ್ಬಂದಿ ಕೊಟ್ಟಿದ್ದೇವೆ. ಕೆಲವರು ನಿವೃತ್ತರಾಗುತ್ತಿರುವುದರಿಂದ ಟೆಂಡರ್ ಮೂಲಕ ಹೊರಗುತ್ತಿಗೆ ಆಧಾರದಲ್ಲಿ ಸಿಬ್ಬಂದಿ ತೆಗೆದು ಕೊಳ್ಳುತ್ತೇವೆ ಎಂದು ಪಾಲಿಕೆ ಆಯುಕ್ತರು ಹೇಳಿದರು. ಪಾರ್ಕುಗಳ ಜಿಮ್, ಫೌಂಟೆನ್ ನಿರ್ವಹಣೆ, ಒಂಟಿಕೊಪ್ಪಲಿ ನಲ್ಲಿರುವ ಮೇಯರ್ ನಿವಾಸ ಕೆಡವಿ ಹೊಸ ಕಟ್ಟಡ ನಿರ್ಮಾಣ, ಬಿಬಿಎಂಪಿ ಮಾದರಿ ಯುಜಿಡಿ ಮ್ಯಾನ್‌ಹೋಲ್ ಅಳವಡಿಸುವುದು ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಬಜೆಟ್‌ನಲ್ಲಿ ಅನುದಾನ ಮೀಸಲಿರಿಸುವಂತೆ ಪಾಲಿಕೆ ಸದಸ್ಯರು ಸಲಹೆ ನೀಡಿದರು.

ಮಾಜಿ ಮೇಯರ್‌ಗಳ ವಾಗ್ದಾಳಿ

ಪಾರಂಪರಿಕ ಕಟ್ಟಡ ನಿರ್ಮಾಣಕ್ಕೆ ಅಗತ್ಯವಿರುವ ಅನುದಾನವನ್ನು ಬಜೆಟ್‌ನಲ್ಲಿರಿಸಿಕೊಳ್ಳಿ, ಕಟ್ಟಡ ಕಾಮಗಾರಿ ಆರಂಭವಾದ ನಂತರ ಹಣದ ಕೊರತೆಯಿಂದ ವಿಳಂಬವಾಗಬಾರದು ಎಂದು ಅಯೂಬ್ ಖಾನ್ ಸಲಹೆ ನೀಡಿದರು. ಈಗಾಗಲೇ ಈ ಎರಡೂ ಕಟ್ಟಡಗಳಿಗೆ ಸರ್ಕಾರ ಅನುದಾನ ನೀಡುವ ಬಗ್ಗೆ ಸೂಚನೆ ನೀಡಿದೆಯಾದ್ದರಿಂದ ಪಾಲಿಕೆಯ ಬಜೆಟ್ ನಲ್ಲಿ ಅನುದಾನ ಮೀಸಲಿಡುವ ಅಗತ್ಯವಿಲ್ಲ ಎಂದು ಆಯುಕ್ತರು ಸ್ಪಷ್ಟಪಡಿಸಿದರು.

ಬೀದಿ ನಾಯಿಗಳ ಹಾವಳಿ: ಮೈಸೂರಲ್ಲಿ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ದಾಳಿಗೊಳಗಾದ ಮಕ್ಕಳ ಚಿಕಿತ್ಸಾ ವೆಚ್ಚ ಭರಿಸಬೇಕು. ಈಗಾಗಲೇ ನಾಯಿಗಳನ್ನು ಹಿಡಿದು ಸಂತಾನಶಕ್ತಿ ಹರಣ ಶಸ್ತ್ರಚಿಕಿತ್ಸೆ ಮಾಡಲು ಪಾಲಿಕೆಯಿಂದ ಕೋಟ್ಯಾಂತರ ರೂ. ಹಣ ಖರ್ಚು ಮಾಡಿದರೂ ನಾಯಿಗಳ ಸಂಖ್ಯೆ ಕಡಿಮೆಯಾಗದಿರುವ ಬಗ್ಗೆ ಸದಸ್ಯರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಅಧಿಕಾರಿಗಳಿಗೆ ತರಾಟೆ: ಪೈಪುಗಳು ಒಡೆದು ನೀರು ಸರಬರಾಜಿನಲ್ಲಿ ವ್ಯತ್ಯಯವುಂಟಾಗಿ ಜನರಿಗೆ ತೀವ್ರ ತೊಂದರೆಯಾದರೂ ರಿಪೇರಿ ಮಾಡಿ ಸಮಸ್ಯೆ ಬಗೆಹರಿಸದ ವಾಣಿವಿಲಾಸ ವಾಟರ್ ವರ್ಕ್ಸ್ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಅಯೂಬ್ ಖಾನ್, ಕೇವಲ ಎಸಿ ಕಾರು, ಕಚೇರಿಯಲ್ಲಿ ಕುಳಿತು ಮಜಾ ಮಾಡುತ್ತಿದ್ದೀರಿ, ಜನರು ನಮಗೆ ಹಾದಿ ಬೀದಿಯಲ್ಲಿ ಬಯ್ಯುತ್ತಿದ್ದಾರೆ ಎಂದು ಕೆಂಡ ಕಾರಿದರು.

ಪಿಎಸ್‌ಐ ನೇಮಕಾತಿ ಅಕ್ರಮ: ಪರೀಕ್ಷೆ ನಡೆದ ಶಿಕ್ಷಣ ಸಂಸ್ಥೆ ಮೇಲೆ ಸಿಐಡಿ ದಾಳಿ

ಗುಲ್ಬರ್ಗಾ, ಏ. 18– ಪಿಎಸ್‌ಐ ನೇಮಕಾತಿ ಅಕ್ರಮ ವಿಚಾರ ರಾಜ್ಯಾದ್ಯಂತ ವ್ಯಾಪಕ ಸುದ್ದಿಗೆ ಗ್ರಾಸವಾಗಿರುವಂತೆಯೇ ಪರೀಕ್ಷೆ ನಡೆದ ಜ್ಞಾನ ಗಂಗಾ ಶಿಕ್ಷಣ ಸಂಸ್ಥೆಯ ಮೇಲೆ ಸೋಮವಾರ ಸಿಐಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಸಿಐಡಿ ಡಿವೈಎಸ್ಪಿಗಳಾದ ಶಂಕರಗೌಡ ಪಾಟೀಲ್ ಮತ್ತು ಪ್ರಕಾಶ್ ರಾಥೋಡ್ ನೇತೃತ್ವದ ಸಿಐಡಿ ಅಧಿಕಾರಿಗಳ ತಂಡ ಸೋಮವಾರ ಜ್ಞಾನ ಗಂಗಾ ಶಿಕ್ಷಣ ಸಂಸ್ಥೆಯ ಮೇಲೆ ದಾಳಿ ನಡೆಸಿ, ಸಂಸ್ಥೆಗೆ ಸೇರಿದ ಸಿಸಿಟಿವಿ ಕ್ಯಾಮರಾಗಳು ಮತ್ತು ಕಂಪ್ಯೂಟರ್ ಗಳನ್ನು ವಶಪಡಿಸಿಕೊಂಡಿದ್ದಾರೆ. ಈ ಸಂಸ್ಥೆಯಲ್ಲಿ ಅ.3 ರಂದು ಪಿಎಸ್‌ಐ ಸಿಇಟಿಯಲ್ಲಿ ಪರೀಕ್ಷಾ ಅವ್ಯವಹಾರ ನಡೆದಿದ್ದು, ಕೆಲವು ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಪರೀಕ್ಷೆ ಬರೆಯಲು ಸಹಾಯ ಮಾಡಿದ್ದಾರೆ ಎಂದು ಸಿಐಡಿ ಮೂಲಗಳು ತಿಳಿಸಿವೆ. ಸಿಐಡಿ ಅಧಿಕಾರಿಗಳು ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದ ಮೂವರು ಮೇಲ್ವಿಚಾರಕರನ್ನು (ಸುಮಾ, ಸಿದ್ದಮ್ಮ ಮತ್ತು ಸಾವಿತ್ರಿ) ಸಂಸ್ಥೆಗೆ ಕರೆದೊಯ್ದು 2 ದಿನಗಳಿಂದ ನ್ಯಾಯಾಂಗ ಬಂಧನದಲ್ಲಿರಿಸಿದ್ದಾರೆ.

ಸಿಐಡಿ ತಂಡ ಸಂಗ್ರಹಿಸಿದ ಮಾಹಿತಿಯ ಪ್ರಕಾರ, ಸಂಸ್ಥೆಯ ಪ್ರಾಂಶುಪಾಲ ಕಾಶಿನಾಥ್ ಅವರು ದುಷ್ಕೃತ್ಯದ ದಿನದಂದು ಅರ್ಧ ಗಂಟೆ ಸಿಸಿಟಿವಿ ಕ್ಯಾಮೆರಾಗಳನ್ನು ಸ್ವಿಚ್ ಆಫ್ ಮಾಡಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಬಾಕಿ ಸಾಕ್ಷ್ಯಾಧಾರಗಳಿಗಾಗಿ ಸಿಸಿಟಿವಿ ದೃಶ್ಯಾವಳಿಗಳನ್ನು ಪೊಲೀಸರು ಇನ್ನೂ ವೀಕ್ಷಿಸಬೇಕಿದೆ ಎಂದು ತಿಳಿದುಬಂದಿದೆ.

ಜ್ಞಾನಗಂಗಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ರಾಜೇಶ ಹಗರಗಿ, ಕಾರ್ಯದರ್ಶಿ ಪತ್ನಿ ದಿವ್ಯಾ ಹಾಗರಗಿ ಅವರ ಮನೆಗೆ ಸಿಐಪಿ ಎಸ್‌ಪಿ ರಾಘವೇಂದ್ರ ಹೆಗಡೆ, ಡಿಎಸ್‌ಪಿಗಳಾದ ಶಂಕರಗೌಡ ಪಾಟೀಲ, ಪ್ರಕಾಶ ರಾಠೋಡ್ ನೇತೃತ್ವದ ತಂಡ ದಾಳಿ ಮಾಡಿದ್ದನ್ನು ಇಲ್ಲಿ ಸ್ಮರಿಸಬಹುದು. ದಿವ್ಯಾ ಹಾಗರಗಿ ಬಿಜೆಪಿ ಜಿಲ್ಲಾ ಘಟಕದ ಮಹಿಳಾ ಘಟಕದ ಮಾಜಿ ಅಧ್ಯಕ್ಷೆ. ಹಗರಣದ ಪುರಾವೆಗಾಗಿ ತಂಡವು ಅವರ ಮನೆಯಲ್ಲಿ ತೀವ್ರ ಶೋಧ ನಡೆಸಿದೆ.

ಬೆಂಗಳೂರಿಗೆ ದೆಹಲಿ ಸಿಎಂ ಕೇಜ್ರಿವಾಲ್: ಏ.21ರಂದು ರೈತರ ಬೃಹತ್ ಸಮಾವೇಶ



ಬೆಂಗಳೂರು, ಏ. 18– ಆಮ್ ಆದ್ಮಿ ಪಕ್ಷದ ಮುಖ್ಯಸ್ಥ, ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಏಪ್ರಿಲ್ 21ರಂದು ಬೆಂಗಳೂರಿಗೆ ಆಗಮಿಸಲಿದ್ದು, ರೈತ ಮುಖಂಡ ಕೋಡಿಹಳ್ಳಿ ಚಂದ್ರಶೇಖರ್ ನೇತೃತ್ವದಲ್ಲಿ ನಡೆಯಲಿರುವ ಬೃಹತ್ ರೈತ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಆಮ್ ಆದ್ಮಿ ಪಾರ್ಟಿ ರಾಜ್ಯಾಧ್ಯಕ್ಷ ಪೃಥ್ವಿ ರೆಡ್ಡಿ, ಬೆಂಗಳೂರಿನ ನ್ಯಾಷನಲ್ ಕಾಲೇಜು ಮೈದಾನದಲ್ಲಿ ಗುರುವಾರ ಬೆಳಗ್ಗೆ 11 ಗಂಟೆಗೆ ಸಮಾವೇಶ ಆರಂಭವಾಗಲಿದೆ. ದೆಹಲಿ ಮಾದರಿಯಿಂದ ಪ್ರೇರಣೆ ಹೊಂದಿರುವ ರಾಜ್ಯ ರೈತ ಸಂಘವು ಸಿಎಂ ಕೇಜ್ರಿವಾಲ್‌ರವರಿಗೆ ವಿಶೇಷ ಆಹ್ವಾನ ನೀಡಿದ್ದು, ಅವರು ಆಗಮಿಸಿ ರೈತರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ನಾಡಿನ ಸುಮಾರು 50 ಸಾವಿರ ರೈತರು ಸಮಾವೇಶದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಿದ್ದಾರೆ. ಕರ್ನಾಟಕದ ರಾಜಕೀಯ ಇತಿಹಾಸದಲ್ಲೇ ಇದೊಂದು ಐತಿಹಾಸಿಕ ದಿನವಾಗಲಿದೆ ಎಂದು ಹೇಳಿದರು.

ಮೈಸೂರು ಮಿತ್ರ ಮಂಗಳವಾರ 19 ಏಪ್ರಿಲ್ 2022

ಕೆರಗೋಡು ಬಳಿ 80 ಲಕ್ಷ ರೂ. ಮೌಲ್ಯದ ಚಿನ್ನಾಭರಣ ದರೋಡೆ ಪ್ರಕರಣ

ಮೈಸೂರಿನ ಆರು ಮಂದಿ ಬಂಧನ



ಮಂಡ್ಯ,ಏ.18(ಮೋಹನ್‌ರಾಜ್)– ತಾಲೂಕಿನ ಗಂಟಗೌಡನಹಳ್ಳಿ–ದ್ಯಾಪಸಂದ್ರ ಸಮೀಪ ನಡೆದಿದ್ದ ದರೋಡೆ ಪ್ರಕರಣವನ್ನು ಬೇಧಿಸುವಲ್ಲಿ ಜಿಲ್ಲಾ ಪೊಲೀಸರು ಯಶಸ್ವಿಯಾಗಿದ್ದು, ಆರು ಮಂದಿ ಆರೋಪಿಗಳನ್ನು ಬಂಧಿಸಿ, ಬರೋಬ್ಬರಿ 80 ಲಕ್ಷ ರೂ ಮೌಲ್ಯದ ಚಿನ್ನಾಭರಣ, ನಗದು ಮತ್ತು ವಾಹನವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್ ಹೇಳಿದರು.

ಸೋಮವಾರ ನಗರದ ಡಿಎಆರ್ ಮೈದಾನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಉದಯಗಿರಿ ಮೂಲದ ರಮೇಶ್, ವರುಣ್‌ಗೌಡ, ಪುನೀತ್, ಪ್ರಕಾಶ್, ರಾಜು ಮತ್ತು ಕೈಲಾಶ್‌ಕುಮಾರ್ ಬಂಧಿತರಾಗಿದ್ದು, ಇವರಿಂದ 3 ಕೆಜಿ ಚಿನ್ನಾಭರಣ ಹಾಗೂ 50 ಸಾವಿರ ರೂ ಹಣ, ಕೃತ್ಯಕ್ಕೆ ಬಳಸಿದ್ದ ಕಾರು ಮತ್ತು ಬೈಕ್ ಅನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ಮೈಸೂರಿನ ವ್ಯಾಪಾರಿ ಲಲಿತ್ ಎಂಬವರು ಜ್ಯುವೆಲರಿ ಅಂಗಡಿಗಳಿಗೆ ಚಿನ್ನಾಭರಣಗಳನ್ನು ಸರಬರಾಜು ಮಾಡುವ ವೃತ್ತಿ ಮಾಡುತ್ತಿದ್ದರು. ಏ.14ರಂದು ಲಲಿತ್ ಮತ್ತು ಮಾಧುರಾಂ ಅವರು ಕಾರಿನಲ್ಲಿ ಚಿನ್ನದ ಮೂಗುತಿ, ಉಂಗುರವನ್ನು ಜಕ್ಕನಹಳ್ಳಿ, ಚಿಣ್ಯ, ಬಸರಾಳು ಅಂಗಡಿಗಳಲ್ಲಿ ಮಾರಾಟ ಮಾಡಿದ್ದಾರೆ. ನಂತರ ಕೆರಗೋಡು ಗ್ರಾಮಕ್ಕೆ ಬರುವ ಮಾರ್ಗ ಮಧ್ಯೆ ಗಂಟಗೌಡನಹಳ್ಳಿ–ದ್ಯಾಪಸಂದ್ರ ಸಮೀಪ ಸಿನಿಮಾ ಶೈಲಿಯಲ್ಲಿ ಹಿಂದಿನಿಂದ ಬೈಕ್‌ನಲ್ಲಿ ಇಬ್ಬರು ಹಾಗೂ ಎದುರಿನಿಂದ ಕಾರಿನಲ್ಲಿ ನಾಲ್ವರು ಬಂದು ಅಡ್ಡ ಹಾಕಿ ಸುತ್ತಿಗೆಯಿಂದ ಕಾರಿನ ಗ್ಲಾಸ್‌ಗಳನ್ನು ಒಡೆದು ಮಾಧುರಾಂ ಮೇಲೆ ಹಲ್ಲೆ ನಡೆಸಿ ಚಿನ್ನಾಭರಣ ತುಂಬಿದ ಸೂಟ್‌ಕೇಸ್‌ಗಳನ್ನು ಕದ್ದೊಯ್ದಿದ್ದರು. ಈ ಸಂಬಂಧ ಕೆರಗೋಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು ಎಂದು ವಿವರಿಸಿದರು.

ಪ್ರಕರಣ ಹಿನ್ನೆಲೆಯಲ್ಲಿ ನಾಲ್ಕು ತಂಡವನ್ನು ರಚಿಸಿ ತನಿಖೆ ಆರಂಭಿಸಲಾಯಿತು. ಕೃತ್ಯ ನಡೆದ ಸ್ಥಳದಲ್ಲಿ ಸಿಕ್ಕ ಮಾಹಿತಿ, ಚಿನ್ನಾಭರಣ ಕಳೆದುಕೊಂಡವರಿಂದ ಪಡೆದುಕೊಂಡ ವಿವರ ಹಾಗೂ ತಾಂತ್ರಿಕ ತಂಡದ ತನಿಖೆಯಿಂದ ಆರೋಪಿಗಳನ್ನು ಬಂಧಿಸಿದಾಗ ಇದು ವೃತ್ತಿ ವೈಷಮ್ಯದಿಂದ ನಡೆದ ಕೃತ್ಯವಾಗಿದೆ ಎಂದು ತಿಳಿದು ಬಂತು. ಲಲಿತ್ ಅವರ ಅಂಗಡಿಯಲ್ಲಿ ಸುಮಾರು 14 ವರ್ಷ ಕೆಲಸ ಮಾಡಿ ನಂತರ ಕೆಲಸ ಬಿಟ್ಟಿದ್ದ ವ್ಯಕ್ತಿಯೇ ಪ್ರಮುಖ ಆರೋಪಿ ಯಾಗಿ ದ್ದಾನೆ. ಬಳಿಕ ಇವನಿಗೆ ಸಹಕರಿಸಿದ ಆಟೋ ಚಾಲಕರು, ಕೂಲಿ ಕಾರ್ಮಿಕ ಹಾಗೂ ಪ್ರಮುಖ ಆರೋಪಿ ಜತೆಗೆ ಕೆಲಸ ಮಾಡುತ್ತಿದ್ದ ಇನ್ನೊಬ್ಬ ಸೇರಿದಂತೆ ಆರು ಜನರನ್ನು ಮೈಸೂರಿನಲ್ಲಿ ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದರು.

ತನಿಖಾ ತಂಡಕ್ಕೆ ನಗದು ಬಹುಮಾನ: ತನಿಖಾ ತಂಡದಲ್ಲಿ ಸಿಪಿಐ ಕ್ಯಾತೇಗೌಡ, ಪಿಎಸ್‌ಐಗಳಾದ ರಮೇಶ್, ಮಾರುತಿ, ಎಎಸ್‌ಐ ಚಿಕ್ಕಯ್ಯ ನೇತೃತ್ವದಲ್ಲಿ ಸಿಬ್ಬಂದಿಗಳಾದ ರಾಜೇಗೌಡ, ಮಧುಕುಮಾರ್, ಇಂದ್ರಕುಮಾರ್ ಗಿರೀಶ್ ತನಿಖಾ ತಂಡ, ಡಿಸಿಆರ್‌ಬಿ ಪಿಐ ಎನ್.ವಿ.ಮಹೇಶ್, ಪಿಎಸ್‌ಐಗಳಾದ ಶೇಷಾದ್ರಿಕುಮಾರ್, ವೆಂಕಟೇಶ್, ಸಿಬ್ಬಂದಿಗಳಾದ ಕೆ.ಪಿ.ರವಿಕಿರಣ್, ಲೋಕೇಶ್, ಕೇಶವ ತಾಂತ್ರಿಕ ತಂಡ, ಪಿಐ ಆನಂದೇಗೌಡ, ಪಿಎಸ್‌ಐಗಳಾದ ರವಿಕುಮಾರ್, ರಮೇಶ್ ಕರಕಿಕಟ್ಟೆ ಸಿಬ್ಬಂದಿ ಜೀಸನ್, ಉಮರ್, ಪ್ರಸನ್ನ, ಲಿಂಗರಾಜು, ಮಹೇಶ, ಆನಂದ, ಮಂಜುನಾಥ ಸಿಸಿಟಿವಿ ತಂಡ ಹಾಗೂ ಸೆನ್ ಪೊಲೀಸ್ ಠಾಣೆ ಪಿಐ ರಾಘವೇಂದ್ರ, ಪಿಎಸ್‌ಐಗಳಾದ ಕಮಲಾಕ್ಷಿ, ಜಯಲಕ್ಷ್ಮಮ್ಮ, ಸಿಬ್ಬಂದಿಗಳಾದ ಮಂಜುನಾಥ, ಲೋಕೇಶ್, ಪ್ರಸನ್ನ, ಕೃಷ್ಣಕುಮಾರ್ ಮಾಹಿತಿ ತಂಡದಲ್ಲಿದ್ದು, ಕೇವಲ 48 ಗಂಟೆಯಲ್ಲಿಯೇ ಪ್ರಕರಣ ಬೇಧಿಸಿ ಆರೋಪಿಗಳನ್ನು ಬಂಧಿಸಿದ ತನಿಖಾ ತಂಡಕ್ಕೆ ಜಿಲ್ಲಾ ಎಸ್ಪಿ 25 ಸಾವಿರ ರೂ ನಗದು ಬಹುಮಾನ ಘೋಷಿಸಿದರು. ಅಪರ ಪೊಲೀಸ್ ವರಿಷ್ಠಾಧಿಕಾರಿ ಎಂ.ವಿ. ಗೋಪಾಲ್, ಡಿವೈಎಸ್ಪಿ ಟಿ.ಮಂಜುನಾಥ್, ಡಿಎಆರ್ ಡಿವೈಎಸ್ಪಿ ವಿರೂಪಾಕ್ಷೇಗೌಡ ಇತರರಿದ್ದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮೈಷುಗರ್ ಆರಂಭ



ಮಂಡ್ಯ,ಏ.18(ಮೋಹನ್‌ರಾಜ್)– 2023ರ ಸಾರ್ವತ್ರಿಕ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವುದನ್ನು ಯಾರಿಂದಲೂ ತಪ್ಪಿಸಲು ಸಾಧ್ಯವಿಲ್ಲ. ಅಧಿಕಾರಕ್ಕೆ ಬಂದ ಕೆಲವೇ ದಿನಗಳಲ್ಲಿ ಜಿಲ್ಲೆಯ ಜೀವನಾಡಿ ಮೈಷುಗರ್ ಕಾರ್ಖಾನೆಯನ್ನು ಆರಂಭಿಸಲು ಕಾಂಗ್ರೆಸ್ ಸಿದ್ಧವಾಗಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಕಾಂಗ್ರೆಸ್ ಪಕ್ಷದ ವತಿಯಿಂದ ಸೋಮವಾರ ನಗರದ ಸಿಲ್ವರ್ ಜ್ಯೂಬಿಲಿ ಪಾರ್ಕ್‌ನಲ್ಲಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಡೆದ ಪ್ರತಿಭಟನಾ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಸಿದ್ದರಾಮಯ್ಯ ಕೊಟ್ಟ ಮಾತಿಗೆ ತಪ್ಪುವವನಲ್ಲ. ನಮ್ಮನ್ನು ನಂಬಿ, ಈ ಜಿಲ್ಲೆಯ ಏಳೂ ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರನ್ನು ಕೊಡಿ. ಆಗ ಜಿಲ್ಲೆಯ ಅಭಿವೃದ್ಧಿ ಹೇಗೆ ಆಗುತ್ತದೆ ಎಂಬುದನ್ನು ನೀವೇ ನೋಡುವಿರಂತೆ. ನಾನು ಮುಖ್ಯಮಂತ್ರಿಯಾಗಿ ಕೊಟ್ಟ ಎಲ್ಲ ಯೋಜನೆಗಳೂ, ಸೌಲಭ್ಯಗಳು ಜಾತಿ, ಧರ್ಮಾತೀತವಾಗಿ ಜಾರಿಗೆ ತಂದ ಕಾರ್ಯಕ್ರಮಗಳನ್ನು ಅರಿತುಕೊಂಡು ಮುಂದಿನ ಚುನಾವಣೆಯಲ್ಲಿ ನಮ್ಮ ಕೈ ಹಿಡಿಯಬೇಕು. ಇಲ್ಲದಿದ್ದರೆ ಈ 40 ಪರ್ಸೆಂಟ್ ಜನರ ಕೈಗೆ ಸಿಕ್ಕಿ ನರಳಬೇಕಾಗುತ್ತದೆ ಎಂದು ಹೇಳಿದರು.

ರಾಜ್ಯದಲ್ಲಿ 15 ಲಕ್ಷಟನ್ ರಾಗಿ ಬೆಳೆದಿದ್ದಾರೆ. ಇದರಲ್ಲಿ ಸರ್ಕಾರ 2.5 ಲಕ್ಷ ಟನ್ ಖರೀದಿಗೆ ಭರವಸೆ ನೀಡಿತ್ತು. ಅದರಲ್ಲೂ ಕೇವಲ 1.90 ಲಕ್ಷ ಟನ್ ಮಾತ್ರ ಖರೀದಿ ಮಾಡಿದೆ. ಇಂತಹವರಿಂದ ರೈತಾಪಿ ವರ್ಗ ಯಾವ ನಿರೀಕ್ಷೆಯನ್ನು ಇಟ್ಟುಕೊಳ್ಳಲು ಸಾಧ್ಯ ಎಂದು ಪ್ರಶ್ನಿಸಿದ ಅವರು, ರೈತರ ಆದಾಯವನ್ನು ದುಪ್ಪಟ್ಟು ಮಾಡಲು ಸಿದ್ಧರಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಸಗೊಬ್ಬರದ ಬೆಲೆಯನ್ನು ಅವೈಜ್ಞಾನಿಕವಾಗಿ ಏರಿಕೆ ಮಾಡುವ ಮೂಲಕ ಮೋದಿ ಸರ್ಕಾರ ಅನಾಮತ್ತು 3600 ಕೋಟಿ ರೂ.ಗಳನ್ನು ರೈತರ ಕಿಸೆಯಿಂದ ಲೂಟಿ ಮಾಡುತ್ತಿದೆ. ಪೆಟ್ರೋಲ್ ಬೆಲೆ 111 ರೂ., ಡಿಸೇಲ್ ಬೆಲೆ 97 ರೂ.ಗೆ ಏರಿಸಿದ್ದೇ ಇವರ ಸಾಧನೆ. ನಾನು ಒಂದು ರಾಜ್ಯದ ಮುಖ್ಯಮಂತ್ರಿಯಾಗಿ 2.60 ಲಕ್ಷ ಕೃಷಿ ಹೊಂಡಗಳನ್ನು ತೋಡಿಸಿದ್ದೆ. ಈ ಬಿಜೆಪಿಯ ಯಡಿಯೂರಪ್ಪ ಮತ್ತು ಬೊಮ್ಮಾಯಿ ಸರ್ಕಾರದಲ್ಲಿ ಒಂದೇ ಒಂದು ಕೃಷಿ ಹೊಂಡ ತೋಡಿಸಲಾಗಲಿಲ್ಲ ಆದರೂ ನಮ್ಮದು ಅಭಿವೃದ್ಧಿಯ ಪರ ಸರ್ಕಾರ ಎಂದು ಕೊಚ್ಚಿಕೊಳ್ಳುತ್ತಾರೆ. ಒಟ್ಟಾರೆ ಬಿಜೆಪಿ ಸುಳ್ಳಿನ ಕಾರ್ಖಾನೆ ಎಂದು ಛೇಡಿಸಿದರು.

ಪ್ರತಿಭಟನಾ ಸಭೆಯಲ್ಲಿ ಮಾಜಿ ಸಚಿವರಾದ ಎನ್.ಚಲುವರಾಯಸ್ವಾಮಿ, ಪಿ.ಎಂ. ನರೇಂದ್ರಸ್ವಾಮಿ, ಎಂ.ಎಸ್.ಆತ್ಮಾನಂದ, ಮಾಜಿ ಶಾಸಕರಾದ ಕೆ.ಬಿ.ಚಂದ್ರಶೇಖರ್, ರಮೇಶ್ ಬಂಡಿಸಿದ್ದೇಗೌಡ, ಬಿ.ಪ್ರಕಾಶ್, ರಾಜ್ಯ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪ ಅಮರನಾಥ್, ವಿಧಾನ ಪರಿಷತ್ ಸದಸ್ಯ ದಿನೇಶ್‌ಗೂಳೀಗೌಡ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್, ಮುಖಂಡರಾದ ದಡದಪುರ ಶಿವಣ್ಣ, ರವಿಕುಮಾರ್ ಗಣಿಗ, ಡಾ. ಎಚ್.ಎನ್.ರವೀಂದ್ರ, ರಾಮಲಿಂಗಯ್ಯ, ಕಿಕ್ಕೇರಿ ಸುರೇಶ್, ಕೆ.ಎಚ್.ನಾಗರಾಜು, ರುದ್ರಪ್ಪ, ಸಿ.ಎಂ.ದ್ಯಾವಪ್ಪ, ಎಂ.ಎಸ್. ಚಿದಂಬರ್ ಭಾಗವಹಿಸಿದ್ದರು.

ಇಂದು ನೀರು ಪೂರೈಕೆ ವ್ಯತ್ಯಯ

ಮಂಡ್ಯ,ಏ.18– ಗರುಡನ ಉಕ್ಕಡ–ಮೇಟಗಳ್ಳಿ ಸಮೀಪವಿರುವ 66 ಕೆ.ವಿ. ಎಸ್.ಸಿ ವಿದ್ಯುತ್ ಲೈನ್‌ನ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಇಂದು ಮಂಡ್ಯ ನಗರಕ್ಕೆ ನೀರನ್ನು ಪಂಪ್ ಮಾಡಲು ಸಾಧ್ಯವಾಗುವುದಿಲ್ಲ. ಸಾರ್ವಜನಿಕರು ಸಹಕರಿಸಬೇಕೆಂದು ಕ.ನ.ನೀ.ಸ ಮತ್ತು ಒ.ಚ ಮಂಡಳಿಯ ನಿರ್ವಹಣಾ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್.ಸಚ್ಚಿದಾನಂದರ ಹುಟ್ಟುಹಬ್ಬ ಆಚರಣೆ



ಶ್ರೀರಂಗಪಟ್ಟಣ,ಏ18(ವಿನಯ್ ಕಾರೇಕುರ)–ತಾಲೂಕಿನ ಇಂಡುವಾಳು ಗ್ರಾಮದಲ್ಲಿ ಯುವ ಮುಖಂಡ ಎಸ್.ಸಚ್ಚಿದಾನಂದ ಅವರು ಸಹಸ್ರಾರು ಅಭಿಮಾನಿಗಳು, ಬೆಂಬಲಿಗರು ಮತ್ತು ಹಿತೈಷಿಗಳೊಂದಿಗೆ ಭಾನುವಾರ ತಮ್ಮ 34ನೇ ವರ್ಷದ ಹುಟ್ಟುಹಬ್ಬ ಆಚರಿಸಿಕೊಂಡರು.

ಇಂಡುವಾಳು ಗ್ರಾಮದ ತಮ್ಮ ನಿವಾಸದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಬೃಹತ್ ಕೇಕ್ ಕತ್ತರಿಸುವ ಮೂಲಕ ಬೆಂಬಲಿಗರೊಂದಿಗೆ ಸಂಭ್ರಮ ಹಂಚಿಕೊಂಡರು.

ನಾನಾ ರಾಜಕೀಯ ಪಕ್ಷಗಳ ಮುಖಂಡರು, ಜನಪ್ರತಿನಿಧಿಗಳು ಹಾಗೂ ಕ್ಷೇತ್ರದ ನಾನಾ ಭಾಗಗಳಿಂದ ಆಗಮಿಸಿದ್ದ ಜನರು ಸಚ್ಚಿದಾನಂದ ಅವರಿಗೆ ಶುಭ ಕೋರಿದರು. ಈ ಸಂದರ್ಭದಲ್ಲಿ 8 ರಿಂದ 10 ಸಾವಿರ ಮಂದಿಗೆ ಭರ್ಜರಿ ಊಟದ ವ್ಯವಸ್ಥೆಯನ್ನು ಮಾಡಲಾಗಿತ್ತು. ಆರೋಗ್ಯ ಸಚಿವ ಡಾ.ಸುಧಾಕರ್, ಸಂಸದೆ ಸುಮಲತಾ ಅಂಬರೀಷ್, ಆದಿಚುಂಚನಗಿರಿ ಶ್ರೀ ಡಾ. ನಿರ್ಮಲಾನಂದನಾಥ ಸ್ವಾಮೀಜಿ, ಸಿದ್ಧಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾ ಸ್ವಾಮಿ, ಮಾಜಿ ಸಚಿವ ಸಿ.ಪಿ.ಯೋಗೇಶ್ವರ್, ಸೇರಿದಂತೆ ನೂರಾರು ಜನ ಬೆಂಬಲಿಗರು ಹಿತೈಷಿಗಳು ಸಚ್ಚಿದಾನಂದ ದಂಪತಿಯನ್ನು ಆಶೀರ್ವದಿಸಿದರು.

ಕೆ.ಆರ್.ಪೇಟೆ ಬಳಿ ಇಂಜಿನಿಯರ್ ಅನುಮಾನಾಸ್ಪದ ಸಾವು

ಕೃಷ್ಣರಾಜಪೇಟೆ,ಏ.18(ಶ್ರೀನಿವಾಸ)– ತಾಲೂಕಿನ ಕಿಕ್ಕೇರಿ–ಚನ್ನರಾಯಪಟ್ಟಣ ಮುಖ್ಯ ರಸ್ತೆಯ ಐಕನಹಳ್ಳಿ ಗೇಟ್ ಬಳಿ ಅನುಮಾನಾಸ್ಪದವಾಗಿ ಬೈಕ್ ಅಪಘಾತ ನಡೆದಿದ್ದು



ನರೇಗಾ ಇಂಜಿನಿಯರ್ ಮೃತಪಟ್ಟಿದ್ದು, ಇದು ಅಪಘಾತವೋ ಅಥವಾ ಕೊಲೆಯೋ ಎಂಬ ಶಂಕೆ ವ್ಯಕ್ತವಾಗಿದೆ.

ತಾಲೂಕಿನ ಚಿಕ್ಕತರಹಳ್ಳಿ ಗ್ರಾಮದ ಶ್ರೀನಿವಾಸಮೂರ್ತಿ ಅವರ ಎರಡನೇ ಮಗ ಸಿ.ಎಸ್. ಮಹೇಂದ್ರ (ಮೇಟಿ), (29) ಮೃತಪಟ್ಟಿರುವ ಯುವಕ. ಮಹೇಂದ್ರ ಚನ್ನರಾಯಪಟ್ಟಣ ತಾಲೂಕು ಪಂಚಾಯತ್ ಕಸಬಾ ಹೋಬಳಿ ಕೇಂದ್ರದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ (ನರೇಗಾ) ಇಂಜಿನಿಯರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಭಾನುವಾರ ಸಂಜೆ ಕೆಲಸದ ನಿಮಿತ್ತ ತಮ್ಮ ಸ್ವಗ್ರಾಮಕ್ಕೆ ಬರುತ್ತಿದ್ದಾಗ ಈ ಘಟನೆ ನಡೆದಿದೆ ಎಂದು ತಿಳಿದು ಬಂದಿದೆ. ಘಟನೆ ಕುರಿತು ಕಿಕ್ಕೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸ್ಥಳಕ್ಕೆ ಪೊಲೀಸ್ ಇನ್ಸ್‌ಪೆಕ್ಟರ್ ಜಗದೀಶ್ ಮತ್ತು ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸೂಕ್ತ ತನಿಖೆ ನಡೆಸಿ ತಮ್ಮ ಮಗ ಮಹೇಂದ್ರನ ಸಾವಿಗೆ ನಿಖರ ಕಾರಣ ಪತ್ತೆ ಹಚ್ಚಬೇಕು ಎಂದು ಮೃತನ ಪೋಷಕರು ಹಾಗೂ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಬೀದಿ ನಾಟಕದ ಮೂಲಕ ಪರಿಸರ ಜಾಗೃತಿ

ಶ್ರೀರಂಗಪಟ್ಟಣ,ಏ,18(ವಿನಯ್‌ಕಾರೇಕುರ)–ಪರಿಸರದ ನಾಶದ ಬಗ್ಗೆ ಜಾಗೃತಿ ಮೂಡಿಸುವ ಬೀದಿ ನಾಟಕವನ್ನು ಪಟ್ಟಣದ ಪುರಸಭಾ ವೃತ್ತದ ಬಳಿ ಪ್ರದರ್ಶನ ಮಾಡಲಾಯಿತು. ಕಾರ್ಯಕ್ರಮವವನ್ನು ಪುರಸಭಾ ಉಪಾಧ್ಯಕ್ಷ ಕೃಷ್ಣಪ್ಪ ಉದ್ಘಾಟಿಸಿ ಮಾತನಾಡಿದರು. ಪರಿಸರ ವನ್ನು ಉಳಿಸಿ ಬೆಳೆಸುವಂತಹ ಜವಬ್ದಾರಿ ನಮ್ಮ ಮೇಲಿದ್ದು ಮುಂದಿನ ತಲೆಮಾರಿಗೆ ಉತ್ತಮವಾದ ನೆಲ, ಜಲ, ಉತ್ತಮ ವಾತಾವರಣವನ್ನು ನೀಡುವ ನಿಟ್ಟಿನಲ್ಲಿ ಜಾಗೃತಿ ಅನಿವಾರ್ಯ ಎಂದು ತಿಳಿಸಿದರು.



ಓಂ ಶ್ರೀನಿಕೇತನ ಸ್ಕೂಲ್ ಹಾಗೂ ಕಾಲೇಜು ಮತ್ತು ಸಹ್ಯಾದ್ರಿ ಕಲಾ ತಂಡ ಶಿವಮೊಗ್ಗ ಇವರ ಸಹಯೋಗದಲ್ಲಿ ನೀನಾಸಂನ ಸಂಪನ್ಮೂಲ ವ್ಯಕ್ತಿಗಳಾದ ಸುಮಂತ್, ವೀರೂ ಹಾಗೂ ಕುಶ ಮಕ್ಕಳಿಗೆ ತರಬೇತಿಯನ್ನು ನೀಡುತ್ತಿದ್ದು, ಪರಿಸರದ ಬಗ್ಗೆ ಅರಿವು ಮೂಡಿಸುವ ಬೀದಿ ನಾಟಕಗಳು ಪ್ರದರ್ಶನವಾಗಲಿದೆ ಎಂದರು. ಸಂಕ್ರಾಂತಿ ಮಂಜುರಾಮ್, ಮಂಜುರಾಮು ಕೂಡಲಕುಪ್ಪೆ ಗೋಪಾಲ್‌ಗೌಡ, ವಿಶ್ವಗುಪ್ತಾ ಸೇರಿದಂತೆ ಇತರರು ಹಾಜರಿದ್ದರು.

ಪಾಂಡವಪುರ ಪಟ್ಟಣದ ಟಿಎಪಿಸಿಎಂಎಸ್ ಸಂಸ್ಥೆಯಿಂದ ವಾಣಿಜ್ಯ ಮಳಿಗೆ ನಿರ್ಮಾಣಕ್ಕೆ ರಾಜ್ಯ ಫೆಡರೇಷನ್ ವತಿಯಿಂದ 2 ಲಕ್ಷ ಅನುದಾನವನ್ನು ಫೆಡರೇಷನ್ ನಿರ್ದೇಶಕ ಚೌಡೇನಹಳ್ಳಿ ಪುಟ್ಟಸ್ವಾಮೀಗೌಡ ಅವರು ಸಂಸ್ಥೆಯ ಅಧ್ಯಕ್ಷ ಡಿ.ಶ್ರೀನಿವಾಸ್‌ಗೆ ವಿತರಿಸಿದರು. ಈ ಸಂದರ್ಭದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಗುರುಸ್ವಾಮಿ, ಚಲುವರಾಜು, ಟಿಎಪಿಸಿಎಂಎಸ್ ಉಪಾಧ್ಯಕ್ಷೆ ತಿಬ್ಬಮ್ಮ, ನಿರ್ದೇಶಕರಾದ ರಾಮಕೃಷ್ಣೇಗೌಡ, ಶ್ರೀಕಾಂತ್, ಕಣಿವೆಯೋಗೇಶ್, ಕಾರ್ಯದರ್ಶಿ ನವೀನ್, ಮುಖಂಡ ಅಂಕೇಗೌಡ, ಪುಟ್ಟಚಲುವೆಗೌಡ, ಸಿಬ್ಬದಿವರ್ಗದವರು ಸೇರಿದಂತೆ ಹಲವರು ಇದ್ದರು.



ದುರ್ಬಲರ ಪಾಲಿಗೆ ಸಂವಿಧಾನದ ಆಶಯಗಳು ಸಾಕಾರಗೊಳ್ಳಲಿ

ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್‌ದಾಸ್



ಹುಣಸೂರು, ಏ.18(ಕೆಕೆ)– ದಲಿತರು, ದಮನಿತರು, ಮಹಿಳೆಯರು, ಅಲ್ಪಸಂಖ್ಯಾತರು, ಆದಿವಾಸಿಗಳು ಒಳಗೊಂಡಂತೆ ಎಲ್ಲಾ ಸಾಮಾಜಿಕ, ಆರ್ಥಿಕ, ಸಾಂಸ್ಕೃತಿಕ ದುರ್ಬಲರ ಪಾಲಿಗೆ ಸಂವಿಧಾನದ ಆಶಯಗಳನ್ನು ಸಾಕಾರಗೊಳಿಸಬೇಕಾಗಿದೆ ಎಂದು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್‌ದಾಸ್ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ರೈತ, ಕಾರ್ಮಿಕ, ದಲಿತ ಸಂಘಟನೆಗಳ ಆಶ್ರಯದಲ್ಲಿ ಸಂವಿಧಾನಕ್ಕೆ 73 ವರ್ಷ ತುಂಬಿದ ಅವಲೋಕನವಾಗಿ ನಡೆದ ಸಂವಿಧಾನ ಜಾಗೃತಿ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಮತ್ತು ಜಾತ್ಯತೀತ ಭಾವನೆಗಳನ್ನು ಮೂಡಿಸುವ ಮೂಲಕ ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯಬೇಕಾಗಿದೆ. ತಪ್ಪಿದಲ್ಲಿ ಬಹುತ್ವದ ಭಾರತ ಕಾಣಲು ಸಾಧ್ಯವಿಲ್ಲ. ದೇಶ ಮುನ್ನಡೆಸಲು ನಮ್ಮ ಸಂವಿಧಾನ ಕಾರಣವಾಗಿದೆ. ಅಂತಹ ಸಂವಿಧಾನವನ್ನು ಅಭದ್ರತೆಗೊಳಿಸಲು ಸಂಚು ನಡೆಯುತ್ತಿದೆ ಎಂದರು.

ವಿಶ್ವ ಮಾನ್ಯತೆ ಗಳಿಸಿರುವ ನಮ್ಮ ದೇಶದ ಸಂವಿಧಾನ ಸಮಾನತೆ ಸಾಕಾರಗೊಳಿಸುವ ಒಂದು ಮಹತ್ವ ಕಲ್ಪನೆಯಾಗಿದೆ. ಡಾ.ಬಿ.ಆರ್. ಅಂಬೇಡ್ಕರ್ ಅವರ ಕನಸಿನ ಭಾರತವನ್ನು ನನಸು ಮಾಡಲು ಸಂವಿಧಾನವನ್ನು ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮದಾಗಿದೆ ಎಂದರು.

ಮಾಜಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾತನಾಡಿ, ಸಂವಿಧಾನವನ್ನು ನಮ್ಮ ಪಿತ್ರಾರ್ಜಿತ ಆಸ್ತಿಯಂತೆ ಕಾಪಾಡಿಕೊಂಡರೆ ನಮ್ಮ ಮುಂದಿನ ಬದುಕು ಉತ್ತಮವಾಗಿರುತ್ತದೆ. ಸಂವಿಧಾನ ಇರುವುದರಿಂದಲೇ ನಮ್ಮ ಸಮಾಜ ಒಟ್ಟಿಗೆ ಸಾಗುತ್ತಿದೆ. ಇಲ್ಲದಿದ್ದಲ್ಲಿ ಛಿದ್ರವಾಗುತ್ತದೆ. ಕೋಮುವಾದಿ ಶಕ್ತಿಗಳು ಧರ್ಮಗಳ ನಡುವೆ ವಿಷ ಬೀಜ ಬಿತ್ತಿ ಸಮಾಜ ಒಡೆಯುವ ಕೆಲಸ ಮಾಡುತ್ತಿವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಹೆಚ್.ಪಿ. ಮಂಜುನಾಥ್ ಮಾತನಾಡಿ, ಸಂವಿಧಾನವನ್ನು ಓದಿ ಮನನ ಮಾಡಿಕೊಂಡು ಜನಪ್ರತಿನಿಧಿಗಳು ತಮ್ಮ ಕರ್ತವ್ಯಗಳನ್ನು ನಿಭಾಯಿಸಬೇಕು. ಅಂಬೇಡ್ಕರ್‌ರವರ ಹೋರಾಟದ ರಥವನ್ನು ನಾವೆಲ್ಲರೂ ಸೇರಿ ಮುಂದಕ್ಕೆ ಎಳೆಯುವ ಕೆಲಸ ಮಾಡಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಸಮೀನಾ ಪರ್ವೀನ್, ಉಪಾಧ್ಯಕ್ಷ ದೇವನಾಯಕ, ಕೆ.ಬಸವರಾಜು, ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ, ರಾಜ್ಯ ದಸಂಸ ಜಿಲ್ಲಾ ಸಂಚಾಲಕ ಬೆಟ್ಟಯ್ಯಕೋಟೆ, ಸಹಾಯಕ ಪ್ರಾಧ್ಯಾಪಕಿ ಡಾ.ಷಹಸೀನಾ ಬೇಗಂ, ಬಿಇಎಲ್‌ನ ನಿವೃತ್ತ ನಿರ್ದೇಶಕ ಶಿವಕುಮಾರನ್, ಬಿಆರ್‌ಪಿ ಸಂತೋಷ್ ಕುಮಾರ್, ಜಿಪಂ ಮಾಜಿ ಸದಸ್ಯರಾದ ಅಚ್ಯುತಾನಂದ, ಹೆಚ್.ಎಸ್.ವರದರಾಜು, ಆದಿಜಾಂಬವ ಸಂಘದ ಜೆ.ಮಹದೇವು, ಸಿಪಿಎಂ ಜಿಲ್ಲಾ ಕಾರ್ಯದರ್ಶಿ ಜಗದೀಶ್ ಸೂರ್ಯ, ಸಿಪಿಎಂ ಮುಖಂಡ ವಿ.ಬಸವರಾಜು, ದೇವರಾಜ್ ಒಡೆಯರ್, ನಿಂಗರಾಜ್ ಮಲ್ಲಾಡಿ, ಬಸವಲಿಂಗಯ್ಯ, ವೆಂಕಟೇಶ್, ರಾಮಕೃಷ್ಣ, ರಾಜು, ಪುಟ್ಟಸ್ವಾಮಿ ಮುಜಾಮಿಲ್ ಸೈಯದ್ ರಿಜ್ವಾನ್, ಮುದಾಸೀರ್, ವಕೀಲರ ಸಂಘದ ರಂಗೋಗಣ್ಣೇಗೌಡ, ಬಸವರಾಜು, ಕೆಂಪೇಗೌಡ, ವೀಣಾ, ಸಂಜಯ್, ವಕೀಲ ಅಶೋಕ್, ಪುಟ್ಟರಾಜು ಭಾಗವಹಿಸಿದ್ದರು.

ಭಗವಾನ್ ಮಹಾವೀರ ಜಯಂತಿ ಆಚರಣೆ



ಸಾಲಿಗ್ರಾಮ, ಏ.18(ಜ್ಯೋತಿ)– ಭಗವಾನ್ ಮಹಾವೀರ, ಅಂಬೇಡ್ಕರ್ ಜಯಂತಿಯನ್ನು ಒಂದೇ ದಿನ ಆಚರಿಸುತ್ತಿರುವುದು ಸಂತಸದ ವಿಚಾರ ಎಂದು ಶಾಸಕ ಸಾ.ರಾ.ಮಹೇಶ್ ತಿಳಿಸಿದರು.

ಪಟ್ಟಣದಲ್ಲಿ ಜೈನ ಸಮುದಾಯದವರು ಆಯೋಜಿಸಿದ್ದ ಭಗವಾನ್ ಮಹಾವೀರರ ಜನ್ಮಕಲ್ಯಾಣೋತ್ಸವದಲ್ಲಿ ಮಾತನಾಡಿದ ಅವರು, ವಿಶ್ವದ ಶಾಂತಿಗೋಸ್ಕರ ಮಹಾವೀರರು ತಮ್ಮನ್ನು ತೊಡಗಿಸಿಕೊಂಡಿದ್ದರು. ಅಹಿಂಸೆಗೆ ಒತ್ತು ಕೊಟ್ಟು ಬದುಕು ಬದುಕಲು ಬಿಡು ಎಂಬ ಸಿದ್ಧಾಂತವನ್ನು ಜೈನ ಧರ್ಮೀಯರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದಾರೆ ಎಂದರು.

ಭಗವಾನ್ ಮಹಾವೀರರ ಮೆರವಣಿಗೆ ವಿಜೃಂಭಣೆಯಿಂದ ಜರುಗಿತು. ಸಿಪಿಐ ಶ್ರೀಕಾಂತ್, ಗ್ರಾಪಂ ಅಧ್ಯಕ್ಷೆ ದೇವಿಕಾ, ಪಿಡಿಓ ಮಂಜುನಾಥ್, ಉಪ ತಹಸೀಲ್ದಾರ್ ಮಹೇಂದ್ರ, ಜೈನ ಮುಖಂಡರಾದ ರಾಜೇಂದ್ರ ಪ್ರಸಾದ್, ಪ್ರೇಮ್ ಕುಮಾರ್ ಜೈನ್, ಗುಣಪಾಲ್ ಜೈನ್, ಸುನೀಲ್, ಹೇಮಂತ್, ರಜತ್ ಜೈನ್, ಶೀತಲ್, ಚೇತನ್, ನಾಗೇಂದ್ರ, ನೂರಾರು ಜೈನರು ಸಮುದಾಯದವರಿದ್ದರು.

ಇಂದು ಓಕಳಿ ಹಬ್ಬ

ಕಂಪಲಾಪುರ, ಏ.18(ಸದಾ)– ಗ್ರಾಮದಲ್ಲಿ ಏ.19ರಂದು ಓಕಳಿ ಹಬ್ಬ ನಡೆಯಲಿದೆ. ಗ್ರಾಮದ ಅಧಿದೇವತೆ ಶ್ರೀಕರಕಂಠೇಶ್ವರ ದೇವಸ್ಥಾನದಲ್ಲಿ ಪೂಜಾ ವಿಧಿವಿಧಾನಗಳು ನಡೆದ ನಂತರ ಮಧ್ಯಾಹ್ನದ ಬಳಿಕ ಗ್ರಾಮದ ಬೀದಿಗಳಲ್ಲಿ ಓಕಳಿ ಆಡಲಾಗುತ್ತದೆ. ಬುಧವಾರ ಬೆಳಗ್ಗೆ ಮಹಾಮಂಗಳಾರತಿ ನಂತರ ಮಧ್ಯಾಹ್ನ ಭಕ್ತರಿಗೆ ಅನ್ನ ಸಂತರ್ಪಣೆ ನಡೆಯಲಿದೆ. ಸಂಜೆ ಶ್ರೀಕರಕಂಠೇಶ್ವರ ದೇವಸ್ಥಾನದಿಂದ ಬೆಳ್ಳಿ ಬಸವನ ಉತ್ಸವ ಪ್ರಾರಂಭವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಯಲಿದೆ.

ಸ್ಮಶಾನ ಅಭಿವೃದ್ಧಿ ಕಾಮಗಾರಿಗೆ ಪುರಸಭಾಧ್ಯಕ್ಷ ಭೂಮಿ ಪೂಜೆ



ತಿ.ನರಸೀಪುರ, ಏ.18(ಎಸ್‌ಕೆ)– ಸ್ಮಶಾನ ಹಾಗೂ ಸಾರ್ವಜನಿಕ ರಸ್ತೆಗಳನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸುವ ಮೂಲಕ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುತ್ತೇನೆ ಎಂದು ಪುರಸಭಾ ಅಧ್ಯಕ್ಷ ಮದನ್‌ರಾಜ್ ತಿಳಿಸಿದರು.

ಪಟ್ಟಣದ 1ನೇ ಮತ್ತು 17ನೇ ವಾರ್ಡ್ ಸ್ಮಶಾನ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಪಟ್ಟಣದ ಪುರಸಭೆ ಸದಸ್ಯರ ಸಹಕಾರದೊಂದಿಗೆ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತಿದ್ದೇನೆ. ಅಲ್ಲದೇ ಪಟ್ಟಣದ ಸ್ವಚ್ಛತೆ, ಕುಡಿಯುವ ನೀರು, ಬೀದಿದೀಪ, ರಸ್ತೆ ಅಭಿವೃದ್ಧಿ ಸೇರಿದಂತೆ ಮೂಲ ಸೌಲಭ್ಯ ಕಲ್ಪಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದರು.

ಪಟ್ಟಣದ 1 ಮತ್ತು 17ನೇ ವಾರ್ಡ್‌ನಲ್ಲಿ 17 ಲಕ್ಷ ರೂ. ವೆಚ್ಚದಲ್ಲಿ ಸ್ಮಶಾನ ಅಭಿವೃದ್ಧಿಪಡಿಸಿದ್ದೇವೆ. ಸಾರ್ವಜನಿಕರು ತಮ್ಮ ಸುತ್ತಮುತ್ತಲ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಪಟ್ಟಣದ ಅಭಿವೃದ್ಧಿಗೆ ಸಹಕರಿಸಬೇಕು ಎಂದರು.

ರಾಜೇಶ್ವರಿ ಮಾತನಾಡಿ, ಚುನಾವಣೆ ಸಮಯದಲ್ಲಿ ಮತದಾರರಿಗೆ ನೀಡಿದ ಭರವಸೆಯನ್ನು ಹಂತ ಹಂತವಾಗಿ ಈಡೇರಿಸಲು ಶ್ರಮಿಸುತ್ತಿದ್ದೇನೆ. ಸರ್ಕಾರದಿಂದ ಬರುವ ಸವಲತ್ತನ್ನು ಬಡವರಿಗೆ ತಲುಪಿಸಲು ಶ್ರಮಿಸುತ್ತೇನೆ ಎಂದರು.

ಈ ವೇಳೆ ಪುರಸಭಾ ಸದಸ್ಯರಾದ ಕಿರಣ್, ಮಂಜುನಾಥ್, ಬಾದಾಮಿ ಮಂಜು, ಮುಖಂಡರಾದ ಕರಿಯಪ್ಪ, ರಾಘವೇಂದ್ರ, ರಾಜು, ರಾಜೇಶ್, ಮಾದೇಶ್ ಗುತ್ತಿಗೆದಾರ ರಮೇಶ್, ಜಯಪ್ರಕಾಶ್ ಮತ್ತಿತರಿದ್ದರು.

ಮಕ್ಕಳ ದೃಷ್ಟಿಯಲ್ಲಿ ಶಿಕ್ಷಣ ಶಿಕ್ಷೆಯಾಗಿ ಮಾರ್ಪಟ್ಟಿದೆ

ಬಿ.ಮಟಕೆರೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಡಾ.ಸಂತೋಷ್ ಚೊಕ್ಕಾಡಿ



ಹೆಚ್.ಡಿ.ಕೋಟೆ, ಏ.18(ಮಂಜು)– ಮಕ್ಕಳ ದೃಷ್ಟಿಯಲ್ಲಿ ಪ್ರಸ್ತುತ ಶಿಕ್ಷಣ ಶಿಕ್ಷೆಯಾಗಿ ಮಾರ್ಪಟ್ಟಿದೆ ಎಂದು ಬಿ.ಮಟಕೆರೆ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಡಾ.ಸಂತೋಷ್ ಚೊಕ್ಕಾಡಿ ಬೇಸರ ವ್ಯಕ್ತಪಡಿಸಿದರು.

ಪಟ್ಟಣದ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ಆದಿಚುಂಚನಗಿರಿ ಸ್ವತಂತ್ರ ಪದವಿಪೂರ್ವ ಕಾಲೇಜಿನ ವತಿಯಿಂದ ನಡೆದ ಶೈಕ್ಷಣಿಕ ಮುನ್ನಡೆಯಲ್ಲಿ ಬಿಜಿಎಸ್ ವಿದ್ಯಾಸಂಸ್ಥೆಗಳ ಪೋಷಕರು ಮತ್ತು ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳು ಪೋಷಕರ ಒತ್ತಾಯದಿಂದ ಪೋಷಕರಿಗಿಷ್ಟವಾದ ರೀತಿ ಓದುವ ಸ್ಥಿತಿ ಎದುರಾಗಿದೆ. ಮಕ್ಕಳ ಯೋಚನೆಗೆ ತಕ್ಕಂತೆ ಓದಲು ಬಿಟ್ಟಾಗ ಮಾತ್ರ ಆ ಮಕ್ಕಳಿಗೆ ಶಿಕ್ಷಣ ಶಿಕ್ಷೆಯಾಗಿ ಕಾಣುವುದಿಲ್ಲ. ಉತ್ತಮವಾಗಿ ತಮಗಿಷ್ಟವಾದ ಆಯ್ಕೆಗೆ ಬಿಟ್ಟಾಗ ಮಾತ್ರ ಅವರ ಜೀವನವನ್ನು ಅವರೇ ರೂಪಿಸಿಕೊಳ್ಳಲು ಸಾಧ್ಯ ಎಂದು ತಿಳಿಸಿದರು.


ಪೋಷಕರು ತಮ್ಮ ಮಕ್ಕಳಲ್ಲಿ ಗೆಲುವನ್ನು ಸಂಭ್ರಮಿಸುವ ರೀತಿಯಲ್ಲೇ ಸೋಲನ್ನು ಸ್ವೀಕರಿಸುವ ಗುಣವನ್ನು ಬೆಳೆಸಬೇಕು ಎಂದು ಪೋಷಕರಿಗೆ ಕಿವಿಮಾತು ಹೇಳಿದರು.

ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಸೋಮೇಶ್ವರ ಸ್ವಾಮೀಜಿ ಮಾತನಾಡಿ, ವಿದ್ಯಾರ್ಥಿಗಳು ಓದಿ ಪದವಿ ಪಡೆದರೆ ಸಾಲದು, ಸಮಾಜದ ಅಂಕು ಡೊಂಕುಗಳನ್ನು ಅರಿತು ಜೀವನ ಸಾಗಿಸಬೇಕು. ಬೌದ್ಧಿಕ ಬೆಳವಣಿಗೆ ಇದ್ದಲ್ಲಿ ಮಾತ್ರ ನೀವು ಪಡೆದ ಪದವಿ ನಿಮಗೆ ನೆರವಾಗುತ್ತದೆ ಎಂದರು. ಕಾಲೇಜಿನ ಆಡಳಿತಾಧಿಕಾರಿ ಪ್ರೊ.ಕೆ.ಪಿ. ಬಸವೇಗೌಡ, ಪ್ರಾಂಶುಪಾಲ ಡಾ.ಹೆಚ್.ಸಿ. ರವಿಗೌಡ, ಡಾ.ಜೆ.ಎನ್. ವೆಂಕಟೇಶ್, ಮಹಾರಾಜ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಪ್ರೊ.ಚಂದ್ರೇಗೌಡ, ಉಪನ್ಯಾಸಕರಾದ ಭೈರೇಗೌಡ, ಪ್ರಕಾಶ್, ನಂದಿನಿ, ಉಪ ವಲಯ ಅರಣ್ಯಾಧಿಕಾರಿ ನಾರಾಯಣ್, ಸತೀಶ್, ಸಹಾಯಕ ಪ್ರಾಧ್ಯಾಪಕ ತುಳಸೀರಾಮ್, ನಂದಿನಿ, ಸಹಾಯಕ ಕಾರ್ಯಪಾಲಕ ಅಭಿಯಂತರ ಮಹೇಶ್ ಇದ್ದರು.



ಬನ್ನೂರಿನ ಸುಭಾಷ್ ನಗರದ ವಿನಾಯಕ ಕಾಲೋನಿಯಲ್ಲಿ ಪೌರಕಾರ್ಮಿಕರು ಡಾ.ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಕೇಕ್ ಕತ್ತರಿಸಿ, ಸಿಹಿ ಹಂಚುವ ಮೂಲಕ ಅದ್ಧೂರಿಯಾಗಿ ಆಚರಿಸಿದರು.

ಗಟ್ಟವಾಡಿ ಡೈರಿಗೆ ಮಲ್ಲಿಕಾರ್ಜುನ್ ಅಧ್ಯಕ್ಷ, ಮಹದೇವಪ್ಪ ಉಪಾಧ್ಯಕ್ಷ



ಮಲ್ಕುಂಡಿ, ಏ.18(ಚನ್ನಪ್ಪ)– ನಂಜನಗೂಡು ತಾಲೂಕಿನ ಗಟ್ಟವಾಡಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ಮಲ್ಲಿಕಾರ್ಜುನ, ಉಪಾಧ್ಯಕ್ಷರಾಗಿ ಮಹದೇವಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಇವರಿಬ್ಬರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಪ್ರಕಾಶ್‌ರಾವ್ ಘೋಷಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ಜಿ.ಮಹೇಶ್ ಮಾತನಾಡಿ, ಸಂಘವು ಅಭಿವೃದ್ಧಿಗೆ ಎಲ್ಲಾ ಸದಸ್ಯರ ಸಹಕಾರ ಮುಖ್ಯ. ಅದೇ ರೀತಿ ರೈತರು ಗುಣಮಟ್ಟದ ಹಾಲನ್ನು ಸರಬರಾಜು ಮಾಡಿದಾಗ ಮಾತ್ರ ಸಂಘ ಹೆಚ್ಚು ಲಾಭ ಕಾಣಲು ಸಾಧ್ಯ. ರೈತರು ಹೆಚ್ಚಾಗಿ ಹಸಿರು ಮೇವು ಬೆಳೆದು ರಾಸುಗಳಿಗೆ ಉತ್ತಮ ಆಹಾರ ನೀಡಿ ಗುಣಮಟ್ಟದ ಹಾಲನ್ನು ಪೂರೈಸಬೇಕು. ಈ ಮೂಲಕ ಸಂಘವನ್ನು ಲಾಭದತ್ತ ಕೊಂಡೊಯ್ಯಲು ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಮುಖಂಡರಾದ ರಾಜಪ್ಪ, ಶಾಂತಪ್ಪ, ಸಿದ್ದು, ನಂದೀಶ, ಮಹದೇವಸ್ವಾಮಿ, ರೇವಣ್ಣ, ಮಾದೇಗೌಡ, ಸಿದ್ದಪ್ಪ, ರಾಜಪ್ಪ, ನಿರ್ದೇಶಕರಾದ ಮಹಾಂತೇಶಪ್ಪ, ನಂಜುಂಡಶೆಟ್ಟಿ, ಸುರೇಶ, ಮಹದೇವಸ್ವಾಮಿ, ಶಿವಕುಮಾರ್, ನಾಗರತ್ನಮ್ಮ, ಮಹದೇವಮ್ಮ, ಕೋಶಮ್ಮ ಸೇರಿದಂತೆ ಇತರರಿದ್ದರು.

ಮೈಸೂರು ಮಿತ್ರ ಮಂಗಳವಾರ 19 ಏಪ್ರಿಲ್ 2022

ಕುಟ್ಟದಲ್ಲಿ ಬೃಹತ್ ಹಿಂದೂ ಸಮಾಜೋತ್ಸವ





ಗೋಣಿಕೊಪ್ಪ, ಏ.18–ಹಿಂದೂ ರಾಷ್ಟ್ರ ನಿರ್ಮಾಣಕ್ಕೆ ಪಣ ತೊಡಬೇಕು ಎಂದು ಬಜರಂಗದಳ ದಕ್ಷಿಣ ಪ್ರಾಂತ ಸಹ ಸಂಯೋಜಕ ರಘು ಜಿ.ಸಕಲೇಶಪುರ ಮನವಿ ಮಾಡಿದರು.

ಸೋಮವಾರ ಪೊನ್ನಂಪೇಟೆ ಪ್ರಖಂಡ ವಿಶ್ವಹಿಂದೂ ಪರಿಷತ್, ಬಜರಂಗದಳ ದುರ್ಗಾವಾಹಿನಿ ಮಾತೃಶಕ್ತಿ ವತಿಯಿಂದ ಜಿಲ್ಲೆಯ ಗಡಿ ಗ್ರಾಮ ಕುಟ್ಟದಲ್ಲಿ ಆಯೋಜಿಸಿದ್ದ ಬೃಹತ್ ಹಿಂದೂ ಸಮಾಜೋತ್ಸವದಲ್ಲಿ ಅವರು ಮಾತನಾಡಿದರು.

ಪ್ರಸ್ತುತ ಅತ್ಯಾಚಾರ, ಕಳ್ಳತನ, ಕೊಲೆಯಂತಹ ಪ್ರಕರಣ ಹೆಚ್ಚಾಗಿದೆ. ಇದರಿಂದ ಭಾರತದ ವಿಶ್ವ ಗುರು ಸ್ಥಾನಕ್ಕೆ ಧಕ್ಕೆಯಾಗಲಿದೆ. ಆಹಾರ ಪದ್ಧತಿ, ಆರೋಗ್ಯ ವೃದ್ಧಿ ಎಲ್ಲವೂ ಭಾರತ ದೇಶದ ಸಂಸ್ಕೃತಿ ವಿಶ್ವಕ್ಕೆ ಪಾಠ ಮಾಡಿದೆ. ಇದನ್ನು ಉಳಿಸಿ, ಪೋಷಿಸುವುದು ನಮ್ಮ ಬದುಕಿನ ಭಾಗವಾಗಬೇಕು ಎಂದು ಅವರು ಹೇಳಿದರು.

ಕೊಡಗು ವಿಎಚ್‌ಪಿ ಅಧ್ಯಕ್ಷ ಜಿ.ಕೃಷ್ಣಮೂರ್ತಿ ಮಾತನಾಡಿ, ಶ್ರೀರಾಮ, ಆಂಜನೇಯ, ಗೋಮಾತೆ ಸೇರಿದಂತೆ ಭಾರತಾಂಬೆ ರಕ್ಷಣೆಯ ಗುರಿ ನಮ್ಮ ಹೋರಾಟದಲ್ಲಿದ್ದು, ಇದು ಹಿಂದೂಗಳಿಂದ ಮಾತ್ರ ಸಾಧ್ಯ. ಗೋ ಮಾತೆ ಹತ್ಯೆಯನ್ನು ನಾವು ಸಹಿಸುವುದಿಲ್ಲ. ಎಂದರು.

ಪೊನ್ನಂಪೇಟೆ ರಾಮಕೃಷ್ಣ ಶಾರದಾಶ್ರಮ ಅಧ್ಯಕ್ಷ ತತ್ವರೂಪಾನಂದ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸಿ, ನಮ್ಮ ಧರ್ಮ ರಕ್ಷಣೆ ನಮ್ಮ ಕೈಯಲ್ಲಿದೆ. ಸಂಸ್ಕೃತಿ–ಸಂಸ್ಕಾರವನ್ನು ಉಳಿಸಲು ಎಲ್ಲರೂ ಕೈಜೋಡಿಸಬೇಕು. ಸ್ವಾಮಿ ವಿವೇಕಾನಂದ ಹಿಂದುತ್ವ ರಾಷ್ಟ್ರದ ಪ್ರತಿನಿಧಿಯಾಗಿದ್ದರು. ಇದನ್ನು ನಾವು ರಕ್ಷಿಸಿಕೊಳ್ಳಬೇಕಿದೆ ಎಂದರು.

ಪೊನ್ನಂಪೇಟೆ ಪ್ರಖಂಡ ವಿಎಚ್‌ಪಿ ಅಧ್ಯಕ್ಷ ಪಂದ್ಯಂಡ ಹರೀಶ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿಎಚ್‌ಪಿ ಪೊನ್ನಂಪೇಟೆ ಪ್ರಖಂಡ ಕಾರ್ಯದರ್ಶಿ ಅಮ್ಮತ್ತೀರ ಸುರೇಶ್, ಸಂಯೋಜಕ ಸಜನ್, ಕುಟ್ಟ ಘಟಕ ಅಧ್ಯಕ್ಷ ಕಾಕೇರ ಸುರೇಶ್ ಹಿರಿಯರಾದ ಮಚ್ಚಮಾಡ ಸುಬ್ರಮಣಿ, ದುರ್ಗಾವಾಹಿನಿ ಮಾತೃಶಕ್ತಿ ಸಂಯೋಜಕಿ ತೀತೀರ ತೀರ್ಥ ಮಂಜುನಾಥ್ ಇದ್ದರು.

ಮೊಳಗಿದ ಹಿಂದುತ್ವದ ಕಹಳೆ: ಕುಟ್ಟ ಕೊಡವ ಸಮಾಜದಿಂದ ಹಿಂದೂ ಶೋಭಾಯಾತ್ರೆ ಆರಂಭಗೊಂಡು ಸಿಂಕೋನ ರಸ್ತೆಯವರೆಗೆ ತೆರಳಿ ಬಸ್ ನಿಲ್ದಾಣದಲ್ಲಿ ಸಭೆ ಸೇರಲಾಯಿತು. ಚಂಡೆ, ಕೊಡವ ವಾಲಗದೊಂದಿಗೆ ಹಿಂದೂಗಳು ಹೆಜ್ಜೆ ಹಾಕಿದರು. ಕೇಸರಿಮಯವಾಗಿದ್ದ ಪಟ್ಟಣದಲ್ಲಿ ಹಿಂದೂ ರಾಷ್ಟ್ರ ನಿರ್ಮಾಣದ ಕಹಳೆ ಮೊಳಗಿತು. ಸುಮಾರು 2 ಕಿ.ಮೀ. ದೂರ ಮೆರವಣಿಗೆ ನಡೆಯಿತು. ದಾರಿಯುದ್ದಕ್ಕೂ ಕೇಸರಿ ಧ್ವಜ, ಬಂಟಿಂಗ್ಸ್ ಗಮನ ಸೆಳೆಯಿತು. ಶಾಸಕ ಕೆ.ಜಿ. ಬೋಪಯ್ಯ, ಆರ್‌ಎಸ್‌ಎಸ್ ಸಂಘ ಚಾಲಕ್ ಚೆಕ್ಕೇರ ಮನು ಕಾವೇರಪ್ಪ ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ತಹಸೀಲ್ದಾರ್ ಭರವಸೆ; ಗುಡಿಸಲು ತೆರವುಗೊಳಿಸಿ, ಪ್ರತಿಭಟನೆ ಕೈಬಿಟ್ಟ ಸಂತ್ರಸ್ತರು

ಸಿದ್ದಾಪುರ, ಏ.18–ಪಾಲಿಬೆಟ್ಟ ಗ್ರಾಮದ ಪೈಸಾರಿ ಜಾಗವೊಂದರಲ್ಲಿ 20ಕ್ಕೂ ಹೆಚ್ಚು ಸಂತ್ರಸ್ತ ಕುಟುಂಬದವರು ಗುಡಿಸಲು ಕಟ್ಟಿ ಶಾಶ್ವತವಾಗಿ ಜಾಗ ನೀಡಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿದ್ದ ಸ್ಥಳಕ್ಕೆ ವಿರಾಜಪೇಟೆ ತಹಸೀಲ್ದಾರ್ ಯೋಗಾನಂದ, ಉಪ ವಿಭಾಗಾಧಿಕಾರಿ ಸತೀಶ್ ಉಳ್ಳಾಲ್ ಭೇಟಿ ನೀಡಿ ಸಂತ್ರಸ್ತರ ಸಮಸ್ಯೆ ಆಲಿಸಿದರು.

ಹಲವು ವರ್ಷಗಳಿಂದ ನಿವೇಶನಕ್ಕಾಗಿ ಹಲವು ಬಾರಿ ಮನವಿ ಸಲ್ಲಿಸಿದರೂ ಸಂಬಂಧಪಟ್ಟವರು ಸ್ಪಂದಿಸದ ಕಾರಣ ಇಲ್ಲಿನ ಪೈಸಾರಿ ಜಾಗದಲ್ಲಿ ವಾಸ ಇರುವುದಾಗಿ ಸಂತ್ರಸ್ತರು ಅಳಲು ತೋಡಿಕೊಂಡರು. ಶಾಶ್ವತ ಸೂರು ಸಿಗುವವರೆಗೂ ಇಲ್ಲಿಂದ ಕದಲುವುದಿಲ್ಲ ಎಂದು ಪಟ್ಟು ಹಿಡಿದಿದರು.

ತಹಸೀಲ್ದಾರ್ ಯೋಗಾನಂದ ಸಂತ್ರಸ್ತರೊಂದಿಗೆ ಮಾತುಕತೆ ನಡೆಸಿ, ಈಗಾಗಲೇ ವಿರಾಜಪೇಟೆ ತಾಲೂಕಿನಲ್ಲಿದ್ದ ಪೈಸಾರಿ ಜಾಗದಲ್ಲಿ ಸಾವಿರಾರು ಮಂದಿಗೆ ನಿವೇಶನ ನೀಡಲಾಗಿದೆ. ಮತ್ತಷ್ಟು ಮಂದಿಗೆ ಜಾಗ ಗುರುತಿಸಲಾಗಿದೆ. ಪಾಲಿಬೆಟ್ಟ ವ್ಯಾಪ್ತಿಯಲ್ಲಿ ಪೈಸಾರಿ ಜಾಗಗಳನ್ನು ಗುರುತಿಸಲಾಗುತ್ತಿದ್ದು, ಜೂ.30 ರವರೆಗೆ ಕಾಲಾವಕಾಶ ನೀಡಿದಲ್ಲಿ ಶಾಶ್ವತವಾಗಿ ನಿವೇಶನ ಗುರುತಿಸಿ ಮೂಲಸೌಕರ್ಯ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು. ಆರಂಭದಲ್ಲಿ ಪಟ್ಟುಹಿಡಿದ ಸಂತ್ರಸ್ತರು ನಂತರ ತಹಸೀಲ್ದಾರ್ ಭರವಸೆಗೆ ಮಣಿದು ಪ್ರತಿಭಟನೆ ಕೈಬಿಟ್ಟು ಗುಡಿಸಲು ತೆರವುಗೊಳಿಸಿದರು.



ತಹಸೀಲ್ದಾರ್ ಯೋಗಾನಂದ ಹಾಗೂ ಉಪವಿಭಾಗಾಧಿಕಾರಿ ಸತೀಶ್ ಸಂತ್ರಸ್ತರ ಸಮಸ್ಯೆ ಆಲಿಸಿದರು.

ಕೂಲಿ ಕಾರ್ಮಿಕ ಆತ್ಮಹತ್ಯೆ

ವಿರಾಜಪೇಟೆ, ಏ.18–ಜೀವನದಲ್ಲಿ ಜಿಗುಪ್ಸೆಗೊಂಡು ಕೂಲಿ ಕಾರ್ಮಿಕ ಆತ್ಮಹತ್ಯೆಗೆ ಶರಣಾಗಿರುವ ಘಟನೆ ವಿರಾಜಪೇಟೆ ಬಳಿಯ ಬಾಳುಗೋಡುವಿನಲ್ಲಿ ನಡೆದಿದೆ.

ಬಾಳುಗೋಡು ನಿವಾಸಿ ಕಾರ್ಮಿಕ ಬಿಲ್ಲವರ ಚಂದ್ರಶೇಖರ(57) ಭಾನುವಾರ ಸಂಜೆ ಮನೆಯ ಹಿಂಬದಿಯ ತೋಟದ ಮರವೊಂದಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ಮೃತರ ಪತ್ನಿ ಪುಷ್ಪಾ ವಿರಾಜಪೇಟೆ ಗ್ರಾಮಾಂತರ ಠಾಣೆಗೆ ನೀಡಿದ ದೂರು ನೀಡಿದ ಹಿನ್ನೆಲೆ ಪ್ರಕರಣ ದಾಖಲಿಸಿದ ಪೊಲೀಸರು, ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಸಾರ್ವಜನಿಕ ಆಸ್ಪತ್ರೆಯಲ್ಲಿ ಶವ ಪರೀಕ್ಷೆ ನಡೆಸಿ ವಾರಸುದಾರರಿಗೆ ಒಪ್ಪಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ಮೃತರು ಪತ್ನಿ ಹಾಗೂ ಇಬ್ಬರು ಪುತ್ರರನ್ನು ಅಗಲಿದ್ದಾರೆ.

ಇಂದು ಸಂಕಷ್ಟಹರ ಚತುರ್ಥಿ ಪೂಜೆ

ಮಡಿಕೇರಿ ಏ.18–ನಗರದ ಕೋಟೆ ಶ್ರೀ ಗಣಪತಿ ದೇವಾಲಯದಲ್ಲಿ ಏ.19 ರಂದು ಸಂಜೆ 6 ಗಂಟೆಯಿಂದ ಸಾಮೂಹಿಕ ಅಂಗಾರಕ ಸಂಕಷ್ಟಹರ ಚತುರ್ಥಿ ಪೂಜೆ ಹಾಗೂ ಸಂಜೆ 7.30 ಗಂಟೆಗೆ ಮಹಾಪೂಜೆ ನಡೆಯಲಿದೆ.

ಸಾರ್ವಜನಿಕ ಭಕ್ತಾದಿಗಳು ದೇವಾಲಯದಲ್ಲಿ ನಡೆಯಲಿರುವ ಸಾಮೂಹಿಕ ಅಂಗಾರಕ ಸಂಕಷ್ಟಹರ ಚತುರ್ಥಿ ಪೂಜೆಯಲ್ಲಿ ಭಾಗವಹಿಸಿ, ಪೂಜೆ ಯಶಸ್ವಿಗೊಳಿಸುವಂತೆ ಶ್ರೀ ಓಂಕಾರೇಶ್ವರ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

ವಾರ್ಷಿಕ ಮಹಾಪೂಜಾ ಕಾರ್ಯಕ್ರಮ

ಸೋಮವಾರಪೇಟೆ, ಏ.18– ಇಲ್ಲಿನ ಮಹದೇಶ್ವರ ಬಡಾವಣೆಯ ಮುನೇಶ್ವರಸ್ವಾಮಿ ಹಾಗೂ ಚಾಮುಂಡೇಶ್ವರಿ ಅಮ್ಮನವರ ವಾರ್ಷಿಕ ಮಹಾಪೂಜಾ ಕಾರ್ಯಕ್ರಮ ಏ.20ರಂದು ನಡೆಯಲಿದೆ ಎಂದು ಮಹದೇಶ್ವರ ಭಕ್ತ ವೃಂದ ಸಮಿತಿಯ ಅಧ್ಯಕ್ಷರು ಹಾಗೂ ಕಾರ್ಯಕಾರಿ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

ಅಂದು ಬೆಳಗ್ಗೆ 8 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ಅರ್ಚಕ ಜಗದೀಶ ಉಡುಪ ನೇತೃತ್ವದಲ್ಲಿ ವಿವಿಧ ಪ್ರಜಾ ಕಾರ್ಯಗಳು ನಡೆಯಲಿದ್ದು, ಮಧ್ಯಾಹ್ನ 1 ಗಂಟೆಗೆ ಹಾಗೂ ರಾತ್ರಿ 8 ಗಂಟೆಗೆ ಅನ್ನಸಂತರ್ಪಣೆ ಇರಲಿದೆ.

ಕೆ.ಎಸ್.ಈಶ್ವರಪ್ಪ ಬಂಧನಕ್ಕೆ ಆಗ್ರಹಿಸಿ ಕಾಂಗ್ರೆಸ್ ಪ್ರತಿಭಟನೆ

ಮಡಿಕೇರಿ,ಏ.18–ಬಿಜೆಪಿ ನೇತೃತ್ವದ ರಾಜ್ಯ ಸರ್ಕಾರ ವ್ಯಾಪಕ ಭ್ರಷ್ಟಾಚಾರದಲ್ಲಿ ತೊಡಗಿದ್ದು, ಭ್ರಷ್ಟಾಚಾರ ಪ್ರಕರಣಗಳನ್ನು ನ್ಯಾಯಾಂಗ ತನಿಖೆಗೆ ಒಪ್ಪಿಸಬೇಕು ಹಾಗೂ ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣದಲ್ಲಿ ಆರೋಪಿಯಾಗಿರುವ ಈಶ್ವರಪ್ಪರನ್ನು ಬಂಧಿಸಬೇಕು ಎಂದು ಆಗ್ರಹಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯಕರ್ತರು ನಗರದಲ್ಲಿ ಪ್ರತಿಭಟಿಸಿದರು.

ನಗರದ ಇಂದಿರಾ ಗಾಂಧಿ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಾ ಪ್ರತಿಭಟನಾ ಮೆರವಣಿಗೆ ತೆರಳಿದ ಪ್ರತಿಭಟನಾಕಾರರು, ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಅವರನ್ನು ಬಂಧಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕೆಪಿಸಿಸಿ ಕಾರ್ಯಾಧ್ಯಕ್ಷ ಧ್ರುವನಾರಾಯಣ್ ಮಾತನಾಡಿ, ಗುತ್ತಿಗೆದಾರ ಸಂತೋಷ್ ಪಾಟೀಲ್ ಪ್ರಕರಣದಲ್ಲಿ ಈಶ್ವರಪ್ಪ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದರೆ ಸಾಲದು, ಭ್ರಷ್ಟಾಚಾರ ನಿರ್ಮೂಲನೆ ಕಾಯ್ದೆಯಡಿ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜಾ ಉತ್ತಪ್ಪ ಮಾತನಾಡಿ, ಗುತ್ತಿಗೆದಾರ ಸಂತೋಷ್ ಸಾವಿನ ಪ್ರಕರಣದ ತನಿಖೆಯನ್ನು ರಾಜ್ಯ ಹೈಕೋರ್ಟ್‌ನ ಹಾಲಿ ನ್ಯಾಯಮೂರ್ತಿಗಳ ಉಸ್ತುವಾರಿಯಲ್ಲಿ ನಡೆಸಲು ಕ್ರಮ ಕೈಗೊಳ್ಳಬೇಕು. ಸಂತೋಷ್ ಪಾಟೀಲ್ ಕುಟುಂಬಕ್ಕೆ 1 ಕೋಟಿ ರೂ. ಪರಿಹಾರ ಹಾಗೂ ಅವರ ಪತ್ನಿಗೆ ಸರ್ಕಾರಿ ಉದ್ಯೋಗ ನೀಡಬೇಕು. ಮೃತರು ನಿರ್ವಹಿಸಿದ 108 ಕಾಮಗಾರಿಗಳ 4 ಕೋಟಿ ರೂ. ಬಿಲ್ ಪಾವತಿಸಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ವಿವಿಧ ಬೇಡಿಕೆಗಳ ಮನವಿ ಪತ್ರವನ್ನು ಪ್ರತಿಭಟನಾಕಾರರು, ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಸಲ್ಲಿಸಿದರು. ಕೆಪಿಸಿಸಿ ವೀಕ್ಷಕರಾದ ಮಂಜುಳಾ ನಾಯ್ದು, ಮಂಜುಳಾ ರಾಜ್, ಎಂಎಲ್‌ಸಿ ಶಾಂತೆಯಂಡ ವೀಣಾ ಅಚ್ಚಯ್ಯ, ಮಾಜಿ ಸಚಿವ ಬಿ.ಎ.ಜೀವಿಜಯ, ಪ್ರಮುಖರಾದ ಕೆ.ಪಿ.ಚಂದ್ರಕಲಾ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಸುರಯ್ಯ ಅಬ್ರಾರ್, ಪ್ರಧಾನ ಕಾರ್ಯದರ್ಶಿ ಮಿನಾಜ್ ಪ್ರವೀಣ್, ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ಎಂ.ಎ.ಉಸ್ಮಾನ್, ಸಾಮಾಜಿಕ ಜಾಲತಾಣದ ಅಧ್ಯಕ್ಷ ಹೊಸೂರು ಸೂರಜ್, ಜಿಲ್ಲಾ ಕಾಂಗ್ರೆಸ್ ವಕ್ತಾರ ಟಿ.ಈ.ಸುರೇಶ್, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮುನೀರ್ ಅಹಮ್ಮದ್, ಮಡಿಕೇರಿ ನಗರಾಧ್ಯಕ್ಷೆ ಫ್ಯಾನ್ಸಿ ಪಾರ್ವತಿ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿದ್ದರು.



ಭ್ರಷ್ಟಾಚಾರ ಮರೆ ಮಾಚಲು ಬಿಜೆಪಿಯಿಂದ ಅಶಾಂತಿ ಸೃಷ್ಟಿ

ಮಡಿಕೇರಿ: ಬಿಜೆಪಿ ಆಡಳಿತ ತನ್ನ ಭ್ರಷ್ಟಾಚಾರಗಳನ್ನು ಮರೆ ಮಾಚಲು ಧರ್ಮಾಧಾರಿತ ವಿಷಯಗಳನ್ನು ಮುಂದಿಟ್ಟು ಸಮಾಜದ ಅಶಾಂತಿಗೆ ಕಾರಣವಾಗುತ್ತಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಧ್ರುವನಾರಾಯಣ್ ಆರೋಪಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಇಂಡಿಯನ್ ಕರಪ್ಶನ್ ಸರ್ವೆ–2021'ರಲ್ಲಿ ದೇಶದಲ್ಲೇ ಕರ್ನಾಟಕದಲ್ಲಿ ಅತೀ ಹೆಚ್ಚು ಭ್ರಷ್ಟಾಚಾರ ನಡೆಯುತ್ತಿದೆ ಎನ್ನುವುದು ಸಾಬೀತಾಗಿದೆ. ವಿವಿಧ ಕ್ಷೇತ್ರಗಳ ಸಾಧನೆಯ ಮೂಲಕ ಪ್ರಗತಿಪರ ರಾಜ್ಯವಾಗಿ ಗುರುತಿಸಲ್ಪಡುತ್ತಿರುವ ಕರ್ನಾಟಕಕ್ಕೆ ಬಿಜೆಪಿ ನೇತೃತ್ವದ ಸರ್ಕಾರ ಭ್ರಷ್ಟ ಆಡಳಿತದ ಮೂಲಕ ಕಪ್ಪು ಚುಕ್ಕೆ ಇಟ್ಟಿದೆ ಎಂದು ಟೀಕಿಸಿದರು.



ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಕೆಂಪಣ್ಣ ಅವರು ನೇರವಾಗಿ ಶೇ.40ರಷ್ಟು ಕಮಿಷನ್ ಪಡೆಯುತ್ತಿರುವ ಬಗ್ಗೆ ಆರೋಪ ಮಾಡಿದ್ದಾರೆ. ಸೂಕ್ತ ಕ್ರಮ ಕೈಗೊಳ್ಳದಿದ್ದಲ್ಲಿ ದಾಖಲೆ ಬಿಡುಗಡೆ ಮಾಡುವುದಾಗಿ ಹೇಳಿದ್ದಾರೆ. ಆದರೆ ಬಿಜೆಪಿ ಸರ್ಕಾರದ ಯಾವೊಬ್ಬ ಸಚಿವ ಅಥವಾ ಶಾಸಕ ದಾಖಲೆ ಬಿಡುಗಡೆ ಮಾಡಿ ಎಂದು ಹೇಳುವ ಧೈರ್ಯ ತೋರುತ್ತಿಲ್ಲ. ಇದು ಭ್ರಷ್ಟಾಚಾರ ವ್ಯಾಪಕವಾಗಿ ಬೇರೂರಿರುವುದಕ್ಕೆ ಸಾಕ್ಷಿಯಾಗಿದೆ ಎಂದರು.

ಕೊಡಗು ಜಿಲ್ಲೆಯಲ್ಲಿ ಗುತ್ತಿಗೆದಾರರ ಸಂಘದ ಪ್ರಮುಖರು ಶಾಸಕರ ವಿರುದ್ಧ ಭ್ರಷ್ಟಾಚಾರದ ಗಂಭೀರ ಆರೋಪ ಮಾಡಿದ್ದಾರೆ. ಆದರೆ ಶಾಸಕರು ಸ್ಪಷ್ಟೀಕರಣ ಅಥವಾ ಕಾನೂನು ಹೋರಾಟ ನಡೆಸುವ ಮಾತನಾಡಿಲ್ಲ. ಧೈರ್ಯವಿದ್ದರೆ ಆರೋಪ ಮಾಡಿದವರ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಲಿ ಎಂದು ಸವಾಲು ಹಾಕಿದರು.

ಸುದ್ದಿಗೋಷ್ಠಿಯಲ್ಲಿ ಕೆಪಿಸಿಸಿ ವೀಕ್ಷಕರಾದ ಮಂಜುಳಾ ನಾಯ್ಡು, ಮಂಜುಳಾ ರಾಜ್, ವಿಧಾನ ಪರಿಷತ್ ಸದಸ್ಯೆ ಶಾಂತೆಯಂಡ ವೀಣಾ ಅಚ್ಚಯ್ಯ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ ಇದ್ದರು.

ಆರೋಗ್ಯ ಮೇಳದ ಸದ್ಬಳಕೆಗೆ ಸಂಸದರ ಸಲಹೆ



ಚಾಮರಾಜನಗರ, ಏ.18– ಸರ್ಕಾರ ಜನರ ಆರೋಗ್ಯದ ಕಾಳಜಿಯಿಂದ ಆರೋಗ್ಯ ಮೇಳ ಆಯೋಜಿಸುತ್ತಿದ್ದು, ಜನರು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಂಸದ ವಿ.ಶ್ರೀನಿವಾಸಪ್ರಸಾದ್ ತಿಳಿಸಿದರು.

ನಗರದ ಪೇಟೆ ಪ್ರೈಮರಿ ಶಾಲಾ ಆವರಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಆಯೋಜಿಸಲಾಗಿದ್ದ ತಾಲೂಕು ಮಟ್ಟದ ಆರೋಗ್ಯ ಮೇಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರು ಆರೋಗ್ಯವನ್ನು ತಪಾಸಣೆ ಮಾಡಿಸಿಕೊಳ್ಳಬೇಕು. ಎಷ್ಟೋ ಜನರು ಸಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸದೇ ಆರೋಗ್ಯ ತೀರ ಹದಗೆಟ್ಟಾಗ ಆಸ್ಪತ್ರೆಗೆ ಧಾವಿಸುತ್ತಾರೆ. ಇದರಿಂದ ಹಲವು ತೊಂದರೆಗಳನ್ನು ಎದುರಿಸಬೇಕಾಗುತ್ತದೆ. ಇದಕ್ಕೆ ಅವಕಾಶ ನೀಡದೇ ಕಾಲಕಾಲಕ್ಕೆ ಆರೋಗ್ಯ ತಪಾಸಣೆಗೆ ಒಳಗಾಗುವುದು ಒಳಿತು ಎಂದು ಸಲಹೆ ನೀಡಿದರು.

ಸರ್ಕಾರವು ಜನರ ಆರೋಗ್ಯದ ಬಗ್ಗೆ ತೀವ್ರ ಕಾಳಜಿ ವಹಿಸಿದ್ದು ಆರೋಗ್ಯ ಮೇಳಗಳನ್ನು ಆಯೋಜಿಸುತ್ತಿದೆ. ಆರೋಗ್ಯ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ತಿಳಿವಳಿಕೆ ನೀಡುತ್ತಿದೆ. ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಕಾರ್ಡ್‌ಗಳನ್ನು ವಿತರಿಸಿ ಚಿಕಿತ್ಸೆ ಪಡೆಯಲು ಅವಕಾಶ ಮಾಡಿಕೊಡುತ್ತಿದೆ. ಈ ಪ್ರಯೋಜನವನ್ನು ಜನತೆ ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಕೇಂದ್ರಪರಿಹಾರ ಸಮಿತಿ ಅಧ್ಯಕ್ಷ ಎಂ.ರಾಮಚಂದ್ರ ಮಾತನಾಡಿ, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ವ್ಯಾಪಕವಾಗಿ ಆರೋಗ್ಯ ಮೇಳವನ್ನು ತಾಲೂಕುಗಳಲ್ಲಿ ಆಯೋಜನೆ ಮಾಡಲಾಗುತ್ತಿದೆ. ಈ ಮೇಳವನ್ನು ಜನರು ಸದ್ಬಳಕೆ ಮಾಡಿಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.

ಜಿಪಂ ಸಿಇಓ ಕೆಎಂ.ಗಾಯತ್ರಿ ಮಾತನಾಡಿದರು. ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರು ಆರಂಭದಲ್ಲಿಯೇ ಆರೋಗ್ಯ ಮೇಳಕ್ಕೆ ಭೇಟಿ ನೀಡಿ ವೀಕ್ಷಿಸಿದರು. ಪ್ರತಿಯೊಂದು ಮಳಿಗೆಗಳಿಗೂ ಭೇಟಿ ನೀಡಿ ಜನರಿಗೆ ಕಲ್ಪಿಸಲಾಗಿರುವ ಆರೋಗ್ಯ ಸೌಲಭ್ಯಗಳ ಕುರಿತು ಮಾಹಿತಿ ಪಡೆದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಎಸ್.ಕಾತ್ಯಾಯಿನಿದೇವಿ, ಎಎಸ್‌ಪಿ ಕೆ.ಎಸ್.ಸುಂದರ್‌ರಾಜ್, ಜಿಪಂ ಮಾಜಿ ಉಪಾಧ್ಯಕ್ಷ ಶಿವಕುಮಾರ್, ಡಿಹೆಚ್‌ಓ ಡಾ.ಕೆ.ಎಂ.ವಿಶ್ವೇಶ್ವರಯ್ಯ, ಡಾ.ಕಾಂತರಾಜು, ಡಾ.ಮಹದೇವು, ಡಿವೈಎಸ್‌ಪಿ ಪ್ರಿಯದರ್ಶಿನಿ ಸಾಣೆಕೊಪ್ಪ, ನಗರಸಭೆ ಆಯುಕ್ತ ಕರಿಬಸವಯ್ಯ ಇತರರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೂ ಮುನ್ನ ನಗರದ ಚಾಮರಾಜೇಶ್ವರ ದೇವಾಲಯದ ಬಳಿ ಆರೋಗ್ಯ ಮೇಳದ ಜಾಗೃತಿಗಾಗಿ ಆಯೋಜಿಸಲಾಗಿದ್ದ ಸೈಕಲ್ ಜಾಥಾಗೆ ಹೆಚ್ಚುವರಿ ಜಿಲ್ಲಾಧಿಕಾರಿ ಎಸ್.ಕಾತ್ಯಾಯಿನಿ ದೇವಿ ಚಾಲನೆ ನೀಡಿದರು.

ಕುಮಾರಸ್ವಾಮಿ ಮೊದಲು ಗೆದ್ದು ತೋರಿಸಲಿ

ಹೆಚ್‌ಡಿಕೆ ಹೇಳಿಕೆಗೆ ಸಂಸದ ವಿ.ಶ್ರೀನಿವಾಸಪ್ರಸಾದ್ ವ್ಯಂಗ್ಯ

ಚಾಮರಾಜನಗರ, ಏ.18(ಎಸ್‌ಎಸ್)– ಮಣ್ಣಿಗೆ ಹೋಗುವುದರ ಒಳಗಾಗಿ ದಲಿತರೊಬ್ಬರನ್ನು ಮುಖ್ಯಮಂತ್ರಿ ಮಾಡುವುದಾಗಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳಿರುವುದು ಸಂತೋಷ. ಆದರೆ, ಮೊದಲು ಅವರು ಗೆದ್ದು ತೋರಿಸಲಿ. ಗೆದ್ದ ಮೇಲೆ ಅಲ್ಲವೇ ಮುಖ್ಯಮಂತ್ರಿಯ ಪ್ರಶ್ನೆ ಎಂದು ಸಂಸದ ವಿ.ಶ್ರೀನಿವಾಸ ಪ್ರಸಾದ್ ವ್ಯಂಗ್ಯವಾಡಿದರು.

'ಮಳವಳ್ಳಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಕುಮಾರಸ್ವಾಮಿ ನೀಡಿದ ಹೇಳಿಕೆಗೆ' ನಗರದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಜೆಡಿಎಸ್‌ನಲ್ಲಿ ಇರುವ ಮುಖಂಡರೆಲ್ಲಾ ಈಗ ಬಿಟ್ಟು ಹೋಗುತ್ತಿದ್ದಾರೆ. ಜಿ.ಟಿ.ದೇವೇಗೌಡ, ಗುಬ್ಬಿ ಶ್ರೀನಿವಾಸ್ ಮೊದಲಾದವರು ಪಕ್ಷ ತೊರೆಯುತ್ತಿದ್ದಾರೆ. ಇದೆಲ್ಲವೂ ಜನರಿಗೆ ಗೊತ್ತಿದೆ. ಜನರೇ ತೀರ್ಮಾನ ಮಾಡಲಿದ್ದಾರೆ. ಸಿ.ಎಂ.ಇಬ್ರಾಹಿಂ ಅವರು ಜೆಡಿಎಸ್‌ನ ರಾಜ್ಯಾಧ್ಯಕ್ಷರಾಗಿ ನೇಮಕವಾದ ತಕ್ಷಣ ಎಲ್ಲವೂ ಆಗಿ ಬಿಡುತ್ತದೆಯೇ? ಎಂದು ಪ್ರಶ್ನಿಸಿದರು.

ಸಚಿವ ಸಂಪುಟ ವಿಸ್ತರಣೆ ಬಗ್ಗೆ ನಾನು ಸಲಹೆ, ಸೂಚನೆ ನೀಡಲು ಹೋಗುವುದಿಲ್ಲ ಅವರು ಕೇಳುವುದೂ ಇಲ್ಲ. ಆದರೆ, ಮೈಸೂರು ಭಾಗಕ್ಕೆ ಸಚಿವ ಸ್ಥಾನ ಕೊಡುತ್ತೇವೆ ಎಂದು ಹೇಳಿರುವುದರಿಂದ ಖಂಡಿತ ಮೈಸೂರು ಭಾಗದವರು ಸಚಿವರಾಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಧರ್ಮವನ್ನು ಮನುಷ್ಯನ ಒಳಿತಿಗೆ ಉಪಯೋಗಿಸಬೇಕು. ಆದರೆ, ನಮ್ಮಲ್ಲಿ ಧರ್ಮದ ವೈಭವೀಕರಣ ನಡೆಯುತ್ತಿದೆ. ಧರ್ಮದ ಅಫೀಮನ್ನು ನಾವು ತಿಂದಿದ್ದೇವೆ. ಅದು ನಶೆ ಏರಿ ಏನೇನೋ ಮಾಡಿಸುತ್ತಿದ್ದು ದಾರಿ ತಪ್ಪಿಸುತ್ತಿದೆ ಎಂದ ಅವರು, ನಮ್ಮದು ಜಾತ್ಯತೀತ ರಾಷ್ಟ್ರ. ಎಲ್ಲಾ ಧರ್ಮಗಳನ್ನು, ಅವುಗಳ ವಿಧಿ–ವಿಧಾನಗಳನ್ನು ನಾವು ಗೌರವಿಸಬೇಕು. ರಾಜ್ಯದಲ್ಲಿ ಇತ್ತೀಚೆಗೆ ನಡೆದಿರುವ ಘಟನೆಗಳನ್ನು ನೋಡಿದರೆ ವಿಷಾದವಾಗುತ್ತದೆ ಎಂದರು.

ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಸಿ.ಎ.ಮಹದೇವಶೆಟ್ಟಿ

ಚಾಮರಾಜನಗರ, ಏ.18(ಎಸ್‌ಎಸ್)– ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ನಗರದ ಉಪ್ಪಾರ ಬಡಾವಣೆಯ ಸಿ.ಎ.ಮಹದೇವಶೆಟ್ಟಿ ಅವರನ್ನು ನೇಮಿಸಲಾಗಿದೆ.



ತಾವು ಪಕ್ಷದ ಸಬಲೀಕರಣ, ಸಂಘಟನೆ, ಬಲವರ್ಧನೆ ಕಾರ್ಯದಲ್ಲಿ ತೊಡಗಿಸಿಕೊಳ್ಳುವಂತೆ ಪಕ್ಷದ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷರಾದ ಎಂ.ಡಿ.ಲಕ್ಷ್ಮೀನಾರಾಯಣ ಅವರು ಆದೇಶದಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾಗಿ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ನಿರ್ದೇಶಕರಾಗಿ, ಪುರಸಭಾ ಸದಸ್ಯರಾಗಿ ಹಾಗೂ ಕನ್ನಡ ಪರ ಸಂಘಟನೆಗಳಲ್ಲಿ ಗುರುತಿಸಿಕೊಂಡಿರುವ ಉಪ್ಪಾರ ಸಮಾಜದ ಮುಖಂಡರಾಗಿರುವ ಸಿ.ಎ.ಮಹದೇವಶೆಟ್ಟಿ ಅವರ ಸೇವೆಯನ್ನು ಗುರುತಿಸಿ ಅವರನ್ನು ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ನೇಮಿಸಲಾಗಿದೆ.

ಶ್ರೀಗುರು ಸಿದ್ದೇಶ್ವರ ಜಾತ್ರೆ ಸಂಪನ್ನ

ಕೊಳ್ಳೇಗಾಲ, ಏ.18(ನಾಗೇಂದ್ರಸ್ವಾಮಿ)– ತಾಲೂಕಿನ ಹೊಂಡರಬಾಳು ಗ್ರಾಮದಲ್ಲಿ ನಡೆಯುತ್ತಿದ್ದ ಮೂರು ದಿನಗಳ ಶ್ರೀಗುರು ಸಿದ್ಧೇಶ್ವರ ಜಾತ್ರಾ ಮಹೋತ್ಸವವು ಭಾನುವಾರ ಮುಕ್ತಾಯಗೊಂಡಿತ್ತು. ಭಾನುವಾರ ಕೊಂಡೋತ್ಸವ ಜರುಗಿತು. ಸಾವಿರಾರು ಭಕ್ತರು ಕೊಂಡೋತ್ಸವದಲ್ಲಿ ಪಾಲ್ಗೊಂಡಿದ್ದರು. ಶನಿವಾರ ರಾತ್ರಿಯಿಂದ ಉತ್ಸವಮೂರ್ತಿಯನ್ನು ಅಲಂಕೃತಗೊಂಡಿದ್ದ ಪಲ್ಲಕ್ಕಿ ಮೇಲೆ ಇಟ್ಟು ಗ್ರಾಮದಲ್ಲಿ ಉತ್ಸವ ನಡೆಸಲಾಯಿತು.

ಜಾತ್ರೆಯಲ್ಲಿ ನಾಡಗೌಡ ಮಹೇಶಪ್ಪ, ಯಜಮಾನರಾದ ಸಿದ್ದಪ್ಪಸ್ವಾಮಿ, ನಾರಾಯಣ, ಚಿಕ್ಕವೀರಶೆಟ್ಟಿ, ಗಿರಿಗೌಡ, ಆನಂದೇಗೌಡ, ನಾಗೇಶ್, ಬಸವರಾಜೇ ಅರಸ್, ಮೋಹನ್, ಮಾದೇಶ್, ಹರ್ಷ, ರಾಮಣ್ಣ, ಸತ್ತಿಗೆ ಮಧು, ಅಶ್ವಿನ್ ಸೇರಿದಂತೆ ಗ್ರಾಪಂ ಅಧ್ಯಕ್ಷ, ಉಪಾಧ್ಯಕ್ಷ, ಸದಸ್ಯರು ಹಾಗೂ ಗ್ರಾಮಸ್ಥರು ಇದ್ದರು.



ಗುಂಡಾಲ್‌ನಲ್ಲಿ 'ಜನತಾ ಜಲಧಾರೆ ಯಾತ್ರೆ'ಗೆ ಚಾಲನೆ



ಹನೂರು,ಏ.18– ರಾಜ್ಯದಲ್ಲಿ ಪ್ರಾದೇಶಿಕ ಪಕ್ಷ ಜೆಡಿಎಸ್ ಪಕ್ಷದ ಅಲೆ ಇದ್ದು ಹೋದ ಕಡೆಯಲೆಲ್ಲಾ ಜನರು ಅಭೂತಪೂರ್ವ ಬೆಂಬಲ ವ್ಯಕ್ತಪಡಿಸುತ್ತಿರುವುದನ್ನು ನೋಡಿದರೆ ಜೆಡಿಎಸ್ ಸ್ವತಂತ್ರವಾಗಿ ಅಧಿಕಾರಕ್ಕೆ ಬಂದು ಕುಮಾರಣ್ಣ ಮುಖ್ಯಮಂತ್ರಿಯಾಗುವುದು ಖಚಿತವಾಗುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ತಿಳಿಸಿದರು.

ತಾಲೂಕಿನ ಗುಂಡಾಲ್ ಜಲಾಶಯದಲ್ಲಿ ಪೂಜೆ ಸಲ್ಲಿಸಿ, 'ಜನತಾ ಜಲಧಾರೆ ಯಾತ್ರೆ'ಗೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯವು ರೈತರಿಂದ ಕೂಡಿದ ಗ್ರಾಮೀಣ ಪ್ರದೇಶವಾಗಿದ್ದು, ಅನ್ನದಾತ ಸುಖವಾಗಿರಬೇಕು ಎಂಬ ಉದ್ದೇಶದಿಂದ ದೇವೇಗೌಡರು 90 ವರ್ಷ ಇಳಿ ವಯಸ್ಸಿನಲ್ಲಿಯೂ ರೈತರಿಗೆ ಅನ್ಯಾಯವಾಗ ಬಾರದೆಂದು ರಾಜ್ಯ ಸಭೆಯಲ್ಲಿ ಧ್ವನಿ ಎತ್ತಿದರೂ, ಮಾತಾಡಲು ಅವಕಾಶ ನೀಡಲಿಲ್ಲ. ಆದ್ದರಿಂದಲೇ ಅವರನ್ನು 'ಮಣ್ಣಿನ ಮಗ', 'ನೀರಿನ ಭೀಷ್ಮ' ಎನ್ನುತ್ತಾರೆ ಎಂದರು.

ಆಂಧ್ರಪ್ರದೇಶ, ತಮಿಳುನಾಡು, ಪಶ್ಚಿಮ ಬಂಗಾಳಗಳಲ್ಲಿ ಇರುವಂತೆ ರಾಜ್ಯದಲ್ಲಿ ಪ್ರಾದೇಶಿಕ ಪಕ್ಷ ಜೆಡಿಎಸ್ ಅನ್ನು ಬೆಂಬಲಿಸಿ. ನಾನು ಚಾಮರಾಜನಗರ ಜಿಲ್ಲೆಗೆ ಕೈಗಾರಿಕೆಗಳು ಹೆಚ್ಚಾಗಿ ಬರಬೇಕು ಇಲ್ಲಿನ ನಿರುದ್ಯೋಗಿ ಯುವಕರಿಗೆ ಕೆಲಸ ಸಿಗಬೇಕು. ಚಾಮರಾಜನಗರ ಮಾದರಿ ಜಿಲ್ಲೆಯಾಗಬೇಕು ಎಂದು ಆಸೆ ಪಟ್ಟವನು, ಈ ಭಾಗದಲ್ಲಿ ಮಂಜುನಾಥರವರನ್ನು ಗೆಲ್ಲಿಸಿಕೊಟ್ಟು ಕುಮಾರಣ್ಣ ಮುಖ್ಯಮಂತ್ರಿಯಾಗಲು ಸಹಕರಿಸಬೇಕು ಎಂದು ಮನವಿ ಮಾಡಿದರು.

ಟಿ. ನರಸೀಪುರ ಕ್ಷೇತ್ರದ ಶಾಸಕ ಅಶ್ವಿನ್ ಕುಮಾರ್ ಮಾತನಾಡಿ, ರಾಜ್ಯದ ಜಲಾಶಯಗಳಲ್ಲಿ ಎಷ್ಟೆಷ್ಟು ನೀರಿದೆ. ಎಲ್ಲಿ ಪೋಲಾಗುತ್ತಿದೆ. ಯಾವ ರೀತಿ ನಿರ್ವಹಣೆ ಮಾಡಬೇಕು ಎಂದು ಗೊತ್ತಿರುವುದು ದೇವೇಗೌಡರಿಗೆ ಮಾತ್ರ ಎಂದರೆ ಅತಿಶಯೋಕ್ತಿಯಾಗಬಾರದು. ಪ್ರಾದೇಶಿಕ ಪಕ್ಷ ಜೆಡಿಎಸ್‌ಗೆ ಒಂದು ಬಾರಿ ಸ್ವತಂತ್ರ ಅಧಿಕಾರ ಕೊಡಲು ಮನಸ್ಸು ಮಾಡಿ ಎಂದು ಮನವಿ ಮಾಡಿದರು.

ಚಾಮರಾಜನಗರ ಜಿಲ್ಲೆ ಜೆಡಿಎಸ್ ಅಧ್ಯಕ್ಷ ಮಂಜುನಾಥ್ ಮಾತನಾಡಿ, ಕಾವೇರಿ ನೀರು ಹಂಚಿಕೆಯಲ್ಲಿ ರಾಜ್ಯಕ್ಕೆ ಅನ್ಯಾಯವಾಗಿದೆ. ಅವರ ವಿರುದ್ಧವೇ ದೇವೇಗೌಡರ ಹೋರಾಟವಾಗಿದೆ. ನೀರು ಮನುಷ್ಯನ ಜೀವನಾಡಿ ಪ್ರತಿಯೊಬ್ಬರು ಯೋಚನೆ ಮಾಡಬೇಕು ಈ ಬಾರಿ ಕುಮಾರಣ್ಣ ಮುಖ್ಯಮಂತ್ರಿ ಆಗುವುದು ಸತ್ಯ ಎಂದರು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ಜಯಪಾಲ್, ಭರಣಿ, ವಕೀಲ ಗಂಗಾಧರ್ ಗೌಡ, ಮುಖಂಡರು ಹಾಜರಿದ್ದರು.

ಚಾಮರಾಜನಗರ ತಾಲೂಕಿನ ಮುತ್ತಿಗೆ ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ 131ನೇ ಜನ್ಮದಿನವನ್ನು ಸಂಭ್ರಮದಿಂದ ಆಚರಿಸಲಾಯಿತು. ಚಿತ್ರ: ಬದನಗುಪ್ಪೆ ಮಲ್ಲಣ್ಣ



ಗುಂಡ್ಲುಪೇಟೆಯಲ್ಲಿ 'ವಿಷು ಹಬ್ಬ'ದ ಸಂಭ್ರಮ



ಗುಂಡ್ಲುಪೇಟೆ, ಏ.18(ಸೋಮ್.ಜಿ)– ಗುಂಡ್ಲುಪೇಟೆ ತಾಲೂಕಿನಲ್ಲಿ ನೆಲೆಸಿರುವ ಕೇರಳ ಮೂಲದವರು ತಮ್ಮ ಮನೆಗಳಲ್ಲಿ ಶ್ರೀಕೃಷ್ಣನ ಪೂಜೆ ಮಾಡುವ ಮೂಲಕ 'ವಿಷು ಹಬ್ಬ'ವನ್ನು ಸಂಭ್ರಮದಿಂದ ಆಚರಿಸಿದರು.

ಮನೆಗಳಲ್ಲಿ ಸಾಂಪ್ರದಾಯಿಕ ಬಟ್ಟೆಗಳನ್ನು ಧರಿಸಿದ ಮಹಿಳೆಯರು ತಮ್ಮ ಮನೆಗಳಲ್ಲಿ ಶ್ರೀಕೃಷ್ಣನ ವಿಗ್ರಹವನ್ನು ಪ್ರತಿಷ್ಠಾಪಿಸಿ, ಫಲ ಪುಷ್ಪಗಳನ್ನು ಅರ್ಪಿಸಿ ಪೂಜೆ ಸಲ್ಲಿಸಿದರು.

ಉತ್ತಮ ಮಳೆ: ಕೃಷಿ ಚಟುವಟಿಕೆ ಆರಂಭ



ಬೇಗೂರು, ಏ.18(ಕಿರಣ್)– ಗುಂಡ್ಲುಪೇಟೆ ತಾಲೂಕಿನ ಬೇಗೂರು ಸುತ್ತಮುತ್ತ ಕಳೆದ ನಾಲ್ಕೈದು ದಿನಗಳಿಂದ ಉತ್ತಮ ಮಳೆಯಾಗುತ್ತಿದ್ದು, ಈ ಭಾಗದ ರೈತರು ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದಾರೆ.

ರೈತರು ತಮ್ಮ ಜಮೀನಿನಲ್ಲಿ ಉಳುಮೆ ಆರಂಭಿಸಿದ್ದಾರೆ. ಇದರಿಂದ ಎತ್ತು ಗಾಡಿಗಳು ಹಾಗೂ ಟ್ರ್ಯಾಕ್ಟರ್‌ಗಳಿಗೆ ಬೇಡಿಕೆ ಹೆಚ್ಚಾಗಿದೆ. ಮಳೆ ಬೀಳುತ್ತಿದ್ದಂತೆ ಸೂರ್ಯಕಾಂತಿ, ಜೋಳ ಹಾಗೂ ಮುಸುಕಿನ ಜೋಳದ ಬಿತ್ತನೆ ಕಾರ್ಯ ಆರಂಭವಾಗುತ್ತಿದೆ.

ಮೈಸೂರು ಮಿತ್ರ ಮಂಗಳವಾರ 19 ಏಪ್ರಿಲ್ 2022



ಅಮೆರಿಕಾದ ಫ್ಲೋರಿಡಾ ಯೋಗ ಸಂಸ್ಕೃತ ವಿಶ್ವವಿದ್ಯಾನಿಲಯ ಸಮಿತಿ ಶಿಫಾರಸ್ಸಿನ ಅನ್ವಯ ಕರ್ನಾಟಕ ರಾಜ್ಯದ ನಿವೃತ್ತ ಡಿಜಿಪಿ ಓಂಪ್ರಕಾಶ್ ಅವರಿಗೆ ಗೌರವ ಡಾಕ್ಟರೇಟ್ ಅನ್ನು ಆದಿಚುಂಚನಗಿರಿ ಮಠದ ಮುಖ್ಯಸ್ಥರಾದ ಶ್ರೀ ನಿರ್ಮಲಾ ನಂದನಾಥ ಸ್ವಾಮೀಜಿ ಹಾಗೂ ಮಂತ್ರಾಲಯದ ಶ್ರೀ ಸುಭುದೇಂದ್ರ ಸ್ವಾಮೀಜಿ ಕಳೆದ ಶನಿವಾರ ಬೆಂಗಳೂರಲ್ಲಿ ನಡೆದ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಪ್ರದಾನ ಮಾಡಿದರು.

ಹೆಚ್ಚುವರಿಯಾಗಿ 1.14 ಲಕ್ಷ ಮೆಟ್ರಿಕ್ ಟನ್ ರಾಗಿ ಖರೀದಿಗೆ ತೀರ್ಮಾನ

ಬೆಂಗಳೂರು, ಏ.18– ಕನಿಷ್ಠ ಬೆಂಬಲ ಯೋಜನೆಯಡಿ ಸರ್ಕಾರ ಹೆಚ್ಚುವರಿಯಾಗಿ 1.14 ಲಕ್ಷ ಮೆಟ್ರಿಕ್ ಟನ್ ರಾಗಿ ಖರೀದಿ ಮಾಡಲು ತೀರ್ಮಾನ ಮಾಡಿದೆ ಎಂದು ಸಿಎಂ ಬಸವರಾಜ ಬೊಮ್ಮಾಯಿ ತಿಳಿಸಿದರು. ವಿಧಾನಸೌಧದ ತಮ್ಮ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಕೆಲವು ಜಿಲ್ಲೆಗಳಲ್ಲಿ ರಾಗಿ ಖರೀದಿ ಮಾಡಬೇಕೆಂಬ ರೈತರ ಬೇಡಿಕೆಯ ಮೇರೆಗೆ ಈಗಾಗಲೇ 2.1 ಲಕ್ಷ ಟನ್ ರಾಗಿ ಖರೀದಿ ಮಾಡಿರುವ ಜೊತೆಗೆ ಹೆಚ್ಚುವರಿಯಾಗಿ ಸರ್ಕಾರ ಖರೀದಿ ಮಾಡುತ್ತಿದೆ. ಇದಕ್ಕೆ ಒಟ್ಟು 487 ಕೋಟಿ ರೂ.ಗಳ ವೆಚ್ಚವಾಗಲಿದೆ ಎಂದರು.

ಒಂದನೇ ಪುಟದಿಂದ

ಭವಿಷ್ಯ ನಿರ್ಧಾರ

ಕರ್ನಾಟಕದ ಬಗ್ಗೆ ದೆಹಲಿಯಲ್ಲಿ ವರಿಷ್ಠರ ವಿಶೇಷ ಸಭೆ ನಡೆಯುತ್ತದೆ. ಆ ಸಭೆಯ ನಂತರವೇ ಎಲ್ಲವೂ ತೀರ್ಮಾನವಾಗುತ್ತವೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಪಕ್ಷ ಮರಳಿ ಅಧಿಕಾರಕ್ಕೆ ಬರಬೇಕು ಎಂಬುದು ನಮ್ಮ ಗುರಿ. ಹಾಗೆ ಅಧಿಕಾರಕ್ಕೆ ಬಂದರೆ 2024ರ ಲೋಕಸಭಾ ಚುನಾವಣೆಯಲ್ಲಿ ಪಕ್ಷ ದೊಡ್ಡ ಸಂಖ್ಯೆಯ ಸ್ಥಾನಗಳನ್ನು ಗೆಲ್ಲಬಹುದು ಎಂಬುದು ನಮ್ಮ ಉದ್ದೇಶ. ಆದರೆ 2024 ರ ಲೋಕಸಭಾ ಚುನಾವಣೆಯಲ್ಲಿ ದೊಡ್ಡ ಸಂಖ್ಯೆಯ ಸ್ಥಾನಗಳನ್ನು ಗೆಲ್ಲಲು ಪೂರಕವಾಗಿ 2023ರ ವಿಧಾನ ಸಭಾ ಚುನಾವಣೆಯಲ್ಲಿ ಸ್ವಯಂಬಲದ ಮೇಲೆ ಅಧಿಕಾರಕ್ಕೆ ಬರುವ ಸಾಧ್ಯತೆಗಳೇ ಕ್ಷೀಣವಾಗಿವೆ ಎಂದು ನಡ್ಡಾ ಹೇಳಿದ್ದಾರೆ ಎನ್ನಲಾಗಿದೆ. ಇದಾದ ನಂತರ ಬಸವರಾಜ ಬೊಮ್ಮಾಯಿ ಸರ್ಕಾರದ ಭವಿಷ್ಯದ ಬಗ್ಗೆ ಬಿಜೆಪಿಯ ಒಳವಲಯಗಳಲ್ಲಿ ಭಿನ್ನ ಭಿನ್ನ ಧ್ವನಿಗಳು ಕೇಳುತ್ತಿದ್ದು ಮುಂದೇನಾಗಲಿದೆ ಎಂಬ ಬಗ್ಗೆ ವ್ಯಾಪಕ ಚರ್ಚೆ ಶುರುವಾಗಿದೆ.

ಕದ್ದ ಮಾಲಲ್ಲವೇ?

ಹಾದಿಬೀದಿಯಲ್ಲಿ ಜಾಗಟೆ ಹೊಡೆಯುತ್ತಿದ್ದೀರಲ್ಲ? ಇದ್ಯಾವ ಸೀಮೆ ರಾಜಕೀಯ. ಬಹಿರಂಗದಲ್ಲಿ ಮಾತ್ರ ಬಿಜೆಪಿ ಕೋಮುವಾದಿ ಅಂತರಂಗದಲ್ಲಿ ಅದಕ್ಕೆ ನೀವು ಅಡ್ಜಸ್ಟ್‌ಮೆಂಟ್‌ವಾದಿ ರಾಜಕೀಯ ಊಸರವಳ್ಳಿ, ಸಿದ್ಧಕಲಾ ನಿಪುಣನೇ.. ನಿಮ್ಮ ರಾಜಕೀಯ ಲೀಲೆಗಳು ಒಂದಾ ಎರಡಾ. 2008–2009; ಶಾಸಕರ ಖರೀದಿ ಚಾಪ್ಟರ್ 1. ಆಗ 8 ವಿಧಾನಸಭೆ ಕ್ಷೇತ್ರಗಳಿಗೆ ಉಪ ಚುನಾವಣೆ. ದಲಿತ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರನ್ನು ಪ್ರತಿಪಕ್ಷ ನಾಯಕ ಸ್ಥಾನದಿಂದ ಕಿತ್ತೆಸೆಯಲು ಬಿಜೆಪಿ ಜತೆ ಡೀಲ್ ಕುದುರಿಸಿಕೊಂಡು ಡಿಂಗ್ ಡಾಂಗ್ ಹಾಡಿದ್ದು ಯಾರಯ್ಯ ಹೆಸರಿನಲ್ಲಿ ರಾಮ ಉಂಡ ಮನೆಗೆ ಪಂಗನಾಮ ಸ್ವಯಂ ಘೋಷಿತ ಸತ್ಯಹರಿಶ್ಚಂದ್ರ.

ಆಪರೇಷನ್ ಕಮಲಕ್ಕೆ ಕೈ ಜೋಡಿಸಿದ್ದಕ್ಕೆ ದಕ್ಷಿಣೆಯಾಗಿ ಮುಟ್ಟಿದ ಹಣವೆಷ್ಟು ಕೋಟಿಗಳ ಗಂಟು ತರಲು ಯಾರನ್ನು ಕಳಿಸಿದ್ದೀರಿ, ಆ ಹಣ ಏನಾಯಿತು, ಎಲ್ಲಿಗೆ ಹೋಯಿತು. ಚುನಾವಣೆಗೆ ಖರ್ಚು ಮಾಡಿದಿರಾ, ಇಲ್ಲಾ.. ಜೇಬಿಗಿಳಿಸಿ ಜಲ್ಸಾ ಮಾಡಿದಿರಾ? ಅದು ರಾಮನ ಲೆಕ್ಕದಲ್ಲಿದಿಯಾ ಅಥವಾ..ಕೃಷ್ಣನ ಲೆಕ್ಕದಲ್ಲಿಯಾ. ಆಪರೇಷನ್ ಕಮಲ ಹಣದ ಕಥಾಪ್ರಸಂಗ ರೋಚಕ ಸಿದ್ದಸಿನಿಮಾ ಎಂಬ ಬಗ್ಗೆ ಅನುಮಾನ ಇಲ್ಲ. ಅದಕ್ಕೆ ಕಥೆ, ಚಿತ್ರಕಥೆ, ನಿರ್ದೇಶನ, ಹಿಮ್ಮೇಳ–ಮುಮ್ಮೇಳ ಎಲ್ಲವೂ ನಿಮ್ಮದೆ ಧೈರ್ಯವಿದ್ದರೆ ಅದರ ಬಗ್ಗೆ ಮಾತನಾಡಿ. ಕನ್ನಡಿಗರೆಲ್ಲರಿಗೂ ನಿಮ್ಮ ಕಪಟತನದ ಪರಿಚಯವಾಗಲಿ.

ಆಪರೇಷನ್ ಕಮಲದ ಬಾಬ್ತಿನ ಹಣ ಸ್ವೀಕರಿಸಿ ನಿಮಗೆ ತಂದುಕೊಟ್ಟ ನಿಮ್ಮ ಆ ಹಳೆಯ ಸ್ನೇಹಿತರೇ ಸ್ವತಃ ನನ್ನ ಬಳಿ ಬಿಚ್ಚಿಟ್ಟ ಕಟು ಸತ್ಯವಿದು! ಎಷ್ಟೇ ಆದರೂ, ಸತ್ಯ ನಿಮಗೆ ಅಪಥ್ಯ ಅಲ್ಲವೇ ಕಳ್ಳಬೆಕ್ಕು ಕದ್ದು ಹಾಲು ಕುಡಿದರೆ ಗೊತ್ತಾಗುವುದಿಲ್ಲ ಎಂಬ ಹುಂಬುತನವೇ? ಅಬ್ಬಬ್ಬಾ.. ನಿಮಗೆ ನೀವೇ ಸಾಟಿ. ಪಾಪ.. ಕಾಂಗ್ರೆಸ್ ಸುಳ್ಳುರಾಮಯ್ಯನ ಸುಳ್ಳುಗಳ ಸುಪ್ಪತ್ತಿಗೆಯ ಮೇಲೆ ಮೈಮರೆತು ತೇಲುತ್ತಿದೆ. ಮುಳುಗುವೆ ಎನ್ನುವ ಅರಿವೂ ಆ ಪಕ್ಷಕ್ಕಿಲ್ಲ. ಮುಳುಗುವ ಹಡಗಿನ ಕ್ಯಾಪ್ಟನ್‌ಗೆ ಬಿಜೆಪಿ ಬಾಲಂಗೋಚಿ ಸಿದ್ಧಹಸ್ತನ ಅಡ್ಜೆಸ್ಟ್‌ಮೆಂಟ್ ರಾಜಕಾರಣ & ಹಣಕ್ಕೆ ಮಾರಿಕೊಂಡ ಆ ಸುಪಾರಿ ಆಟಗಾರ ತನ್ನ ಕೈಕಚ್ಚುತ್ತಿದ್ದಾನೆ ಎಂಬ ಅರಿವೇ ಇಲ್ಲ.

ಈ ದೇಶದಲ್ಲಿ ಪ್ರಜಾಪ್ರಭುತ್ವ, ಸಂವಿಧಾನ ಉಳಿಯಬೇಕಾದರೆ ಕಾಂಗ್ರೆಸ್ ಪಕ್ಷವನ್ನು ಕಿತ್ತೊಗೆಯಬೇಕು ಎಂದಿದ್ದು ಯಾರಪ್ಪಾ ಇದು ಮಾತೃಪಕ್ಷದ ಟರ್ಮಿನೇಟರಯ್ಯನ ಮನ್ ಕೀ ಬಾತ್ ಹೃದಯದಲ್ಲೇ ಹೆಪ್ಪುಗಟ್ಟಿದ್ದ ಕಾರ್ಕೋಟಕ ವಿಷವನ್ನೇ ಸ್ವಪಕ್ಷದ ಮೇಲೆ ಕಾರಿಕೊಂಡ ನೀವು ಈಗ ಯಾವ ಟೀಮು ಬಿಜೆಪಿ ಬೀ ಟೀಮು ತಾನೇ. ದೇವೇಗೌಡರ ನೈತಿಕತೆ ಬಗ್ಗೆ ಪ್ರಶ್ನಿಸುವ ಸಿದ್ಧಹಸ್ತನೇ, ನೀವೇ ಪರ್ಸಂಟೇಜ್ ವ್ಯವಹಾರದ ಪಿತಾಮಹ, ಆಪ್ತಶಾಸಕರಿಗೆ ಮೀಟಿಂಗ್‌ಗೆ ಇಂತಿಷ್ಟು ಎಂದು ಕೊಟ್ಟು ಕಮಿಷನ್ ಹೊಡೆದ ಕಥೆ, ಕಾದಂಬರಿ ಬರೆಯುವಷ್ಟಿದೆ. ಅರ್ಕಾವತಿ ರೀಡೂ ರಿಂಗ್‌ಮಾಸ್ಟರ್ ಆಗಿ ಅಡ್ಡಡ್ಡ ನುಂಗಿ ಕೆಂಪಣ್ಣ ಆಯೋಗದ ಕೃಪೆಯಿಂದ ಪಾರಾದ ನಿಮ್ಮ ಯೋಗ್ಯತೆ ನನಗೆ ಗೊತ್ತಿಲ್ಲವೇ.

2018ರಲ್ಲಿ ಒಳ್ಳೇ ಆಡಳಿತ ನಡೆಸಲೆಂದು ಕುಮಾರಸ್ವಾಮಿಗೆ ಅಧಿಕಾರ ಕೊಟ್ಟೆವು ಎಂದಿದ್ದೀರಿ. ಆ ಮುನ್ನ 5 ವರ್ಷ ಕೆಟ್ಟ ಆಡಳಿತ ಕೊಟ್ಟೆ ಎಂದು ನೀವೇ ಒಪ್ಪಿಕೊಂಡ ಹಾಗಾಯಿತಲ್ಲ. ಜೆಡಿಎಸ್ 30 ಸೀಟಿನ ಪಕ್ಷವಲ್ಲ,123 ಕ್ಷೇತ್ರಗಳ ಸವಾಲು ಸ್ವೀಕರಿಸಿ ಹೊರಟ ಪಕ್ಷ. ಇದು ಗೊತ್ತಾಗಿಯೇ ಪಕ್ಷಪಾತ ಬಂದ ಹಾಗೆ ನೀವು ಚಡಪಡಿಸುತ್ತಿದ್ದೀರಿ!!

ಕದ್ದಮಾಲು ಕೈಗೆ ಕಟ್ಟಿ ಸಿಎಂ ಕುರ್ಚಿಯಲ್ಲಿ ನಿರ್ಲಜ್ಜವಾಗಿ ಮೆರೆದ ನಿಮ್ಮ ಕತ್ತಲೆ ಚಾರಿತ್ರ್ಯ ಕೊಳೆತು ನಾರುತ್ತಿದೆ. ನಿಮ್ಮ ಕೈಲಿ ಮಿರಮಿರ ಮಿಂಚಿದ ಹ್ಯೂಬ್ಲೆಟ್ ವಾಚ್ ಎಲ್ಲಿಂದಾ ಬಂತು, ಕಳ್ಳಮಾಲು ಮಾಲೀಕನಿಗೆ ಸೇರದೆ ನಿಮ್ಮ ಅಮೃತಹಸ್ತ ಅಲಂಕರಿಸಿದ್ದು ಹೇಗೆ? ಆ ವಾಚ್ ತಂದ್ಕೊಟ್ಟ ಪೊಲೀಸಯ್ಯನಿಗೆ ವರ್ಗಾವಣೆ ಕೃಪೆ ಕರುಣಿಸಿದಿರಾ. ಈಶ್ವರಪ್ಪ ವಿಷಯದಲ್ಲಿ ಡಿವೈಎಸ್ಪಿ ಗಣಪತಿ ಅವರ ಹೆಸರು ಎಳೆದು ತಂದಿದ್ದೀರಿ. ನಾನು ಹೇಳಿದ್ದು ಕಲ್ಲಪ್ಪಹಂಡೀಭಾಗ್ ಬಗ್ಗೆ. ಹಿಂದುಳಿದ ಸಮುದಾಯಕ್ಕೆ ಸೇರಿದ್ದ ಆ ಪ್ರಾಮಾಣಿಕ ಅಧಿಕಾರಿಗೆ ಇನ್ನಿಲ್ಲದ ಕಿರುಕುಳ ಕೊಟ್ಟು ಮುಗಿಸಿದಿರಿ. ಇಲಾಖೆಯಲ್ಲಿ ಒಳ್ಳೇ ಭವಿಷ್ಯವಿದ್ದ ಅವರ ಜೀವಕ್ಕೆ ಎರವಾದಿರಿ. ಅವರ ಸಾವಿಗೆ ನಿಮ್ಮ ಸರಕಾರ ಕಾರಣ. ಅಲ್ಲವೇ. ನಿಮ್ಮ ಕತ್ತಲೆ ಮುಖವಾಡ & ಪರ್ಸಂಟೇಜ್ ಪಲ್ಲಕ್ಕಿಯಲ್ಲಿ ಪವಡಿಸಿದ ನಿಮ್ಮ ನಿಜಬಣ್ಣ ಇನ್ನೇನು ಕಳಚಿಬೀಳಲಿದೆ. ನಿಮ್ಮ ಸುಳ್ಳು ನಿಮ್ಮನ್ನೇ ಸುಡುವ ಕಾಲ ಸನಿಹದಲ್ಲಿದೆ. ವಿನಾಶಕಾಲೇ ವಿಪರೀತ ಸುಳ್ಳು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಸಿದ್ದರಾಮಯ್ಯ ಅವರಿಗೆ ಚಾಟಿ ಬೀಸಿದ್ದಾರೆ.

ಕಡ್ಲೆಪುರಿ ತಿನ್ನುತ್ತಿದ್ದಾರಾ?!

ಅಫೆನ್ಸ್ ಎಂದರು. ಪಿಎಸ್ಐ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂದು ಕೆಲವರು ನನ್ನ ಬಳಿ ಕೂಡ ಬಂದು ಹೇಳಿದ್ದರು. ನಾನು ಸಂಬಂಧಪಟ್ಟವರಿಗೆ ತನಿಖೆಗೆ ಹೇಳಿದ್ದೆ. ತನಿಖೆ ನಡೆಯುತ್ತಿದ್ದು, ಯಾರು ತಪ್ಪಿತಸ್ಥರಿದ್ದರೂ ಅವರಿಗೆ ಶಿಕ್ಷೆಯಾಗಲಿ ಎಂದರು.

ಮಾಜಿ ಸಚಿವ ಈಶ್ವರಪ್ಪ ಹಾಗೂ ಬಿಜೆಪಿ ಸರ್ಕಾದ ವಿರುದ್ಧ ನಿರಂತರವಾಗಿ ಹೋರಾಟ ಮಾಡುತ್ತೇವೆ. ಮೃತ ಸಂತೋಷ್ ಕುಟುಂಬಕ್ಕೆ ಸೂಕ್ತ ಪರಿಹಾರ ಸಿಗಬೇಕು. ಅವರ ಕುಟುಂಬಕ್ಕೆ ನ್ಯಾಯ ಕೊಡಿಸುತ್ತೇವೆ ಎಂದರು. ಮಠಗಳಿಗೆ ನೀಡುವ ಅನುದಾನ ಪಡೆಯಲು ಕಮಿಷನ್ ಕೊಡಬೇಕು ಎಂದು ದಿಂಗಾಲೇಶ್ವರ ಸ್ವಾಮೀಜಿ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಲು ಹಿಂದೇಟು ಹಾಕಿದ್ದರಲ್ಲದೆ, ಆ ಬಗ್ಗೆ ನನಗೇನು ಗೊತ್ತಿಲ್ಲ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಹೈಕೋರ್ಟ್ ಗ್ರೀನ್ ಸಿಗ್ನಲ್

ಸರಕಾರ ಭರವಸೆ ನೀಡಿತ್ತು. ಆದರೂ ಸಹ 50 ಕೇಸುಗಳನ್ನು ದಾಖಲಿಸಿದೆ ಎಂದು ಆರೋಪಿಸಿತ್ತು. ಆದರೆ, ಪೊಲೀಸರು 29 ಕೇಸುಗಳನ್ನು ದಾಖಲಿಸಿದ್ದಾರೆ, ಅವುಗಳಲ್ಲಿ 16 ಕೇಸು ಸೆಕ್ಷನ್ 6 (ಗೋಹತ್ಯೆ) ಮತ್ತು 11 ಕೇಸು ಸೆಕ್ಷನ್ 5 (ಅಕ್ರಮ ಗೋ ಸಾಗಾಣೆ)ಗೆ ಸಂಬಂಧಿಸಿದಂತೆ ದಾಖಲಿಸಲಾಗಿದೆ. ಕೆಲವು ಪ್ರಕರಣಗಳಲ್ಲಿ ಮಾತ್ರ ಎಫ್ ಐಆರ್ ಹಾಕಲಾಗಿದೆ ಎಂದರು. ಅಲ್ಲದೆ, ಮುಂದೆ ಯಾವುದೇ ರೀತಿಯ ಬಲವಂತದ ಕ್ರಮ ಕೈಗೊಳ್ಳಬಾರದು ಮತ್ತು ಎಫ್ ಐಆರ್ ಹಾಕಬಾರದು ಎಂದು ಸರಕಾರ ಪೊಲೀಸರಿಗೆ ಆದೇಶ ಹೊರಡಿಸಲಿದೆ. ಜೊತೆಗೆ ಸೆಕ್ಷನ್ 5ರ ಪ್ರಕಾರ ಗೋವುಗಳ ಸಾಗಾಣೆಗೆ ಸಂಬಂಧಿಸಿದಂತೆ ನಿಯಮಗಳನ್ನು ರೂಪಿಸಲಾಗಿದೆ ಎಂದು ಅವರು ಹೇಳಿದರು.

ಅರ್ಜಿಗೆ ಸಂಬಂಧಿಸಿದಂತೆ ಕೆಲವರು ಸರಕಾರದ ನಿರ್ಧಾರ ಬೆಂಬಲಿಸಿ, ಕೆಲವರು ಅರ್ಜಿದಾರರ ಪರ ಮಧ್ಯಂತರ ಅರ್ಜಿಗಳನ್ನು ಸಲ್ಲಿಸಿದ್ದಾರೆ, ಅವುಗಳಲ್ಲಿ ಎಲ್ಲರ ವಾದವನ್ನು ಆಲಿಸಲಾಗುವುದು. ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಕಾಯಿದೆ– 2020 ಪ್ರಶ್ನಿಸಿ ಸಿಂಧುತ್ವ ಪ್ರಶ್ನಿಸಿ ಹಲವು ಅರ್ಜಿಗಳು ಸಲ್ಲಿಕೆಯಾಗಿವೆ.

ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಸ್ವ-ನಿಧಿಯಿಂದ ಸಮೃದ್ಧಿ ಮೇಳ

ಮೈಸೂರು ಪಾಲಿಕೆ ವ್ಯಾಪ್ತಿಯ 9,335 ಬೀದಿಬದಿ ವ್ಯಾಪಾರಿಗಳಿಗೆ ತಲಾ 10 ಸಾವಿರ ಸಾಲ ವಿತರಣೆ

ಮೈಸೂರು,ಏ.18(ಪಿಎಂ)– ಮೈಸೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಪ್ರಧಾನ ಮಂತ್ರಿ ಬೀದಿಬದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ತಲಾ 10 ಸಾವಿರ ರೂ. ಕಿರುಸಾಲ ಪಡೆಯಲು 10,059 ಬೀದಿಬದಿ ವ್ಯಾಪಾರಿಗಳು ಅರ್ಹರಾಗಿದ್ದು, ಈ ಪೈಕಿ 9,335 ಮಂದಿಗೆ ಈವರೆಗೆ ಸಾಲ ವಿತರಣೆ ಮಾಡಲಾಗಿದೆ.



ಮೈಸೂರಿನ ಪುರಭವನದಲ್ಲಿ ಹಮ್ಮಿಕೊಂಡಿದ್ದ 'ಸ್ವ–ನಿಧಿಯಿಂದ ಸಮೃದ್ಧಿ' ಮೇಳದಲ್ಲಿ ಬೀದಿಬದಿ ವ್ಯಾಪಾರಿಗಳು ಪಾಲ್ಗೊಂಡು ತಮ್ಮ ವಿವರಗಳ ದಾಖಲೀಕರಣ ಮಾಡಿಸಿದರು.

ಮೈಸೂರಿನ ಪುರಭವನದಲ್ಲಿ ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ 'ಪ್ರಧಾನಮಂತ್ರಿ ಬೀದಿಬದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ' ಯೋಜನೆಯಡಿ 'ಸ್ವ–ನಿಧಿಯಿಂದ ಸಮೃದ್ಧಿ' ಮೇಳದ ಉದ್ಘಾಟನಾ ಸಮಾರಂಭದಲ್ಲಿ ಪಾಲಿಕೆ ನೀಡಿದ ಪ್ರಕಟಣೆಯಲ್ಲಿ ಈ ಅಂಶ ಉಲ್ಲೇಖಿಸಲಾಗಿದೆ.

ಸಾಲಸೌಲಭ್ಯಕ್ಕಾಗಿ ವಿವಿಧ ಬ್ಯಾಂಕುಗಳಿಗೆ 16,506 ಅರ್ಜಿಗಳು ಸಲ್ಲಿಕೆಯಾಗಿದ್ದವು. ಈ ಪೈಕಿ 10,059 ಅರ್ಹತೆ ಪಡೆದಿದ್ದರು. ಇವರಿಗೆ ತಲಾ 10 ಸಾವಿರ ರೂ. ನೀಡಲು ಅಂದಾಜು 11.3 ಕೋಟಿ ರೂ ಸಾಲ ಮಂಜೂರಾಗಿದ್ದು, ಈ ಪೈಕಿ 9,335 ಮಂದಿಗೆ ಸಾಲಸೌಲಭ್ಯ ವಿತರಣೆ ಮಾಡಲಾಗಿದೆ.

ಕೇಂದ್ರ ಸರ್ಕಾರದ ನಿರ್ದೇಶನದ ಮೇರೆಗೆ ಪಿಎಂ ಸ್ವ–ನಿಧಿ ಯೋಜನೆಯಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಬ್ಯಾಂಕುಗಳಿಂದ ಸಾಲ ಪಡೆದ 10,059 ಬೀದಿಬದಿ ವ್ಯಾಪಾರಿಗಳು ಮತ್ತು ಅವರ ಕುಟುಂಬದವರ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯನ್ನು ಕೈಗೊಳ್ಳಲಾಗಿದ್ದು, ಈ ಸಂಬಂಧ 2021ರ ಜನವರಿಯಿಂದ ಪ್ರೊಫೈಲ್ ಅನ್ನು ಸಿದ್ಧಪಡಿಸಲಾಗುತ್ತಿದೆ. ಈವರೆಗೆ ಒಟ್ಟು 4,281 ಬೀದಿಬದಿ ವ್ಯಾಪಾರಿಗಳು ಮತ್ತು ಅವರ ಕುಟುಂಬದವರ ವಿವರಗಳನ್ನು ಕ್ರೋಢೀಕರಿಸಿ ಪ್ರೊಫೈಲ್ ಅನ್ನು ಸಿದ್ಧಪಡಿಸಲಾಗಿದೆ. ಈ ಪ್ರೊಫೈಲ್‌ನ ವಿವರಗಳಿಂದ ಅರ್ಹ ಫಲಾನುಭವಿಗಳು ಕೇಂದ್ರ ಆಧಾರಿತ ಯೋಜನೆಗಳ ಪ್ರಯೋಜನಗಳನ್ನು ಪಡೆಯಲು ಸಹಕಾರಿ ಎಂದು ಸದರಿ ಪ್ರಕಟಣೆಯಲ್ಲಿ ಹೇಳಲಾಗಿದೆ.

ಮೇಳ ಉದ್ಘಾಟನೆ: ಒಂದು ದಿನದ ಮೇಳ ಉದ್ಘಾಟಿಸಿದ ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ ಮಾತನಾಡಿ, ಪ್ರಧಾನಿ ಮೋದಿಯರವರು ಬೀದಿಬದಿ ವ್ಯಾಪಾರಿಗಳಿಗಾಗಿ ಜಾರಿಗೊಳಿಸಿರುವ ಕಲ್ಯಾಣ ಕಾರ್ಯಕ್ರಮಗಳನ್ನು ಫಲಾನುಭವಿಗಳು ಸದ್ಬಳಕೆ ಮಾಡಿಕೊಳ್ಳಬೇಕು. ಬೀದಿಬದಿ ವ್ಯಾಪಾರಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ತ್ವರಿತಗತಿಯಲ್ಲಿ ತಲುಪಿಸಲು ಪಾಲಿಕೆ ಮುಂದಾಗಿದೆ. ಯೋಜನೆಯ ಪ್ರಯೋಜನವನ್ನು ಸದುಪಯೋಗ ಮಾಡಿಕೊಂಡು ಯೋಜನೆ ಯಶಸ್ವಿಗೆ ಸಹಕಾರ ನೀಡಬೇಕು ಎಂದು ಕೋರಿದರು.

ಬೀದಿ ವ್ಯಾಪಾರಿಗಳ ಕುಟುಂಬದ ಭದ್ರತೆ: ಈ ಸಾಲಸೌಲಭ್ಯದೊಂದಿಗೆ ಕೇಂದ್ರ ಸರ್ಕಾರ ಮತ್ತೊಂದು ಮಹತ್ವದ ಹೆಜ್ಜೆ ಯೊಂದಿಗೆ ಬೀದಿಬದಿ ವ್ಯಾಪಾರಿಗಳ ಇಡೀ ಕುಟುಂಬದ ಭದ್ರತೆಗಾಗಿ ಕುಟುಂಬದ ಎಲ್ಲಾ ಸದಸ್ಯರನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅನೇಕ ಯೋಜನೆಯಡಿ ಜೋಡಣೆ ಮಾಡಿ, ಆ ಮೂಲಕ ವಿವಿಧ ಇಲಾಖೆಗಳ ಸವಲತ್ತು ಒದಗಿಸಲು ಮುಂದಾಗಿದೆ. ಅದೇ 'ಪಿಎಂ ಸ್ವ–ನಿಧಿಯಿಂದ ಸಮೃದ್ಧಿ' ಯೋಜನೆ. ಇದರಡಿ 8 ಇಲಾಖೆಗಳು ತಮ್ಮ ಕಲ್ಯಾಣ ಕಾರ್ಯಕ್ರಮಗಳಡಿಯಲ್ಲಿ ಬೀದಿಬದಿ ವ್ಯಾಪಾರಿಗಳನ್ನು ತರಲಿವೆ ಎಂದು ಪಾಲಿಕೆ ಹೆಚ್ಚುವರಿ ಆಯುಕ್ತೆ ಎಂ.ಜೆ.ರೂಪಾ ಹೇಳಿದರು.

ಇಂದು ಸುಮಾರು 20 ಬ್ಯಾಂಕ್‌ಗಳು ಮೇಳದಲ್ಲಿ ಪಾಲ್ಗೊಂಡಿವೆ. ವಿಮಾ ಯೋಜನೆಗೆ ಸೇರ್ಪಡೆಗೊಳ್ಳಲು 7 ಸಾವಿರಕ್ಕೂ ಹೆಚ್ಚು ಮಂದಿ ಅರ್ಹರಿದ್ದು, ಅವರನ್ನು ಕರೆಯಿಸಿ, ದಿನವಿಡೀ ಅವರ ಮತ್ತು ಅವರ ಕುಟುಂಬದವರ ಪ್ರೊಫೈಲ್ ಸಿದ್ಧಪಡಿಸಲಾಗುವುದು. ಇಂದು 5 ಸಾವಿರ ಮಂದಿಯನ್ನಾದರೂ ತಲುಪಬೇಕೆಂಬ ಗುರಿ ಹೊಂದಲಾಗಿದೆ. ಉಳಿದ ಎಲ್ಲಾ ಯೋಜನೆಗಳಲ್ಲಿ ಬಹುತೇಕ ಪ್ರಗತಿ ಸಾಧಿಸಿದ್ದೇವೆ. ಆದರೆ ವಿಮಾ ಯೋಜನೆಗಳಲ್ಲಿ ಹಿಂದುಳಿದ ಕಾರಣ ಇಂದು ಇಡೀ ದಿನ ಮೇಳ ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿ ದರು. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎಂ.ಎಲ್.ರಘುನಾಥ್, ಪಾಲಿಕೆ ಆಯುಕ್ತ ಜಿ.ಲಕ್ಷ್ಮೀಕಾಂತ್ ರೆಡ್ಡಿ, ಸಂಚಾರ ವಿಭಾಗದ ಎಸಿಪಿ ಎಸ್.ಇ.ಗಂಗಾಧರಸ್ವಾಮಿ, ಪಟ್ಟಣ ವ್ಯಾಪಾರ ಸಮಿತಿ ಸದಸ್ಯರಾದ ಬಿ.ಎಸ್.ರವಿ, ಆರ್.ಗುರುಸ್ವಾಮಿ ಸೇರಿದಂತೆ ಮತ್ತಿತರರು ಹಾಜರಿದ್ದರು.

ಅರ್ಹ ಬೀದಿಬದಿ ವ್ಯಾಪಾರಿಗಳಿಗೆ ಉಚಿತ ಕಾನೂನು ಸೇವೆ

ಮೈಸೂರು,ಏ.18(ಪಿಎಂ)–ವ್ಯಾಪಾರ ಸ್ಥಳದಿಂದ ಒಕ್ಕಲೆಬ್ಬಿಸುವ ಸಂದರ್ಭ ಸೇರಿದಂತೆ ಇನ್ನಾವುದೇ ರೀತಿಯ ಕಾನೂನು ಸಮಸ್ಯೆ ಎದುರಾದರೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಅರ್ಹ ಬೀದಿಬದಿ ವ್ಯಾಪಾರಿಗಳಿಗೆ ಉಚಿತ ಕಾನೂನು ಸೇವೆ ಲಭ್ಯವಾಗಲಿದೆ ಎಂದು ಪ್ರಾಧಿಕಾರದ ಅಧ್ಯಕ್ಷರೂ ಆದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎಂ.ಎಲ್.ರಘುನಾಥ್ ತಿಳಿಸಿದರು.

ಸ್ವ–ನಿಧಿಯಿಂದ ಸಮೃದ್ಧಿ ಮೇಳದ ಉದ್ಘಾಟನಾ ಸಮಾರಂಭದಲ್ಲಿ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು. ಅಲ್ಲದೆ, ವರದಕ್ಷಿಣೆ ಕಿರುಕುಳ ಸೇರಿದಂತೆ ವೈಯಕ್ತಿಕ ಜೀವನದಲ್ಲಿ ಎದುರಾಗುವ ಕಾನೂನಾತ್ಮಕ ಸಮಸ್ಯೆಗಳ ಸಂಬಂಧವೂ ಅರ್ಹರಿಗೆ ಉಚಿತ ಸೇವೆ ದೊರೆಯಲಿದೆ ಎಂದು ಹೇಳಿದರು.



ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷರಾಗಿ ಚುನಾಯಿತರಾದ ಕೆ.ಬಿ.ಲಿಂಗರಾಜು ಅವರನ್ನು ಬಿಜೆಪಿ ಮುಖಂಡ ಎಲ್.ಚೌಡಪ್ಪ ಸನ್ಮಾನಿಸಿದರು. ಈ ವೇಳೆ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಪಾಲಿಕೆ ಸದಸ್ಯ ಎಂ.ಚಿಕ್ಕವೆಂಕಟು, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ಚಾಮರಾಜ ಯುವ ಮೋರ್ಚಾ ಅಧ್ಯಕ್ಷ ಆರ್.ಸಚಿನ್ ಗೌಡ, ಭದ್ರೀಶ್, ಸತೀಶ್ ಚಂದ್ರ, ಬಸವೇಗೌಡ, ದಿನೇಶ್‌ಗೌಡ, ಯತೀಶ್, ಚಿರಂತ್, ಅಶೋಕ್, ಅಭಿ, ಅರ್ಜುನ್, ದೊಡ್ಡಯ್ಯ ಉಪಸ್ಥಿತರಿದ್ದರು.



ನಾಡೋಜ ಪ್ರಶಸ್ತಿ ಪುರಸ್ಕೃತ ಭಾಷ್ಯಂ ಸ್ವಾಮೀಜಿ ಅವರನ್ನು ಮೈಸೂರು ವಿಜಯನಗರದ ಯೋಗಾ ನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಸೋಮವಾರ ನಡೆದ ಸಮಾರಂಭದಲ್ಲಿ ವಿವಿಧ ಗಣ್ಯರು ಆತ್ಮೀಯವಾಗಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ನಯನ ಕುಮಾರ್ಸ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಮಾಲೀಕರಾದ ಕೆ.ಬಿ. ಕುಮಾರ್, ಚಿತ್ರೋದ್ಯಮಿ ಗೋವಿಂದರಾಜು, ಶ್ರೀಮತಿ ಲಕ್ಷ್ಮಿ ಗೋವಿಂದರಾಜು , ಲಯನ್ಸ್ ಕೆ. ದೇವೇಗೌಡ, ಶ್ರೀನಿವಾಸ್, ಶೇಷಾದ್ರಿ ಇತರರನ್ನು ಕಾಣಬಹುದು.

ಇಂದು ಹಲವೆಡೆ ವಿದ್ಯುತ್ ವ್ಯತ್ಯಯ

ಮೈಸೂರು, ಏ18– ತುರ್ತು ನಿರ್ವಹಣಾ ಕಾರ್ಯ ನಿಮಿತ್ತ ನಾಳೆ (ಏ.19) ಬೆಳಗ್ಗೆ 10ರಿಂದ ಸಂಜೆ 6ರವರೆಗೆ ಅಶೋಕ ರಸ್ತೆ, ಲಷ್ಕರ್ ಮೊಹಲ್ಲಾ, ತಿಲಕ್ ನಗರ, ಮಿಷನ್ ಆಸ್ಪತ್ರೆ, ಗಾಂಧಿ ವೃತ್ತ, ಓಲ್ಡ್ ಬ್ಯಾಂಕ್ ರಸ್ತೆ, ಕೆ.ಟಿ.ಸ್ಟ್ರೀಟ್, ದೊಡ್ಡ ಒಕ್ಕಲಿಗರ ಬೀದಿ, ಇರ್ವಿನ್ ರಸ್ತೆ, ಸಯ್ಯಾಜಿರಾವ್ ರಸ್ತೆ, ಒಲಂಪಿಯಾ ಟಾಕೀಸ್, ಪುಲಕೇಶಿ ರಸ್ತೆ, ಕೈಲಾಸಪುರಂ, ಮಂಡಿಮೊಹಲ್ಲಾ, ರಾಜ್‌ಕಮಲ್ ಟಾಕೀಸ್ ಸುತ್ತ–ಮುತ್ತ, ಶಿವರಾಂ ಪೇಟೆ, ಕೆ.ಆರ್.ಆಸ್ಪತ್ರೆ, ಬೋಟಿ ಬಜಾರ್, ಮಾರುಕಟ್ಟೆ, ಧನ್ವಂತರಿ ರಸ್ತೆ, ವೀರನಗೆರೆ, ಶಿವಾಜಿ ರಸ್ತೆ, ಸೆಂಟ್ ಮೇರಿಸ್ ರಸ್ತೆ, ಗಾಂಧಿನಗರ, ಎ.ಜೆ. ಬ್ಲಾಕ್, ಗಣೇಶ್‌ನಗರ, ರಾಜೇಂದ್ರನಗರ, ಕೆಸರೆ 1, 2 ಮತ್ತು 3ನೇ ಹಂತ, ಸುಭಾಷ್‌ನಗರ, ನ.ರಾ.ಮೊಹಲ್ಲಾ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಮಾನ್ಯತೆ ಪಡೆದ ಶಾಲೆಗಳಿಗೆ ಮಾತ್ರ ಮಕ್ಕಳನ್ನು ದಾಖಲಿಸಿ

ಮೈಸೂರು,ಏ.18–ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ಕರ್ನಾಟಕ ಶಿಕ್ಷಣ ಕಾಯ್ದೆ 1983 ಸೆಕ್ಷನ್ 30–31ರ ಪ್ರಕಾರ ಅನುಸಾರ ನೋಂದಣಿ ಪಡೆದು ನಿಯಾಮಾನುಸಾರ ಮಾನ್ಯತೆ ಪಡೆದ ಶಾಲೆಗಳಿಗೆ ಮಾತ್ರ ಪೋಷಕರು ತಮ್ಮ ಮಕ್ಕಳನ್ನು ದಾಖ ಲಿಸುವಂತೆ ಕೋರಿದೆ. ಶಾಲೆಗಳು ಅಧಿಕೃತ ವಾಗಿರುವ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ತಾಲೂಕು ವಲಯ ಮೈಸೂರು ಇಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದು. ಮೈಸೂರು ತಾಲೂಕಿನ ಶಾಲೆಗಳಿಗೆ ಸಂಬಂಧಿಸಿದಂತೆ ಮಾಹಿತಿ ಅಗತ್ಯವಿದ್ದಲ್ಲಿ ಕಚೇರಿ ದೂರವಾಣಿ ಸಂಖ್ಯೆ: 0821–2331131 ಅನ್ನು ಸಂಪರ್ಕಿಸಬಹುದು.

ಮಠಗಳು ಶೇ.30 ಕಮಿಷನ್ ಕೊಡಬೇಕು...: ದಿಂಗಾಲೇಶ್ವರ ಶ್ರೀಗಳು

ಬಾಗಲಕೋಟೆ, ಏ.18– ಸರ್ಕಾರದಲ್ಲಿ ಕೇವಲ ಗುತ್ತಿಗೆದಾರರು ಮಾತ್ರವಲ್ಲ, ಮಠಾಧೀಶರು ಕೂಡ ಪರ್ಸಂಟೇಜ್ ಕೊಡಬೇಕಾಗಿದೆ. ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಶೇ.30ರಷ್ಟು ಪರ್ಸಂಟೇಜ್‌ನ್ನು ಕೇಳಲಾಗುತ್ತಿದೆ ಎಂದು ದಿಂಗಾಲೇಶ್ವರ ಸ್ವಾಮೀಜಿ ಬಹಿರಂಗ ಹೇಳಿಕೆ ನೀಡಿದ್ದು, ಅವರ ಹೇಳಿಕೆಗೆ ಕಾಂಗ್ರೆಸ್ಸಿಗರು ಜಯಕಾರ ಹಾಕಿದರೆ, ಬಿಜೆಪಿಯವರು ಧಿಕ್ಕಾರ ಹೇಳಿದ್ದಾರೆ.

ಬಾಗಲಕೋಟೆ ಜಿಲ್ಲೆಯ ಬಾಳಗಂಡಿಯಲ್ಲಿ ಎಸ್.ಆರ್. ಪಾಟೀಲ್ ನೇತೃತ್ವದಲ್ಲಿ ನಡೆದ ಟ್ರಾಕ್ಟರ್ ರ‍್ಯಾಲಿಯ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಶ್ರೀಗಳು, ಮಠಗಳಿಗೆ ಬಿಡುಗಡೆಯಾಗುವ ಅನುದಾನದಲ್ಲಿ ಶೇ.30ರಷ್ಟು ಹಣ ಕೊಟ್ಟರೇ ಮಾತ್ರ ಮಠಗಳ ಕಟ್ಟಡ ಕಾಮಗಾರಿ ಶುರುವಾಗುತ್ತದೆ. ಇಲ್ಲದಿದ್ದರೆ ಕಾಮಗಾರಿ ಮಾಡಲು ಸಾಧ್ಯವಿಲ್ಲ ಎಂದು ಅಧಿಕಾರಿಗಳೇ ಬಂದು ಹೇಳುತ್ತಾರೆ ಎಂದ ಅವರು, ದೆಹಲಿ ಹಾಗೂ ಬೆಂಗಳೂರಿನಲ್ಲಿ ಐಸ್ ಕ್ರೀಂ ಬಿಡುಗಡೆಯಾದರೆ ಅದು ಉತ್ತರ ಕರ್ನಾಟಕಕ್ಕೆ ಬರುವವರೆಗೆ ಬರೀ ಕಡ್ಡಿ ಮಾತ್ರ ಸಿಗುತ್ತದೆ. ಕಮಿಷನ್ ಕಟ್ ಮಾಡದೇ ಅನುದಾನ ಬಿಡುಗಡೆ ಸಾಧ್ಯವಿಲ್ಲ ಎಂದು ಅಧಿಕಾರಿಗಳೇ ಹೇಳುತ್ತಾರೆ ಎಂದು ಹೇಳಿದರು.



ದಿಂಗಾಲೇಶ್ವರ ಸ್ವಾಮೀಜಿಯವರ ಹೇಳಿಕೆಗೆ ಪರ–ವಿರೋಧ ಹೇಳಿಕೆಗಳು ರಾಜಕಾರಣಿಗಳಿಂದ ಬಂದಿವೆ. ಮಂಡ್ಯದಲ್ಲಿ ಈ ಕುರಿತು ಮಾತನಾಡಿದ ಮಾಜಿ ಮುಖ್ಯ ಮಂತ್ರಿ ಸಿದ್ದರಾಮಯ್ಯ, ಸ್ವಾಮೀಜಿಗಳ ಬಳಿಯೇ ಲಂಚ ಕೇಳುತ್ತಾರೆ. ಅಂದರೆ ಇದು ಎಂತಹ ನಾಚಿಕೆ ಗೇಡಿನ ಸರ್ಕಾರ? ಎಂದು ಪ್ರಶ್ನಿಸಿದರಲ್ಲದೇ, ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಕಾಂಗ್ರೆಸ್ ಮಾಡುತ್ತಿರುವ ಹೋರಾಟಗಳಿಗೆ ಇದು ಸಾಕ್ಷಿಯಾಗಿದೆ ಎಂದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಪ್ರತಿಕ್ರಿಯಿಸಿ, ಕಮಿಷನ್ ಪಿಡುಗು ಸ್ವಾಮೀಜಿಗಳನ್ನು ಬಿಟ್ಟಿಲ್ಲ ಎನ್ನುವುದು ವಿಷಾದನೀಯ. ರಾಜ್ಯ ಸರ್ಕಾರದಲ್ಲಿ ವ್ಯಾಪಕವಾಗಿ ಭ್ರಷ್ಟಾಚಾರ ನಡೆಯುತ್ತಿದೆ ಎಂದರು. ಮತ್ತೋರ್ವ ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ ಖಂಡ್ರೆ ಪ್ರತಿಕ್ರಿಯಿಸುತ್ತಾ, ದೇವಾಲಯ, ಆಶ್ರಮ, ಮಠಗಳಿಗೆ ಅನುದಾನ ಬಿಡುಗಡೆ ಮಾಡಲು ಕಮಿಷನ್ ಕೇಳುತ್ತಿ ರುವ ರಾಜ್ಯ ಸರ್ಕಾರಕ್ಕೆ ಮಾನ–ಮರ್ಯಾದೆ ಇಲ್ಲ. ಇಂತಹ ಅಕ್ಷಮ್ಯ ಅಪರಾಧಕ್ಕೆ ಮುಂದಿನ ದಿನಗಳಲ್ಲಿ ಜನರು ತಕ್ಕ ಪಾಠ ಕಲಿಸುತ್ತಾರೆ ಎಂದರು.

ಊಸರವಳ್ಳಿಯಂತೆ ಬಣ್ಣ ಬದಲಿಸುತ್ತಾರೆ: ದಿಂಗಾಲೇಶ್ವರ ಸ್ವಾಮೀಜಿಗಳ ಹೇಳಿಕೆಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಕೃಷಿ ಸಚಿವ ಬಿ.ಸಿ. ಪಾಟೀಲ್, ದಿಂಗಾಲೇಶ್ವರ ಸ್ವಾಮೀಜಿಯವರು ಊಸರವಳ್ಳಿಯಂತೆ ಕಾಲಕ್ಕೊಂದು ಬಣ್ಣ ಬದಲಾಯಿಸುತ್ತಿದ್ದಾರೆ. ಅವರು ಲಂಚ ನೀಡುವ ಮುನ್ನಾ ಪ್ರತಿಭಟಿಸಬೇಕಾಗಿತ್ತು. ಆದರೆ, ಯಡಿಯೂರಪ್ಪನವರನ್ನು ಬೆಂಬಲಿಸಿ ಹೇಳಿಕೆ ನೀಡಿದ್ದರು. ಈಗ ಕಾಂಗ್ರೆಸ್ ಕಾರ್ಯಕ್ರಮಕ್ಕೆ ಹೋಗಿ ಕಾಂಗ್ರೆಸ್ ಭಕ್ತರನ್ನು ಮೆಚ್ಚಿಸುವ ಉದ್ದೇಶದಿಂದ ಕಾಂಗ್ರೆಸ್ ಪದಾಧಿಕಾರಿಯಂತೆ ದಿಂಗಾಲೇಶ್ವರ ಸ್ವಾಮೀಜಿ ಮಾತನಾಡಿದ್ದಾರೆ ಎಂದರು.

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪ್ರತಿಕ್ರಿಯಿಸಿ, ಬಿ.ಎಸ್. ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಬಾರದು ಎಂದು ಹೇಳಿದ್ದ ದಿಂಗಾಲೇಶ್ವರ ಸ್ವಾಮೀಜಿ, ಈಗ ಕಮಿಷನ್ ಆರೋಪ ಮಾಡಿದ್ದಾರೆ. ಇವರು ಯಾವಾಗ ಯಾರ ಮೇಲೆ ಆರೋಪ ಮಾಡುತ್ತಾರೋ ಗೊತ್ತಿಲ್ಲ ಎಂದು ವ್ಯಂಗ್ಯವಾಡಿದರು.



ಸೋಮವಾರ ಹುಟ್ಟುಹಬ್ಬ ಆಚರಿಸಿಕೊಂಡ ಚಾಮರಾಜ ಕ್ಷೇತ್ರದ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪುನೀತ್ ಹಾಗೂ ನಗರ ಪಾಲಿಕೆ ಸದಸ್ಯ ರಂಗಸ್ವಾಮಿ ಅವರನ್ನು ಚಾಮರಾಜ ಕ್ಷೇತ್ರದ ಶಾಸಕ ಎಲ್.ನಾಗೇಂದ್ರ ಅಭಿನಂದಿಸಿದರು. ಈ ವೇಳೆ ಸೋಮಶೇಖರ್‌ರಾಜು, ಚೌಡಪ್ಪ, ಕಾರ್ಪೋರೇಟರ್‌ಗಳಾದ ಸುಬ್ಬಯ್ಯ, ರವೀಂದ್ರ, ಚಿಕ್ಕವೆಂಕಟು, ರಮೇಶ್, ಸಿಟಿ ಕೋ ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಪಡುವಾರಹಳ್ಳಿ ಶಿವು, ದಿನೇಶ್, ಪಡುವಾರಹಳ್ಳಿ ರಾಮಕೃಷ್ಣ, ಅರವಿಂದ, ಅನುಜ್ ಉಪಸ್ಥಿತರಿದ್ದರು.

ವಿಹಾರ ತಾಣ ಕುಕ್ಕರಹಳ್ಳಿ ಕೆರೆ ಆಜುಬಾಜಲ್ಲಿ ವ್ಯಾಪಾರ ಕೇಂದ್ರ!

- ಮೈಸೂರು ವಿವಿ 'ಪ್ರಭಾವ'ಕ್ಕೆ ಮಣಿದು ಹಾಲಿನ ಮಳಿಗೆ ನಿರ್ಮಾಣಕ್ಕೆ ಅವಕಾಶ: ಅನಾಹುತಕ್ಕೆ ಆಹ್ವಾನ ನೀಡುತ್ತಿದೆ ಮಳಿಗೆ
- ಅವೈಜ್ಞಾನಿಕ ರೀತಿ ನಿರ್ಮಾಣವಾಗಿದೆ ಮೈಸೂರು ವಿವಿ ಮಳಿಗೆ



ಮೈಸೂರು,ಏ.18(ಎಂಕೆ)–ವಾಯುವಿಹಾರಿಗಳ ನೆಚ್ಚಿನ ತಾಣ ಕುಕ್ಕರಹಳ್ಳಿ ಕೆರೆ ಆವರಣವೀಗ ವ್ಯಾಪಾರ–ವಹಿವಾಟು ಕೇಂದ್ರವಾಗಿ ಬದಲಾಗುತ್ತಿದೆ...! ಕುಕ್ಕರಹಳ್ಳಿ ಕೆರೆಯ ಸುಂದರ ವಾತಾವರಣದಲ್ಲಿ ವಾಕಿಂಗ್, ಜಾಗಿಂಗ್ ಜೊತೆಗೆ ಸ್ನೇಹಿತರೊಂದಿಗೆ ಕಾಲ ಕಳೆಯಲು ಬರುವ ವಾಯು ವಿಹಾರಿಗಳಿಗೆ ಕೆರೆಗೆ ಹೋಗುವ ಮಾರ್ಗದಲ್ಲೇ ಎದುರಾಗುವ ವ್ಯಾಪಾರ ಮಳಿಗೆಗಳು ಕಿರಿಕಿರಿಯನ್ನುಂಟುಮಾಡುವಂತಿವೆ.

ಆಜುಬಾಜಲ್ಲಿ ಹಣ್ಣುಗಳ ವ್ಯಾಪಾರದಿಂದ ಪ್ರಾರಂಭಗೊಂಡು ಬಟ್ಟೆ ಇನ್ನಿತರೆ ವಸ್ತುಗಳಿದ್ದರೆ, ಈ ಹಿಂದೆಯೇ ಮೀನು, ಈಗ ಹಾಲಿನ ವ್ಯಾಪಾರ(ನಂದಿನಿ ಮಿಲ್ಕ್ ಬೂತ್) ಮಳಿಗೆ ನಿರ್ಮಾಣವಾಗಿದೆ. ಸ್ವಚ್ಛಂದ ವಾಯುವಿಹಾರ ತಾಣ ವ್ಯಾಪಾರ–ವಹಿವಾಟು ಸ್ಥಳವಾಗಿ ರೂಪುಗೊಳ್ಳುತ್ತಿದೆ ಎಂದು ಸಾರ್ವಜನಿಕರು ದೂರಿದ್ದಾರೆ. ಈಗಾಗಲೇ ಸ್ವಚ್ಛಗಾಳಿ ಬದಲು ಮೀನಿನ ಘಮಲು ಮೂಗಿಗೆ ಬಡಿಯುತ್ತಿದೆ. ಬೆಳಗ್ಗೆಯಿಂದ ಸಂಜೆವರೆಗೂ ಈಗ ಹಾಲು, ಮೊಸರು, ತುಪ್ಪ, ಮಜ್ಜಿಗೆ, ತಿಂಡಿ–ತಿನಿಸು ವ್ಯಾಪಾರಕ್ಕೂ ಅವಕಾಶ ಮಾಡಿಕೊಡಲಾಗುತ್ತಿದೆ. ಇನ್ನೂ ಕೋಳಿ–ಕುರಿ ಮಾಂಸದಂಗಡಿಗಳು ಬಾಕಿ. ಕೆರೆಯ ಸುತ್ತಲು ಅವುಗಳನ್ನು ನಿರ್ಮಿಸಿದರೂ ಅಚ್ಚರಿಯಿಲ್ಲ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಪ್ರವಾಸಿ ಕೇಂದ್ರವಾದ ಮೈಸೂರಿನ ಅಂದ ಹಾಳು ಮಾಡುವುದರಲ್ಲಿ ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ನಿಸ್ಸೀಮರು. ಎಲ್ಲಿಯಾದರೂ ಜನ ಹೆಚ್ಚಿಗೆ ಸೇರುವುದು ಕಂಡರೆ ಸಾಕು, ಅಲ್ಲಿಯೇ ಸಂಪಾದನೆ ಸಿದ್ದಿಗಾಗಿ ಯಾವುದಾದರೂ ವ್ಯಾಪಾರಕ್ಕೆ ಅವಕಾಶ ಮಾಡಿಕೊಡುತ್ತಾರೆ. ಒಳ್ಳೆಯ ವಾತಾವರಣ, ಸುಂದರ ಸ್ಥಳಗಳನ್ನು ಹಾಳು ಮಾಡುವುದೇ ಇವರ ನಿತ್ಯ ಯೋಜನೆ ಆಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕುಕ್ಕರಹಳ್ಳಿ ಕೆರೆ(ರೈಲ್ವೆ ಗೇಟ್ ಸಮೀಪ) ಗೇಟ್ ಬಳಿ ನಾನಾ ಪದಾರ್ಥಗಳ ಮಾರಾಟ ಬೆಳಿಗ್ಗೆಯಿಂದ ತಡರಾತ್ರಿಯ ವರೆಗೂ ನಡೆಯಲಿದ್ದು, ಸದಾ ಜನಜಂಗುಳಿಯೇ ಸೇರುತ್ತದೆ. ಸ್ವಚ್ಛ ಗಾಳಿ ಬೀಸುವ ಸ್ಥಳದಲ್ಲಿ ಧೂಮಪಾನಿಗಳು ಬಿಡುವ ಹೊಗೆಯೇ ಹೆಚ್ಚಾಗಿದೆ. ಈಗಾದರೆ ಆರೋಗ್ಯ ವೃದ್ಧಿ ಹೇಗೆ ಸಾಧ್ಯ? ಎಂದು ಸಾರ್ವಜನಿಕರೊಬ್ಬರು ಪ್ರಶ್ನಿಸಿದ್ದಾರೆ.

ಬೋಗಾದಿ ಮುಖ್ಯ ರಸ್ತೆ ಹಾಗೂ ಹುಣಸೂರು ರಸ್ತೆಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಸದಾ ವಾಹನ ದಟ್ಟಣೆ ಹೆಚ್ಚು. ರೈಲ್ವೆ ಗೇಟ್ ಬಂದ್ ಮಾಡಿದಾಗಲಂತು ಸುಮಾರು ನೂರು ಮೀಟರ್‌ವರೆಗೂ ವಾಹನಗಳ ಸಾಲು ನಿಂತಿರುತ್ತದೆ. ಬೋಗಾದಿ ಮುಖ್ಯ ರಸ್ತೆಯಿಂದ ರಂಗಾಯಣದ ಕಡೆಗೆ ಹೋಗುವ ರಸ್ತೆಯ ತಿರುವಿನಲ್ಲಿ ಈಗ ಹಾಲಿನ ಮಳಿಗೆ ನಿರ್ಮಿಸಲಾಗಿದೆ. ವಾಹನ ಚಾಲಕರ ಗಮನ ಆ ಕಡೆ ಹರಿಯುವುದು ಸಹಜ. ಇದರಿಂದ ಅಪಘಾತ ಸಂಭವಿಸುವ ಸಾಧ್ಯತೆ ಹೆಚ್ಚಿದೆ ಎಂದು ಹಲವರು ಅಭಿಪ್ರಾಯಪಟ್ಟಿದ್ದಾರೆ.

ಪ್ರಭಾವ ಬೀರುತ್ತಾರೆ...!

ಕುಕ್ಕರಹಳ್ಳಿ ಕೆರೆ(ರೈಲ್ವೆ ಗೇಟ್ ಬಳಿ) ಬಳಿ ನಿರ್ಮಾಣಗೊಂಡಿರುವ ಹಾಲಿನ ಬೂತ್ ಅನ್ನು 8 ಅಡಿಗಳಷ್ಟು ಒಳಗಡೆ(ಕುಕ್ಕರಳ್ಳಿ ಕೆರೆ ಬೇಲಿಗೆ ಹೊಂದಿಕೊಂಡಂತೆ) ಕಟ್ಟುವಂತೆ ತಿಳಿಸಲಾಗಿತ್ತು. ಆದರೆ ರಸ್ತೆ ಅಂಚಿನಲ್ಲಿ ಕಟ್ಟಲಾಗಿದೆ ಎಂದು ಈಗಾಗಲೇ ಒಬ್ಬರು ದೂರು ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಸ್ಥಳ ಪರಿಶೀಲನೆ ನಡೆಸುವಂತೆ ಸಂಬಂಧಪಟ್ಟ ವಿವಿಯ ಇಂಜಿನಿಯರ್‌ಗೆ ಸೂಚಿಸಲಾಗಿದೆ. ವಾಯುವಿಹಾರಿಗಳ ತಾಣದಲ್ಲಿ ವ್ಯಾಪಾರ ಮಳಿಗೆ ಮಾಡುವುದಕ್ಕೆ ಸಾರ್ವಜನಿಕರು ವಿರೋಧ ವ್ಯಕ್ತಪಡಿಸುವುದು ಸಹಜ. ಅವಕಾಶ ಮಾಡಿಕೊಡದಿದ್ದರೆ ಪ್ರಭಾವ ಬೀರುತ್ತಾರೆ. ಅದಕ್ಕೆ ನಾವೇನು ಮಾಡುವುದು ನೀವೇ ಹೇಳಿ.

–ಪ್ರೊ.ಶಿವಪ್ಪ, ಕುಲಸಚಿವ, ಮೈಸೂರು ವಿಶ್ವವಿದ್ಯಾನಿಲಯ

ಮೈಸೂರು ಮಿತ್ರ



ಬಟ್ಲರ್ ಶತಕ, ಚಹಲ್ ಹ್ಯಾಟ್ರಿಕ್: ಆರ್‌ಆರ್‌ಗೆ ರೋಚಕ ಗೆಲುವು

• ಕೋಲ್ಕತ್ತಾಗೆ ಸೋಲು • ಫಿಂಚ್, ಶ್ರೇಯಸ್ ಅಯ್ಯರ್ ಹೋರಾಟ ವ್ಯರ್ಥ

ಮುಂಬೈ, ಏ.18– ಜೋಸ್ ಬಟ್ಲರ್ ಶತಕ ಹಾಗೂ ಯಜುವೇಂದ್ರ ಚಹಲ್ ಚೊಚ್ಚಲ ಹ್ಯಾಟ್ರಿಕ್ ಸೇರಿದಂತೆ ಮಾರಕ ಬೌಲಿಂಗ್ ದಾಳಿ ನೆರವಿನಿಂದ ರಾಜಸ್ಥಾನ್ ರಾಯಲ್ಸ್, ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ 7 ರನ್‌ಗಳ ರೋಚಕ ಗೆಲುವು ಸಾಧಿಸಿದೆ.

ಇದರೊಂದಿಗೆ ಕೆಕೆಆರ್ ನಾಯಕ ಶ್ರೇಯಸ್ ಅಯ್ಯರ್ ಹೋರಾಟ ವ್ಯರ್ಥವೆನಿಸಿದೆ. ರಾಜಸ್ಥಾನ್ ರಾಯಲ್ಸ್ ಆಡಿರುವ 6 ಪಂದ್ಯಗಳಲ್ಲಿ 4 ಗೆಲುವಿನೊಂದಿಗೆ 8 ಅಂಕ ಸಂಪಾದಿಸಿ ಅಂಕಪಟ್ಟಿಯಲ್ಲಿ 2ನೇ ಸ್ಥಾನಕ್ಕೇರಿದರೆ, ಅತ್ತ ಕೆಕೆಆರ್ ಪಂದ್ಯ ಸೋಲುವ ಮೂಲಕ ಹ್ಯಾಟ್ರಿಕ್ ಸೋಲಿಗೆ ಒಳಗಾಯಿತು.



ಇಲ್ಲಿನ ಬ್ರಬೋರ್ನ್ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನಕ್ಕೆ ಜೋಸ್ ಬಟ್ಲರ್, ದೇವದತ್ ಪಡಿಕ್ಕಲ್ ಮೊದಲ ವಿಕೆಟ್‌ಗೆ 97 ರನ್ ಜೊತೆಯಾಟವಾಡುವ ಮೂಲಕ ಉತ್ತಮ ಆರಂಭ ಒದಗಿಸಿದರು. ಆರಂಭದಿಂದಲೇ ಬಿರುಸಿನ ಬ್ಯಾಟಿಂಗ್ ನಡೆಸಿದ ಬಟ್ಲರ್ ಕೇವಲ 29 ಎಸೆತಗಳಲ್ಲಿ ಅರ್ಧಶತಕ ಸಿಡಿಸಿ ಸಂಭ್ರಮಿಸಿದರು. ಈ ವೇಳೆ 24 ರನ್ ಗಳಿಸಿದ್ದ ಪಡಿಕ್ಕಲ್ ವಿಕೆಟ್ ಒಪ್ಪಿಸಿದರು. ಬಳಿಕ ನಾಯಕ ಸಂಜು ಸ್ಯಾಮ್ಸನ್ ಜೊತೆಗೂಡಿದ ಬಟ್ಲರ್ ಮತ್ತಷ್ಟು ಬಿರುಸಾಗಿ ಬ್ಯಾಟ್ ಬೀಸಿದರು. ಸಂಜು–ಬಟ್ಲರ್ ಅಬ್ಬರದ ಮುಂದೆ ಕೆಕೆಆರ್ ಬೌಲರ್‌ಗಳು ತತ್ತರಿಸಿದರು. ಇವರಿಬ್ಬರು 2ನೇ ವಿಕೆಟ್‌ಗೆ 67 ರನ್ ಕಾಣಿಕೆ ನೀಡಿದರು. ಆದರೆ 38 ರನ್ ಗಳಿಸಿದ್ದ ಸ್ಯಾಮ್ಸನ್ ವಿಕೆಟ್ ಒಪ್ಪಿಸಿ ಹೊರ ನಡೆದರು. ಅತ್ತ ಕೆಚ್ಚೆದೆಯ ಆಟ ಪ್ರದರ್ಶಿಸಿದ ಬಟ್ಲರ್ 59 ಎಸೆತಗಳಲ್ಲಿ ಶತಕ ಸಾಧನೆ ಮಾಡಿದರು. ಈ ಮೂಲಕ ಪ್ರಸಕ್ತ ಸಾಲಿನಲ್ಲಿ ಎರಡನೇ ಹಾಗೂ ಒಟ್ಟಾರೆಯಾಗಿ ಐಪಿಎಲ್ ವೃತ್ತಿ ಜೀವನದಲ್ಲಿ 3ನೇ ಶತಕ ಗಳಿಸಿದರು. 61 ಎಸೆತ ಎದುರಿಸಿದ ಬಟ್ಲರ್ 9 ಬೌಂಡರಿ ಹಾಗೂ 5 ಸಿಕ್ಸರ್ ನೆರವಿನಿಂದ 103 ರನ್ ಗಳಿಸಿ ಔಟಾದರು. ಉಳಿದಂತೆ ಶಿಮ್ರಾನ್ ಹೆಟ್ಮೆಯರ್ 26 ರನ್ ಗಳಿಸಿದರು. ಅಂತಿಮವಾಗಿ ರಾಜಸ್ಥಾನ್ ನಿಗದಿತ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 217 ರನ್‌ಗಳ ಬೃಹತ್ ಮೊತ್ತ ದಾಖಲಿಸಿತು. ಕೆಕೆಆರ್ ಪರ ನರೇನ್ 2, ಕಮ್ಮಿನ್ಸ್, ಮಾವಿ ಹಾಗೂ ರಸೆಲ್ ತಲಾ ಒಂದೊಂದು ವಿಕೆಟ್ ಕಬಳಿಸಿದರು.

ಬಳಿಕ ಬೃಹತ್ ಮೊತ್ತ ಬೆನ್ನತ್ತಿದ ಕೆಕೆಆರ್ ಚಹಲ್ ಸ್ಪಿನ್ ಮೋಡಿಗೆ ತತ್ತರಿಸಿ 19.4 ಓವರ್‌ಗಳಲ್ಲಿ 210 ರನ್‌ಗಳಿಗೆ ಆಲೌಟ್ ಆಯಿತು. ಕೆಕೆಆರ್ ಪರ ಆರೋನ್ ಫಿಂಚ್ 28 ಎಸೆತಗಳಲ್ಲಿ 2 ಸಿಕ್ಸರ್, 9 ಬೌಂಡರಿ ಒಳಗೊಂಡ 58 ರನ್ ಗಳಿಸಿದರೇ, ನಾಯಕ ಶ್ರೇಯಸ್ ಅಯ್ಯರ್ 51 ಎಸೆತಗಳಲ್ಲಿ 4 ಸಿಕ್ಸರ್, 7 ಬೌಂಡರಿ ಒಳಗೊಂಡ 85 ರನ್ ಸಿಡಿಸಿದರು. ಉಳಿದಂತೆ ನಿತೀಶ್ ರಾಣ 18, ಉಮೇಶ್ ಯಾದವ್ 21 ರನ್ ಗಳಿಸಿದರು. ರಾಜಸ್ಥಾನ್ ಪರ ಚಹಲ್ ಐಪಿಎಲ್‌ನಲ್ಲಿ ಇದೇ ಮೊದಲ ಬಾರಿಗೆ ಹ್ಯಾಟ್ರಿಕ್ ಹಾಗೂ 5 ವಿಕೆಟ್ ಸಾಧನೆ ಮಾಡಿದರು. ಮೆಕಾಯ್ 2, ಅಶ್ವಿನ್, ಪ್ರಸಿದ್ಧ ಕೃಷ್ಣ ತಲಾ ಒಂದೊಂದು ವಿಕೆಟ್ ಪಡೆದರು. ಯಜುವೇಂದ್ರ ಚಹಲ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಗುಜರಾತ್	6	5	1	0	10
ರಾಜಸ್ಥಾನ್	6	4	2	0	8
ಲಕ್ನೋ	6	4	2	0	8
ಆರ್‌ಸಿಬಿ	6	4	2	0	8
ಎಸ್‌ಆರ್‌ಹೆಚ್	6	4	2	0	8
ಕೆಕೆಆರ್	7	3	4	0	6
ಪಂಜಾಬ್	6	3	3	0	6
ಡೆಲ್ಲಿ	5	2	3	0	4
ಸಿಎಸ್‌ಕೆ	6	1	5	0	2
ಮುಂಬೈ	6	0	6	0	0



2 ಕೋಟಿ ವೆಚ್ಚದ ಬಾಬೂಜಿ ಸಮುದಾಯ ಭವನಕ್ಕೆ ಗುದ್ದಲಿ ಪೂಜೆ

ನಂಜನಗೂಡು, ಏ.18(ಸುದರ್ಶನ್)– ನಗರದ ಬೈಪಾಸ್ ರಸ್ತೆಯಲ್ಲಿ ಅಂದಾಜು 2 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಡಾ.ಬಾಬು ಜಗಜೀವನರಾಂ ಸಮುದಾಯ ಭವನಕ್ಕೆ ಸಂಸದ ವಿ. ಶ್ರೀನಿವಾಸ ಪ್ರಸಾದ್ ಭೂಮಿ ಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಅವರು, ನಾನು ಸಚಿವನಾಗಿದ್ದ ವೇಳೆ ಅಸಹಾಯಕ ಸಮುದಾಯದವರು ಸಮುದಾಯ ಭವನ ನಿರ್ಮಿಸಿ ಕೊಡುವಂತೆ ಅರ್ಜಿ ಸಲ್ಲಿಸಿದ್ದರು. ಬೈಪಾಸ್ ರಸ್ತೆಯಲ್ಲಿ 4.5 ಎಕರೆ ರೆವಿನ್ಯೂ ಸರ್ಕಾರಿ ಜಾಗವಿತ್ತು. ನಾನು ಕಂದಾಯ ಸಚಿವನಾಗಿದ್ದ ವೇಳೆ ಈ ಜಾಗದ ದಾಖಲೆ ತರಿಸಿಕೊಂಡು ಎಲ್ಲಾ ಸಮುದಾಯಗಳಿಗೂ ಸಹ ಸಾಮಾಜಿಕ ನ್ಯಾಯ ಒದಗಿಸುವ ಸಲುವಾಗಿ ನಿವೇಶನ ಹಂಚಿಕೆ ಮಾಡಿದ್ದೇನೆ. ನಾಯಕ ಸಮುದಾಯಕ್ಕೆ 20 ಕುಂಟೆ, ಉಪ್ಪಾರಿಗೆ 20 ಕುಂಟೆ, ಮಡಿವಾಳ, ನಯನಜ ಕ್ಷತ್ರಿಯ, ಈಡಿಗ, ಮೇದರ ಸಮುದಾಯಗಳಿಗೆ ತಲಾ 10 ಕುಂಟೆ, ಪೌರಕಾರ್ಮಿಕರ ಸಮುದಾಯ



ಭವನಕ್ಕೂ ಸಹ 10 ಕುಂಟೆ ಜಾಗ ಹಂಚಿಕೆ ಮಾಡಿ ಖಾತೆ ವಿತರಿಸಿದ್ದೇನೆ ಎಂದರು. ಡಾ.ಬಾಬು ಜಗಜೀವನರಾಂ ಸಮುದಾಯ ಭವನಕ್ಕೆ ಈಗಾಗಲೇ 1 ಕೋಟಿ ಹಣ ಮಂಜೂರಾಗಿದ್ದು, ಮುಂದಿನ 1 ವರ್ಷದ ಅವಧಿಯಲ್ಲಿ ಭವನದ ಕಾಮಗಾರಿ ಪೂರ್ಣಗೊಂಡು ಉದ್ಘಾಟನೆಗೊಳ್ಳಲಿದೆ ಎಂದರು.

ಶಾಸಕ ಬಿ.ಹರ್ಷವರ್ಧನ್ ಮಾತನಾಡಿ, ಬಾಬು ಜಗಜೀವನರಾಂ ಸಮುದಾಯ ಭವನಕ್ಕೆ ಮಂಜೂರಾಗಿದ್ದ 50 ಲಕ್ಷ ರೂ.ಗಳನ್ನು ನಿವೇಶನದ ಸಮಸ್ಯೆಯಿಂದ ಬಳಕೆ ಮಾಡಿಕೊಳ್ಳಲು ಆಗಿರಲಿಲ್ಲ. ಈ ಅನುದಾನ ವಾಪಸ್ ಹೋಗುವ ಸಂಭವವಿತ್ತು. ಆದ್ದರಿಂದ ಜಾಗದ ಸಮಸ್ಯೆ ನಿವಾರಿಸಿ ಹೆಚ್ಚುವರಿಯಾಗಿ 50 ಲಕ್ಷ ರೂ.ಗಳನ್ನು ಮಂಜೂರಾತಿ ಮಾಡಿಸಿದ್ದೇನೆ. ಮುಂದಿನ ದಿನಗಳಲ್ಲಿ ಹೆಚ್ಚುವರಿಯಾಗಿ 1 ಕೋಟಿ ಅನುದಾನ ಮಂಜೂರು ಮಾಡಿಸಿ ಚುನಾವಣೆಗೂ ಮುನ್ನ ಭವನ ಪೂರ್ಣಗೊಳಿಸುವುದಾಗಿ ತಿಳಿಸಿದ ಅವರು, ಶೀಘ್ರದಲ್ಲೇ 2 ಕೋಟಿ ವೆಚ್ಚದಲ್ಲಿ ಉಪ್ಪಾರ ಸಮುದಾಯ ಭವನಕ್ಕೂ ಚಾಲನೆ ನೀಡುವುದಾಗಿ ಭರವಸೆ ನೀಡಿದರು.

ಈ ವೇಳೆ ನಗರಸಭಾಧ್ಯಕ್ಷ ಹೆಚ್.ಎಸ್. ಮಹದೇವಸ್ವಾಮಿ, ಉಪಾಧ್ಯಕ್ಷೆ ನಾಗಮಣಿ, ನಗರ ಸಭಾ ಸದಸ್ಯರಾದ ವಿಜಯಲಕ್ಷ್ಮಿ, ಮಹದೇವಮ್ಮ, ಮಂಗಳಮ್ಮ, ಮುಖಂಡರಾದ ಯು.ಎನ್. ಪದ್ಮನಾಭರಾವ್, ಬಾಲಚಂದ್ರು, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಶ್ರೀನಿವಾಸ ಪ್ರಸಾದ್, ಲೋಕೇಶ್, ಕೆಐಆರ್‌ಡಿಎಲ್‌ನ ಸೌರಭ, ಶೋಭಾ, ಚಂದ್ರು ಸೇರಿದಂತೆ ಇತರರಿದ್ದರು.

ಶಿಡ್ಲುಮಲ್ಲಿಕಾರ್ಜುನಸ್ವಾಮಿ ವೀರಶೈವ ಲಿಂಗಾಯತ ನೌಕರರ ವಾರ್ಷಿಕ ಸಭೆ



ಬೆಟ್ಟದಪುರ, ಏ.18(ಶಿವದೇವ್)– ಇಲ್ಲಿನ ಶಿಡ್ಲು ಮಲ್ಲಿಕಾರ್ಜುನಸ್ವಾಮಿ ವೀರಶೈವ ಲಿಂಗಾಯತ ನೌಕರರ ವಾರ್ಷಿಕ ಸಭೆ ನಡೆಯಿತು.

ಸಭೆಯಲ್ಲಿ ಸಿದ್ದಗಂಗಾಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು. ಅಧ್ಯಕ್ಷತೆ ವಹಿಸಿ ಮಾತನಾಡಿದ, ನಿವೃತ್ತ ಕನ್ನಡ ಶಿಕ್ಷಕ ಜಗದೀಶ್, ಸ್ವಾರ್ಥ ಬಿಟ್ಟು ನಿಷ್ಠೆ, ಶ್ರದ್ಧೆ ಮತ್ತು ಭಕ್ತಿಯಿಂದ ಸಂಸ್ಥೆಗಳಲ್ಲಿ ಕೆಲಸ ಮಾಡಿದರೆ ಸಂಘ ಸಂಸ್ಥೆಗಳು ಯಶಸ್ವಿಯಾಗುತ್ತವೆ ಎಂದರು. ನಿವೃತ್ತ ಪಿಡಿಓ ಡಾ.ಶಿವಯೋಗಿ ಮಾತನಾಡಿದರು. ಇದೇ ವೇಳೆ ಸಂಘದ ಅಧ್ಯಕ್ಷರಾಗಿ ನಿವೃತ್ತ ಶಿಕ್ಷಕ ಕಾಂತರಾಜು, ಕಾರ್ಯದರ್ಶಿಯಾಗಿ ಪ್ರಶಾಂತ್ ಆಯ್ಕೆಯಾದರು. ಹಿಂದಿನ ಅಧ್ಯಕ್ಷರಾಗಿದ್ದ ತಾಲೂಕು ಶರಣ ವಿಶ್ವ ವಚನ ಫೌಂಡೇಶನ್ ಅಧ್ಯಕ್ಷ ಬಿ.ಸಿ.ಮಹದೇವಪ್ಪ, ಕಾರ್ಯದರ್ಶಿ ಹರೀಶ್ ಅವರನ್ನು ಸನ್ಮಾನಿಸಲಾಯಿತು.

ಪಿಎಲ್‌ಡಿ ಬ್ಯಾಂಕ್ ಮಾಜಿ ನಿರ್ದೇಶಕ ಕುಮಾರಸ್ವಾಮಿ, ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷ ಧರ್ಮಪಾಲ್, ನಿವೃತ್ತ ಶಿಕ್ಷಕ ವೃಷಭೇಂದ್ರಪ್ಪ, ಹಾರನಹಳ್ಳಿ ಶಾಲೆ ಮುಖ್ಯಶಿಕ್ಷಕ ಕೆ.ಸಿ.ಸತೀಶ್, ಶಿಕ್ಷಕಿ ಕವಿತಾ, ಜಯಂತಿ, ಯುವರಾಜ್, ಎಸ್‌ಸಿವಿಡಿಎಸ್ ಮುಖ್ಯ ಶಿಕ್ಷಕ ಅಶೋಕ್, ಶಿಕ್ಷಕಿ ಕವಿತಾ, ನಿವೃತ್ತ ಶಿಕ್ಷಕ ಕಾಂತ್‌ರಾಜ್, ಮಹದೇವಸ್ವಾಮಿ, ಶಿಕ್ಷಕ ಶಿವಕುಮಾರ್, ಶಿಕ್ಷಕ ಜಯಣ್ಣ ಮಹೇಶ್ ಮತ್ತಿತರರಿದ್ದರು.

ವಿಶ್ವಕರ್ಮ ಸಮುದಾಯ ಭವನಕ್ಕೆ 5 ಲಕ್ಷ ಅನುದಾನ



ಸರಗೂರು, ಏ.18(ನಾಗೇಶ್)– ವಿಶ್ವಕರ್ಮ ಸಮುದಾಯ ಭವನ ಮುಂದುವರೆದ ಕಾಮಗಾರಿಗೆ 5 ಲಕ್ಷ ರೂ. ಅನುದಾನ ನೀಡಲಾಗುವುದು ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ಪಟ್ಟಣದ ವಿಶ್ವಕರ್ಮ ಸಮಾಜದ ಸಮುದಾಯ ಭವನ ವೀಕ್ಷಿಸಿ ಮಾತನಾಡಿದ ಅವರು, ಈ ಹಿಂದೆ ನಮ್ಮ ತಂದೆಯವರು ಈ ಸಮುದಾಯ ಭವನಕ್ಕೆ 5 ಲಕ್ಷ ರೂ. ಅನುದಾನ ನೀಡಿದ್ದರು. ಸಮುದಾಯ ಭವನ ಕಾಮಗಾರಿ ಸ್ಥಗಿತಗೊಂಡಿದ್ದು, ಇಲ್ಲಿನ ಸಮಾಜದವರ ಮನವಿ ಮೇರೆಗೆ ನಾನು ಸಹ ಮುಂದುವರೆದ ಕಾಮಗಾರಿಗೆ 5 ಲಕ್ಷ ಅನುದಾನ ನೀಡುತ್ತೇನೆ. ಸಮುದಾಯದ ಬಂಧುಗಳು ಅನುದಾನ ಬಳಸಿಕೊಂಡು ಕಾಮಗಾರಿ ಪೂರ್ಣಗೊಳಿಸಿ ಎಂದರು. ವಿಶ್ವಕರ್ಮ ಸಮಾಜದ ವತಿಯಿಂದ ಶಾಸಕರನ್ನು ಸನ್ಮಾನಿಸಲಾಯಿತು.

ಪಪಂ ಸದಸ್ಯರಾದ ವೀರೇಶ್, ಶ್ರೀನಿವಾಸ್, ವಿಶ್ವಕರ್ಮ ಸಮಾಜದ ಅಧ್ಯಕ್ಷ ಶ್ರೀನಿವಾಸ್, ಮುಖಂಡರಾದ ಎಸ್.ಸಿ.ಗೋಪಾಲಕೃಷ್ಣ, ಎಸ್.ಸಿ.ನಾಗೇಶ್, ಸೋಮಣ್ಣ, ರಾಜೇಂದ್ರ ಚಾರ್, ಶ್ರೀನಿವಾಸ್, ಎಸ್.ಪಿ.ನಟರಾಜ್, ರಾಜೇಶ್, ನವೀನ್, ಬಸವರಾಜು, ಅರ್ಚಕರಾದ ಕುಮಾರ್, ಪರಶಿವಮೂರ್ತಿ ಇನ್ನಿತರರಿದ್ದರು.

ಕ್ಷೇತ್ರದ ಅಭಿವೃದ್ಧಿಯೇ ನನ್ನ ಗುರಿ: ಶಾಸಕ ಹರ್ಷವರ್ಧನ್

ಮಲ್ಲುಂಡಿ, ಏ.18(ಚನ್ನಪ್ಪ)– ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕಾಮಗಾರಿ ಇದ್ದರೂ, ನನ್ನ ಗಮನಕ್ಕೆ ತನ್ನಿ, ಅದನ್ನು ಕೈಗೆತ್ತಿಕೊಂಡು ಹಂತ ಹಂತವಾಗಿ ಕ್ಷೇತ್ರವನ್ನು ಅಭಿವೃದ್ಧಿ ಪಡಿಸುವುದೇ ನನ್ನ ಗುರಿ ಎಂದು ಶಾಸಕ ಬಿ.ಹರ್ಷವರ್ಧನ್ ತಿಳಿಸಿದರು.



ಇಲ್ಲಿನ ಬೆಳಲೆ ಗ್ರಾಮದಲ್ಲಿ 20 ಲಕ್ಷ ರೂ. ವೆಚ್ಚದ ಕಾಂಕ್ರೀಟ್ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ತಾಲೂಕಿನ ಗ್ರಾಮೀಣ ಭಾಗದ ಹಲವು ರಸ್ತೆಗಳು ಹದಗೆಟ್ಟಿರುವುದನ್ನು ಚುನಾವಣೆ ಸಂದರ್ಭ ಗಮನಿಸಿದೆ. ಅದನ್ನು ಅರಿತು ನನ್ನ ಅಧಿಕಾರವಧಿಯಲ್ಲಿ ಕ್ಷೇತ್ರದ ಪ್ರತಿ ಗ್ರಾಮದ ಎಲ್ಲಾ ಜನಾಂಗದ ಬೀದಿಗಳನ್ನು ಪಕ್ಷಭೇದ ಮರೆತು ಅಭಿವೃದ್ಧಿ ಪಡಿಸುತ್ತಿದ್ದೇನೆ. ಯಾವುದೇ ಕಾಮಗಾರಿ ಉಳಿದಿದ್ದರೆ ನನ್ನ ಗಮನಕ್ಕೆ ತನ್ನಿ, ನಾನು ಅದನ್ನು ಅಭಿವೃದ್ಧಿ ಪಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು. ಬಿಜೆಪಿ ತಾಲೂಕು ಅಧ್ಯಕ್ಷ ಪಿ.ಮಹೇಶ್, ರಾಜ್ಯ ಎಸ್ಟಿ ಮೋರ್ಚಾ ಉಪಾಧ್ಯಕ್ಷ ಚಿಕ್ಕರಂಗನಾಯಕ, ಅಲ್ಪಸಂಖ್ಯಾತ ತಾಲೂಕು ಅಧ್ಯಕ್ಷ ಅಬ್ದುಲ್ ರಜಾಕ್, ಮುಖಂಡ ಮಹದೇವಸ್ವಾಮಿ ಸೇರಿದಂತೆ ಪ್ರಮುಖರಿದ್ದರು.

ಕಟ್ಟೆಮಳಲವಾಡಿಯಲ್ಲಿ ಅದ್ಧೂರಿ ಶ್ರೀಸಿಡಿಯಮ್ಮನ ಜಾತ್ರೆ

ಹುಣಸೂರು,ಏ.18(ಕೆಕೆ)– ತಾಲೂಕಿನ ಕಟ್ಟೆಮಳಲವಾಡಿಯಲ್ಲಿ ಶ್ರೀಸಿಡಿಯಮ್ಮನವರ ಉತ್ಸವದಲ್ಲಿ ರೋಮಾಂಚನಕಾರಿ ಸಿಡಿಯು ಸಾವಿರಾರು ಭಕ್ತರ ಸಮ್ಮುಖದಲ್ಲಿ ನೆರವೇರಿತು.



ಕಲ್ಲುಣಿಕೆ ಸೇರಿದಂತೆ ಅಕ್ಕಪಕ್ಕದ ಗ್ರಾಮ ಗಳಿಂದ ಎಲ್ಲಾ ದೇವರುಗಳು ಲಕ್ಷ್ಮಣ ತೀರ್ಥ ನದಿಯಲ್ಲಿ ಸ್ನಾನ ಮತ್ತೆ ಪೂಜೆ ಮಾಡಿಕೊಂಡು ಮೂಲ ಸ್ಥಾನಕ್ಕೆ ಹೋಗಿ ಪೂಜೆ ಸಲ್ಲಿಸಿ, ನಂತರ ಜಾತ್ರೆ ಮಾಳಕ್ಕೆ ಬಂದು ಸಿಡಿ ಉತ್ಸವದ ಮಲ್ಲಗಂಬಕ್ಕೆ ಪೂಜೆ ಸಲ್ಲಿಸಿ ನಂತರ ದೇವರುಗಳು ಸಿಡಿ ಏರಿ ನಡೆಸಿದ ಪ್ರದರ್ಶನವನ್ನು ಸಾವಿರಾರು ಜನರು ವೀಕ್ಷಿಸಿದರು. ಸಿಡಿ ಉತ್ಸವದಲ್ಲಿ ಮಾಜಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಶಾಸಕ ಹೆಚ್.ಪಿ ಮಂಜುನಾಥ್, ಜೆಡಿಎಸ್ ತಾಲೂಕು ಅಧ್ಯಕ್ಷ ಸೋಮಶೇಖರ್, ಜೆಡಿಎಸ್ ತಾಲೂಕು ಉಪಾಧ್ಯಕ್ಷ ದೇವರಾಜ್ ಒಡೆಯರ್ ಸೇರಿದಂತೆ ನೂರಾರು ಭಕ್ತರು ಭಾಗವಹಿಸಿದ್ದರು.

ವಜಾಗೊಂಡ ಕಾರ್ಮಿಕರನ್ನು ವಾರದೊಳಗೆ ಮರುನೇಮಕ ಮಾಡಿಕೊಳ್ಳಿ

ಇಲ್ಲದಿದ್ದರೆ ಕಾರ್ಖಾನೆ ಎದುರು ಬೃಹತ್ ಪ್ರತಿಭಟನೆ: ಡಿ.ಶಂಕರ್ ಎಚ್ಚರಿಕೆ



ತಿ.ನರಸೀಪುರ, ಏ.18(ಎಸ್‌ಕೆ)– ತಾಲೂಕಿನ ಮಲಿಯೂರು ಗ್ರಾಮದ ಎಸ್‌ಪಿಆರ್ ಡಿಸ್ಟಿಲರಿಸ್ ಪ್ರೈವೇಟ್ ಲಿಮಿಟೆಡ್ ಆಡಳಿತ ಮಂಡಳಿ ಏಕಾಏಕಿ ಕೆಲಸದಿಂದ ವಜಾ ಮಾಡಿರುವ ಕಾರ್ಮಿಕರನ್ನು ವಾರದೊಳಗೆ ಮರುನೇಮಕ ಮಾಡಿಕೊಳ್ಳದಿದ್ದಲ್ಲಿ ಫ್ಯಾಕ್ಟರಿ ಎದುರು ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ತಾಲೂಕು ಬಾಬು ಜಗಜೀವನರಾಂ ಸಂಘದ ಅಧ್ಯಕ್ಷ ಡಿ.ಶಂಕರ್ ಎಚ್ಚರಿಕೆ ನೀಡಿದರು.

ಪಟ್ಟಣದ ಪಿಡಬ್ಲ್ಯೂಡಿ ಅತಿಥಿ ಗೃಹದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮಲಿಯೂರು ಸಮೀಪ ತಿಮ್ಮೇಗೌಡರು ಸಾರಾಯಿ ಫ್ಯಾಕ್ಟರಿ ಮಾಡಲು ಉದ್ದೇಶಿಸಿದ್ದ ವೇಳೆ ಗ್ರಾಮದ ನೂರಾರು ಮಂದಿ ಬಡವರು ತಮ್ಮ ಜಮೀನನ್ನು ಕೊಟ್ಟಿದ್ದರು. ಆ ವೇಳೆ ಸ್ಥಳೀಯರಿಗೆ ಫ್ಯಾಕ್ಟರಿಯಲ್ಲಿ ಶೇ.40ರಷ್ಟು ಕೆಲಸ ಕೊಡುವಂತೆ ಮಾಡಿದ್ದ ಮನವಿಗೆ ಸ್ಪಂದಿಸಿ ತಿಮ್ಮೇಗೌಡರು ಕೆಲಸ ನೀಡಿದ್ದರು. ಆ ನಂತರ ಸಾರಾಯಿ ನಿಷೇಧದಿಂದ ಫ್ಯಾಕ್ಟರಿ ಬಂದ್ ಆಗಿ, ಫ್ಯಾಕ್ಟರಿ ಹಿಂಭಾಗವಿದ್ದ 40 ಎಕರೆ ಜಮೀನನ್ನು ಆಸ್ಟ್ರೇಲಿಯಾ ಮೂಲದ ಕಂಪನಿಯೊಂದಕ್ಕೆ ನೀಡಿ ತಿಮ್ಮೇಗೌಡರು ಸ್ಥಳೀಯರಿಗೆ ಉದ್ಯೋಗ ನೀಡುವಂತೆ ಸೂಚನೆ ನೀಡಿದ್ದರು. ಆದರೆ ನೂತನ ಕಂಪನಿ ಸ್ಥಳೀಯರಿಗೆ ಕೆಲಸ ನೀಡದೆ ವಂಚಿಸಿದೆ ಎಂದು ಆರೋಪಿಸಿದರು.

ಸ್ಥಳೀಯರಿಗೆ ಉದ್ಯೋಗ ಕೊಡುವುದಿರಲಿ, ಕೆಲವರನ್ನು ಐದಾರು ವರ್ಷ ದುಡಿಸಿಕೊಂಡು ಕಾರಣವಿಲ್ಲದೇ ಏಕಾಏಕಿ ವಜಾ ಮಾಡಲಾಗುತ್ತಿದೆ. ಅಲ್ಲದೇ ಉದ್ಯೋಗ ಕೇಳಿದರೆ ಐಟಿಐ, ಡಿಪ್ಲೋಮಾ ಮಾಡಿರಬೇಕೆಂಬ ಕುಂಟುನೆಪ ಹೇಳುತ್ತಿದ್ದು, ಕಳೆದ 6 ವರ್ಷಗಳಿಂದ ಫ್ಯಾಕ್ಟರಿಯಲ್ಲಿ ದುಡಿದ ಸಂಜಯ್ ಎಂಬಾತನೂ ಸೇರಿದಂತೆ ಅನೇಕರನ್ನು ಕೆಲಸದಿಂದ ವಜಾ ಮಾಡಿ ದಬ್ಬಾಳಿಕೆ ನಡೆಸಲಾಗುತ್ತಿದೆ. ಇದನ್ನು ಪ್ರಶ್ನಿಸಲು ಹೋದ ನಮ್ಮ ಸಂಘಟನೆ ಮುಖ್ಯಸ್ಥರನ್ನು ಸಹ ಫ್ಯಾಕ್ಟರಿ ಇನ್‌ಚಾರ್ಜ್ ಬಳಿ ಮಾತನಾಡಲು ಬಿಡಲಿಲ್ಲ ಎಂದು ಕಿಡಿಕಾರಿದರು. ಸ್ಥಳೀಯರು ಫ್ಯಾಕ್ಟರಿಗೆ ಜಮೀನು ನೀಡುವ ಮೂಲಕ ನಿರ್ಗತಿಕರಾಗಿದ್ದಾರೆ. ಈ ಸಂಬಂಧ ಸಿಪಿಐ ಅವರನ್ನು ನ್ಯಾಯ ಕೊಡಿಸುವಂತೆ ಕೇಳಿದರೆ ಅವರೂ ಅಸಹಾಯಕರಾಗಿದ್ದಾರೆ. ಹಾಗಾಗಿ ಜಿಲ್ಲಾಧಿಕಾರಿಗಳು ಕೂಡಲೇ ಮಧ್ಯ ಪ್ರವೇಶಿಸಿ ನೊಂದ ಗ್ರಾಮಸ್ಥರಿಗೆ ನ್ಯಾಯ ದೊರಕಿಸಿಕೊಡಬೇಕು. ಕೆಲಸ ಕಳೆದುಕೊಂಡಿರುವವರಿಗೆ ಮತ್ತೆ ಕೆಲಸ ಕೊಡಿಸಲು ಮುಂದಾಗುವಂತೆ ಒತ್ತಾಯಿಸಿದರು.

ವಿನಾಕಾರಣ ಕೆಲಸದಿಂದ ಏಕಾಏಕಿ ವಜಾ ಮಾಡಿರುವ ಕಾರ್ಮಿಕರನ್ನು ಮತ್ತೆ ಮರು ನೇಮಕ ಮಾಡಿಕೊಳ್ಳಬೇಕು. ಜಮೀನು ಕಳೆದುಕೊಂಡಿರುವವರಿಗೆ ಶೇ.40 ರಷ್ಟು ಹುದ್ದೆ ನೀಡಬೇಕು. ಮಲಿಯೂರು, ನಂಜಾಪುರ, ಚಾಮನಹಳ್ಳಿ, ವಡ್ಡರಕೊಪ್ಪಲು ಸೇರಿದಂತೆ ಜಮೀನು ನೀಡಿರುವ ಗ್ರಾಮಸ್ಥರಿಗೆ ವಾರದೊಳಗೆ ಕೆಲಸ ನೀಡದಿದ್ದರೆ ಫ್ಯಾಕ್ಟರಿ ಎದುರು ಅಹೋರಾತ್ರಿ ಧರಣಿ ನಡೆಸಲಾಗುತ್ತದೆಂದು ಅವರು ಎಚ್ಚರಿಸಿದರು.

ಸಂಘದ ಖಜಾಂಚಿ ಬಿ.ಎಲ್.ಮಹದೇವ ಮಾತನಾಡಿದರು. ಸುದ್ದಿಗೋಷ್ಠಿಯಲ್ಲಿ ಸಂಘದ ಉಪಾಧ್ಯಕ್ಷ ಗೋವಿಂದರಾಜು, ಶಿವಶಂಕರ್, ಶಿವಕುಮಾರ್, ರಾಜಣ್ಣ, ಗ್ರಾಪಂ ಸದಸ್ಯ ರೇವಣ್ಣ, ಸಿದ್ದಲಿಂಗಮೂರ್ತಿ, ಕೆ.ಸಿ.ಲಿಂಗರಾಜು, ಶಾಂತರಾಜು, ಪುರಸಭಾ ಸದಸ್ಯ ಶಿವಣ್ಣ, ಸ್ವಾಮಿ, ಹೆಚ್.ನಾಗರಾಜು ಹಾಜರಿದ್ದರು.

ಸಮಸ್ಯೆಗಳ ಪರಿಹಾರಕ್ಕೆ ಜಿಲ್ಲಾಧಿಕಾರಿ ನಡೆ ಹಳ್ಳಿಯ ಕಡೆ ಕಾರ್ಯಕ್ರಮ ಸಹಕಾರಿ: ಶಾಸಕ ಮಹದೇವ್



ಪಿರಿಯಾಪಟ್ಟಣ, ಏ.18(ವೀರೇಶ್)– ಗ್ರಾಮೀಣಾಭಿವೃದ್ಧಿ ಹಾಗೂ ಕಂದಾಯ ಇಲಾಖೆ ಕೈಜೋಡಿಸಿ ಕೆಲಸ ಮಾಡಿದಾಗ ಮಾತ್ರ ಅಭಿವೃದ್ಧಿ ಕಾರ್ಯ ಸಾಧ್ಯ ಎಂದು ಶಾಸಕ ಕೆ.ಮಹದೇವ್ ಅಭಿಪ್ರಾಯಪಟ್ಟರು.

ತಾಲೂಕಿನ ಕೋಮಲಾಪುರದಲ್ಲಿ 'ಜಿಲ್ಲಾಧಿಕಾರಿ ನಡೆ ಹಳ್ಳಿಯ ಕಡೆ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ತಾಲೂಕಿನ ಎಲ್ಲಾ ಇಲಾಖೆಗಳ ಮೇಲಾಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಸಿಬ್ಬಂದಿಗಳೊಂದಿಗೆ ಉತ್ತಮವಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ತಾಲೂಕಿನ ಅಭಿವೃದ್ಧಿ ವಿಚಾರದಲ್ಲಿ ರಾಜಿ ಇಲ್ಲ. ಸ್ಥಳೀಯ ಸಮಸ್ಯೆಗಳ ಪರಿಹಾರಕ್ಕೆ ಜಿಲ್ಲಾಧಿಕಾರಿಗಳ ನಡೆ ಹಳ್ಳಿಯ ಕಡೆ ಕಾರ್ಯಕ್ರಮ ಸಹಕಾರಿಯಾಗಲಿದೆ ಎಂದರು.

ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್ ಮಾತನಾಡಿ, ಗ್ರಾಮೀಣ ಭಾಗದ ಕೆರೆ, ಸ್ಮಶಾನ ಸೇರಿದಂತೆ ಆಸ್ತಿ ರಕ್ಷಣೆಗೆ ಒತ್ತು ನೀಡಲಾಗುವುದು. ಕಾರ್ಯಕ್ರಮದಲ್ಲಿ 100ಕ್ಕೂ ಹೆಚ್ಚು ಅರ್ಜಿಗಳು ಸಲ್ಲಿಕೆಯಾಗಿದ್ದು, 15 ದಿನದೊಳಗೆ ಸಮಸ್ಯೆಗಳನ್ನು ಬಗೆಹರಿಸುವಂತೆ ತಹಸೀಲ್ದಾರ್‌ಗೆ ಸೂಚಿಸಿದ್ದೇನೆ. ಅಲ್ಲದೇ ಉಪ ವಿಭಾಗ ಮಟ್ಟದ ಸಮಸ್ಯೆಗಳನ್ನು 2 ತಿಂಗಳ ಅವಧಿಯಲ್ಲಿ ಬಗೆಹರಿಸುವಂತೆ ತಿಳಿಸಲಾಗಿದೆ. ಅಕ್ರಮ ಮದ್ಯ ಮಾರಾಟ ತಡೆಗಟ್ಟಲು ಅಬಕಾರಿ ಇಲಾಖೆ ಅಧಿಕಾರಿಗಳು ವಿಫಲವಾದರೆ ಅವರ ವಿರುದ್ಧ ಶಿಸ್ತು ಕ್ರಮದ ಎಚ್ಚರಿಕೆ ಹಾಗೂ ನಮ್ಮ ಹೊಲ ನಮ್ಮ ರಸ್ತೆಗೆ ಅರಣ್ಯ ಇಲಾಖೆಯಿಂದ ಅಡ್ಡಿಯಾಗುತ್ತಿರುವ ಬಗ್ಗೆ ಸಮಸ್ಯೆ ಬಗೆಹರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಪಂ ಸಿಇಓ ಬಿ.ಆರ್.ಪೂರ್ಣಿಮಾ ಮಾತನಾಡಿದರು. ಸಮಾರಂಭದಲ್ಲಿ ಎಸಿ ವರ್ಣಿತ್ ನೇಗಿ, ತಹಸೀಲ್ದಾರ್ ಕೆ.ಚಂದ್ರಮೌಳಿ, ತಾಪಂ ಇಓ ಸಿ.ಆರ್ ಕೃಷ್ಣಕುಮಾರ್, ಬಿಇಓ ವೈ.ಕೆ. ತಿಮ್ಮೇಗೌಡ, ಜಿಪಂ ಎಇಇ ಮಂಜುನಾಥ್, ಪಿಡಬ್ಲ್ಯೂಡಿ ಎಇಇ ಜಯಂತ್, ವಲಯ ಅರಣ್ಯಾಧಿಕಾರಿಗಳಾದ ರತನ್‌ಕುಮಾರ್, ವಿನೋದ್‌ಗೌಡ, ಟಿಎಚ್‌ಓ ಡಾ.ಶರತ್‌ಬಾಬು, ಭೂ ಮಾಪನ ಇಲಾಖೆ ಸಹಾಯಕ ನಿರ್ದೇಶಕ ಚಿಕ್ಕಣ್ಣ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಸಾದ್, ಅಬಕಾರಿ ಇಲಾಖೆ ನಿರೀಕ್ಷಕ ಧರ್ಮರಾಜ್, ಆರ್‌ಡಬ್ಲ್ಯೂಎಸ್ ಎಇಇ ಪ್ರಭು, ಪಶು ವೈದ್ಯಕೀಯ ಇಲಾಖೆ ಸಹಾಯಕ ನಿರ್ದೇಶಕ ಡಾ.ಸೋಮಯ್ಯ, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕಿ ಭಾರತಿ, ಸಿಡಿಪಿಓ ಮಮತಾ, ಚೆಸ್ಕಾಂ ಎಇಇ ಆಕಾಶ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಸಿದ್ದೇಗೌಡ, ಬಿಸಿಎಂ ವಿಸ್ತರಣಾಧಿಕಾರಿ ಪ್ರೇಮ್ ಕುಮಾರ್, ಪಿಡಿಓ ಶಿವನಗೌಡ, ದೇವರಾಜೇಗೌಡ, ಕೋಮಲಾಪುರ ಗ್ರಾಪಂ ಅಧ್ಯಕ್ಷೆ ಸುಗುಣ ಇತರರಿದ್ದರು.

ಡಾ.ವಸುಂಧರಾ ದೊರೆಸ್ವಾಮಿ ಅವರಿಗೆ 'ಕದಳಿ ಶ್ರೀ' ಪ್ರಶಸ್ತಿ ಪ್ರದಾನ

ಮೈಸೂರು, ಏ.18(ಎಂಟಿವೈ)– ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ನಡೆದ ಕದಳಿ ಮಹಿಳಾ ವೇದಿಕೆಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಭರತ ನಾಟ್ಯ ಕಲಾವಿದೆ ಡಾ. ವಸುಂಧರಾ ದೊರೆಸ್ವಾಮಿ ಅವರಿಗೆ ಈ ಸಾಲಿನ 'ಕದಳಿಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸುತ್ತೂರು ಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಭರತನಾಟ್ಯ ಕಲಾವಿದೆ ಡಾ.ವಸುಂಧರಾ ದೊರೆಸ್ವಾಮಿ ಅವರಿಗೆ 'ಕದಳಿಶ್ರೀ' ಪ್ರಶಸ್ತಿ ಪ್ರದಾನ ಮಾಡಿ, ಆಶೀರ್ವದಿಸಿದರು.

ವಿಶ್ರಾಂತ ಕುಲಪತಿ ಡಾ.ಚಿದಾನಂದ ಗೌಡ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಕದಳಿ ಮಹಿಳಾ ವೇದಿಕೆ ಹಲವು ಸಮಾಜಮುಖಿ ಕೆಲಸ ಮಾಡುತ್ತಾ ಬಂದಿದೆ. ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಮಹಿಳೆಯರಿಗೆ ಕದಳಿಶ್ರೀ ಪ್ರಶಸ್ತಿ ನೀಡುವ ಮೂಲಕ ಉತ್ತೇಜನ ನೀಡಲಾಗುತ್ತಿದೆ. ಕದಳಿ ಎನ್ನುವ ಹೆಸರೇ ವಿಭಿನ್ನವಾಗಿದ್ದು, ಅದಕ್ಕೆ ತಕ್ಕಂತೆ ವಿಭಿನ್ನವಾದ ಕಾರ್ಯಕ್ರಮ ನಡೆಸುವ ಮೂಲಕ ಗಮನ ಸೆಳೆಯುತ್ತಿದ್ದಾರೆ. ಸಮಾಜ ಸೇವಾ ದೃಷ್ಟಿಯಿಂದ ವಿಕಲಚೇತನರಿಗೆ ಕೃತಕ ಕಾಲು, ವ್ಹೀಲ್ ಚೇರ್, ಅಶಕ್ತ ಮಹಿಳೆಯರಿಗೆ ಸ್ವಯಂ ಉದ್ಯೋಗ ಕಲ್ಪಿಸಿಕೊಳ್ಳುವ ನಿಟ್ಟಿನಲ್ಲಿ ಹೊಲಿಗೆ ಯಂತ್ರ ಕೊಡುಗೆ ನೀಡಲಾಗಿದೆ. ಇದರಿಂದ ಹಲವು ಮನೆಗಳಿಗೆ ನವ ಜ್ಯೋತಿ ಬಂದಂತಾಗಿದೆ. ಇಂತಹ ಸೇವಾ ಕಾರ್ಯ ಮುಂದುವರೆಸಿಕೊಂಡು ಹೋಗಬೇಕು ಎಂದು ಸಲಹೆ ನೀಡಿದರು.

ಸುತ್ತೂರು ಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಿದ್ದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಪ್ರೊ.ಮಲೆಯೂರು ಗುರುಸ್ವಾಮಿ ವಹಿಸಿದ್ದರು. ಶರಣ ಸಾಹಿತ್ಯ ಪರಿಷತ್ತಿನ ಮೈಸೂರು ಘಟಕದ ಅಧ್ಯಕ್ಷ ಮ.ಗು. ಸದಾನಂದಯ್ಯ, ಜಿಲ್ಲಾ ಘಟಕದ ಅಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ, ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ ಹಾಗೂ ಪದಾಧಿಕಾರಿಗಳು ಪಾಲ್ಗೊಂಡಿದ್ದರು. ಇದೇ ವೇಳೆ ವಿಕಲಚೇತನರಿಗೆ ರೊ. ಆಶಾ ರಾಮಾರಾಧ್ಯ, ಶರಣೆ ಎಂ.ಎ. ನೀಲಾಂಬಿಕಾ ಕೃತಕ ಕಾಲು ಕೊಡುಗೆ ನೀಡಿದರು. ಸುಧಾ ಮೃತ್ಯುಂಜಯಪ್ಪ, ರಾಜೇಶ್ವರಿ ಮಹೇಶ್ ತಲಾ ಒಂದೊಂದು ವ್ಹೀಲ್ ಚೇರ್, ಚಿಗುರು ಸಂಸ್ಥೆಯ ಸುಷ್ಮಾ ಅವರಿಗೆ ಶಾರದಾ ಶಿವಲಿಂಗಸ್ವಾಮಿ ಅವರು ಒಂದು ಹೊಲಿಗೆ ಯಂತ್ರ ಹಾಗೂ ಶೋಭಾ ಜೈಪ್ರಕಾಶ್ ಅವರು ಕೆಲ ದೃಷ್ಟಿಹೀನ ವಿದ್ಯಾರ್ಥಿಗಳಿಗೆ ವಿಶೇಷ ಕೈಗಡಿಯಾರವನ್ನು ಕೊಡುಗೆಯಾಗಿ ನೀಡಿ ಗಮನ ಸೆಳೆದರು.



ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ನಡೆದ ಕದಳಿ ಮಹಿಳಾ ವೇದಿಕೆಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಭರತನಾಟ್ಯ ಕಲಾವಿದೆ ಡಾ.ವಸುಂಧರಾ ದೊರೆಸ್ವಾಮಿ ಅವರಿಗೆ ಈ ಸಾಲಿನ 'ಕದಳಿಶ್ರೀ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು. ಚಿತ್ರದಲ್ಲಿ ಸುತ್ತೂರು ಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ವಿಶ್ರಾಂತ ಕುಲಪತಿ ಡಾ.ಚಿದಾನಂದಗೌಡ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಪ್ರೊ.ಮಲೆಯೂರು ಗುರುಸ್ವಾಮಿ, ಶರಣ ಸಾಹಿತ್ಯ ಪರಿಷತ್ತಿನ ಮೈಸೂರು ಘಟಕದ ಅಧ್ಯಕ್ಷ ಮ.ಗು.ಸದಾನಂದಯ್ಯ, ಜಿಲ್ಲಾ ಘಟಕದ ಅಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ, ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ ಹಾಗೂ ಇನ್ನಿತರರನ್ನು ಕಾಣಬಹುದು.

"ಕದಳಿ ಪ್ರಶಸ್ತಿ ಸಂತೋಷದಿಂದ ಸ್ವೀಕರಿಸಿದ್ದೇನೆ. ಈ ಪ್ರಶಸ್ತಿ ಪಡೆದದ್ದಕ್ಕಾಗಿ ನಾನು ಪುಣ್ಯವಂತೆ ಎನಿಸುತಿದೆ. ಪರಮಾತ್ಮನನ್ನು ಸೇರಲು ನೃತ್ಯ ಉತ್ತಮ ಮಾಧ್ಯಮವಾಗಿದೆ. ಶಾಸ್ತ್ರೀಯ ಕಲೆಗಳಲ್ಲಿ ನೃತ್ಯವು ಪರಮಾತ್ಮನ ಹೃದಯವಿದ್ದಂತೆ. ಎಲ್ಲದರಲ್ಲಿಯೂ ಒಳ್ಳೆಯದನ್ನು ಗುರುತಿಸಿ ಪ್ರತಿಭೆ ಮೂಲಕ ಸಮಾಜವನ್ನು ಸರಿದಾರಿಯತ್ತ ಕೊಂಡೊಯ್ಯುವ ಕೆಲಸ ಮಾಡಬೇಕು. ಅಕ್ಕಮಹಾದೇವಿಯವರ ವಚನಗಳು ಸದಾ ಕಾಲ ಸ್ಫೂರ್ತಿಯ ಸೆಲೆಯಾಗಿವೆ.

–ಡಾ.ವಸುಂಧರಾ ದೊರೆಸ್ವಾಮಿ, ಭರತನಾಟ್ಯ ಕಲಾವಿದೆ

ಸ್ವಪ್ರೀತಿ ಇಲ್ಲದಿದ್ದರೆ ಜೀವನದಲ್ಲಿ ಏನನ್ನೂ ಸಾಧಿಸಲಾಗಲ್ಲ

ಪ್ರೊ. ಮಲೆಯೂರು ಗುರುಸ್ವಾಮಿ ಅಭಿಮತ

ಮೈಸೂರು, ಏ.18(ಎಂಟಿವೈ)– ಜೀವನದಲ್ಲಿ ಸ್ವಪ್ರೀತಿ ಇಲ್ಲದಿದ್ದರೆ ಏನನ್ನೂ ಸಾಧಿಸಲು ಆಗುವುದಿಲ್ಲ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಪ್ರೊ. ಮಲೆಯೂರು ಗುರುಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ.

ಕದಳಿ ಮಹಿಳಾ ವೇದಿಕೆ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾವು ಪ್ರೀತಿಯಿಂದ ಜೀವಿಸದಿದ್ದಲ್ಲಿ ಬದುಕಿನಲ್ಲಿ ಯಶಸ್ಸು ಸಾಧಿಸಲು ಆಗುವುದಿಲ್ಲ. ಅದರೊಂದಿಗೆ ನಮ್ಮನ್ನು ನಾವು ಸ್ವ ಪ್ರೀತಿ ಮಾಡದಿದ್ದರೆ ಏನನ್ನೂ ಸಾಧಿಸಲಾಗುವುದಿಲ್ಲ, ನಾವು ಗಳಿಸುವ ಸೌಂದರ್ಯ, ಕುಲ ಸಂಪತ್ತು, ಕೀರ್ತಿ, ಹಣ ಸಂಪಾದನೆ, ದೇಹ ಶಕ್ತಿ ಇವೆಲ್ಲವು ಗೌಣವಾಗುತ್ತಿವೆ. ಎಲ್ಲವೂ ನಮ್ಮಿಂದ ದೂರವಾದರೂ ನಮ್ಮ ಸಾಧನೆ ಮಾತ್ರ ಎಂದಿಗೂ ಮಾಜಿ ಎನಿಸುವುದಿಲ್ಲ ಎಂದರು. ಕದಳಿ ಮಹಿಳಾ ವೇದಿಕೆಯು ನಾಡಿನುದ್ದಗಲಕ್ಕೂ ಒಳ್ಳೆ ಕೆಲಸಗಳನ್ನು ಮಾಡುತ್ತಾ ಬರುತ್ತಿದೆ. ತುಮಕೂರು, ಶಿವಮೊಗ್ಗದಲ್ಲಿರುವ ಘಟಕಗಳಂತೆ ಮೈಸೂರು ಘಟಕವೂ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದೆ. ನೂರೆಂಟು ಬೌದ್ಧಿಕ ವಿಚಾರಗಳ ನಡುವೆ ಎಲ್ಲರನ್ನೂ ಸಂತೃಪ್ತಿಗೊಳಿಸಲು ಬೇಕಾದ ಗುಣ, ಸಂಯಮ, ಸಹನೆ ಮತ್ತು ಉದಾರತೆ ಇದ್ದಾಗ ಮಾತ್ರ ಸಂಘಟನೆ ಬೆಳೆಯುತ್ತದೆ ಎಂದರು.

50 ಸನ್ಯಾಸಿಗಳು ಚುನಾವಣಾ ಅಖಾಡಕ್ಕೆ: ಬ್ರಹ್ಮಾನಂದ ಸರಸ್ವತಿ ಸ್ವಾಮೀಜಿ



ಭಗವದ್ಗೀತೆಯೇ ಪಕ್ಷದ ಚಿಹ್ನೆ: ಭಟ್ಕಳದಿಂದ ಪ್ರಾಯೋಗಿಕವಾಗಿ ಸ್ಪರ್ಧೆ

ಭಟ್ಕಳ (ಉತ್ತರ ಕನ್ನಡ), ಏ. 18– ಶಾಸಕಾಂಗದ ಸಮಗ್ರ ಬದಲಾವಣೆ ಗಾಗಿ, ರಾಜ್ಯದಲ್ಲಿ 50 ಸನ್ಯಾಸಿಗಳು ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಕಣಕ್ಕಿಳಿಯಲಿದ್ದಾರೆ. ಉತ್ತರಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಅವರಿಂದ ಪ್ರೇರಣೆ ಪಡೆದಿದ್ದೇವೆ ಎಂದು ಉಜಿರೆ ಶ್ರೀರಾಮಕ್ಷೇತ್ರದ ಪೀಠಾಧಿ ಪತಿ ಬ್ರಹ್ಮಾನಂದ ಸರಸ್ವತಿ ಸ್ವಾಮೀಜಿ ಹೇಳಿದರು.

ಸಮೀಪದ ಸಾರದ ಹೊಳೆ ಹಳೆಕೋಟೆ ಶ್ರೀಕ್ಷೇತ್ರ ಹನುಮಂತ ದೇವರ ಪುನರ್ ಪ್ರತಿಷ್ಠಾ ಮಹೋತ್ಸವದ ಸೋಮವಾರದ ಕಾರ್ಯಕ್ರಮದಲ್ಲಿ ಮಾತನಾಡಿದರು. ಇಂದು ರಾಜ್ಯಾಂಗದ ವ್ಯವಸ್ಥೆ ದಿಕ್ಕು ತಪ್ಪುತ್ತಿದೆ. ಇದರ ಪರಿಕಲ್ಪನೆಯೇ ಇಲ್ಲದೆ ಶಾಸಕರು ವಿಧಾನಸಭೆಯಲ್ಲಿ ಅಶಿಸ್ತಿನ ವರ್ತನೆ ತೋರುತ್ತಿ ದ್ದಾರೆ. ಇಂದಿನ ಕಾಲದಲ್ಲಿ ರಾಜ ಕೀಯಕ್ಕೆ ಬರುವುದೇ ಪ್ರಚಾರಕ್ಕಾಗಿ, ಹಣಕ್ಕಾಗಿ, ಸುಖಭೋಗಕ್ಕಾಗಿ ಎಂದು ತಿಳಿದಿದ್ದಾರೆ. ವಿದ್ಯಾವಂತರ ಲ್ಲದ ರಾಜಕಾರಣಿಗಳು ಇಂದು ತಮ್ಮ ಸಾಮರ್ಥ್ಯ ನಿಭಾಯಿಸುವಲ್ಲಿ ಅಸಮರ್ಥರಾಗುತ್ತಿದ್ದಾರೆ ಎಂದರು.

ಉತ್ತರಾಖಂಡದ ನಾಗಾ ಸಾಧುಗಳ ಜೂನಾ ಅಖಾಡ ದಲ್ಲಿ ನಾನೂ ಒಬ್ಬ ಪಂಥನಿದ್ದೇನೆ. ಈಗಾಗಲೇ ಈ ಬಗ್ಗೆ ನಮ್ಮಲ್ಲಿ ಹಲವು ಚರ್ಚೆಗಳು ನಡೆದಿವೆ. ಸನಾತನ ಹಿಂದೂ ಧರ್ಮವನ್ನು ತಿದ್ದಬೇಕು. ಹಾಗಾಗಿ ರಾಮ ರಾಜ್ಯ ಕಲ್ಪನೆಯಲ್ಲಿ ಭಗವದ್ಗೀತೆ ಯನ್ನು ಪಕ್ಷದ ಚಿಹ್ನೆಯನ್ನಾಗಿ ಇಟ್ಟುಕೊಂಡು ಭಟ್ಕಳದಿಂದ ಪ್ರಾಯೋಗಿಕವಾಗಿ ನಾನು ಸ್ಪರ್ಧಿಸುವ ಯೋಚನೆಯಲ್ಲಿದ್ದೇನೆ ಎಂದರು. ರಾಜ್ಯದಲ್ಲಿ ಶಾಸಕಾಂಗ, ನ್ಯಾಯಾಂಗ ಹಾಗೂ ರಾಜ್ಯಾಂಗದ ವಿಕೇಂದ್ರೀಕರಣ ಆಗಬೇಕು. ಆದರೆ, ಕೇಂದ್ರೀಕರಣ ಆಗುತ್ತಿರುವುದು ವಿಷಾದನೀಯ. ಧರ್ಮ ಹಾಗೂ ರಾಜಕೀಯ ಒಟ್ಟಿಗೆ ಹೋಗಬೇಕು. ರಾಜ್ಯದಲ್ಲಿ ತ್ಯಾಗಿ ರಾಜಕಾರಣಿ ಮುಂದೆ ಬರಬೇಕು. ಹಾಗಾದಲ್ಲಿ ರಾಜ್ಯ ದಲ್ಲಿ ಸಮಾನತೆ ತರಲು ಸಾಧ್ಯ ಎಂದು ಪ್ರತಿಪಾದಿಸಿದರು.

ಈ ಹಿಂದೆ ಕೃಷ್ಣ, ರಾಮರ ಕಾಲದಲ್ಲಿ ರಾಜ್ಯಾಂಗ ಹಾದಿ ತಪ್ಪಿದಾಗ ಋಷಿಮುನಿಗಳು ಮಧ್ಯಪ್ರವೇಶಿಸುತ್ತಿದ್ದರು. ಈಗಿನ ಸಮಯದಲ್ಲಿ ರಾಜ್ಯಾಂಗ ಹಾದಿ ತಪ್ಪಿದಾಗ ನಾವು ತಿದ್ದಲು ಸಿದ್ಧರಿದ್ದೇವೆ ಎಂದು ಹೇಳಿದರು. ಬ್ರಹ್ಮಾನಂದ ಸರಸ್ವತಿ ಸ್ವಾಮೀಜಿ ಮಾತಿಗೆ ಪ್ರತಿಕ್ರಿಯಿಸಿದ ವಿಧಾನಸಭೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಸ್ವಾಮೀಜಿ ಅವರ ಮಾತಿನಲ್ಲಿ ಬಲವಾದ ಎಚ್ಚರಿಕೆಯ ಸಂದೇಶವಿದೆ. ಅವರು ಪ್ರಸ್ತುತ ರಾಜಕೀಯ ಸ್ಥಿತಿಗತಿ ನೋಡಿ ಮನದಾಳದ ನೋವಿನ ಮಾತನಾಡಿದ್ದಾರೆ. ಒಳ್ಳೆಯ ಆಡಳಿತ ನೀಡಿ ಎನ್ನುವುದು ಅವರ ಸಂದೇಶವಾಗಿದೆ. ಅದನ್ನು ನಾವು ಮುಂದಿನ ದಿನದಲ್ಲಿ ಪಾಲಿಸುತ್ತೇವೆ ಎಂದರು.

ಹೆಬ್ಬಾಳ ಕೆರೆಯಲ್ಲಿ ಸತ್ತ ಮೀನುಗಳ ತೆರವು

ಕೆರೆ ಸಂರಕ್ಷಣೆಗೆ ಆಗ್ರಹಿಸಿ ಸಾರ್ವಜನಿಕರ ಪ್ರತಿಭಟನೆ



ಮೈಸೂರು, ಏ.18(ಎಂಕೆ)– ವಿವಿಧ ಕಾರ್ಖಾನೆಗಳ ರಸಾಯನಿಕಯುಕ್ತ ನೀರು ಮಿಶ್ರವಾಗಿ ಮೈಸೂರಿನ ಹೆಬ್ಬಾಳ ಕೆರೆಯಲ್ಲಿ ಸತ್ತ ಮೀನುಗಳನ್ನು ಹೂಟಗಳ್ಳಿ ನಗರ ಸಭೆ ಹಾಗೂ ಇನ್ಫೋಸಿಸ್ ಸಿಬ್ಬಂದಿಯಿಂದ ಪ್ರತ್ಯೇಕವಾಗಿ ತೆರವು ಕಾರ್ಯಾಚರಣೆ ನಡೆಸಲಾಯಿತು.

ಕಾರ್ಖಾನೆಗಳು ಹಾಗೂ ವಿವಿಧ ಬಡಾವಣೆಗಳಿಂದ ಹರಿದು ಬರುವ ಕಲುಷಿತ ನೀರು, ಕೆರೆ ಸೇರುವ ಸ್ಥಳದಲ್ಲಿ ಕಸ ಹಾಗೂ ಸತ್ತ ಮೀನುಗಳನ್ನು ಹೂಟಗಳ್ಳಿ ನಗರ ಸಭೆ ಸಿಬ್ಬಂದಿ ತೆರವುಗೊಳಿಸಿದರೆ, ಇನ್ಫೋಸಿಸ್ ಸಿಬ್ಬಂದಿ ನೀರನ್ನು ಶುಚಿಗೊಳಿಸುವ ಯಂತ್ರಗಳ ಬಳಿ ಹಾಗೂ ಕೆರೆಯ ಸುತ್ತಲು ತೆರವುಗೊಳಿಸಿದರು.

ಪ್ರತಿಭಟನೆ: ಹೆಬ್ಬಾಳ ಕೆರೆಗೆ ಕಾರ್ಖಾನೆಗಳು ಹಾಗೂ ಬಡಾವಣೆಗಳ ಕಲುಷಿತ ನೀರು ಸೇರದಂತೆ ತಡೆಯಬೇಕು ಎಂದು ಒತ್ತಾಯಿಸಿ ಹೆಬ್ಬಾಳ ಕೆರೆ ಹಿತರಕ್ಷಣಾ ಸಮಿತಿ ವತಿಯಿಂದ ಕೆರೆಯ ಆವರಣದಲ್ಲೇ ಪ್ರತಿಭಟನೆ ನಡೆಸಲಾಯಿತು.

ಕಲುಷಿತ ನೀರಿನಿಂದ ಲಕ್ಷಾಂತರ ಮೀನುಗಳು ಸಾವನ್ನಪ್ಪಿವೆ. ಕೆರೆ ವಾತಾರಣ ಹಾಳಾಗಿದ್ದು, ವಾಯುವಿಹಾರಿಗಳಿಗೆ ತೀವ್ರ ತೊಂದರೆ ಉಂಟಾಗಿದೆ. ಕೆರೆಯ ಸ್ವಚ್ಛತೆಗೆ ಇನ್ಫೋಸಿಸ್ ಸಂಸ್ಥೆಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಸ್ಪಂದಿಸಬೇಕು ಎಂದು ಒತ್ತಾಯಿಸಿದರು. ಹೆಬ್ಬಾಳು ಕೆರೆ ಹಿತರಕ್ಷಣಾ ಸಮಿತಿ ಅಧ್ಯಕ್ಷ ರವಿಕುಮಾರ್, ಪದಾಧಿಕಾರಿಗಳಾದ ರಾಘವೇಂದ್ರ(ಡೈರಿ), ಪ್ರಸನ್ನ, ಕೃಷ್ಣ, ರವಿ ಭೂಪತಿ ಹಾಗೂ ವಾಯು ವಿಹಾರಕ್ಕೆ ಬಂದ ಹಲವರು ಉಪಸ್ಥಿತರಿದ್ದರು.

ಮುಡಾದಿಂದ ಒತ್ತುವರಿ ತೆರವು: ಮನೆ ಕಳೆದುಕೊಂಡವರ ಧರಣಿ



ಮೈಸೂರು, ಏ.18(ಎಂಕೆ)– ಮೈಸೂರಿನ ರಾಮಕೃಷ್ಣನಗರದ ಉಪ ನೋಂದಣಾಧಿಕಾರಿ ಕಚೇರಿ ಎದುರಿನಲ್ಲಿ ಮುಡಾ (ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ) ನಡೆಸಿದ ಒತ್ತುವರಿ ತೆರವು ಕಾರ್ಯಾಚರಣೆಯಲ್ಲಿ ಮನೆ ಕಳೆದುಕೊಂಡ 30ಕ್ಕೂ ಹೆಚ್ಚು ನಿವಾಸಿಗಳು ಸೋಮವಾರ ಪ್ರತಿಭಟನೆ ನಡೆಸಿದರು.

ಕಳೆದ 30 ವರ್ಷಗಳಿಂದಲೂ ಇಲ್ಲಿಯೇ ವಾಸವಿದ್ದೇವೆ. ವ್ಯಕ್ತಿಯೊಬ್ಬರಿಂದ ಈ ಜಾಗ ಖರೀದಿ ಮಾಡಿ ಮನೆ ಕಟ್ಟಿ ಕೊಂಡಿದ್ದೆವು. ಮತದಾನ, ಆಧಾರ್, ಪಡಿತರ ಕಾರ್ಡ್ ಸೇರಿದಂತೆ ಎಲ್ಲವನ್ನು ಇದೇ ವಿಳಾಸದಲ್ಲಿ ಪಡೆದು ಜೀವನ ಸಾಗಿಸುತ್ತಿದ್ದೇವೆ. ಆದರೆ ಮುಡಾದವರು ಏಕಾಏಕಿ ಜೆಸಿಬಿಗಳಿಂದ ನಮ್ಮ ಮನೆಗಳನ್ನು ನೆಲಸಮ ಮಾಡಿದ್ದಾರೆ. ಈಗ ನಮಗೆ ವಾಸಕ್ಕೆ ಮನೆ ಇಲ್ಲದೆ ಬೀದಿಯಲ್ಲಿದ್ದೇವೆ. ಮುಡಾದವರು ನಮ್ಮಂತಹ ಬಡವರ ಮೇಲೆ ದರ್ಪ ತೋರುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಾವು ಆರ್ಥಿಕವಾಗಿ ಹಿಂದುಳಿದಿದ್ದು, ಸಣ್ಣ–ಪುಟ್ಟ ಕೂಲಿ ಕೆಲಸಗಳನ್ನು ಮಾಡಿಕೊಂಡು ಜೀವನ ಸಾಗಿಸುತ್ತಿದ್ದೇವೆ. ನಮಗಿದ್ದ ಮನೆಗಳನ್ನು ಕೆಡವಿ ರಸ್ತೆಗೆ ಹಾಕಿದ್ದಾರೆ. ಎಲ್ಲಿಗೆ ಹೋಗಬೇಕು ಎಂಬುದೇ ತೋಚುತ್ತಿಲ್ಲ. ನಮಗೆ ನ್ಯಾಯಬೇಕು ಎಂದು ಮುಡಾ ಸಿಬ್ಬಂದಿ ವಿರುದ್ಧ ಘೋಷಣೆಗಳನ್ನು ಕೂಗಿದರಲ್ಲದೆ, ನ್ಯಾಯ ದೊರಕುವವರೆಗೂ ನಿರಂತರವಾಗಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ನರಸಿಂಹ, ಬೋರಮ್ಮ, ರತ್ನ, ಶಾರದ, ಮರಿಯಮ್ಮ, ಸುನಂದ, ಲತಾ, ಪದ್ಮ, ಲಕ್ಷ್ಮಮ್ಮ, ಸಾವಿತ್ರಮ್ಮ ಮತ್ತಿತರರಿದ್ದರು.

ಬಿವಿಐ- ರಾಯಲ್ ಕ್ಲಬ್ ಮೈಸೂರು ಉದ್ಘಾಟನೆ



ಮೈಸೂರಿನ ವಿಜಯನಗರ ಒಂದನೇ ಹಂತದಲ್ಲಿರುವ ಕನ್ನಡ ಸಾಹಿತ್ಯ ಭವನದಲ್ಲಿ ಭಾವಸಾರ್ ವಿಷನ್ ಇಂಡಿಯಾದ (ಬಿವಿಐ) ರಾಯಲ್ ಕ್ಲಬ್ ಮೈಸೂರು ಶಾಖೆಯ ನೂತನ ಅಧ್ಯಕ್ಷ ರವೀಂದ್ರ ಉತ್ತರ್‌ಕರ್ ಮತ್ತು ಕಾರ್ಯದರ್ಶಿ ಸಂತೋಷ್ ಪತಂಗೆ ನೇತೃತ್ವದ ಪದಾಧಿಕಾರಿಗಳ ತಂಡವನ್ನು ವಲಯ 103ರ ಗೌರ್ನರ್ ಮಂಜುನಾಥ್ ಬಾಂಗ್ರೆ ಅವರು ಪದಗ್ರಹಣ ನೆರವೇರಿಸಿದರು. ಬಿವಿಐ ರಾಷ್ಟ್ರೀಯ ಅಧ್ಯಕ್ಷ ಸತೀಶ್ ಜಾಧವ್ ಅಧ್ಯಕ್ಷತೆ ವಹಿಸಿದ್ದರು. ಚಿತ್ರದಲ್ಲಿ ಭಾವಸಾರ ಕ್ಷತ್ರಿಯ ಸಮಾಜದ ಹಿರಿಯ ಮುಖಂಡರಾದ ಶಿವಾಜಿರಾವ್ ರಂಪೂರೆ, ಜಯರಾಮರಾವ್ ಲಾಳಿಗೆ, ನಾಗರಾಜ ಪತಂಗೆ, ಸತ್ಯನಾರಾಯಣ ಸುಲಾಖೆ, ನಿಯೋಜಿತ ಅಧ್ಯಕ್ಷ ಗಣೇಶ್ ಲಾಳಿಗೆ ಇನ್ನಿತರರನ್ನು ಕಾಣಬಹುದು.

ರೈಲಿಗೆ ಸಿಲುಕಿ ಅಪರಿಚಿತ ಸಾವು

ಮೈಸೂರು, ಏ.18–ಮೈಸೂರು–ಚಾಮರಾಜಪುರಂ ರೈಲು ನಿಲ್ದಾಣಗಳ ನಡುವೆ ಅಪರಿಚಿತ ವ್ಯಕ್ತಿಯೊಬ್ಬರು ಚಲಿಸುವ ರೈಲಿಗೆ ಸಿಲುಕಿ ಮೃತಪಟ್ಟಿದ್ದಾರೆ. ಮೃತ ವ್ಯಕ್ತಿಗೆ 40 ರಿಂದ 45 ವರ್ಷ. ನೀಲಿ–ಬಿಳಿ–ಕಪ್ಪು ಗೆರೆಗಳಿರುವ ತುಂಬು ತೋಳಿನ ಶರ್ಟ್, ಬಿಳಿ ಬಣ್ಣದ ಸ್ಯಾಂಡೋ ಬನಿಯನ್, ಕಾಫಿ ಬಣ್ಣದ ಪ್ಯಾಂಟ್ ಧರಿಸಿದ್ದಾರೆ. ವಾರಸುದಾರರು ಪ್ರಕರಣ ದಾಖಲಾಗಿರುವ ರೈಲ್ವೆ ಪೊಲೀಸರನ್ನು ದೂ: 0821–2516579 ಮೂಲಕ ಸಂಪರ್ಕಿಸಲು ಕೋರಲಾಗಿದೆ.

ರಾಜ್ಯದಲ್ಲಿ 53 ಮಂದಿಗೆ ಪಾಸಿಟಿವ್

ಬೆಂಗಳೂರು, ಏ. 18– ರಾಜ್ಯದಲ್ಲಿ ಕೊರೊನಾ ಮೂರನೇ ಅಲೆಯ ಅಬ್ಬರ ಗಣನೀಯ ಪ್ರಮಾಣದಲ್ಲಿ ಕಡಿಮೆಯಾಗುತ್ತಿದ್ದು, ಕಳೆದ 24 ಗಂಟೆಯಲ್ಲಿ ಕೇವಲ 53 ಹೊಸ ಪಾಸಿಟಿವ್ ಪ್ರಕರಣಗಳು ವರದಿಯಾಗಿವೆ. ಇದರೊಂದಿಗೆ ಸೋಂಕಿತರ ಸಂಖ್ಯೆ 39,46,422ಕ್ಕೆ ಏರಿಕೆಯಾಗಿದೆ.

ಇನ್ನೂ ರಾಜ್ಯದಲ್ಲಿ ಮಹಾಮಾರಿ ಕೊರೋನಾದಿಂದ ಇಂದು ಯಾವುದೇ ಸಾವು ವರದಿಯಾಗಿಲ್ಲ. ಹೀಗಾಗಿ ಸಾವಿನ ಸಂಖ್ಯೆ 40057 ಇದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಬೆಂಗಳೂರಿನಲ್ಲಿ ಇಂದು 51 ಮಂದಿಗೆ ಸೋಂಕು ದೃಢಪಟ್ಟಿದೆ. ಇದರೊಂದಿಗೆ ನಗರದಲ್ಲಿ ಸೋಂಕಿತರ ಸಂಖ್ಯೆ 17,82,459ಕ್ಕೆ ಏರಿಕೆಯಾಗಿದೆ. ಇಂದು ರಾಜಧಾನಿಯಲ್ಲೂ ಯಾವುದೇ ಕೊರೋನಾ ಸಾವು ವರದಿಯಾಗಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹೇಳಿದೆ.

ರಾಜ್ಯದಲ್ಲಿ ಇಂದು 44 ಸೋಂಕಿತರು ಗುಣಮುಖರಾಗಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಇದರೊಂದಿಗೆ ಸೋಂಕಿನಿಂದ ಚೇತರಿಸಿಕೊಂಡವರ ಸಂಖ್ಯೆ 39,04,850ಕ್ಕೆ ಏರಿಕೆಯಾಗಿದೆ. ಇನ್ನು 1,473 ಸಕ್ರಿಯ ಪ್ರಕರಣಗಳಿವೆ.

ಮೈಸೂರಲ್ಲಿ ಯಡಿಯೂರು ಶ್ರೀ ಸಿದ್ಧಲಿಂಗೇಶ್ವರಸ್ವಾಮಿ ವಾರ್ಷಿಕೋತ್ಸವ

ವಿವಿಧ ಧಾರ್ಮಿಕ ಕಾರ್ಯಕ್ರಮ; ಅಭಿನಂದನೆ, ಸ್ವಾಮಿಯ ಮೆರವಣಿಗೆ



ಮೈಸೂರಿನಲ್ಲಿ ಶ್ರೀ ಸಿದ್ಧಲಿಂಗೇಶ್ವರ ಸ್ವಾಮಿಯವರ 19ನೇ ವಾರ್ಷಿಕೋತ್ಸವದ ಅಂಗವಾಗಿ ಭಾನುವಾರ ಡಾ.ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಹಾಗೂ ಶ್ರೀ ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯದಲ್ಲಿ ಧಾರ್ಮಿಕ ಸಭೆ ನಡೆಯಿತು.

ಮೈಸೂರು, ಏ.18(ಎಸ್‌ಬಿಡಿ)– ಮೈಸೂರಿನಲ್ಲಿ ಯಡಿಯೂರು ಶ್ರೀ ಸಿದ್ದಲಿಂಗೇಶ್ವರ ಸ್ವಾಮಿಯವರ 19ನೇ ಉತ್ಸವ ಭಾನುವಾರ ಅದ್ಧೂರಿಯಾಗಿ ನೆರವೇರಿತು.

ಶ್ರೀ ಸಿದ್ಧಲಿಂಗೇಶ್ವರ ಸ್ವಾಮಿ ಸಮಿತಿ ಟ್ರಸ್ಟ್ ಮತ್ತು ಶ್ರೀ ಸಿದ್ಧಲಿಂಗೇಶ್ವರ ಸ್ವಾಮಿ ಯುವಕ ಮಂಡಳಿ ಸಹಯೋಗದಲ್ಲಿ ಅರಮನೆ ಕೋಟೆಗೆ ಹೊಂದಿಕೊಂಡಿರುವ ಶ್ರೀ ಸೋಮೇಶ್ವರಸ್ವಾಮಿ ಮತ್ತು ಶ್ರೀ ಸಿದ್ಧಲಿಂಗೇಶ್ವರ ಸ್ವಾಮಿಯವರ ದೇವಾಲಯದಲ್ಲಿ ಉತ್ಸವದ ಪ್ರಯುಕ್ತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ದೇವಾಲಯದಲ್ಲಿ ಬೆಳಗ್ಗೆ 6ರಿಂದಲೇ ರುದ್ರ ಹೋಮ, ಶತಶಂಕ ರುದ್ರಾಭಿಷೇಕ, ದೀಪಾರಾಧನೆ, ಮಹಾಮಂಗಳಾರತಿ ಇನ್ನಿತರ ಪೂಜಾ ಕೈಂಕರ್ಯಗಳು ನೆರವೇರಿದ ನಂತರ ತುಮಕೂರು ಜಿಲ್ಲೆ ಚಿಕ್ಕಪೇಟೆ ಹಿರೇಮಠದ ಡಾ.ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಹಾಗೂ ಮೈಸೂರು ಅರಮನೆ ಜಪದಕಟ್ಟೆ ಮಠದ ಶ್ರೀ ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯದಲ್ಲಿ ಧಾರ್ಮಿಕ ಸಭೆ ಜರುಗಿತು.

ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ಎಸ್. ಪರಮಶಿವಯ್ಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮುಡಾ ಆಯುಕ್ತ ಡಿ.ಬಿ. ನಟೇಶ್, ಅಂತಾರಾಷ್ಟ್ರೀಯ ವೀರಶೈವ ಲಿಂಗಾಯಿತ ಯೂಥ್ ಫೋರಂ ಅಧ್ಯಕ್ಷ ಬಿ.ಎಸ್.ಪ್ರಶಾಂತ್ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾ ಸಭಾ ಯುವಘಟಕದ ರಾಜ್ಯಾಧ್ಯಕ್ಷ ಮನೋಹರ್ ಜಿ.ಅಬ್ಬಿಗೇರಿ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು. ಈ ವೇಳೆ ಶ್ರೀದ್ವಯರು ಆಶೀರ್ವಚನ ನೀಡಿದರು. ನಗರ ಪಾಲಿಕೆ ಸದಸ್ಯರಾದ ಬಿ.ವಿ.ಮಂಜುನಾಥ್ ಹಾಗೂ ಸೌಮ್ಯ, ಮಾಜಿ ಸದಸ್ಯ ಪ್ರದೀಪ್ ಕುಮಾರ್ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

ನಂತರ ಸಂಜೆ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿಯವರ ಮೆರವಣಿಗೆ ನಡೆಯಿತು. ವಿವಿಧ ಪುಷ್ಪಾಲಂಕೃತ ಪಲ್ಲಕ್ಕಿ ಹಾಗೂ ನಂದಿಧ್ವಜಕ್ಕೆ ಪೂಜೆ ಸಲ್ಲಿಸುವ ಮೂಲಕ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಹಾಗೂ ಶ್ರೀ ಸಿದ್ಧಲಿಂಗೇಶ್ವರ ಸ್ವಾಮಿ ಸಮಿತಿ ಟ್ರಸ್ಟ್ ಗೌರವ ಸದಸ್ಯರೂ ಆದ ಮೈಮುಲ್ ನಿರ್ದೇಶಕ ಎಸ್.ಸಿ.ಅಶೋಕ್ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.

ದೇವಾಲಯ ಬಳಿಯಿಂದ ಗನ್‌ಹೌಸ್ ವೃತ್ತ, ರಾಮಾನುಜ ರಸ್ತೆ, ನೂರೊಂದು ಗಣಪತಿ ದೇವಾಲಯ ವೃತ್ತ, ಅಗ್ರಹಾರದ ಗಾಡಿಚೌಕ, ತ್ಯಾಗರಾಜ ರಸ್ತೆ, ಬನುಮಯ್ಯ ರಸ್ತೆ, ನ್ಯೂ ಸಯ್ಯಾಜಿರಾವ್ ರಸ್ತೆ, ಬಸವೇಶ್ವರ ವೃತ್ತದ ಮೂಲಕ ಸಾಗಿದ ಮೆರವಣಿಗೆ ದೇವಾಲಯದ ಬಳಿ ಮುಕ್ತಾಯವಾಯಿತು. ಮಾರ್ಗಮಧ್ಯೆ ನೂರೊಂದು ಗಣಪತಿ ಹಾಗೂ ಶ್ರೀ ವೀರಭದ್ರೇಶ್ವರ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಮೆರವಣಿಗೆ ಬಳಿಕ ಶ್ರೀ ಸೋಮೇಶ್ವರ ಸ್ವಾಮಿ ಮತ್ತು ಶ್ರೀ ಸಿದ್ಧಲಿಂಗೇಶ್ವರ ದೇವಾಲಯದಲ್ಲಿ ಮಹಾಮಂಗಳಾರತಿ ಹಾಗೂ ಪ್ರಸಾದ ವಿನಿಯೋಗ ಮಾಡಲಾಯಿತು.

ಆಡಳಿತ ಯಂತ್ರಕ್ಕೆ ಮೇಜರ್ ಸರ್ಜರಿ: 17 ಐಎಎಸ್ ಅಧಿಕಾರಿಗಳ ವರ್ಗಾವಣೆ

ಬೆಂಗಳೂರು, ಏ. 18– ಕರ್ನಾಟಕ ರಾಜ್ಯ ಸರ್ಕಾರದಿಂದ ಆಡಳಿತ ಯಂತ್ರಕ್ಕೆ ಮೇಜರ್ ಸರ್ಜರಿ ಮಾಡಿದ್ದು, ಕೆಎಸ್‌ಆರ್‌ಟಿಸಿ ನಿರ್ವಹಣಾ ನಿರ್ದೇಶಕ ಶಿವಯೋಗಿ ಕಳಸದ್ ಸೇರಿದಂತೆ ಒಮ್ಮೆಲೆ 17 ಐಎಎಸ್ ಅಧಿಕಾರಿಗಳ ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ವರ್ಗಾವಣೆಯಾದ ಐಎಎಸ್ ಅಧಿಕಾರಿಗಳು: ಜಿ. ಕಲ್ಪನಾ– ಕಾರ್ಮಿಕ ಇಲಾಖೆ, ಶ್ರೀವತ್ಸ ಕೃಷ್ಣ, ಅಮ್ಲಾನ್ ಆದಿತ್ಯ ಬಿಸ್ವಾಸ್, ಮುನೀಷ್ ಮೌದ್ಗಿಲ್, ಶಿವಯೋಗಿ ಕಳಸದ್, ಅನ್ಬು ಕುಮಾರ್, ಎನ್. ವಿ. ಪ್ರಸಾದ್, ಸತ್ಯವತಿ ಜಿ., ರೇಜು ಎಂ.ಟಿ., ದೀಪಾ. ಎಂ, ಪಲ್ಲವಿ ಆಕೃತಿ, ವೆಂಕಟೇಶ್‌ಕುಮಾರ್, ರಾಕೇಶ್ ಕುಮಾರ್ ಕೆ., ರವೀಂದ್ರ ಪಿ.ಎನ್., ಅವಿನಾಶ್ ಮೆನನ್ ರಾಜೇಂದ್ರ